# ಸಮುವೇಲನು

ಪ್ರಥಮ ಭಾಗ

ಮುನ್ನುಡಿ

"ಸಮುವೇಲನು" ಎಂಬ ಪವಿತ್ರ ಗ್ರಂಥದ ಪ್ರಥಮ ಹಾಗು ದ್ವಿತೀಯ ಭಾಗಗಳು ಇಸ್ರಯೇಲ್ ಸಮಾಜ ಹೇಗೆ "ನ್ಯಾಯಸ್ಥಾಪಕರ" ಆಡಳಿತದಿಂದ "ಅರಸರ" ಪರಿಪಾಲನೆಗೆ ಒಳಗಾಯಿತು ಎಂಬ ಐತಿಹಾಸಿಕ ವಿವರಗಳಿಂದ ಕೂಡಿದೆ.

ಕುರುಬರಾಗಿ ಚಲನೆವಲನೆಯಲ್ಲಿದ್ದಾಗ ಈ ಜನಾಂಗ ತನ್ನ ಪಿತಾಮಹರ ನೇತೃತ್ವಕ್ಕೆ ಒಳಪಟ್ಟಿತು. ವಾಗ್ದತ್ತ ನಾಡಿಗೆ ಬಂದು ವ್ಯವಸಾಯ ಹಾಗು ತೋಟಗಾರಿಕೆಗೆ ನಡುಕಟ್ಟಿ ನಿಂತಾಗ ತಮ್ಮ ಒಳವ್ಯಾಜ್ಯಗಳನ್ನು ತೀರ್ಮಾನಿಸಲು ಹಾಗು ಹೊರಗಿನವರ ದಾಳಿಯಿಂದ ಕಾಪಾಡಲು "ನ್ಯಾಯಸ್ಥಾಪಕರ" ಅವಶ್ಯಕತೆಯನ್ನು ಮನಗಂಡಿತು. ಅನ್ಯರಾಜ್ಯಗಳ ಸಂಪರ್ಕದಿಂದಾಗಿ ಅವರಂತೆ ತಮಗೂ ಒಬ್ಬ ಅರಸನು ಬೇಕು ಎಂಬ ಅಪೇಕ್ಷೆ ಆಮೇಲೆ ತಲೆಯೆತ್ತಿಕೊಳ್ಳುತ್ತದೆ. "ದೇವರೇ ನಮ್ಮ ನಿಜವಾದ ಪಿತಾಮಹ, ಶಾಶ್ವತವಾದ ನ್ಯಾಯಸ್ಥಾಪಕ, ಅವರೇ ನಮ್ಮ ಪರಮೋನ್ನತ ರಾಜ," ಎಂಬ ಪ್ರತಿವಾದ ಆಗಿಂದಾಗ್ಗೆ ಕಾಣಿಸಿಕೊಳ್ಳುತ್ತದೆ.

ದೇವರು ಜನಾಭಿಪ್ರಾಯವನ್ನು ಮಾನ್ಯಮಾಡುತ್ತಾರೆ. ನ್ಯಾಯಸ್ಥಾಪಕರನ್ನು ಒದಗಿಸಿದ ದೇವರು ಅರಸನನ್ನೂ ನೇಮಿಸುತ್ತಾರೆ. ಸಮುವೇಲನು ಈ ಇಸ್ರಯೇಲ್ ಜನಾಂಗದ ಕೊನೆಯ ಹಾಗು ಅದ್ವಿತೀಯ ನ್ಯಾಯಸ್ಥಾಪಕ. ಸೌಲನು ಅವರ ಮೊಟ್ಟ ಮೊದಲನೆಯ ಅರಸ. ದಾವೀದನು ಅವರ ಎರಡನೆಯ ಅರಸ. ಈ ಮೂವರು ಮಹಾತ್ಮರ ಚರಿತ್ರೆ ಈ ಗ್ರಂಥದಲ್ಲಿ ಮುಪ್ಪುರಿಗೊಂಡಿದೆ.

ದೇವರಿಗೆ ಪ್ರಾಮಾಣಿಕರಾಗಿ ನಡೆದುಕೊಳ್ಳುವವರಿಗೆ ಯಶಸ್ಸು, ಅವರಿಗೆ ಅವಿಧೇಯರಾಗಿ ನಡೆದುಕೊಳ್ಳುವವರಿಗೆ ವಿನಾಶ ಕಟ್ಟಿಟ್ಟ ಬುತ್ತಿ; "ನನ್ನನ್ನು ಸನ್ಮಾನಿಸುವವನನ್ನು ನಾನು ಸನ್ಮಾನಿಸುವೆನು; ನನ್ನನ್ನು ಉಪೇಕ್ಷಿಸುವವನನ್ನು ತಿರಸ್ಕರಿಸುವೆನು" (2.30): ಅರಸನಾಗಿರಲಿ, ಆಳಾಗಿರಲಿ, ಧನವಂತನಾಗಿರಲಿ, ದರಿದ್ರನಾಗಿರಲಿ, ಎಲ್ಲರು ದೇವರ ಪರಿಪಾಲನೆಗೆ ಒಳಪಟ್ಟಿರಬೇಕು; ಅವರ ಆಜ್ಞೆಯ ಅನುಸರಣೆಯಲ್ಲೇ ಸರ್ವರ ಹಕ್ಕುಬಾಧ್ಯತೆ ಸುರಕ್ಷಿತ. ಈ ತತ್ವಗಳೇ ಈ ಗ್ರಂಥದ ತಿರುಳೆನ್ನಬಹುದು.

**ಪರಿವಿಡಿ**


| | | |
|---|---|---|
| ಸಮುವೇಲನು ಇಸ್ರಯೇಲರ ನ್ಯಾಯಸ್ಥಾಪಕ | – | 1.1 – 7.17 |
| ಸೌಲನು ಇಸ್ರಯೇಲರ ಅರಸ | – | 8.1 – 10.27 |
| ಸೌಲನ ರಾಜ್ಯಭಾರದ ಆರಂಭ | – | 11.1 – 15.35 |
| ದಾವೀದನು ಮತ್ತು ಸೌಲನು | – | 16.1 – 30.31 |
| ಸೌಲನ ಮತ್ತು ಅವನ ಮಕ್ಕಳ ಸಾವು | – | 31.1 – 31.13 |


**ಸಮುವೇಲನ ತಂದೆ ತಾಯಿಗಳು**

**1** ಎಫ್ರಯಿಮ್ ಬೆಟ್ಟದ ಪ್ರದೇಶದಲ್ಲಿ ರಾಮಾ ಒಂದು ಊರು. ಆ ಊರಲ್ಲಿ 'ಎಲ್ಕಾನ' ಎಂಬ ಒಬ್ಬ
ಮನುಷ್ಯನಿದ್ದ. ಇವನು ಯೆರೋಹಾಮನ ಮಗ, ಎಲೀಹುವಿನ ಮೊಮ್ಮಗ ಹಾಗು ತೋಹುವಿನ ಮರಿಮಗ.
ಈ ತೋಹು ಎಂಬುವನು ಎಫ್ರಯಿಮ್ಯನಾದ ಚೂಫನ ಮಗ. [2]ಎಲ್ಕಾನನಿಗೆ ಇಬ್ಬರು ಹೆಂಡತಿಯರು. ಒಬ್ಬಳು

ಹನ್ನ, ಇನ್ನೊಬ್ಬಳು ಪೆನಿನ್ನ. ಪೆನಿನ್ನಗೆ ಮಕ್ಕಳು ಇದ್ದರು; ಆದರೆ ಹನ್ನಳಿಗೆ ಇರಲಿಲ್ಲ. [3]ಎಲ್ಕಾನನು ಪ್ರತಿ ವರ್ಷ ರಾಮಾದಿಂದ ಶಿಲೋವಿಗೆ ಹೋಗಿ ಸೇನಾಧೀಶ್ವರರಾದ ಸರ್ವೇಶ್ವರಸ್ವಾಮಿಗೆ ಬಲಿದಾನವನ್ನು ಸಮರ್ಪಿಸಿ ಆರಾಧಿಸುತ್ತಿದ್ದನು. ಅಲ್ಲಿ ಏಲಿಯನ ಮಕ್ಕಳಾದ ಹೊಫ್ನಿ, ಫೀನೆಹಾಸ ಎಂಬವರು ಸರ್ವೇಶ್ವರನ ಯಾಜಕರಾಗಿದ್ದರು. [4]ಎಲ್ಕಾನನು ಬಲಿಯರ್ಪಿಸಿದಾಗಲೆಲ್ಲಾ ತನ್ನ ಹೆಂಡತಿಯಾದ ಪೆನಿನ್ನಳಿಗೂ ಆಕೆಯ ಎಲ್ಲ ಗಂಡು-ಹೆಣ್ಣು ಮಕ್ಕಳಿಗೂ ಬಲಿಭೋಜನದ ಒಂದೊಂದು ಭಾಗವನ್ನು ಕೊಡುತ್ತಿದ್ದನು. [5]ಅವನು ಹನ್ನಳನ್ನು ಬಹಳವಾಗಿ ಪ್ರೀತಿಸುತ್ತಿದ್ದರೂ ಒಂದು ಭಾಗವನ್ನು ಮಾತ್ರ ಆಕೆಗೆ ಕೊಡುತ್ತಾ ಇದ್ದನು. ಏಕೆಂದರೆ ಸರ್ವೇಶ್ವರ ಆಕೆಗೆ ಮಕ್ಕಳನ್ನು ಕೊಟ್ಟಿರಲಿಲ್ಲ. [6]ಇದಲ್ಲದೆ, "ಸರ್ವೇಶ್ವರ ನಿನ್ನನ್ನು ಬಂಜೆಯಾಗಿ ಮಾಡಿದ್ದಾರೆ," ಎಂಬ ಚುಚ್ಚು ಮಾತುಗಳಿಂದ ನೋಯಿಸುತ್ತಿದ್ದಳು ಅವಳ ಸವತಿಯಾದ ಪೆನಿನ್ನಳು. [7]ವರ್ಷ ವರ್ಷವೂ ಇದು ಹಾಗೆಯೆ ನಡೆಯುತ್ತಿತ್ತು: "ಸರ್ವೇಶ್ವರನ ಮಂದಿರಕ್ಕೆ ಹೋದಾಗಲೆಲ್ಲ ಪೆನಿನ್ನಳು ಹನ್ನಳನ್ನು ಕೆಣಕುತ್ತಿದ್ದಳು. ಇದರಿಂದಾಗಿ ಒಮ್ಮೆ ಹನ್ನಳು ಊಟ ಮಾಡಲೊಲ್ಲದೆ ಅಳುತ್ತಾ ಇದ್ದಳು. [8]ಆಗ ಆಕೆಯ ಗಂಡ ಎಲ್ಕಾನನು ಆಕೆಗೆ, "ಹನ್ನಾ, ಏಕೆ ಅಳುತ್ತಿರುವೆ? ಊಟಮಾಡದಿರುವುದಕ್ಕೆ ಕಾರಣ ಏನು? ವ್ಯಸನಪಡುವುದು ಏಕೆ? ಹತ್ತು ಮಕ್ಕಳಿಗಿಂತಲು ನಾನು ನಿನಗೆ ಹೆಚ್ಚಲ್ಲವೆ?" ಎಂದನು.

## ಹನ್ನಳ ಪ್ರಾರ್ಥನೆ

9 ಶಿಲೋವಿನಲ್ಲಿ ಅವರು ಅನ್ನಪಾನಗಳನ್ನು ತೆಗೆದುಕೊಂಡ ಮೇಲೆ ಹನ್ನಳು ಎದ್ದು ಸರ್ವೇಶ್ವರನ ಮಂದಿರಕ್ಕೆ ಬಂದಳು. ಯಾಜಕ ಏಲಿಯನು ಆ ಮಂದಿರದ ದ್ವಾರದ ನಿಲುವು ಪಟ್ಟಿಗಳ ಬಳಿ ಒಂದು ಪೀಠದ ಮೇಲೆ ಕುಳಿತಿದ್ದನು. [10]ಹನ್ನಳು ಬಹು ದುಃಖದಿಂದ ಕಣ್ಣೀರಿಡುತ್ತಾ ಸರ್ವೇಶ್ವರನಲ್ಲಿ ಹೀಗೆಂದು ಪ್ರಾರ್ಥಿಸಿದಳು: [11]"ಸರ್ವಶಕ್ತರಾದ ಸರ್ವೇಶ್ವರಾ, ನಿಮ್ಮ ದಾಸಿ ಆದ ನನ್ನ ದುಃಖವನ್ನು ನೀಗಿಸಿರಿ; ನನ್ನನ್ನು ಪರಾಂಬರಿಸಿರಿ; ನನ್ನನ್ನು ತಿರಸ್ಕರಿಸದೆ ಕನಿಕರಪಟ್ಟು ನನಗೊಬ್ಬ ಮಗನನ್ನು ಅನುಗ್ರಹಿಸಿ. ಅವನನ್ನು ಅಮರಣಾಂತರ ನಿಮಗೇ ಸಮರ್ಪಿಸುವೆನು; ಅವನ ತಲೆಯ ಮೇಲೆ ಕ್ಷೌರಕತ್ತಿಯನ್ನು ಬರಗೊಡುವುದಿಲ್ಲ ಎಂದು ಹರಕೆ ಮಾಡುತ್ತೇನೆ."

12 ಹನ್ನಳು ಬಹಳ ಹೊತ್ತಿನವರೆಗೆ ಸರ್ವೇಶ್ವರನ ಮುಂದೆ ಪ್ರಾರ್ಥನೆ ಸಲ್ಲಿಸುತ್ತಾ ಇದ್ದಳು. ಏಲಿ ಆಕೆಯ ಬಾಯನ್ನು ಗಮನಿಸಿದನು. [13]ಆಕೆ ಹೃದಯಾಂತರಾಳದಿಂದ ಪ್ರಾರ್ಥಿಸುತ್ತಾ ಇದ್ದಳು; ತುಟಿಗಳು ಅಲುಗಾಡುತ್ತಿದ್ದವು, ಶಬ್ದ ಮಾತ್ರ ಕೇಳಿಸುತ್ತಿರಲಿಲ್ಲ. ಆದುದರಿಂದ ಇವಳು ಕುಡಿದಿರಬೇಕೆಂದು ತಿಳಿದು, [14]"ನಿನ್ನ ಕುಡಿತದ ಅಮಲು ಇನ್ನೂ ಇಳಿಯಲಿಲ್ಲವೆ? ದ್ರಾಕ್ಷಾರಸದ ನಿಶೆ ನಿನ್ನನ್ನು ಬಿಟ್ಟುಹೋಗಲಿ" ಎಂದನು.

15 ಆಕೆ, "ಇಲ್ಲ ಸ್ವಾಮಿ, ನಾನು ಕುಡಿದಿಲ್ಲ, ನಾನು ಬಹಳ ದುಃಖಪೀಡಿತಳು; ದ್ರಾಕ್ಷಾರಸವನ್ನಾಗಲಿ ಬೇರೆ ಯಾವ ಮದ್ಯವನ್ನಾಗಲಿ ಕುಡಿದವಳಲ್ಲ. ನನ್ನ ಮನೋವೇದನೆಯನ್ನು ಸರ್ವೇಶ್ವರನ ಮುಂದೆ ತೋಡಿಕೊಳ್ಳುತ್ತಾ ಇದ್ದೇನೆ. [16]ನಿಮ್ಮ ದಾಸಿಯಾದ ನನ್ನನ್ನು ಅಯೋಗ್ಯಳೆಂದು ನೆನೆಸಬೇಡಿ. ಈವರೆಗೂ ನನ್ನ ಅತಿಯಾದ ಚಿಂತೆಯನ್ನೂ ವ್ಯಥೆಯನ್ನೂ ಅರಿಕೆ ಮಾಡಿಕೊಳ್ಳುತ್ತಿದ್ದೆ," ಎಂದು ಹೇಳಿದಳು.

17 ಆಗ ಏಲಿ ಆಕೆಗೆ, "ಸಮಾಧಾನದಿಂದ ಹೋಗು. ಇಸ್ರಯೇಲಿನ ದೇವರು ನಿನ್ನ ಪ್ರಾರ್ಥನೆಯನ್ನು ಈಡೇರಿಸಲಿ," ಎಂದನು. [18]"ನಿಮ್ಮ ದಾಸಿಯಾದ ನನ್ನ ಮೇಲೆ ಕರುಣೆಯಿರಲಿ," ಎಂದು ಹೇಳಿ ಆಕೆ ಅಲ್ಲಿಂದ ಹೊರಟುಹೋಗಿ ಊಟ ಮಾಡಿದಳು. ಬಳಿಕ ಅವಳ ದುಃಖ ದೂರವಾಯಿತು.

## ಸಮುವೇಲನ ಜನನ ಮತ್ತು ಸಮರ್ಪಣೆ

19 ಮಾರನೆಯ ದಿನ ಬೆಳಿಗ್ಗೆ ಅವರೆಲ್ಲರು ಎದ್ದು ಸರ್ವೇಶ್ವರನನ್ನು ಆರಾಧಿಸಿ ರಾಮಾದಲ್ಲಿದ್ದ ತಮ್ಮ ಮನೆಗೆ ಬಂದರು. ಎಲ್ಕಾನನು ತನ್ನ ಹೆಂಡತಿಯಾದ ಹನ್ನಳನ್ನು ಕೂಡಲು ಆಕೆ ಸರ್ವೇಶ್ವರನ ಅನುಗ್ರಹದಿಂದ ಗರ್ಭಿಣಿ ಆದಳು. [20]ದಿನತುಂಬಿದ ಮೇಲೆ ಒಬ್ಬ ಮಗನನ್ನು ಹೆತ್ತಳು. "ನಾನು ಇವನನ್ನು ಸರ್ವೇಶ್ವರನಿಂದ ಬೇಡಿ ಪಡೆದೆ" ಎಂದು ಹೇಳಿ ಆ ಮಗುವಿಗೆ 'ಸಮುವೇಲ' ಎಂದು ಹೆಸರಿಟ್ಟಳು.

21 ವಾಡಿಕೆಯ ಪ್ರಕಾರ ಎಲ್ಕಾನನು ಕುಟುಂಬ ಸಹಿತವಾಗಿ ಸರ್ವೇಶ್ವರನಿಗೆ ವಾರ್ಷಿಕ ಬಲಿಯನ್ನು ಅರ್ಪಿಸಲು ಹಾಗು ಹರಕೆಯನ್ನು ತೀರಿಸಲು ಶಿಲೋವಿಗೆ ಹೋಗಲು ಸಿದ್ಧನಾದ. [22]ಹನ್ನಳು, "ಮಗನು

ಮೊಲೆಬಿಡುವವರೆಗೂ ನಾನು ಬರುವುದಿಲ್ಲ; ಅವನು ಸರ್ವೇಶ್ವರನ ಸನ್ನಿಧಿಯಲ್ಲಿ ಕಾಣಿಸಿಕೊಂಡು
ಬಾಳಿನುದ್ದಕ್ಕೂ ಅಲ್ಲಿಯೇ ಇರುವ ಹಾಗೆ ಆಮೇಲೆ ತೆಗೆದುಕೊಂಡು ಬರುತ್ತೇನೆ," ಎಂದು ಹೇಳಿದಳು.
23ಗಂಡನಾದ ಎಲ್ಕಾನನು, "ಹಾಗೆಯೇ ಆಗಲಿ; ನಿನಗೆ ಸರಿತೋರಿದಂತೆ ಮಾಡು. ಮಗು
ಮೊಲೆಬಿಡುವವರೆಗೆ ಮನೆಯಲ್ಲೇ ಇರು. ಸರ್ವೇಶ್ವರ ನಿನ್ನ ಮಾತನ್ನು ದೃಢವಾಗಿಸಲಿ," ಎಂದನು. ಮಗು
ಮೊಲೆಬಿಡುವ ತನಕ ಹನ್ನಳು ಮನೆಯಲ್ಲೇ ಇದ್ದು ಅವನನ್ನು ಆರೈಕೆ ಮಾಡಿದಳು. 24ಅನಂತರ ಆಕೆ
ಮಗನನ್ನು ಶಿಲೋವಿನಲ್ಲಿದ್ದ ಸರ್ವೇಶ್ವರನ ಮಂದಿರಕ್ಕೆ ತಂದಳು. ಅವನು ಇನ್ನೂ ಚಿಕ್ಕವನು ಆಗಿದ್ದನು.
ಜೊತೆಗೆ ಅವರು ಮೂರು ವರ್ಷದ ಹೋರಿಯೊಂದನ್ನು, ಹತ್ತು ಕಿಲೋಗ್ರಾಂ ಹಿಟ್ಟನ್ನು ಹಾಗು ಒಂದು ತಿತ್ತಿ
ದ್ರಾಕ್ಷಾರಸವನ್ನೂ ತಂದಿದ್ದರು. 25ಆ ಹೋರಿಯನ್ನು ಬಲಿದಾನ ಮಾಡಿದ ಮೇಲೆ ಮಗುವನ್ನು ಏಲಿಯ
ಬಳಿಗೆ ತರಲಾಯಿತು. 26ಹನ್ನಳು ಏಲಿಗೆ, "ಸ್ವಾಮಿ, ನಿಮ್ಮ ಜೀವದಾಣೆ, ಹಿಂದೊಮ್ಮೆ ಸರ್ವೇಶ್ವರನ
ಸನ್ನಿಧಿಯಲ್ಲಿ ಪ್ರಾರ್ಥನೆ ಮಾಡುತ್ತಾ ಇಲ್ಲಿ ನಿಮ್ಮ ಹತ್ತಿರ ನಿಂತಿದ್ದ ಮಹಿಳೆ ನಾನೇ. 27ಸರ್ವೇಶ್ವರ ನನ್ನ
ಪ್ರಾರ್ಥನೆಯ ಫಲವಾಗಿ ಅನುಗ್ರಹಿಸಿದ ಮಗನು ಇವನೇ. 28ಇವನನ್ನು ಸರ್ವೇಶ್ವರನಿಗೆ
ಸಮರ್ಪಿಸಿಬಿಟ್ಟಿದ್ದೇನೆ. ಬದುಕಿರುವ ತನಕ ಇವನು ಅವರಿಗೇ ಪ್ರತಿಷ್ಠಿತನು," ಎಂದು ಹೇಳಿದಳು. ಬಳಿಕ
ಅವರು ಸರ್ವೇಶ್ವರ ಸ್ವಾಮಿಯನ್ನು ಆರಾಧಿಸಿದರು.

## ಹನ್ನಳ ಗೀತೆ

**2** ಹನ್ನಳು ಹೀಗೆಂದು ಭಜಿಸಿದಳು:

1 "ಆನಂದಿಸುತ್ತಿದೆ ನನ್ನ ಮನ
ಸರ್ವೇಶ್ವರನಲಿ
ಉನ್ನತೋನ್ನತವಾಗಿದೆ ನನ್ನ ಶಕ್ತಿ ಆ ದೇವನಲಿ
ನನಗಿದೆ ಶತ್ರುಗಳನ್ನೂ ಧಿಕ್ಕರಿಸುವ ಶಕ್ತಿ
ನನಗಿತ್ತಿರುವನಾ ಸಂತಸದಾಯಕ ಮುಕ್ತಿ.
2 ಸರ್ವೇಶ್ವರನಂಥ ಪರಮಪಾವನನಿಲ್ಲ
ನಿನ್ನ ಹೊರತು ದೇವಾ, ಬೇರೆ ದೇವನಿಲ್ಲ;
ನಿಮ್ಮ ದೇವನಿಗೆ ಸಮನಾದ
ಆಶ್ರಯದುರ್ಗವಿಲ್ಲ.
3 ಇನ್ನು ನಿಲ್ಲಲಿ ಗರ್ವದ ಮಾತು
ಬಾಯಿಂದ ಬರದಿರಲಿ ಸೊಕ್ಕಿನ ಸೊಲ್ಲು;
ಸರ್ವೇಶ್ವರನಾದ ದೇವನೇ ಸರ್ವಜ್ಞನು.
ಮಾನವಕ್ರಿಯೆಗಳ ತೂಕ
ನೋಡುವಾತನವನು.
4 ಮುರಿದು ಬಿದ್ದಿವೆ ಶೂರರ
ಬಿಲ್ಲುಬಾಣಗಳು
ದುರ್ಬಲರಾದರೋ ಶೌರ್ಯದ ನಡುಕಟ್ಟಿ
ನಿಂತಿಹರು.
5 ಉಂಡು ಸುಖದಿಂದಿರುವರು ಹಸಿವು
ಗೊಂಡವರು
ಹೊಟ್ಟೆಗಾಗಿ ಕೂಲಿಮಾಡುತ್ತಿಹರು
ತೃಪ್ತರಿದ್ದವರು.
ಬಂಜೆ ಹೆರುವಳು ಆರೇಳು ಮಕ್ಕಳನು

ಒಬ್ಬಂಟಿಗಳಾಗಿರುವಳು ಮಕ್ಕಳಿವೆ
ಎಂದವಳು.
6 ಜೀವ ಕೊಡುವವನು,
ತೆಗೆದುಕೊಳ್ಳುವವನು ಆ
ಸರ್ವೇಶ್ವರನೇ
ಪಾತಾಳಕ್ಕಿಳಿಸುವವನು,
ಮೇಲಕ್ಕೆಳೆದುಕೊಳ್ಳುವವನು ಆತನೇ.
7 ಬಡತನ, ಸಿರಿತನ ಕೊಡುವವನು
ಆ ಸರ್ವೇಶ್ವರನೇ
ತಗ್ಗಿಸುವವನು, ಹೆಚ್ಚಿಸುವವನು
ಆತನೇ.
8 ಎತ್ತುವನಾತ ದೀನರನು ಧೂಳಿಂದ,
ದರಿದ್ರರನು ತಿಪ್ಪೆಯಿಂದ.
ಕುಳ್ಳರಿಸುವನವರನು ಅಧಿಪತಿಗಳ
ಸಮೇತ
ಅನುಗ್ರಹಿಸುವನು ಹಕ್ಕಾಗಿ ಆ
ಮಹಿಮಾಸನ.
ಕಾರಣ–ಭೂಮಿಯ ಆಧಾರ
ಸ್ತಂಭಗಳು ಸರ್ವೇಶ್ವರನವೇ
ಭೂಮಂಡಲವನು ಅವುಗಳ ಮೇಲೆ
ಸ್ಥಾಪಿಸಿದವನು ಆತನೇ.
9 ಕಾಯುವನಾತ ತನ್ನ ಭಕ್ತರನು
ಹೆಜ್ಜೆಹೆಜ್ಜೆಗು
ದುರುಳರಾದರೋ ಮುಳುಗಿ ಮೌನ
ತಾಳುವರು ಅಂಧಕಾರದೊಳು.
ಕೇವಲ ಭುಜಬಲದಿಂದ ಜಯ
ಹೊಂದಲಾರನು ನರಮಾನವನು !
10 ಚದರಿಹೋಗುವರು ಸರ್ವೇಶ್ವರನ
ವಿರೋಧಿಗಳು
ಅಗಸದಿಂದಾತ ಅವರ ವಿರುದ್ಧ
ಗರ್ಜಿಸಲು !
ನ್ಯಾಯತೀರಿಸುವನಾತ ಜಗದ
ಕಟ್ಟಕಡೆಯವರೆಗೆ
ಶಕ್ತಿಸಾಮರ್ಥ್ಯವನೀವನು ತಾ
ನೇಮಿಸಿದರಸನಿಗೆ
ಏರಿಸುವನು ತನ್ನಭಿಷಿಕ್ತನ
ಒಲುಮೆಯನು ಉನ್ನತಿಗೆ.

11 ಎಲ್ಕಾನನು ರಾಮಾದಲ್ಲಿದ್ದ ತನ್ನ ಮನೆಗೆ ಹಿಂದಿರುಗಿದನು. ಹುಡುಗ ಸಮುವೇಲನು ಯಾಜಕ ಏಲಿಯನ ಕೈಕೆಳಗಿದ್ದು ಸರ್ವೇಶ್ವರನ ಸೇವೆಮಾಡುತ್ತಾ ಬಂದನು.

## ಏಲಿಯ ಮಕ್ಕಳು

12 ಏಲಿಯ ಮಕ್ಕಳು ಮಹಾದುಷ್ಟರು. ಅವರು ಸರ್ವೇಶ್ವರನನ್ನು ಲಕ್ಷಿಸುತ್ತಿರಲಿಲ್ಲ.
13ಬಲಿಯರ್ಪಿಸುವುದಕ್ಕೆ ಬಂದ ಜನರಲ್ಲೂ ಯಾಜಕರಾದ ಇವರು ಸರಿಯಾಗಿ ವರ್ತಿಸುತ್ತಿರಲಿಲ್ಲ:
ಬಲಿಮಾಂಸ ಬೇಯುತ್ತಿರುವಾಗಲೇ ಯಾಜಕನ ಆಳು ಕೈಯಲ್ಲಿ ತ್ರಿಶೂಲ ಹಿಡಿದು ಬರುತ್ತಿದ್ದನು. 14ಅದನ್ನು
ಮಾಂಸ ಬೇಯುತ್ತಿದ್ದ ಕೊಪ್ಪರಿಗೆಯಲ್ಲಾಗಲಿ, ಭಾಂಡದಲ್ಲಾಗಲಿ, ತಪ್ಪಲೆಯಲ್ಲಾಗಲಿ, ಗಡಿಗೆಯಲ್ಲಾಗಲಿ ಚುಚ್ಚಿ
ಅದಕ್ಕೆ ಸಿಕ್ಕಿದೆಲ್ಲವನ್ನು ಯಾಜಕನಿಗೆಂದು ಹೇಳಿ ತೆಗೆದುಕೊಳ್ಳುತ್ತಿದ್ದನು. ಶಿಲೋವಿಗೆ ಬರುವ
ಇಸ್ರಯೇಲರೆಲ್ಲರಿಗು ಹೀಗೆಯೇ ಮಾಡುತ್ತಿದ್ದರು. 15ಇದಲ್ಲದೆ, ಕೊಬ್ಬನ್ನು ಹೋಮಮಾಡುವುದಕ್ಕೆ
ಮುಂಚೆಯೇ ಯಾಜಕನ ಆಳು ಬಂದು ಬಲಿಯರ್ಪಿಸುತ್ತಿದ್ದವನಿಗೆ, "ಹುರಿಯತಕ್ಕ ಮಾಂಸವನ್ನು
ಯಾಜಕನಿಗೆ ಕೊಡು; ನೀವು ಬೇಯಿಸಿದ ಮಾಂಸವನ್ನು ಅವರು ತೆಗೆದುಕೊಳ್ಳುವುದಿಲ್ಲ; ಅವರಿಗೆ ಹಸಿ
ಮಾಂಸವೇ ಬೇಕು," ಎನ್ನುತ್ತಿದ್ದನು. 16ಬಲಿಯರ್ಪಿಸುತ್ತಿದ್ದವನು ಅವನಿಗೆ, "ಮೊದಲು ಕೊಬ್ಬನ್ನು ಹೋಮ
ಮಾಡೋಣ; ಅನಂತರ ನಿನಗೆ ಬೇಕಾದುದನ್ನು ತೆಗೆದುಕೊಳ್ಳುವಿಯಂತೆ," ಎಂದು ಹೇಳಿದಾಗ, "ಕೂಡದು,
ಈಗಲೇ ಬೇಕು; ಇಲ್ಲವಾದರೆ ಬಲಾತ್ಕಾರದಿಂದ ತೆಗೆದುಕೊಳ್ಳುತ್ತೇನೆ," ಎಂದು ಪೀಡಿಸುತ್ತಿದ್ದನು. 17ಹೀಗೆ
ಸರ್ವೇಶ್ವರನ ನೈವೇದ್ಯವನ್ನು ತುಚ್ಛವಾಗಿ ಕಾಣುತ್ತಿದ್ದುದರಿಂದ ದೇವರ ದೃಷ್ಟಿಯಲ್ಲಿ ಏಲಿಯ ಮಕ್ಕಳ ಪಾಪ
ಘೋರವಾಗಿತ್ತು.

## ಶಿಲೋವಿನಲ್ಲಿ ಸಮುವೇಲನು

18 ಬಾಲಕನಾದ ಸಮುವೇಲನು 'ಏಫೋದ' ಎಂಬ ಪ್ರತ್ಯೇಕ ಮಡಿಯಂಗಿಯನ್ನು ತೊಟ್ಟು ಕೊಂಡು
ಸರ್ವೇಶ್ವರನ ಸಾನ್ನಿಧ್ಯ ಸೇವೆಯನ್ನು ಮಾಡುತ್ತಿದ್ದನು. 19ಅವನ ತಾಯಿ ಪ್ರತಿವರ್ಷ ಗಂಡನ ಜೊತೆಯಲ್ಲಿ
ಬಲಿಯನ್ನು ಅರ್ಪಿಸುವುದಕ್ಕೆ ಬಂದಾಗ ಒಂದು ಚಿಕ್ಕ ನಿಲುವಂಗಿಯನ್ನು ಹೊಲಿದು ಅವನಿಗೆ
ತಂದುಕೊಡುತ್ತಿದ್ದಳು. 20ಎಲ್ಕಾನನಿಗೆ ಏಲಿ, "ನೀನು ಸರ್ವೇಶ್ವರನಿಗೆ ಸಮರ್ಪಿಸಿಬಿಟ್ಟ ಈ ಮಗನಿಗೆ ಬದಲಾಗಿ
ಈ ಹನ್ನಳಿಂದ ನಿನಗೆ ಬೇರೆ ಮಕ್ಕಳಾಗಲಿ!" ಎಂದು ಹೇಳಿ ಅವನನ್ನೂ ಅವನ ಹೆಂಡತಿಯನ್ನೂ
ಆಶೀರ್ವದಿಸುತ್ತಿದ್ದನು. ಅನಂತರ ಅವರು ಸ್ವಗ್ರಾಮಕ್ಕೆ ಹಿಂದಿರುಗುತ್ತಿದ್ದರು.

21 ಸರ್ವೇಶ್ವರನ ಅನುಗ್ರಹ ಹನ್ನಳಿಗೆ ಲಭಿಸಿತು. ಆಕೆಗೆ ಮೂರು ಗಂಡು, ಇಬ್ಬರು ಹೆಣ್ಣು
ಮಕ್ಕಳಾದವು. ಬಾಲಕ ಸಮುವೇಲನು ಸರ್ವೇಶ್ವರನ ಸನ್ನಿಧಿಯಲ್ಲಿ ಬೆಳೆದು ದೊಡ್ಡವನಾದನು.

## ಏಲಿ ಮತ್ತು ಅವನ ಮಕ್ಕಳು

22 ಈಗ ಏಲಿ ಬಹಳ ಮುದುಕನಾಗಿದ್ದ. ತನ್ನ ಮಕ್ಕಳು ಇಸ್ರಯೇಲ್ ಜನರಿಗೆ ಮಾಡುತ್ತಿದ್ದುದೆಲ್ಲಾ
ಅವನ ಕಿವಿಗೆ ಬೀಳುತ್ತಿತ್ತು. ದೇವದರ್ಶನದ ಗುಡಾರದ ಬಾಗಿಲಿನಲ್ಲಿ ಕೆಲಸ ಮಾಡುತ್ತಿದ್ದ ಸ್ತ್ರೀಯರೊಡನೆ
ಮಲಗುತ್ತಿದ್ದಾರೆಂಬುದನ್ನೂ ಕೇಳಿದ್ದ. 23ಆದುದರಿಂದ ಅವರಿಗೆ, "ಜನರೆಲ್ಲರು ನಿಮ್ಮ ದುಷ್ಕೃತ್ಯಗಳ ಬಗ್ಗೆ
ದೂರುವುದನ್ನು ಕೇಳಿದ್ದೇನೆ. ಹೀಗೇಕೆ ಮಾಡುತ್ತೀರಿ? 24ಮಕ್ಕಳೇ, ಹೀಗೆ ಮಾಡಬಾರದು. ನೀವು
ಸರ್ವೇಶ್ವರನ ಜನರನ್ನು ದುರ್ಮಾರ್ಗಕ್ಕೆ ಎಳೆಯುತ್ತಿದ್ದೀರೆಂದು ಕೇಳಿದ್ದೇನೆ. ಇದು ಸರಿಯಲ್ಲ. 25ಮನುಷ್ಯನು
ಮನುಷ್ಯನಿಗೆ ವಿರುದ್ಧ ಅಪರಾಧ ಮಾಡಿದರೆ ದೇವರು ಮಧ್ಯಸ್ಥಿಕೆಯನ್ನು ವಹಿಸುತ್ತಾರೆ. ಆದರೆ ಮನುಷ್ಯನು
ಸರ್ವೇಶ್ವರನಿಗೆ ವಿರುದ್ಧ ಅಪರಾಧ ಮಾಡಿದರೆ ಮಧ್ಯಸ್ಥಿಕೆ ವಹಿಸುವವರಾರು?" ಎಂದು ಎಚ್ಚರಿಸಿದನು.
ಆದರೂ ಅವರು ತಮ್ಮ ತಂದೆಯ ಮಾತಿಗೆ ಕಿವಿಗೊಡಲಿಲ್ಲ. ಎಂದೇ ಅವರನ್ನು ಕೊಲ್ಲಬೇಕೆಂಬುದು
ಸರ್ವೇಶ್ವರನ ಚಿತ್ತವಾಗಿತ್ತು.

26 ಬಾಲಕ ಸಮುವೇಲ ಈ ಮಧ್ಯೆ ಬೆಳೆಯುತ್ತಾ ಸರ್ವೇಶ್ವರನ ಹಾಗು ಮಾನವರ ಪ್ರೀತಿಗೆ
ಪಾತ್ರನಾಗುತ್ತಿದ್ದನು.

## ಏಲಿಯ ಕುಟುಂಬಕ್ಕೆ ಬರಲಿದ್ದ ದಂಡನೆಯ ಮುನ್ಸೂಚನೆ

27 ಒಂದು ದಿನ ದೇವಭಕ್ತನೊಬ್ಬನು ಏಲಿಯ ಬಳಿಗೆ ಬಂದು, ಸರ್ವೇಶ್ವರನಿಂದ ಬಂದ ಈ
ಸಮಾಚಾರವನ್ನು ತಿಳಿಸಿದನು: "ಇಸ್ರಯೇಲರು ಈಜಿಪ್ಟಿನಲ್ಲಿ ಫರೋಹನ ದಾಸತ್ವದಲ್ಲಿದ್ದಾಗ ನಾನು ನಿನ್ನ
ಗೋತ್ರದವರಿಗೆ ಪ್ರತ್ಯಕ್ಷನಾದೆ; [28]ಇಸ್ರಯೇಲರ ಕುಟುಂಬಗಳಲ್ಲೆಲ್ಲಾ ಅವರನ್ನೇ ಯಾಜಕ ಸೇವಾವೃತ್ತಿಗೆ
ಆರಿಸಿಕೊಂಡೆ: ಅಂದರೆ, ಬಲಿಯರ್ಪಿಸುವುದಕ್ಕೆ, ಧೂಪಾರತಿ ಎತ್ತುವುದಕ್ಕೆ ಹಾಗು 'ಏಫೋದ'ನ್ನು
ಧರಿಸಿಕೊಳ್ಳುವುದಕ್ಕೆ ಆರಿಸಿಕೊಂಡೆ; ಇಸ್ರಯೇಲರು ಅರ್ಪಿಸುವ ಬಲಿಶೇಷದ ಹಕ್ಕನ್ನೂ ಅವರಿಗೆ
ಅನುಗ್ರಹಿಸಿದೆ. [29]ಆದರೆ ನನ್ನ ಪ್ರಜೆ ಇಸ್ರಯೇಲರು ನನ್ನ ಆಜ್ಞಾನುಸಾರ ನನ್ನ ಮಂದಿರಕ್ಕೆ ತರುವ
ಬಲಿದಾನಗಳ ಹಾಗು ನೈವೇದ್ಯಗಳ ಘನತೆಯನ್ನು ನೀವು ಭಂಗಪಡಿಸಿದ್ದೀರಿ. ಅವುಗಳ ಶ್ರೇಷ್ಠಭಾಗಗಳಿಂದ
ನಿಮ್ಮನ್ನೇ ಕೊಬ್ಬಿಸಿಕೊಳ್ಳುತ್ತಿದ್ದೀರಿ; ಏಕೆ? ನೀನು ನನ್ನನ್ನು ಗೌರವಿಸುವುದಕ್ಕಿಂತ ಹೆಚ್ಚಾಗಿ ನಿನ್ನ ಮಕ್ಕಳನ್ನೇ
ಗೌರವಿಸುವುದು ಸರಿಯೇ? [30]ನಿನ್ನ ಗೋತ್ರದವರೂ ಸಂತಾನದವರೂ ನನ್ನ ಸನ್ನಿಧಿಯಲ್ಲಿ ಸೇವೆ
ಮಾಡಬಹುದು ಎಂದು ಆಜ್ಞಾಪಿಸಿದ ಇಸ್ರಯೇಲರ ದೇವರಾದ ಸರ್ವೇಶ್ವರನೆಂಬ ನಾನು ಈಗ
ತಿಳಿಸುವುದನ್ನು ಕೇಳು: ಇನ್ನು ಇದೆಲ್ಲ ನನ್ನಿಂದ ದೂರ ತೊಲಗಲಿ; ನನ್ನನ್ನು ಸನ್ಮಾನಿಸುವವನನ್ನು ನಾನು
ಸನ್ಮಾನಿಸುವೆನು; ನನ್ನನ್ನು ಉಪೇಕ್ಷಿಸುವವನನ್ನು ನಾನು ತಿರಸ್ಕರಿಸುವೆನು. [31]ನಿನ್ನ ಮತ್ತು ನಿನ್ನ ಮನೆಯವರ
ಭುಜಬಲವನ್ನು ಮುರಿಯುವ ದಿನಗಳು ಬರಲಿವೆ. ನಿನ್ನ ಮನೆಯಲ್ಲಿ ಯಾರೂ ಪೂರ್ಣಾಯುಷ್ಯವನ್ನು
ಮುಟ್ಟುವುದಿಲ್ಲ. [32]ನಿನ್ನ ವೈರಿಯೇ ನನ್ನ ಮಂದಿರದಲ್ಲಿ ಸೇವೆಮಾಡುವುದನ್ನು ನೀನು ನೋಡುವೆ.
ಇಸ್ರಯೇಲರಿಗೆ ಸರ್ವಶುಭವನ್ನು ದಯಪಾಲಿಸುವೆನು; ಆದರೆ ನಿನ್ನ ಮನೆಯಲ್ಲಿ ಯಾರೂ
ಪೂರ್ಣಾಯುಷ್ಯವನ್ನು ಮುಟ್ಟುವುದೇ ಇಲ್ಲ. [33]ನನ್ನ ಸಾನ್ನಿಧ್ಯಸೇವೆಯಿಂದ ನಿಮ್ಮಲ್ಲಿ ಒಬ್ಬನನ್ನು ಉಳಿಸಿ
ಮಿಕ್ಕವರನ್ನು ತೆಗೆದುಹಾಕುವೆನು. ಉಳಿಸಲಾದವನು ಕೂಡ ಕುರುಡನಾಗಿ ನಿನ್ನ ವ್ಯಥೆಗೆ ಕಾರಣನಾಗುವನು.
ನಿನ್ನ ಸಂತಾನದವರೆಲ್ಲರು ಕತ್ತಿಯಿಂದ ಸಾಯುವರು. [34]ಇದೆಲ್ಲಾ ನೆರವೇರುವುದು ಎಂಬುದಕ್ಕೆ ಗುರುತಾಗಿ
ನಿನ್ನ ಮಕ್ಕಳಾದ ಹೊಪ್ನಿ ಹಾಗು ಫೀನೆಹಾಸ್ ಒಂದೇ ದಿನದಲ್ಲಿ ಸಾಯುವರು. [35]ನನ್ನ ಹೃನ್ಮನಗಳಿಗೆ
ಸರಿಯಾದುದನ್ನೇ ಮಾಡುವ ಒಬ್ಬ ಶ್ರದ್ಧೆಯುಳ್ಳ ಯಾಜಕನನ್ನು ಎಬ್ಬಿಸುವೆನು. ಅವನಿಗೆ ಶಾಶ್ವತ ಗೃಹವನ್ನು
ಅನುಗ್ರಹಿಸುವೆನು. ಅವನು ನನ್ನ ಅಭಿಷಿಕ್ತನ ಬಳಿಯಲ್ಲಿ ಸದಾಕಾಲ ಸೇವೆಮಾಡುವನು. [36]ನಿನ್ನ ಮನೆಯಲ್ಲಿ
ಅಳಿದು ಉಳಿದವರು ಬಂದು ಅವನ ಮುಂದೆ ಅಡ್ಡ ಬೀಳುವರು; 'ನಮಗೊಂದು ಬೆಳ್ಳಿಕಾಸನ್ನಾದರೂ ರೊಟ್ಟಿ
ಚೂರನ್ನಾದರೂ ಕೊಡು; ಒಂದು ತುತ್ತು ಅನ್ನಕ್ಕೆ ಮಾರ್ಗವಾಗುವ ಹಾಗೆ ದೇವಸ್ಥಾನದ ಸೇವೆಯಲ್ಲಿ
ಯಾವುದಕ್ಕಾದರು ನಮ್ಮನ್ನು ಸೇರಿಸಿಕೋ' ಎಂದು ಬೇಡಿಕೊಳ್ಳುವರು".

## ಸಮುವೇಲನಿಗೆ ಕೇಳಿಬಂದ ದೇವೋಕ್ತಿ

**3** ಬಾಲಕ ಸಮುವೇಲನು ಏಲಿಯ ನೇತೃತ್ವದಲ್ಲಿ ಸರ್ವೇಶ್ವರನ ಸೇವೆಮಾಡುತ್ತಾ ಬಂದನು. ಆ ಕಾಲದಲ್ಲಿ
ದೇವೋಕ್ತಿಗಳು ವಿರಳ ಆಗಿದ್ದವು; ದೇವದರ್ಶನಗಳು ಅಪರೂಪವಾಗಿ ಬಿಟ್ಟಿದ್ದವು. [2]ಏಲಿಯ ಕಣ್ಣುಗಳು
ದಿನದಿನಕ್ಕೂ ಮೊಬ್ಬಾಗುತ್ತಾ ಬಂದು ಕುರುಡನಂಥಾಗಿ ಬಿಟ್ಟಿದ್ದನು. ಒಂದು ರಾತ್ರಿ ಅವನು ತನ್ನ ಕೋಣೆಯಲ್ಲಿ
ಮಲಗಿದ್ದನು. [3]ಸಮುವೇಲನು ಸರ್ವೇಶ್ವರನ ಮಂದಿರದಲ್ಲಿ, ದೇವರ ಮಂಜೂಷವಿದ್ದ ಸ್ಥಳದಲ್ಲಿ
ಮಲಗಿದ್ದನು. ದೇವರ ದೀಪ ಇನ್ನೂ ಉರಿಯುತ್ತಿತ್ತು. [4]ಆಗ ಸರ್ವೇಶ್ವರಸ್ವಾಮಿ ಸಮುವೇಲನನ್ನು ಕರೆದರು.
ಸಮುವೇಲನು "ಇಗೋ ಬಂದೆ" ಎಂದು ಉತ್ತರಕೊಟ್ಟು, [5]ಒಡನೆ ಏಲಿಯ ಬಳಿಗೆ ಹೋಗಿ, "ಇಗೋ
ಬಂದಿದ್ದೇನೆ; ನೀವು ನನ್ನನ್ನು ಕರೆದಿರಲ್ಲವೆ?" ಎಂದನು. ಏಲಿ, "ನಾನು ನಿನ್ನನ್ನು ಕರೆಯಲಿಲ್ಲ; ಹೋಗಿ
ಮಲಗಿಕೋ" ಎಂದನು. ಸಮುವೇಲನು ಹೋಗಿ ಮಲಗಿದನು. [6]ಸರ್ವೇಶ್ವರ ಪುನಃ "ಸಮುವೇಲನೇ,"
ಎಂದು ಕರೆದರು. ಸಮುವೇಲನು ಕೂಡಲೆ ಎದ್ದು ಏಲಿಯ ಬಳಿಗೆ ಹೋಗಿ, "ಇಗೋ ಬಂದಿದ್ದೇನೆ; ನೀವು
ನನ್ನನ್ನು ಕರೆದಿರಲ್ಲವೆ?" ಎಂದನು. ಅವನು, "ಮಗನೇ, ನಾನು ನಿನ್ನನ್ನು ಕರೆಯಲಿಲ್ಲ; ಹೋಗಿ
ಮಲಗಿಕೋ," ಎಂದನು.

7 ಈವರೆಗೂ ಸಮುವೇಲನಿಗೆ ಸರ್ವೇಶ್ವರನ ನೇರ ಅನುಭವ ಆಗಿರಲಿಲ್ಲ. ದೇವರ ವಾಣಿ ಅವನಿಗೆ
ಕೇಳಿಸಿರಲಿಲ್ಲ. 8ಸರ್ವೇಶ್ವರ ಸಮುವೇಲನನ್ನು ಮೂರನೆಯ ಸಾರಿ ಕರೆದರು. ಅವನು ತಟ್ಟನೆ ಏಲಿಯ ಹತ್ತಿರ
ಓಡಿ, "ಇಗೋ, ಬಂದಿದ್ದೇನೆ, ನನ್ನನ್ನು ಕರೆದಿರಲ್ಲಾ," ಎಂದನು. ಹುಡುಗನನ್ನು ಕರೆದವರು ಸರ್ವೇಶ್ವರನೇ
ಎಂದು ಏಲಿಗೆ ತಿಳಿಯಿತು. 9ಅವನು ಸಮುವೇಲನಿಗೆ, "ಹೋಗಿ ಮಲಗಿಕೋ; ಮತ್ತೆ ಅವರು ನಿನ್ನನ್ನು
ಕರೆದರೆ, 'ಸರ್ವೇಶ್ವರಾ, ಅಪ್ಪಣೆಯಾಗಲಿ; ತಮ್ಮ ದಾಸ ಕಾದಿದ್ದಾನೆ,' ಎಂದು ಹೇಳು," ಎಂದನು.
ಸಮುವೇಲನು ಹಿಂದಿರುಗಿ ಹೋಗಿ ತನ್ನ ಸ್ಥಳದಲ್ಲೇ ಮಲಗಿಕೊಂಡನು.

10 ಸರ್ವೇಶ್ವರ ಪ್ರತ್ಯಕ್ಷರಾಗಿ ಹಿಂದಿನಂತೆಯೇ "ಸಮುವೇಲನೇ, ಸಮುವೇಲನೇ," ಎಂದರು.
ಸಮುವೇಲನು, "ಅಪ್ಪಣೆಯಾಗಲಿ, ತಮ್ಮ ದಾಸನಾದ ನಾನು ಕಾದಿದ್ದೇನೆ," ಎಂದನು.

11 ಆಗ ಸರ್ವೇಶ್ವರ ಸಮುವೇಲನಿಗೆ, "ನಾನು ಇಸ್ರಯೇಲರಲ್ಲಿ ಒಂದು ವಿಶೇಷಕಾರ್ಯವನ್ನು
ನಡೆಸುವೆನು. ಆ ವಿಷಯವನ್ನು ಕೇಳುವವರ ಕಿವಿಗಳೆರಡೂ ನಿಮಿರುವುವು! 12ಏಲಿಯ ಮನೆಯನ್ನು ಕುರಿತು
ತಿಳಿಸಿದ್ದೆಲ್ಲವನ್ನೂ ಆ ದಿನ ತಪ್ಪದೆ ನೆರವೇರಿಸುವೆನು. 13ತನ್ನ ಮಕ್ಕಳು ದೇವದೂಷಕರು ಎಂದು ಅವನಿಗೆ
ತಿಳಿದುಬಂದರೂ ಅವನು ಅವರನ್ನು ತಿದ್ದಲಿಲ್ಲ. ಈ ಪಾಪದ ನಿಮಿತ್ತ ಅವನ ಕುಟುಂಬವನ್ನು ನಿತ್ಯದಂಡನೆಗೆ
ಗುರಿಮಾಡಿದ್ದೇನೆಂದು ಅವನಿಗೆ ಮೊದಲೇ ತಿಳಿಸಿದೆನು. 14ಏಲಿಯ ಮನೆಯವರ ಅಪರಾಧವು, ಎಂದಿಗೂ
ಬಲಿಯಿಂದಾಗಲಿ ನೈವೇದ್ಯಗಳಿಂದಾಗಲಿ ಪರಿಹಾರವಾಗುವುದಿಲ್ಲವೆಂದು ಪ್ರಮಾಣಮಾಡಿದ್ದೇನೆ," ಎಂದು
ಹೇಳಿದರು.

15 ಅನಂತರ ಸಮುವೇಲನು ಮಲಗಿ, ಮುಂಜಾನೆಯಲ್ಲೇ ಎದ್ದು, ಸರ್ವೇಶ್ವರನ ಮಂದಿರದ
ಬಾಗಿಲುಗಳನ್ನು ತೆರೆದನು. ತಾನು ಕಂಡದ್ದನ್ನು ಏಲಿಗೆ ತಿಳಿಸಲು ಭಯಪಟ್ಟನು. 16ಆದರೆ, ಏಲಿ, "ಮಗನೇ,
ಸಮುವೇಲನೇ", ಎಂದು ಕರೆದಾಗ ಅವನು "ಇಗೋ ಇದ್ದೇನೆ," ಎಂದನು. 17ಏಲಿ ಅವನಿಗೆ, "ಸರ್ವೇಶ್ವರ
ನಿನಗೆ ತಿಳಿಸಿದ್ದೇನು? ಅವರ ಮಾತುಗಳಲ್ಲಿ ಒಂದನ್ನಾದರೂ ಮರೆಮಾಡಬೇಡ; ಮಾಡಿದೆಯಾದರೆ
ಸರ್ವೇಶ್ವರ ಇಷ್ಟ ಬಂದ ಹಾಗೆ ನಿನ್ನನ್ನು ದಂಡಿಸಲಿ," ಎಂದು ಹೇಳಿದನು. 18ಸಮುವೇಲನು
ಮುಚ್ಚುಮರೆಯಿಲ್ಲದೆ ಎಲ್ಲವನ್ನೂ ತಿಳಿಸಿದನು. ಏಲಿ ಅದನ್ನು ಕೇಳಿ, "ಅವರೇ ಸರ್ವೇಶ್ವರ. ತಮಗೆ
ಸರಿಕಂಡಂತೆ ಮಾಡಲಿ," ಎಂದನು.

19 ಸಮುವೇಲನು ದೊಡ್ಡವನಾಗುತ್ತಾ ಬಂದನು. ಸರ್ವೇಶ್ವರ ಅವನೊಡನೆ ಇದ್ದರು.
ಆದುದರಿಂದಲೆ ಅವನು ಪ್ರವಾದನೆ ಮಾಡಿದವುಗಳಲ್ಲಿ ಒಂದೂ ತಪ್ಪಿಹೋಗಲಿಲ್ಲ. 20ಸರ್ವೇಶ್ವರ ಅವನನ್ನು
ತಮ್ಮ ಪ್ರವಾದಿಯನ್ನಾಗಿ ನೇಮಿಸಿಕೊಂಡರು. ಈ ಸಂಗತಿ ದಾನ್ ಊರಿನಿಂದ ಬೇರ್ಷೆಬದವರೆಗಿದ್ದ ಎಲ್ಲ
ಇಸ್ರಯೇಲರಿಗೆ ತಿಳಿಯಿತು. 21ಸರ್ವೇಶ್ವರ, ಶಿಲೋವಿನಲ್ಲಿ ದರ್ಶನ ಕೊಡುವುದಕ್ಕೆ ಪ್ರಾರಂಭಿಸಿ ದೈವವಾಣಿಯ
ಮೂಲಕ ಸಮುವೇಲನಿಗೆ ತಮ್ಮನ್ನೇ ಶ್ರುತಪಡಿಸುತ್ತಾ ಬಂದರು. ಇಸ್ರಯೇಲರೆಲ್ಲರಿಗೆ ಸಮುವೇಲನು
ಸರ್ವೇಶ್ವರನ ವಚನಗಳನ್ನು ತಿಳಿಸುತ್ತಾ ಇದ್ದನು.

## ಇಸ್ರಯೇಲರ ಸೋಲು – ಏಲಿಯ ಮಕ್ಕಳ ಮರಣ

**4** ಇಸ್ರಯೇಲರು ಫಿಲಿಷ್ಟಿಯರಿಗೆ ವಿರುದ್ಧ ಯುದ್ಧಕ್ಕೆ ಹೊರಟು ಎಬೆನೆಜೆರಿನ ಸಮೀಪದಲ್ಲಿ ಪಾಳೆಯ
ಮಾಡಿಕೊಂಡರು. ಫಿಲಿಷ್ಟಿಯರು ಬಂದು ಅಫೇಕಿನಲ್ಲಿ ಇಳಿದುಕೊಂಡರು. 2ಇವರು ಇಸ್ರಯೇಲರಿಗೆ
ಎದುರಾಗಿ ವ್ಯೂಹಕಟ್ಟಿ ಯುದ್ಧ ಮಾಡಿದರು. ಇಸ್ರಯೇಲರು ಸೋತರು. ರಣರಂಗದಲ್ಲಿ ಸುಮಾರು ನಾಲ್ಕು
ಸಾವಿರ ಮಂದಿ ಇಸ್ರಯೇಲರನ್ನು ಫಿಲಿಷ್ಟಿಯರು ಸಂಹರಿಸಿದರು. 3ಇಸ್ರಯೇಲರು ತಮ್ಮ ಪಾಳೆಯಕ್ಕೆ
ಹಿಂದಿರುಗಿದ ಮೇಲೆ ಅವರೊಡನೆ ಅವರ ಹಿರಿಯರು, "ಸರ್ವೇಶ್ವರ ಈ ದಿನ ನಮ್ಮನ್ನು ಫಿಲಿಷ್ಟಿಯರಿಂದ
ಅಪಜಯಪಡಿಸಿದ್ದೇಕೆ? ಶಿಲೋವಿನಿಂದ ಸರ್ವೇಶ್ವರನ ಒಡಂಬಡಿಕೆಯ ಮಂಜೂಷವನ್ನು ತರೋಣ;
ಅವರು ನಮ್ಮ ಮಧ್ಯದಲ್ಲಿ ಬಂದು ಶತ್ರುಗಳ ಕೈಯಿಂದ ನಮ್ಮನ್ನು ರಕ್ಷಿಸಲಿ," ಎಂದು ಸಮಾಲೋಚಿಸಿದರು.
4ಅಂತೆಯೇ ಜನರನ್ನು ಕಳುಹಿಸಿ ಕೆರೂಬಿಗಳ ಮಧ್ಯದಲ್ಲಿ ಆಸೀನರಾಗಿರುವ ಸೇನಾಧೀಶ್ವರ ಸರ್ವೇಶ್ವರನ

ಒಡಂಬಡಿಕೆಯ ಮಂಜೂಷವನ್ನು ತರಿಸಿದರು. ಏಲಿಯ ಇಬ್ಬರು ಮಕ್ಕಳಾದ ಹೊಫ್ನಿ, ಫೀನೆಹಾಸ್
ಎಂಬವರು ದೇವರ ಒಡಂಬಡಿಕೆಯ ಮಂಜೂಷದ ಸಂಗಡ ಇದ್ದರು.
5 ಸರ್ವೇಶ್ವರನ ಒಡಂಬಡಿಕೆಯ ಮಂಜೂಷ ಪಾಳೆಯಕ್ಕೆ ಬಂದಾಗ ಇಸ್ರಯೇಲರೆಲ್ಲರೂ ಭೂಮಿ
ಬಿರಿಯುವಷ್ಟು ಗಟ್ಟಿಯಾಗಿ ಜಯಕಾರ ಮಾಡಿದರು. 6ಫಿಲಿಷ್ಟಿಯರು ಇದನ್ನು ಕೇಳಿ, "ಹಿಬ್ರಿಯರ
ಪಾಳೆಯದಲ್ಲಿ ಇಂಥ ಆರ್ಭಟಕ್ಕೆ ಏನು ಕಾರಣ?" ಎಂದು ವಿಚಾರಿಸಿದರು. ಸರ್ವೇಶ್ವರನ ಮಂಜೂಷವು
ಪಾಳೆಯಕ್ಕೆ ಬಂದದ್ದೇ ಕಾರಣವೆಂದು ಗೊತ್ತಾಯಿತು. 7"ದೇವರು ಇವರ ಪಾಳೆಯಕ್ಕೆ ಬಂದಿದ್ದಾರಂತೆ!"
ಎಂದುಕೊಂಡು ಫಿಲಿಷ್ಟಿಯರು ಬಹಳವಾಗಿ ಭಯಪಟ್ಟರು. "ಅಯ್ಯೋ, ಹಿಂದೆ ಹೀಗಿರಲಿಲ್ಲ. 8ಅಕಟಾ,
ಪ್ರತಾಪವುಳ್ಳ ಈ ದೇವರುಗಳ ಕೈಯಿಂದ ನಮ್ಮನ್ನು ಬಿಡಿಸುವವರಾರು? ಈಜಿಪ್ಟರನ್ನು ಅರಣ್ಯದಲ್ಲಿ
ಸಂಪೂರ್ಣವಾಗಿ ನಾಶಮಾಡಿಬಿಟ್ಟ ದೇವರುಗಳು ಇವರೇ ಅಲ್ಲವೆ? 9ಫಿಲಿಷ್ಟಿಯರೇ, ಧೈರ್ಯಗೊಳ್ಳಿ;
ಶೂರರಾಗಿರಿ! ಇಲ್ಲವಾದರೆ ನಿಮಗೆ ಗುಲಾಮರಾಗಿದ್ದ ಹಿಬ್ರಿಯರಿಗೆ ನೀವೇ ಗುಲಾಮರಾದೀರಿ; ಆದಕಾರಣ
ಶೌರ್ಯದಿಂದ ಯುದ್ಧಮಾಡಿ!" ಎಂದು ಹೇಳಿಕೊಂಡು ಯುದ್ಧಮಾಡಿದರು. 10ಇಸ್ರಯೇಲರು ಸೋತು
ತಮ್ಮ ತಮ್ಮ ಮನೆಗಳಿಗೆ ಓಡಿಹೋದರು. ಮಹಾ ಸಂಹಾರವಾಯಿತು; ಇಸ್ರಯೇಲರಲ್ಲಿ ಮೂವತ್ತು ಸಾವಿರ
ಕಾಲಾಳುಗಳು ಮಡಿದರು. 11ದೇವರ ಮಂಜೂಷ ಶತ್ರುವಶವಾಯಿತು. ಏಲಿಯ ಮಕ್ಕಳಾದ ಹೊಫ್ನಿ ಮತ್ತು
ಫೀನೆಹಾಸ ಹತರಾದರು.

### ಏಲಿಯ ಸಾವು

12 ಅದೇ ದಿನ ಒಬ್ಬ ಬೆನ್ಯಾಮೀನ್ಯನು ರಣರಂಗದಿಂದ ತಪ್ಪಿಸಿಕೊಂಡು, ದುಃಖದಿಂದ ತನ್ನ
ಬಟ್ಟೆಗಳನ್ನು ಹರಿದುಕೊಂಡು, ತಲೆಯ ಮೇಲೆ ಮಣ್ಣುಹಾಕಿಕೊಂಡು, 13ಶಿಲೋವಿಗೆ ಬಂದು, ನಡೆದದ್ದನ್ನು
ತಿಳಿಸಿದನು. ಜನರೆಲ್ಲರು ಗೋಳಾಡತೊಡಗಿದರು. 'ದೇವರ ಮಂಜೂಷ ಏನಾಯಿತೋ?' ಎಂಬ
ಚಿಂತೆಯಿಂದ ಮಂದಿರ ದ್ವಾರದ ಬಳಿ ಕುಳಿತು, ದಾರಿಯನ್ನೇ ನೋಡುತ್ತಿದ್ದ ಏಲಿ, ಆ ದುಃಖಧ್ವನಿಯನ್ನು
ಕೇಳಿದನು. 14ಈ ಗದ್ದಲವೇನೆಂದು ವಿಚಾರಿಸಿದನು. ಒಡನೆ ಆ ವ್ಯಕ್ತಿ ಏಲಿಯ ಬಳಿಗೆ ಬಂದು ಎಲ್ಲವನ್ನು
ತಿಳಿಸಿದನು. 15ಏಲಿ ಆಗ ತೊಂಬತ್ತೆಂಟು ವರ್ಷದವನು; ಕಣ್ಣುಗಳು ಇಂಗಿಹೋಗಿ ಕುರುಡನಾಗಿದ್ದನು. 16ಆ
ವ್ಯಕ್ತಿ ಏಲಿಗೆ, "ನಾನು ರಣರಂಗದಲ್ಲಿ ಇದ್ದವನು; ಈ ಹೊತ್ತೇ ಅಲ್ಲಿಂದ ಓಡಿಬಂದೆ" ಎನ್ನಲು ಏಲಿ, "ಮಗು,
ಏನು ಸುದ್ದಿ?" ಎಂದು ಕೇಳಿದನು. 17ಅವನು ಏಲಿಗೆ, "ಇಸ್ರಯೇಲರು ಫಿಲಿಷ್ಟಿಯರಿಗೆ ಬೆನ್ನು ತೋರಿಸಿದರು;
ಮಹಾ ಸಂಹಾರವಾಯಿತು. ನಿಮ್ಮ ಇಬ್ಬರು ಮಕ್ಕಳಾದ ಹೊಫ್ನಿ ಹಾಗು ಫೀನೆಹಾಸ ಸತ್ತರು; ದೇವರ
ಮಂಜೂಷವು ಶತ್ರುವಶವಾಯಿತು," ಎಂದು ತಿಳಿಸಿದನು. 18ಮುದುಕನೂ ಸ್ಥೂಲಕಾಯನೂ ಆದ ಏಲಿ
ದೇವರ ಒಡಂಬಡಿಕೆಯ ಮಂಜೂಷದ ವರ್ತಮಾನವನ್ನು ಕೇಳಿದ್ದೇ, ಪೀಠದಿಂದ ಹಿಂದಕ್ಕೆ, ಬಾಗಿಲಿನ
ಕಡೆಗೆ ಬಿದ್ದು, ಕುತ್ತಿಗೆ ಮುರಿದು ಸತ್ತನು. ಏಲಿ ಇಸ್ರಯೇಲರನ್ನು ನಾಲ್ವತ್ತು ವರ್ಷ ಪಾಲಿಸಿದ್ದನು.

### ಫೀನೆಹಾಸನ ಪತ್ನಿಯ ಮರಣ

19 ಫೀನೆಹಾಸನ ಹೆಂಡತಿಯಾದ ಏಲಿಯ ಸೊಸೆ ದಿನತುಂಬಿದ ಗರ್ಭಿಣಿ. ದೇವರ ಮಂಜೂಷ
ಶತ್ರುವಶವಾದದ್ದನ್ನು ಹಾಗು ಮಾವ ಮತ್ತು ಗಂಡ ಹತರಾದದ್ದನ್ನು ಕೇಳಿದೊಡನೆ ಪ್ರಸವವೇದನೆಯುಂಟಾಗಿ
ಮಗುವನ್ನು ಹೆತ್ತಳು. 20ಆಕೆ ಸಾಯುವ ಸಮಯದಲ್ಲಿ ಬಳಿಯಲ್ಲಿ ನಿಂತಿದ್ದ ಮಹಿಳೆಯರು,
"ಭಯಪಡಬೇಡ, ಮಗನನ್ನು ಹೆತ್ತಿದ್ದೀ," ಎಂದು ಹೇಳಿದರು. ಆಕೆ ಅವರ ಮಾತಿಗೆ ಲಕ್ಷ್ಯಕೊಡಲಿಲ್ಲ,
ಪ್ರತ್ಯುತ್ತರವನ್ನೂ ಕೊಡಲಿಲ್ಲ. 21ದೇವರ ಮಂಜೂಷ ಶತ್ರುವಶವಾದುದರಿಂದಲು ಹಾಗೂ ಮಾವನೂ
ಗಂಡನೂ ಮೃತರಾಗಿದ್ದರಿಂದಲು, "ದೈವಮಹಿಮೆಯು ಇಸ್ರಯೇಲರನ್ನು ಬಿಟ್ಟುಹೋಯಿತು," ಎಂದು ಹೇಳಿ
ಆ ಕೂಸಿಗೆ 'ಈಕಾಬೋದ್' ಎಂದು ಹೆಸರು ಇಟ್ಟಳು. 22ದೇವರ ಮಂಜೂಷ ಶತ್ರುವಶವಾದ್ದರಿಂದಲೇ
ಇಸ್ರಯೇಲರ ಮಹಿಮೆ ಮಾಯವಾಯಿತೆಂದು ಹೇಳಿದಳು.

## ದೇವರ ಮಂಜೂಷ ಫಿಲಿಷ್ಟಿಯರಿಗೆ ಮಾರಕ

**5** ಫಿಲಿಷ್ಟಿಯರು ದೇವರ ಮಂಜೂಷವನ್ನು ಎಬೆನೆಜೆರಿನಿಂದ ಅಷ್ಡೋದಿನಲ್ಲಿರುವ ದಾಗೋನನ ಗುಡಿಗೆ
ಒಯ್ದರು. 2ಅಲ್ಲಿ ಅದನ್ನು ದಾಗೋನನ ಮಗ್ಗುಲಲ್ಲೇ ಇಟ್ಟರು. 3ಅಷ್ಡೋದಿನವರು ಮರುದಿನ ಬೆಳಿಗ್ಗೆ ಎದ್ದು
ನೋಡುವಾಗ ದಾಗೋನ್ ವಿಗ್ರಹ ಸರ್ವೇಶ್ವರನ ಮಂಜೂಷದ ಮುಂದೆ ಬೋರಲುಬಿದ್ದಿರುವುದನ್ನು ಕಂಡು
ಅದನ್ನು ಎತ್ತಿ ಪುನಃ ಅದರ ಸ್ಥಳದಲ್ಲಿಟ್ಟರು. 4ಮಾರನೆಯ ದಿನ ಬೆಳಿಗ್ಗೆ ನೋಡುವಾಗ ದಾಗೋನನ ತಲೆ
ಮತ್ತು ಕೈಗಳು ಮುರಿದು ಹೊಸ್ತಿಲಿನ ಮೇಲೆ ಬಿದ್ದಿದ್ದವು; ಮುಂಡ ಮಾತ್ರ ಸರ್ವೇಶ್ವರನ ಮಂಜೂಷದ
ಮುಂದೆ ಬಿದ್ದಿತ್ತು. 5(ಇಂದಿನವರೆಗೂ ದಾಗೋನನ ಯಾಜಕರು ಹಾಗು ಅವನ ಬಳಿಗೆ ಬರುವವರೆಲ್ಲರು
ಅಷ್ಡೋದಿನ ಗುಡಿಯ ಹೊಸ್ತಿಲನ್ನು ತುಳಿಯದಿರುವುದಕ್ಕೆ ಇದೇ ಕಾರಣ.)

6 ಸರ್ವೇಶ್ವರನ ಹಸ್ತ ಅಷ್ಡೋದಿನವರಿಗೆ ಬಾಧಕವಾಗಿತ್ತು. ಸರ್ವೇಶ್ವರ ಗಡ್ಡೆರೋಗವನ್ನು ಬರಮಾಡಿ
ಅವರ ನಗರವನ್ನೂ ಅದರ ಗ್ರಾಮಗಳನ್ನೂ ಹಾಳುಮಾಡಿದರು. 7ಇದನ್ನು ನೋಡಿ ಆ ಅಷ್ಡೋದಿನ ಜನರು,
“ಇಸ್ರಯೇಲ್ ದೇವರ ಮಂಜೂಷ ನಮ್ಮಲ್ಲಿರಬಾರದು; ಆತನ ಹಸ್ತ ನಮಗೂ ನಮ್ಮ ದೇವರಾದ
ದಾಗೋನನಿಗೂ ಬಾಧಕವಾಗಿದೆ,” ಎಂದು ಹೇಳಿ 8ಫಿಲಿಷ್ಟಿಯದ ರಾಜರೆಲ್ಲರನ್ನು ಕೂಡಿಸಿ, “ಇಸ್ರಯೇಲ್
ದೇವರ ಮಂಜೂಷವನ್ನು ಏನು ಮಾಡೋಣ?” ಎಂದು ವಿಚಾರಿಸಿದರು.

ಅವರು ಅದನ್ನು ಗತ್ ಊರಿಗೆ ಕಳುಹಿಸಬೇಕೆಂದು ನಿರ್ಣಯಿಸಿದರು. ಹಾಗೆಯೇ ಇಸ್ರಯೇಲ್
ದೇವರ ಮಂಜೂಷವನ್ನು ಅಲ್ಲಿಗೆ ಕಳುಹಿಸಿದರು. 9ಮಂಜೂಷವು ಅಲ್ಲಿ ಹೋದ ಮೇಲೆ ಸರ್ವೇಶ್ವರನ ಹಸ್ತ
ಆ ಊರಿನವರಿಗೂ ಬಾಧಕವಾದುದರಿಂದ ಅಲ್ಲಿ ದೊಡ್ಡ ಗದ್ದಲ ಎದ್ದಿತು. ಸರ್ವೇಶ್ವರ ಆ ಊರಿನ
ಚಿಕ್ಕವರಲ್ಲೂ ದೊಡ್ಡವರಲ್ಲೂ ಗಡ್ಡೆಗಳನ್ನು ಬರಮಾಡಿದರು. 10ಆದುದರಿಂದ ಅವರು ದೇವರ
ಮಂಜೂಷವನ್ನು ಎಕ್ರೋನಿಗೆ ಕಳುಹಿಸಿದರು. ಅದು ಅಲ್ಲಿಗೆ ಬಂದಾಗ ಆ ಊರಿನವರು, “ನೋಡಿ,
ನಮ್ಮನ್ನೂ ನಮಗೆ ಸೇರಿದವರನ್ನೂ ಕೊಲ್ಲುವುದಕ್ಕಾಗಿಯೇ ಇಸ್ರಯೇಲ್ ದೇವರ ಮಂಜೂಷವನ್ನು ಇಲ್ಲಿಗೆ
ಕಳುಹಿಸಿದ್ದಾರೆ,” ಎಂದು ಕೂಗಾಡಿದರು. 11ದೇವರ ಹಸ್ತ ಅವರಿಗೂ ಬಾಧಕವಾಗಿದ್ದುದರಿಂದ ಅವರಿಗೆ
ಮರಣಭಯವುಂಟಾಯಿತು. ಅವರು ಫಿಲಿಷ್ಟಿಯ ರಾಜರೆಲ್ಲರನ್ನು ಕೂಡಿಸಿ, “ಇಸ್ರಯೇಲ್ ದೇವರ
ಮಂಜೂಷದಿಂದ ನಮಗೂ ನಮ್ಮ ಜನರಿಗೂ ಮರಣವುಂಟಾಗದ ಹಾಗೆ ಅದನ್ನು ಅದರ ಸ್ಥಳಕ್ಕೆ
ಕಳುಹಿಸಿಬಿಡಿ,” ಎಂದು ಕೇಳಿಕೊಂಡರು. ಉಳಿದ ಜನರಿಗೂ ಗಡ್ಡೆರೋಗ ಬಂದಿತ್ತು. ಪಟ್ಟಣದ ಗೋಳಾಟ
ಗಗನಕ್ಕೇರಿತ್ತು.

## ಮರಳಿ ಬಂದ ಮಂಜೂಷ

**6** ಸರ್ವೇಶ್ವರನ ಮಂಜೂಷ ಫಿಲಿಷ್ಟಿಯರ ದೇಶದಲ್ಲಿ ಏಳು ತಿಂಗಳಿತ್ತು. 2ಫಿಲಿಷ್ಟಿಯರು ಅವರ
ಪೂಜಾರಿಗಳನ್ನೂ ಮಂತ್ರಗಾರರನ್ನೂ ಕರೆದು, “ಸರ್ವೇಶ್ವರನ ಮಂಜೂಷವನ್ನು ಏನು ಮಾಡಬೇಕು?
ಅದನ್ನು ಮರಳಿ ಅದರ ಸ್ಥಳಕ್ಕೆ ಹೇಗೆ ಕಳುಹಿಸುವುದು? ನಮಗೆ ತಿಳಿಸಿ,” ಎಂದು ಕೇಳಿಕೊಂಡರು.
3ಮರುತ್ತರವಾಗಿ ಅವರು, “ಇಸ್ರಯೇಲ್ ದೇವರ ಮಂಜೂಷವನ್ನು ಸುಮ್ಮನೆ ಕಳುಹಿಸಬಾರದು; ನಿಮ್ಮ
ಪಾಪಕ್ಕಾಗಿ ಪ್ರಾಯಶ್ಚಿತ್ತ ದ್ರವ್ಯದೊಡನೆ ಕಳುಹಿಸಬೇಕು. ಆಗ ಮಾತ್ರ ನೀವು ಗುಣಹೊಂದುವಿರಿ; ಅಲ್ಲದೆ
ಅವರ ದೇವರ ಶಿಕ್ಷಾಹಸ್ತ ನಿಮ್ಮನ್ನು ಬಾಧಿಸುತ್ತಿದ್ದುದಕ್ಕೆ ಕಾರಣ ಗೊತ್ತಾಗುವುದು,” ಎಂದು ಹೇಳಿದರು. 4ಆ
ಜನರು, “ನಾವು ಪ್ರಾಯಶ್ಚಿತಾರ್ಥವಾಗಿ ಏನನ್ನು ಕಳುಹಿಸಬೇಕು?” ಎಂದು ವಿಚಾರಿಸಿದರು. ಅದಕ್ಕೆ ಅವರು,
“ನಿಮಗೂ ನಿಮ್ಮ ರಾಜರುಗಳಿಗೂ ಒಂದೇ ವಿಧವಾದ ವ್ಯಾಧಿ ಇರುವುದರಿಂದ ನಿಮ್ಮ ರಾಜರುಗಳ ಸಂಖ್ಯೆಗೆ
ಸರಿಯಾಗಿ ಐದು ಬಂಗಾರದ ಗಡ್ಡೆಗಳನ್ನು ಹಾಗು ಐದು ಬಂಗಾರದ ಇಲಿಗಳನ್ನು ಮಾಡಿಸಬೇಕು. 5ನಿಮ್ಮ
ದೇಶ ನಿವಾಸಿಗಳ ವಿನಾಶಕ್ಕೆ ಕಾರಣವಾಗಿರುವ ಈ ಗಡ್ಡೆಗಳ ಹಾಗು ಇಲಿಗಳ ರೂಪವನ್ನು ಚಿನ್ನದಿಂದ
ಮಾಡಿಸಿ ಇಸ್ರಯೇಲ್ ದೇವರಿಗೆ ಬಹುಮಾನವಾಗಿ ಕೊಡಿ. ಆಗ ಆತನ ಶಿಕ್ಷಾಹಸ್ತ ನಿಮ್ಮನ್ನೂ ನಿಮ್ಮ
ದೇವತೆಗಳನ್ನೂ ಹಾಗು ಪ್ರಾಂತ್ಯಗಳನ್ನೂ ಬಿಟ್ಟುಹೋಗಬಹುದು. 6ಈಜಿಪ್ಟ್‌ನವರಂತೆ ಆಗಲಿ, ಫರೋಹನಂತೆ
ಆಗಲಿ ನೀವೇಕೆ ನಿಮ್ಮ ಹೃದಯಗಳನ್ನು ಕಠಿಣ ಪಡಿಸಿಕೊಳ್ಳಬೇಕು? ಇಸ್ರಯೇಲರನ್ನು ಕಳುಹಿಸಲೊಲ್ಲದ ಆ

ಈಜಿಪ್ಟ್ ನವರನ್ನು ಸರ್ವೇಶ್ವರನು ಎಷ್ಟೋ ವಿಧವಾಗಿ ಬಾಧಿಸಬೇಕಾಯಿತಲ್ಲವೆ? [7]ಈಗ ನೀವು ಒಂದು
ಹೊಸ ಬಂಡಿಯನ್ನು ಮಾಡಿಸಿರಿ. ಅದಕ್ಕೆ ಹಾಲುಕರೆಯುವ ಮತ್ತು ಎಂದೂ ನೊಗಹೊರದ ಎರಡು
ಹಸುಗಳನ್ನು ಹೂಡಿಸಿರಿ. [8]ಆ ಬಂಡಿಯ ಮೇಲೆ ಸರ್ವೇಶ್ವರನ ಮಂಜೂಷವನ್ನು ಹಾಗು ನೀವು
ಪ್ರಾಯಶ್ಚಿತಾರ್ಥವಾಗಿ ಕೊಡುವ ಬಂಗಾರದ ವಸ್ತುಗಳುಳ್ಳ ಚಿಕ್ಕ ಪೆಟ್ಟಿಗೆಯನ್ನು ಇಡಿ. ಬಳಿಕ ಆ ಬಂಡಿಯನ್ನು
ಹೊರಡಿಸಿ ಹೋಗಬಿಡಿ. ಆ ಹಸುಗಳ ಕರುಗಳನ್ನು ಮನೆಗೆ ತೆಗೆದುಕೊಂಡು ಹೋಗಿ, [9]ಬಂಡಿ ಹೋಗುವ
ದಾರಿಯನ್ನು ಗಮನಿಸಿರಿ. ಅದು ತಾನಾಗಿ ಸ್ವದೇಶದ ದಾರಿಹಿಡಿದು ಬೇತ್‍ಷೆಮೆಷಿನ ಕಡೆಗೆ ಹೋದರೆ ಈಗ
ಬಂದಿರುವ ಕೇಡನ್ನು ಕಳುಹಿಸಿದವನು ಆ ಸರ್ವೇಶ್ವರನೇ ಎಂದು ತಿಳಿಯಿರಿ. ಬಂಡಿ ಆ ಮಾರ್ಗವನ್ನು
ಹಿಡಿಯದಿದ್ದರೆ ಆ ಸರ್ವೇಶ್ವರನ ಹಸ್ತ ನಮ್ಮನ್ನು ಮುಟ್ಟಲಿಲ್ಲ, ಈ ಕೇಡು ಆಕಸ್ಮಿಕವಾಗಿ ಬಂದಿದೆ ಎಂದು
ತಿಳಿದುಕೊಳ್ಳಿ," ಎಂದು ಹೇಳಿದರು.

10 ಫಿಲಿಷ್ಟಿಯರು ಅದೇ ಪ್ರಕಾರ ಮಾಡಿದರು: ಹಾಲುಕರೆಯುವ ಎರಡು ಹಸುಗಳನ್ನು
ತೆಗೆದುಕೊಂಡು ಬಂಡಿಗೆ ಹೂಡಿದರು. ಅವುಗಳ ಕರುಗಳನ್ನು ಮನೆಯಲ್ಲೇ ಕಟ್ಟಿಹಾಕಿದರು. [11]ಸರ್ವೇಶ್ವರನ
ಮಂಜೂಷವನ್ನು ಮತ್ತು ಚಿನ್ನದ ಇಲಿಗಳೂ ಗಡ್ಡೆಗಳೂ ಇದ್ದ ಚಿಕ್ಕಪೆಟ್ಟಿಗೆಯನ್ನು ಬಂಡಿಯಲ್ಲಿ ಇಟ್ಟರು.
[12]ಕೂಡಲೆ ಆ ಹಸುಗಳು ಬೇತ್ ಷೆಮೆಷಿನ ರಾಜಮಾರ್ಗವನ್ನು ಹಿಡಿದು, ಅಂಬಾ ಎನ್ನುತ್ತಾ ನೆಟ್ಟಗೆ
ಮುಂದೆಸಾಗಿದವು. ಎಡಕ್ಕಾಗಲಿ, ಬಲಕ್ಕಾಗಲಿ ತಿರುಗಲಿಲ್ಲ. ಫಿಲಿಷ್ಟಿಯ ರಾಜರುಗಳು ಬೇತ್‍ಷೆಮೆಷಿನ
ಎಲ್ಲೆಯವರೆಗೂ ಅವುಗಳ ಹಿಂದೆ ಹೋದರು.

13 ಬೇತ್‍ಷೆಮೆಷಿನವರು ಅಲ್ಲಿನ ತಗ್ಗಿನಲ್ಲಿ ಗೋದಿಬೇಳೆಯನ್ನು ಕೊಯ್ಯುತ್ತಿದ್ದರು. ಕಣ್ಣೆತ್ತಿ
ಸರ್ವೇಶ್ವರನ ಮಂಜೂಷವನ್ನು ನೋಡಿ ಬಹಳ ಸಂತೋಷಪಟ್ಟರು. [14]ಆ ಬಂಡಿ ಬೇತ್‍ಷೆಮೆಷಿ ನವನಾದ
ಯೆಹೋಶುವನ ಹೊಲದಲ್ಲಿದ್ದ ಒಂದು ದೊಡ್ಡ ಕಲ್ಲಿನ ಬಳಿ ಬಂದು ನಿಂತಿತು. ಅವರು ಅಲ್ಲಿಗೆ ಹೋಗಿ,
ಬಂಡಿಯ ಕಟ್ಟಿಗೆಗಳನ್ನು ಮುರಿದು, ಅಗ್ನಿ ಮಾಡಿ ಆ ಹಸುಗಳನ್ನು ಸರ್ವೇಶ್ವರನಿಗೆ ದಹನ ಬಲಿಯಾಗಿ
ಅರ್ಪಿಸಿದರು. [15]ಲೇವಿಯರು ಸರ್ವೇಶ್ವರನ ಮಂಜೂಷವನ್ನು ಹಾಗು ಚಿನ್ನದ ವಸ್ತುಗಳಿದ್ದ ಚಿಕ್ಕಪೆಟ್ಟಿಗೆಯನ್ನು
ಇಳಿಸಿ ಆ ದೊಡ್ಡ ಕಲ್ಲಿನ ಮೇಲಿಟ್ಟರು. ಬೇತ್‍ಷೆಮೆಷಿನವರು ಅದೇ ದಿನ ಸರ್ವೇಶ್ವರನಿಗೆ ದಹನಬಲಿಗಳನ್ನು
ಹಾಗು ಶಾಂತಿಸಮಾಧಾನದ ಬಲಿಗಳನ್ನು ಸಮರ್ಪಿಸಿದರು. [16]ಇದನ್ನೆಲ್ಲ ನೋಡಿದ ಮೇಲೆ ಫಿಲಿಷ್ಟಿಯರ
ಐದು ಮಂದಿ ರಾಜರು ಅದೇ ದಿನ ಎಕ್ರೋನಿಗೆ ಹಿಂದಿರುಗಿದರು.

17 ಫಿಲಿಷ್ಟಿಯರು ಸರ್ವೇಶ್ವರನಿಗೆ ಪ್ರಾಯಶ್ಚಿತಾರ್ಥವಾಗಿ ಸಮರ್ಪಿಸಿದ ಚಿನ್ನದ ಗಡ್ಡೆಗಳ
ಸಂಸ್ಥಾನಾನುಸಾರವಾದ ಪಟ್ಟಿ ಇದು: ಅಷ್ಡೋದ್, ಗಾಜಾ, ಪರವಾಗಿ ಒಂದು, ಅಷ್ಕೆಲೋನ್ ಪರವಾಗಿ
ಒಂದು, ಗತ್ ಪರವಾಗಿ ಒಂದು ಮತ್ತು ಎಕ್ರೋನ್ ಪರವಾಗಿ ಒಂದು. [18]ಅವರು ಕಳುಹಿಸಿದ ಬಂಗಾರದ
ಇಲಿಗಳು ಫಿಲಿಷ್ಟಿಯರ ಐದು ಮಂದಿ ರಾಜರ ಅಧೀನದಲ್ಲಿದ್ದ ಎಲ್ಲ ಪುಟ್ಟ ಗ್ರಾಮಗಳ ಹಾಗು
ಕೋಟೆಪೇಟೆಗಳ ಸಂಖ್ಯೆಗೆ ಸರಿಯಾಗಿದ್ದವು. ಸರ್ವೇಶ್ವರನ ಮಂಜೂಷವನ್ನು ಇಡಲಾಗಿದ್ದ ಆ ದೊಡ್ಡ ಕಲ್ಲು
ಇಂದಿನವರೆಗೂ ಬೇತ್‍ಷೆಮೆಷಿನ ಯೆಹೋಶುವಿನ ಹೊಲದಲ್ಲಿ ಸಾಕ್ಷಿಯಾಗಿ ನಿಂತಿದೆ.

19 ಮಂಜೂಷವನ್ನು ತೆರೆದು ನೋಡಿದ ಬೇತ್‍ಷೆಮೆಷಿನವರಾದ ಎಪ್ಪತ್ತು ಮಂದಿಯನ್ನು
ಸರ್ವೇಶ್ವರ ನಾಶಮಾಡಿದರು. ಈ ವಿನಾಶಕ್ಕಾಗಿ ಬೇತ್‍ಷೆಮೆಷಿನವರು ಗೋಳಾಡಿದರು.

### ಕಿರ್ಯತ್ಯಾರೀಮಿನಲ್ಲಿ ಮಂಜೂಷ

20 "ಪರಮಪಾವನ ದೇವರಾದ ಸರ್ವೇಶ್ವರನ ಮುಂದೆ ಯಾರುತಾನೆ ನಿಂತಾರು? ಇನ್ನು ಮುಂದೆ
ಇವರು ಹೋಗತಕ್ಕ ಸ್ಥಳ ಯಾವುದು?" ಎಂದು ಮಾತಾಡಿಕೊಂಡರು ಜನರು.

21 ಕಿರ್ಯತ್ಯಾರೀಮಿನವರ ಬಳಿಗೆ ದೂತರನ್ನು ಕಳುಹಿಸಿ, "ಫಿಲಿಷ್ಟಿಯರು ಸರ್ವೇಶ್ವರನ
ಮಂಜೂಷವನ್ನು ಕಳುಹಿಸಿದ್ದಾರೆ; ನೀವು ಬಂದು ಅದನ್ನು ತೆಗೆದುಕೊಂಡು ಹೋಗಿ," ಎಂದು ತಿಳಿಸಿದರು.

**7** ಆಗ ಕಿರ್ಯತ್ಯಾರೀಮಿನವರು ಬಂದು ಸರ್ವೇಶ್ವರನ ಮಂಜೂಷವನ್ನು ತೆಗೆದುಕೊಂಡು ಹೋದರು. ಗುಡ್ಡದಮೇಲೆ ವಾಸವಾಗಿದ್ದ ಅಬೀನಾದಾಬನ ಮನೆಯಲ್ಲಿ ಅದನ್ನು ಇಟ್ಟು, ಅವನ ಮಗ ಎಲ್ಲಾಜಾರನನ್ನು ಅದರ ಸೇವೆಗಾಗಿ ಪ್ರತಿಷ್ಠಿಸಿದರು.

### ಇಸ್ರಯೇಲನ್ನು ಪಾಲಿಸಿದ ಸಮುವೇಲನು

2 ಮಂಜೂಷವು ಕಿರ್ಯತ್ಯಾರೀಮಿಗೆ ಬಂದು ಬಹಳ ದಿವಸಗಳು ಅಂದರೆ, ಇಪ್ಪತ್ತು ವರ್ಷಗಳು
ಕಳೆದುಹೋದವು. ಈ ಕಾಲದಲ್ಲಿ ಎಲ್ಲ ಇಸ್ರಯೇಲರು ಸರ್ವೇಶ್ವರನಿಗಾಗಿ ಹಂಬಲಿಸುತ್ತಿದ್ದರು. [3]ಆಗ
ಸಮುವೇಲನು ಅವರಿಗೆ, “ನೀವು ಪೂರ್ಣಮನಸ್ಸಿನಿಂದ ಸರ್ವೇಶ್ವರನಿಗೆ ಅಭಿಮುಖರಾಗಿ ನಿಮ್ಮ
ಮಧ್ಯದಲ್ಲಿರುವ ಅಷ್ಟೋರೆತ್ ಮೊದಲಾದ ಅನ್ಯದೇವತೆಗಳನ್ನು ತೆಗೆದು ಹಾಕಿರಿ. ಸರ್ವೇಶ್ವರನ ಮೇಲೆಯೇ
ಮನಸ್ಸಿಟ್ಟು ಅವರೊಬ್ಬರಿಗೇ ಸೇವೆಸಲ್ಲಿಸಿರಿ; ಆಗ ಅವರು ನಿಮ್ಮನ್ನು ಫಿಲಿಷ್ಟಿಯರ ಕೈಯಿಂದ ಬಿಡಿಸಿ
ಕಾಪಾಡುವರು,” ಎಂದನು. [4]ಹಾಗೆಯೇ ಇಸ್ರಯೇಲರು ಬಾಳ್ ಅಷ್ಟೋರೆತ್ ದೇವತೆಗಳನ್ನು ತೆಗೆದುಹಾಕಿ
ಸರ್ವೇಶ್ವರಸ್ವಾಮಿಯೊಬ್ಬರಿಗೆ ಸೇವೆ ಸಲ್ಲಿಸತೊಡಗಿದರು.

5 ಸಮುವೇಲನು ಪುನಃ ಅವರಿಗೆ, “ಇಸ್ರಯೇಲರೆಲ್ಲರೂ ಮಿಚ್ಪೆಯಲ್ಲಿ ಕೂಡಿಬರಲಿ; ನಾನು
ನಿಮಗೋಸ್ಕರ ಸರ್ವೇಶ್ವರನನ್ನು ಪ್ರಾರ್ಥಿಸುವೆನು,” ಎಂದನು. [6]ಅಂತೆಯೇ ಅವರು ಅಲ್ಲಿ ಕೂಡಿಬಂದು,
ನೀರುಸೇದಿ ಸರ್ವೇಶ್ವರನ ಮುಂದೆ ಹೊಯ್ದು, ಆ ದಿವಸ ಉಪವಾಸವಿದ್ದು, ದ್ರೋಹಿಗಳಾಗಿದ್ದೇವೆಂದು
ಸರ್ವೇಶ್ವರನಿಗೆ ಅರಿಕೆ ಮಾಡಿದರು. ಸಮುವೇಲನು ಮಿಚ್ಪೆಯಲ್ಲಿ ಇಸ್ರಯೇಲರ ವ್ಯಾಜ್ಯಗಳನ್ನು ತೀರಿಸಿದನು.

7 ಇಸ್ರಯೇಲರು ಮಿಚ್ಪೆಯಲ್ಲಿ ಕೂಡಿ ಬಂದಿದ್ದಾರೆಂಬುದು ಫಿಲಿಷ್ಟಿಯರಿಗೆ ಗೊತ್ತಾದಾಗ ಅವರ
ರಾಜರುಗಳು ಇಸ್ರಯೇಲರಿಗೆ ವಿರುದ್ಧ ಯುದ್ಧಕ್ಕೆ ಹೊರಟರು. ಇದನ್ನು ತಿಳಿದ ಇಸ್ರಯೇಲರು ಬಹಳವಾಗಿ
ಭಯಪಟ್ಟರು. [8]ಅವರು ಸಮುವೇಲನಿಗೆ, “ನಮ್ಮ ದೇವರಾದ ಸರ್ವೇಶ್ವರ ನಮ್ಮನ್ನು ಫಿಲಿಷ್ಟಿಯರ ಕೈಯಿಂದ
ತಪ್ಪಿಸಿ ರಕ್ಷಿಸುವ ಹಾಗೆ ನೀವು ನಮಗೋಸ್ಕರ ಪ್ರಾರ್ಥನೆಮಾಡಿ, ಸುಮ್ಮನಿರಬೇಡಿ,” ಎಂದರು. [9]ಆಗ
ಸಮುವೇಲನು ಹಾಲುಕುಡಿಯುವ ಒಂದು ಕುರಿಮರಿಯನ್ನು ತಂದು ಸರ್ವೇಶ್ವರನಿಗೆ ದಹನ ಬಲಿಯಾಗಿ
ಸಮರ್ಪಿಸಿ, ಇಸ್ರಯೇಲರ ಪರವಾಗಿ ಪ್ರಾರ್ಥನೆ ಮಾಡಿದನು. ಸರ್ವೇಶ್ವರ ಸದುತ್ತರವನ್ನು
ದಯಪಾಲಿಸಿದರು. [10]ಹೇಗೆಂದರೆ, ಸಮುವೇಲನು ಬಲಿಯನ್ನರ್ಪಿಸುವ ವೇಳೆಯಲ್ಲಿ ಫಿಲಿಷ್ಟಿಯರು
ಯುದ್ಧಕ್ಕಾಗಿ ಸಮೀಪಿಸಿದರು. ಸರ್ವೇಶ್ವರ ದೊಡ್ಡ ಗುಡುಗಿನಿಂದ ಅವರನ್ನು ಕಳವಳಗೊಳಿಸಿ, ಇಸ್ರಯೇಲರಿಗೆ
ಸೋತು ಓಡಿಹೋಗುವಂತೆ ಮಾಡಿದರು. [11]ಇಸ್ರಯೇಲರಾದರೋ ಮಿಚ್ಪೆಯಿಂದ ಹೊರಟು ಬೇತ್ಕರಿನ
ತಗ್ಗಿನವರೆಗೆ ಅವರನ್ನು ಹಿಂಬಾಲಿಸಿ ಹತಮಾಡಿದರು.

12 ಅನಂತರ ಸಮುವೇಲನು ಮಿಚ್ಪೆಗೂ ಶೇನಿಗೂ ಮಧ್ಯದಲ್ಲಿ ಒಂದು ಕಲ್ಲನ್ನು ನಿಲ್ಲಿಸಿ, “ಸರ್ವೇಶ್ವರ
ಇಲ್ಲಿಯವರೆಗೆ ನಮಗೆ ಸಹಾಯ ಮಾಡಿದರು,” ಎಂದು ಹೇಳಿ ಅದಕ್ಕೆ ‘ಎಬನೆಜೆರ್’ ಎಂದು ಹೆಸರಿಟ್ಟನು.
[13]ಫಿಲಿಷ್ಟಿಯರು ಸೋತು ಹೋದುದರಿಂದ ಮತ್ತೆ ಇಸ್ರಯೇಲರ ಪ್ರಾಂತ್ಯದೊಳಗೆ ಬರಲೇ ಇಲ್ಲ.
ಸಮುವೇಲನ ಜೀವಮಾನದಲ್ಲೆಲ್ಲಾ ಸರ್ವೇಶ್ವರನ ಹಸ್ತ ಫಿಲಿಷ್ಟಿಯರಿಗೆ ವಿರೋಧವಾಗಿಯೇ ಇತ್ತು. [14]ಅವರು
ಎಕ್ರೋನ್ ಮೊದಲುಗೊಂಡು ಗತ್ ಊರಿನವರೆಗೆ ಇಸ್ರಯೇಲರಿಂದ ಕಿತ್ತುಕೊಂಡಿದ್ದ ಎಲ್ಲ ಪಟ್ಟಣಗಳು
ಇಸ್ರಯೇಲರಿಗೆ ದೊರಕಿದವು. ಅವುಗಳಿಗೆ ಸೇರಿದ ಗ್ರಾಮಗಳನ್ನೂ ಇಸ್ರಯೇಲರು ಫಿಲಿಷ್ಟಿಯರಿಂದ
ತೆಗೆದುಕೊಂಡರು. ಇಸ್ರಯೇಲರಿಗೂ ಅಮೋರಿಯರಿಗೂ ಸಮಾಧಾನವಿತ್ತು.

15 ಸಮುವೇಲನು ಜೀವದಿಂದಿರುವವರೆಗೆ ಇಸ್ರಯೇಲರನ್ನು ಪಾಲಿಸುತ್ತಿದ್ದನು. [16]ಅವನು
ಇಸ್ರಯೇಲರ ನ್ಯಾಯಗಳನ್ನು ತೀರಿಸುವುದಕ್ಕಾಗಿ ಪ್ರತಿವರ್ಷವೂ ಬೇತೇಲ್, ಗಿಲ್ಗಾಲ್, ಮಿಚ್ಪೆ ಎಂಬ
ಪಟ್ಟಣಗಳನ್ನು ಸುತ್ತಿ ರಾಮಾಕ್ಕೆ ತಿರುಗಿ ಬರುತ್ತಿದ್ದನು. [17]ಅಲ್ಲಿ ಅವನ ಸ್ವಂತ ಮನೆ ಇದ್ದುದರಿಂದ ಅಲ್ಲಿಯೇ
ಸರ್ವೇಶ್ವರನಿಗೆ ಒಂದು ಬಲಿಪೀಠವನ್ನು ಕಟ್ಟಿಸಿ ಇಸ್ರಯೇಲರನ್ನು ಪಾಲಿಸುತ್ತಿದ್ದನು.

## ಸಮುವೇಲನು ಮತ್ತು ಸೌಲನು ಒಬ್ಬ ಅರಸ ಬೇಕೆಂಬ ಕೋರಿಕೆ

**8** ಸಮುವೇಲನು ಮುದಕನಾದ ಮೇಲೆ ತನ್ನ ಮಕ್ಕಳನ್ನು ಇಸ್ರಯೇಲರಿಗೆ ನ್ಯಾಯ ಸ್ಥಾಪಕರನ್ನಾಗಿ
ಮಾಡಿದನು. 2ಅವನ ಹಿರಿಯ ಮಗನ ಹೆಸರು ಯೋವೇಲ್, ಎರಡನೇ ಮಗನ ಹೆಸರು ಅಬೀಯ; ಇವರ
ನ್ಯಾಯಾಸನವು ಬೇರ್ಷೆಬದಲ್ಲಿತ್ತು. 3ಇವರು ತಂದೆಯ ಮಾರ್ಗದಲ್ಲಿ ನಡೆಯದೆ ದ್ರವ್ಯಾಶೆಯಿಂದ ಲಂಚ
ತೆಗೆದುಕೊಂಡು ನ್ಯಾಯವಿರುದ್ಧವಾದ ತೀರ್ಪು ಮಾಡುತ್ತಿದ್ದರು.

4 ಆದುದರಿಂದ ಇಸ್ರಯೇಲರ ಹಿರಿಯರೆಲ್ಲರೂ ಕೂಡಿ ರಾಮಾದಲ್ಲಿದ್ದ ಸಮುವೇಲನ ಬಳಿಗೆ
ಬಂದು, 5"ತಾವಂತೂ ಮುದುಕರಾದಿರಿ; ನಿಮ್ಮ ಮಕ್ಕಳು ನಿಮ್ಮ ಮಾರ್ಗದಲ್ಲಿ ನಡೆಯುವುದಿಲ್ಲ. ಆದುದರಿಂದ
ಬೇರೆ ಎಲ್ಲ ಜನಾಂಗಗಳಿಗಿರುವಂತೆ ನಮಗೂ ಒಬ್ಬ ಅರಸನನ್ನು ನೇಮಿಸಿ; ಅವನೇ ನಮ್ಮ
ನ್ಯಾಯಸ್ಥಾಪಕನಾಗಿರಲಿ," ಎಂದರು. 6'ನ್ಯಾಯಸ್ಥಾಪನೆಗಾಗಿ ನಮಗೊಬ್ಬ ಅರಸನನ್ನು ನೇಮಿಸಿಕೊಡಿ' ಎಂಬ
ಮಾತಿಗೆ ಸಮುವೇಲನು ದುಃಖಪಟ್ಟನು. ಸರ್ವೇಶ್ವರನನ್ನು ಪ್ರಾರ್ಥಿಸಿದನು. 7ಸರ್ವೇಶ್ವರ ಅವನಿಗೆ, "ಜನರು
ಹೇಳಿದಂತೆಯೇ ಮಾಡು; ಅವರು ನಿನ್ನನ್ನಲ್ಲ, ನನ್ನನ್ನು ತಿರಸ್ಕರಿಸಿದ್ದಾರೆ. ನನ್ನ ಆಳ್ವಿಕೆ ಬೇಡವೆನ್ನುತ್ತಾರೆ.
8ನಾನು ಅವರನ್ನು ಈಜಿಪ್ಟಿನಿಂದ ಬಿಡಿಸಿದೆ. ಅಂದಿನಿಂದ ಇಂದಿನವರೆಗೂ ಅವರು ನನ್ನನ್ನು ಬಿಟ್ಟು
ಅನ್ಯದೇವತೆಗಳ್ಳು ಪೂಜಿಸಿದರು. ನನಗೆ ಹೇಗೆ ಮಾಡಿದರೋ ಹಾಗೆಯೇ ನಿನಗೂ ಮಾಡುತ್ತಾರೆ. 9ನೀನು
ಈಗ ಅವರು ಕೇಳಿಕೊಂಡಂತೆ ಮಾಡು; ಆದರೆ ಅವರ ಮೇಲೆ ರಾಜರಿಗಿರುವ ಅಧಿಕಾರ ಎಷ್ಟು
ಘನವಾದುದೆಂಬುದನ್ನು ಅವರಿಗೆ ತಿಳಿಸಿ ಎಚ್ಚರಿಸದೆ ಇರಬೇಡ," ಎಂದು ಹೇಳಿದರು.

10 ಸಮುವೇಲನು ಅರಸಬೇಕೆಂದು ಕೋರಿದ ಜನರಿಗೆ, 11ಸರ್ವೇಶ್ವರನ ಮಾತುಗಳನ್ನೆಲ್ಲಾ
ತಿಳಿಸಿದನು. "ಅರಸನ ಅಧಿಕಾರ ಎಷ್ಟೆಂದು ಕೇಳಿರಿ: ಅವನು ನಿಮ್ಮ ಮಕ್ಕಳನ್ನು ತೆಗೆದುಕೊಂಡು ತನ್ನ
ಸಾರಥಿಗಳನ್ನಾಗಿಯೂ ರಾಹುತರನ್ನಾಗಿಯೂ ಮಾಡಿಕೊಳ್ಳುವನು; ಅವರು ಅವನ ರಥಗಳ ಮುಂದೆ
ಓಡಬೇಕಾಗುವುದು. 12ಕೆಲವರನ್ನು ಸಹ ಸ್ರಾಧಿಪತಿಗಳನ್ನಾಗಿಯೂ ಕೆಲವರನ್ನು ಪಂಚಾ
ಶದಾಧಿಪತಿಗಳನ್ನಾಗಿಯೂ ನೇಮಿಸುವನು. ಇನ್ನು ಕೆಲವರು ಅವನ ಭೂಮಿಯನ್ನು ಉಳುವವರೂ,
ಪೈರನ್ನು ಕೊಯ್ಯುವವರೂ, ಯುದ್ಧಾಯುಧ, ರಥಸಾಮಗ್ರಿಗಳನ್ನು ಮಾಡುವವರೂ ಆಗಬೇಕು. 13ಇದಲ್ಲದೆ
ಅವನು ನಿಮ್ಮ ಹೆಣ್ಣು ಮಕ್ಕಳನ್ನು ಪರಿಮಳ ದ್ರವ್ಯಮಾಡುವುದಕ್ಕೂ, ಅಡಿಗೆಮಾಡುವುದಕ್ಕೂ,
ರೊಟ್ಟಿಸುಡುವುದಕ್ಕೂ ನೇಮಿಸಿಕೊಳ್ಳುವನು. 14ನಿಮ್ಮ ಉತ್ತಮವಾದ ಹೊಲಗಳನ್ನೂ ದ್ರಾಕ್ಷಿ ತೋಟಗಳನ್ನೂ
ಎಣ್ಣೆ ಮರದ ತೋಪುಗಳನ್ನೂ ಕಿತ್ತುಕೊಂಡು ತನ್ನ ಸೇವಕರಿಗೆ ಕೊಡುವನು. 15ನಿಮ್ಮ ಧಾನ್ಯದ್ರಾಕ್ಷಿಗಳಲ್ಲಿ
ದಶಮಾಂಶವನ್ನು ತೆಗೆದುಕೊಂಡು ತನ್ನ ಅಧಿಕಾರಿಗಳಿಗೂ ಪರಿವಾರದವರಿಗೂ ಕೊಡುವನು. 16ನಿಮ್ಮ ದಾಸ
ದಾಸಿಯರನ್ನು ಹಾಗು ಉತ್ತಮವಾದ ಎತ್ತುಕತ್ತೆಗಳನ್ನು ತನಗಾಗಿ ದುಡಿಸಿಕೊಳ್ಳುವನು. 17ಕುರಿ ಹಿಂಡುಗಳಲ್ಲೂ
ಹತ್ತರಲ್ಲೊಂದು ಭಾಗವನ್ನು ತೆಗೆದುಕೊಳ್ಳುವನು; ನೀವೂ ಅವನಿಗೆ ಗುಲಾಮರಾಗಿರಬೇಕು. 18ಆಗ, ನೀವು
ಆರಿಸಿಕೊಂಡ ಅರಸನ ನಿಮಿತ್ತ, ಆ ದಿನದಲ್ಲಿ ಬೇಸತ್ತು ಸರ್ವೇಶ್ವರನಿಗೆ ಮೊರೆಯಿಡುವಿರಿ; ಆಗ ಅವರು
ನಿಮ್ಮನ್ನು ಲಕ್ಷಿಸುವುದಿಲ್ಲ," ಎಂದನು.

19 ಹೀಗೆ ಸಮುವೇಲನು ಎಷ್ಟು ಹೇಳಿದರೂ ಜನರು ಕೇಳದೆ ಹೋದರು. "ಅದಿರಲಿ; ನಮಗೆ
ಅರಸನನ್ನು ಕೊಡು; ನಾವು ಇತರ ಜನಾಂಗಗಳಂತೆ ಆಗಬೇಕು. 20ನಮ್ಮ ನ್ಯಾಯಗಳನ್ನು ತೀರಿಸಿ, ನಮಗೆ
ಮುಂದಾಗಿ ಹೊರಟು, ನಮ್ಮ ಪರವಾಗಿ ಯುದ್ಧಮಾಡುವ ಒಬ್ಬ ಅರಸನು ಬೇಕು," ಎಂದು ಹೇಳಿದರು.
21ಸಮುವೇಲನು ಜನರ ಈ ಎಲ್ಲ ಮಾತುಗಳನ್ನು ಸರ್ವೇಶ್ವರನಿಗೆ ತಿಳಿಸಿದನು. 22ಸರ್ವೇಶ್ವರ ಅವನಿಗೆ,
"ಅವರ ಇಷ್ಟದಂತೆ ಅವರಿಗೊಬ್ಬ ಅರಸನನ್ನು ನೇಮಿಸು," ಎಂದರು. ಆಗ ಸಮುವೇಲನು ಇಸ್ರಯೇಲರಿಗೆ,
"ನಿಮ್ಮ ನಿಮ್ಮ ಊರುಗಳಿಗೆ ಹೋಗಿರಿ," ಎಂದು ಅಪ್ಪಣೆ ಕೊಟ್ಟನು.

## ಸೌಲ ಮತ್ತು ಸಮುವೇಲರ ಭೇಟಿ

**9** ಬೆನ್ಯಾಮೀನ ಕುಲದಲ್ಲಿ ಕೀಷನೆಂಬ ಒಬ್ಬ ಐಶ್ವರ್ಯವಂತನಿದ್ದನು. ಇವನು ಚೆರೋರನ ಮಗನೂ
ಬೆಕೋರತನ ಮೊಮ್ಮಗನೂ ಆಫೀಹನ ಮರಿಮಗನೂ ಆದ ಅಬೀಯೇಲನ ಮಗ. 2ಇವನಿಗೆ ಸೌಲನೆಂಬ

ಒಬ್ಬ ಮಗನಿದ್ದನು. ಈ ಸೌಲನು ಉತ್ತಮನೂ ಇಸ್ರಯೇಲರಲ್ಲೆಲ್ಲ ಅತಿಸುಂದರನೂ ಆಗಿದ್ದನು; ಜನರ
ಗುಂಪಿನಲ್ಲಿ ಅವನ ಹೆಗಲೂ ತಲೆಯೂ ಕಾಣುವಷ್ಟು ಎತ್ತರ ಆಗಿದ್ದನು. 3ಒಂದು ದಿನ ಸೌಲನ ತಂದೆಯಾದ
ಕೀಷನ ಕತ್ತೆಗಳು ಕಾಣದೆಹೋದವು. ಅವನು ತನ್ನ ಮಗ ಸೌಲನಿಗೆ, "ನೀನೆದ್ದು ಆಳುಗಳಲ್ಲೊಬ್ಬನನ್ನು
ಕರೆದುಕೊಂಡು ಕತ್ತೆಗಳನ್ನು ಹುಡುಕಲು ಹೋಗು," ಎಂದು ಹೇಳಿದನು. 4ಅದರಂತೆಯೇ ಸೌಲನು
ಹೊರಟು ಎಫ್ರಯಿಮ್ ಪರ್ವತಪ್ರಾಂತ್ಯ, ಹಾಗು ಶಾಲಿಷಾನಾಡು ಇವುಗಳಲ್ಲಿ ಸುತ್ತಾಡಿದರೂ ಅವು ಸಿಕ್ಕಲಿಲ್ಲ.
ಶಾಲೀಮ್, ಬೆನ್ಯಾಮೀನ ಈ ಪ್ರಾಂತ್ಯಗಳಲ್ಲಿಯೂ ಸಿಕ್ಕಲಿಲ್ಲ. 5ಕಡೆಗೆ ಅವರು ಚೂಫ್‌ನಾಡಿಗೆ ಬಂದರು. ಅಲ್ಲಿ
ಅವನು ತನ್ನ ಆಳಿಗೆ, "ಹಿಂದಿರುಗಿ ಹೋಗೋಣ ನಡೆ; ನಮ್ಮ ತಂದೆ ಈ ಕತ್ತೆಗಳ ಚಿಂತೆಯನ್ನೇ ಬಿಟ್ಟು
ನಮ್ಮ ಚಿಂತೆಯಲ್ಲಿ ಇರಬಹುದು," ಎಂದನು.

6 ಆಗ ಆ ಆಳು, "ಇಗೋ, ಈ ಪಟ್ಟಣದಲ್ಲಿ ಗೌರವಸ್ಥನಾದ ಒಬ್ಬ ದೈವಪುರುಷ ಇದ್ದಾನೆ. ಅವನು
ನುಡಿಯುವುದೆಲ್ಲಾ ನೆರವೇರುತ್ತದೆ; ಅಲ್ಲಿಗೆ ಹೋಗೋಣ; ಒಂದು ವೇಳೆ ಅವನು ನಾವು ಹೋಗಬೇಕಾದ
ಮಾರ್ಗವನ್ನು ತಿಳಿಸುವನು," ಎಂದನು. 7ಅದಕ್ಕೆ ಸೌಲನು, "ನಾವು ಅವನ ಬಳಿಗೆ ಹೋಗಬೇಕಾದರೆ
ಏನಾದರೂ ತೆಗೆದುಕೊಂಡು ಹೋಗಬೇಕು; ನಾವು ತಂದಿದ್ದ ಆಹಾರಸಾಮಗ್ರಿ ಮುಗಿದುಹೋಯಿತು. ಆ
ದೈವಪುರುಷನಿಗೆ ಕೊಡತಕ್ಕ ಕಾಣಿಕೆ ನಮ್ಮಲ್ಲಿ ಇಲ್ಲವಲ್ಲಾ; 8ಏನು ಕೊಡುವುದು?" ಎನ್ನಲು ಆ ಆಳು,
"ಇಗೋ, ನನ್ನ ಕೈಯಲ್ಲಿ ಒಂದು ಪಾವಲಿ ಬೆಳ್ಳಿನಾಣ್ಯವಿದೆ; ಇದನ್ನು ಅವನಿಗೆ ಕೊಡೋಣ; ಅವನು ನಮಗೆ
ಮಾರ್ಗ ತೋರಿಸುವನು," ಎಂದು ಉತ್ತರಕೊಟ್ಟನು. 9(ಪೂರ್ವಕಾಲದಲ್ಲಿ ಇಸ್ರಯೇಲರಲ್ಲಿ ಯಾವನಾದರೂ
ದೇವೋತ್ತರ ಕೇಳಬೇಕಾದರೆ ದಾರ್ಶನಿಕನ ಬಳಿಗೆ ಹೋಗೋಣ ಬನ್ನಿ ಎನ್ನುವನು; ಈ ಕಾಲದಲ್ಲಿ
ಪ್ರವಾದಿಗಳೆನಿಸಿಕೊಳ್ಳುವವರನ್ನು ಆ ಕಾಲದಲ್ಲಿ ದಾರ್ಶನಿಕರೆಂದು ಕರೆಯುತ್ತಿದ್ದರು.) 10ಆಗ ಸೌಲನು ಆಳಿಗೆ,
"ನೀನು ಹೇಳುವುದು ಒಳ್ಳೆಯದು, ಹೋಗೋಣ, ನಡೆ," ಎಂದನು. 11ಅವರಿಬ್ಬರೂ ಗುಡ್ಡ ಹತ್ತಿ
ದೇವಪುರುಷನಿದ್ದ ಪಟ್ಟಣವನ್ನು ಸಮೀಪಿಸಿದರು. ನೀರು ಸೇದುವುದಕ್ಕಾಗಿ ಹೊರಗೆ ಬಂದಿದ್ದ
ಮಹಿಳೆಯರನ್ನು ಕಂಡು, "ದಾರ್ಶನಿಕರು ಊರಲ್ಲಿ ಇದ್ದಾರೋ?" ಎಂದು ಕೇಳಲು, ಅವರು "ಹೌದು"
ಎಂದರು.

12 "ಈ ದಿನ ನಮ್ಮ ಊರಿನವರು ಗುಡ್ಡದ ಮೇಲೆ ಬಲಿಯನ್ನರ್ಪಿಸುವುದರಿಂದ ಅವರು ಈಗಲೇ
ಇಲ್ಲಿಗೆ ಬಂದರು; ಬೇಗನೆ ಹೋಗಿ; 13ಅವರು ಬಲಿಭೋಜನಕ್ಕಾಗಿ ಗುಡ್ಡಕ್ಕೆ ಹೋಗುವ ಮೊದಲೇ ನೀವು
ಊರೊಳಕ್ಕೆ ಹೋದರೆ ಸಿಕ್ಕುವರು. ಅವರು ಅಲ್ಲಿಗೆ ಹೋಗುವವರೆಗೆ ಜನರು ಊಟಮಾಡುವುದಿಲ್ಲ. ಅವರು
ಹೋಗಿ ಬಲಿ ಆಹಾರವನ್ನು ಆಶೀರ್ವದಿಸುತ್ತಾರೆ; ಅನಂತರವೇ ಆಮಂತ್ರಿತರು ಊಟಮಾಡುವುದು. ಈಗಲೇ
ಹೋಗಿ; ಅವನು ಸಿಕ್ಕುವ ಸಮಯ ಇದೇ," ಎಂದರು ಆ ಮಹಿಳೆಯರು. 14ಅವರು ಗುಡ್ಡ ಹತ್ತಿ ಊರಿಗೆ
ಬಂದಾಗ ಸಮುವೇಲನು ಗುಡ್ಡಕ್ಕೆ ಹೊರಟು ಅವರೆದುರಿಗೆ ಬಂದನು.

15 ಸೌಲನು ಬರುವುದಕ್ಕೆ ಒಂದು ದಿವಸ ಮುಂದಾಗಿಯೇ ಸರ್ವೇಶ್ವರ ಸಮುವೇಲನಿಗೆ, 16"ನಾಳೆ
ಇಷ್ಟು ಹೊತ್ತಿಗೆ ಬೆನ್ಯಾಮೀನ್ ನಾಡಿನವನೊಬ್ಬನನ್ನು ನಿನ್ನ ಬಳಿಗೆ ಬರಮಾಡುವೆನು. ನೀನು ಅವನನ್ನು
ಇಸ್ರಯೇಲರ ನಾಯಕನನ್ನಾಗಿ ಅಭಿಷೇಕಿಸಬೇಕು. ಅವನು ನನ್ನ ಜನರನ್ನು ಫಿಲಿಷ್ಟಿಯರ ಕೈಯಿಂದ ಬಿಡಿಸಿ
ಕಾಪಾಡುವನು. ಅವರ ಕೂಗು ನನಗೆ ಮುಟ್ಟಿತು; ಅವರ ಮೇಲೆ ನನಗೆ ಕನಿಕರವಿದೆ," ಎಂದು ತಿಳಿಸಿದರು.

17 ಸಮುವೇಲನು ಸೌಲನನ್ನು ಕಂಡಾಗ ಸರ್ವೇಶ್ವರ ಅವನಿಗೆ, "ನಾನು ತಿಳಿಸಿದ್ದ ವ್ಯಕ್ತಿ ಇವನೇ;
ಇವನೇ ನನ್ನ ಪ್ರಜೆಯನ್ನು ಆಳತಕ್ಕವನು," ಎಂದು ಸೂಚಿಸಿದರು. 18ಊರಬಾಗಿಲಿಗೆ ಬಂದ ಸೌಲನು
ಎದುರಿಗೆ ಬಂದ ಸಮುವೇಲನನ್ನು ನೋಡಿ, "ದಾರ್ಶನಿಕರ ಮನೆ ಎಲ್ಲಿದೆ ಎಂಬುದನ್ನು ದಯವಿಟ್ಟು
ತಿಳಿಸುವಿರಾ?" ಎಂದನು.

19 ಸಮುವೇಲನು, "ನಾನೇ ಆ ದಾರ್ಶನಿಕ; ನೀನು ನನ್ನ ಜೊತೆ ಗುಡ್ಡಕ್ಕೆ ಬಾ; ನೀನು ಈ ಹೊತ್ತು
ನನ್ನ ಸಂಗಡ ಊಟಮಾಡಬೇಕು. ನಿನ್ನ ಚಿಂತೆಯನ್ನೆಲ್ಲಾ ಪರಿಹರಿಸಿ ನಾಳೆ ಬೆಳಿಗ್ಗೆ ನಿನ್ನನ್ನು
ಕಳುಹಿಸಿಕೊಡುವೆನು. 20ಮೂರು ದಿವಸಗಳ ಹಿಂದೆ ತಪ್ಪಿಸಿಕೊಂಡ ನಿನ್ನ ಕತ್ತೆಗಳಿಗಾಗಿ ಚಿಂತೆ ಮಾಡಬೇಡ;
ಅವು ಈಗಾಗಲೇ ಸಿಕ್ಕಿವೆ. ಮತ್ತು ಇಸ್ರಯೇಲರ ಆಶೋತ್ತರವೆಲ್ಲ ನಿನಗೂ ನಿನ್ನ ಕುಟುಂಬದವರಿಗೂ
ಸಲ್ಲುವವಲ್ಲವೇ?" ಎಂದನು. 21ಅದಕ್ಕೆ ಸೌಲನು, "ಇಸ್ರಯೇಲ್ ಕುಲಗಳಲ್ಲಿ ಅತ್ಯಲ್ಪವಾಗಿರುವ ಬೆನ್ಯಾಮೀನ್

ಕುಲಕ್ಕೆ ಸೇರಿದವನು ನಾನು; ಮಾತ್ರವಲ್ಲ, ಬೆನ್ಯಾಮೀನ್ಯರ ಎಲ್ಲಾ ಕುಟುಂಬಗಳಲ್ಲಿ ನನ್ನದು ಕನಿಷ್ಠವಾದದ್ದು;
ನನಗೆ ಇಂಥ ದೊಡ್ಡ ಮಾತನ್ನು ಏಕೆ ಹೇಳುತ್ತಿರುವಿರಿ?" ಎಂದನು. 22ಸಮುವೇಲನು ಸೌಲನನ್ನೂ ಅವನ
ಸೇವಕನನ್ನೂ ಮಂಟಪಕ್ಕೆ ಕರೆದುಕೊಂಡು ಹೋದನು. ಬಲಿಭೋಜನಕ್ಕೆ ಬಂದಿದ್ದ ಸುಮಾರು ಮೂವತ್ತು
ಜನರಲ್ಲಿ ಅವರಿಬ್ಬರಿಗೂ ಮುಖ್ಯಸ್ಥಾನವನ್ನು ಕೊಟ್ಟನು. ಅನಂತರ ಸಮುವೇಲನು ಅಡಿಗೆಯವನಿಗೆ,
23"ನಾನು ನಿನಗೆ ಹೇಳಿ ಪ್ರತ್ಯೇಕವಾಗಿ ಇಡಿಸಿದ್ದ ಮಾಂಸಭಾಗವನ್ನು ತಂದಿಡು," ಎನ್ನಲು, 24ಅವನು ಒಂದು
ತೊಡೆಯ ಮಾಂಸವನ್ನೂ ಅದರ ಸಂಗಡ ಇದ್ದದ್ದನ್ನೂ ತಂದು ಸೌಲನ ಮುಂದಿಟ್ಟನು. ಸಮುವೇಲನು
ಸೌಲನಿಗೆ, "ಇಗೋ, ಇದು ನಿನಗಾಗಿ ಪ್ರತ್ಯೇಕಿಸಿದ್ದು; ಇದನ್ನು ತಿನ್ನು. ಜನರನ್ನು ಬಲಿಭೋಜನಕ್ಕೆ
ಕರೆದಾಗಿನಿಂದ ಇದು ನಿನಗಾಗಿಯೇ ಪ್ರತ್ಯೇಕವಾಗಿ ಇಡಲಾಗಿತ್ತು," ಎಂದು ಹೇಳಿದನು. ಸೌಲನು ಆ ದಿನ
ಸಮುವೇಲನ ಸಂಗಡ ಊಟಮಾಡಿದನು. 25ಅವರು ಗುಡ್ಡದಿಂದಿಳಿದು ಪಟ್ಟಣಕ್ಕೆ ಬಂದನಂತರ
ಸಮುವೇಲನು ಸೌಲನನ್ನು ತನ್ನ ಮನೆಮಾಳಿಗೆಯ ಮೇಲೆ ಕರೆದುಕೊಂಡು ಹೋಗಿ ಅವನೊಡನೆ
ಮಾತನಾಡಿದನು.

### ಸೌಲನಿಗೆ ರಾಜಾಭಿಷೇಕ

26 ಮರುದಿನ ಬೆಳಿಗ್ಗೆ ಸಮುವೇಲನು ಮಾಳಿಗೆಯ ಮೇಲೆ ಮಲಗಿದ್ದ ಸೌಲನನ್ನು, "ಏಳು, ನಿನ್ನನ್ನು
ಸಾಗಕಳಿಸುತ್ತೇನೆ" ಎಂದು ಎಬ್ಬಿಸಲು, ಅವನೆದ್ದನು. ತರುವಾಯ ಅವರು ಇಬ್ಬರೂ ಹೊರಟು ಊರ
ಹೊರಗೆ ಬಂದಾಗ ಸಮುವೇಲನು ಸೌಲನಿಗೆ, 27"ನಿನ್ನ ಸೇವಕನನ್ನು ಮುಂದೆ ಕಳುಹಿಸಿ, ನೀನು ಇಲ್ಲೇ ಸ್ವಲ್ಪ
ನಿಲ್ಲು; ನಿನಗೆ ತಿಳಿಸಬೇಕಾದ ದೈವೋಕ್ತಿ ಒಂದುಂಟು," ಎಂದನು.

**10** ಆ ಆಳು ಮುಂದೆ ಹೋದಾದ ಮೇಲೆ ಸಮುವೇಲನು ಓಲಿವ್ ಎಣ್ಣೇಕುಪ್ಪಿಯಿಂದ ಅವನ ತಲೆಯ
ಮೇಲೆ ತೈಲವನ್ನು ಹೊಯ್ದು, ಅವನನ್ನು ಮುದ್ದಿಟ್ಟು ಅವನಿಗೆ, "ಸರ್ವೇಶ್ವರ ತಮ್ಮ ಜನರ ಮೇಲೆ ರಾಜ್ಯ
ಆಳಲು ನಿಜವಾಗಿ ನಿನ್ನನ್ನು ಅಭಿಷೇಕಿಸಿದ್ದಾರೆ. 2ಈ ದಿನ ನೀನು ನನ್ನನ್ನು ಬಿಟ್ಟು ಹೋದನಂತರ,
ಬೆನ್ಯಾಮೀನ್ಯರ ಮೇರೆಯೊಳಗಿರುವ ರಾಖೇಲಳ ಸಮಾಧಿಯ ಬಳಿಯಲ್ಲಿರುವಂಥ ಚೆಲ್ಚಹಿನಲ್ಲಿ ಇಬ್ಬರು
ವ್ಯಕ್ತಿಗಳನ್ನು ಕಾಣುವೆ; ಅವರು, 'ನೀನು ಹುಡುಕುತ್ತಿರುವ ಕತ್ತೆಗಳು ಸಿಕ್ಕಿದವು; ನಿನ್ನ ತಂದೆ ಕತ್ತೆಗಳ ಚಿಂತೆಬಿಟ್ಟು
ನನ್ನ ಮಗನೆಲ್ಲಿ ಹೋದನೋ ಎಂದು ನಿನಗಾಗಿ ಹಂಬಲಿಸುತ್ತಾ ಇರುತ್ತಾರೆ' ಎಂದು ಹೇಳುವರು. 3ನೀನು
ಅಲ್ಲಿಂದ ಮುಂದೆ ನಡೆದು ತಾಬೋರಿನ ಹತ್ತಿರವಿರುವ ಏಲೋನ್ ವೃಕ್ಷದ ಬಳಿಗೆ ಬಂದಾಗ
ದೇವದರ್ಶನಕ್ಕಾಗಿ ಬೇತೇಲಿಗೆ ಹೋಗುವ ಮೂವರು ಜನರು ನಿನಗೆದುರಾಗುವರು. ಅವರಲ್ಲೊಬ್ಬನು
ಮೂರು ಹೋತಮರಿಗಳನ್ನೂ ಮತ್ತೊಬ್ಬನು ಮೂರು ರೊಟ್ಟಿಗಳನ್ನೂ ಇನ್ನೊಬ್ಬನು ದ್ರಾಕ್ಷಾರಸದ ಒಂದು
ಬುದ್ದಲಿಯನ್ನೂ ಹೊತ್ತುಕೊಂಡು ಇರುವರು. 4ಅವರು ನಿನ್ನ ಕ್ಷೇಮಸಮಾಚಾರವನ್ನು ವಿಚಾರಿಸಿ ಎರಡು
ರೊಟ್ಟಿಗಳನ್ನು ಕೊಡುವರು; ನೀನು ಅವುಗಳನ್ನು ತೆಗೆದುಕೊಳ್ಳಬೇಕು. 5ಅಲ್ಲಿಂದ ದೇವಗಿರಿಯನ್ನು
ಮುಟ್ಟಿದಾಗ ಫಿಲಿಷ್ಟಿಯರ ದಂಡುಪ್ರದೇಶವನ್ನು ಕಾಣುವೆ; ಮುಂಗಡೆಯಲ್ಲಿ ಸ್ವರಮಂಡಲ, ತಮ್ಮಟೆ,
ಕೊಳಲು, ಕಿನ್ನರಿ ಈ ವಾದ್ಯಗಾರರೊಡನೆ ಗುಡ್ಡದಿಂದಿಳಿದು ಬರುತ್ತಿರುವ ಪ್ರವಾದಿಗಳ ಒಂದು ಗುಂಪನ್ನು
ಕಾಣುವೆ. ಅವರು ಪರವಶರಾಗಿ ಪ್ರವಾದಿಸುವರು. 6ಆಗ ಸರ್ವೇಶ್ವರನ ಆತ್ಮ ನಿನ್ನ ಮೇಲೆ ಬರುವುದು.
ನೀನೂ ಮಾರ್ಪಟ್ಟು ಪ್ರವಾದಿಸುವೆ. 7ಈ ಗುರುತುಗಳೆಲ್ಲ ಸಂಭವಿಸಿದಾಗ ನಿನಗೆ ಅನುಕೂಲವಿದ್ದ ಹಾಗೆ
ವರ್ತಿಸು, ದೇವರು ನಿನ್ನೊಂದಿಗೆ ಇದ್ದಾರೆ! 8ನೀನು ಮುಂದಾಗಿ ಗಿಲ್ಗಾಲಿಗೆ ಹೋಗು; ಏಳು ದಿವಸಗಳಾದ
ನಂತರ ನಾನು ದಹನಬಲಿಗಳನ್ನೂ ಶಾಂತಿಸಮಾಧಾನಬಲಿಗಳನ್ನೂ ಸಮರ್ಪಿಸುವುದಕ್ಕಾಗಿ ಅಲ್ಲಿಗೆ ಬಂದು
ನೀನು ಮಾಡಬೇಕಾದುದನ್ನು ನಿನಗೆ ತಿಳಿಸುವೆನು; ಅಲ್ಲಿಯವರೆಗೆ ಕಾದುಕೊಂಡಿರು," ಎಂದು ಹೇಳಿದನು.
9 ಸೌಲನು ಸಮುವೇಲನನ್ನು ಬಿಟ್ಟು ಹೊರಟ ಕೂಡಲೆ ದೇವರು ಅವನಿಗೆ ನೂತನ ಚೈತನ್ಯವನ್ನು
ಕೊಟ್ಟರು. ಅದೇ ದಿನದಲ್ಲಿ ಆ ಎಲ್ಲ ಘಟನೆಗಳು ಸಂಭವಿಸಿದವು. 10ಅವನು ದೇವಗಿರಿಗೆ ಬಂದ ಕೂಡಲೆ
ಪರವಶರಾದ ಪ್ರವಾದಿಗಳ ಗುಂಪೊಂದು ತನ್ನೆದುರಿಗೆ ಬರುವುದನ್ನು ಕಂಡನು. ದೇವರ ಆತ್ಮ ಅವನ ಮೇಲೆ

ಇಳಿದು ಬಂದುದರಿಂದ ಅವನೂ ಪರವಶನಾಗಿ ಅವರೊಳಗೆ ಸೇರಿ ಪ್ರವಾದಿಸಿದನು. [11]ಅವನು ಪರವಶನಾಗಿ
ಮಾತಾಡುವುದನ್ನು ಪರಿಚಿತರು ಕಂಡು ತಮ್ಮತಮ್ಮೊಳಗೆ, "ಕೀಷನ ಮಗನಿಗೆ ಏನಾಯಿತು? ಸೌಲನೂ
ಪ್ರವಾದಿಗಳಲ್ಲಿ ಒಬ್ಬನೆ?" ಎಂದು ಮಾತಾಡಿಕೊಳ್ಳುತ್ತಿದ್ದರು. [12]ಆಗ ಆ ಸ್ಥಳೀಯರಲ್ಲಿ ಒಬ್ಬನು, "ಹಾಗಾದರೆ
ಇವರ ತಂದೆ ಯಾರು?" ಎಂದು ಕೇಳಿದನು. ಈ ಘಟನೆಯಿಂದಾಗಿ "ಏನು, ಸೌಲನೂ
ಪ್ರವಾದಿಯಾಗಿಬಿಟ್ಟನೊ?" ಎಂಬ ಗಾದೆ ಹುಟ್ಟಿತು. [13]ಅವನು ಪ್ರವಾದಿಸಿ ಆದ ಮೇಲೆ ಪೂಜಾಸ್ಥಳಕ್ಕೆ
ಬಂದನು. [14]ಸೌಲನ ಚಿಕ್ಕಪ್ಪನು ಅವನನ್ನೂ ಅವನ ಸೇವಕನನ್ನೂ ನೋಡಿ, "ನೀವು ಎಲ್ಲಿಗೆ ಹೋಗಿದ್ದಿರಿ?"
ಎಂದು ಕೇಳಿದನು. ಅವನು, "ಕತ್ತೆಗಳನ್ನು ಹುಡುಕುವುದಕ್ಕೆ ಹೋಗಿದ್ದೆವು. ಅವು ಸಿಕ್ಕಲಿಲ್ಲ. ಆದುದರಿಂದ
ಸಮುವೇಲನ ಬಳಿಗೆ ಹೋದೆವು," ಎಂದನು. [15]ಸಮುವೇಲನು ಏನು ಹೇಳಿದನೆಂದು ಚಿಕ್ಕಪ್ಪನು ಕೇಳಲು,
[16]ಸೌಲನು, "ಕತ್ತೆಗಳು ಸಿಕ್ಕಿದವೆಂದು ತಿಳಿಸಿದನು," ಎಂಬುದಾಗಿ ಹೇಳಿದನೇ ಹೊರತು ಸಮುವೇಲನು
ಹೇಳಿದ ಆ ರಾಜ್ಯಭಾರದ ಮಾತನ್ನು ತಿಳಿಸಲಿಲ್ಲ.

### ಅರಸನಾಗಿ ಸೌಲನ ಆಯ್ಕೆ

17 ಸಮುವೇಲನು ಇಸ್ರಯೇಲರನ್ನು ಮಿಚ್ಪೆಗೆ ಕರೆಯಿಸಿ ಸರ್ವೇಶ್ವರನ ಸನ್ನಿಧಿಯಲ್ಲಿ ಸಭೆ
ಸೇರಿಸಿದನು. [18]ಅವರಿಗೆ, "ಇಸ್ರಯೇಲ್ ದೇವರಾದ ಸರ್ವೇಶ್ವರ ಹೇಳುವುದನ್ನು ಕೇಳಿರಿ: 'ನೀವು
ಈಜಿಪ್ಟಿನವರ ಕೈಯಿಂದ ತಪ್ಪಿಸಿಕೊಳ್ಳುವಂತೆ ನಿಮ್ಮನ್ನು ಅವರ ದೇಶದಿಂದ ಬಿಡಿಸಿದವನು ಹಾಗು
ಬಾಧಿಸುತ್ತಿದ್ದ ಬೇರೆ ಎಲ್ಲಾ ಜನಾಂಗಗಳಿಂದ ನಿಮ್ಮನ್ನು ರಕ್ಷಿಸಿದವನು ನಾನೇ. [19]ನೀವಾದರೋ, ನಿಮ್ಮನ್ನು
ಕಷ್ಟಸಂಕಟಗಳಿಂದ ಬಿಡಿಸಿದ ನಿಮ್ಮ ದೇವರಾದ ನನ್ನನ್ನು ತಿರಸ್ಕರಿಸಿ ಈಗ ನಮಗೊಬ್ಬ ಅರಸನನ್ನು
ನೇಮಿಸೆಂದು ಕೇಳುತ್ತೀರಿ. ಆದುದರಿಂದ ನೀವು ನಿಮ್ಮ ನಿಮ್ಮ ಕುಲ ಹಾಗು ಗೋತ್ರಗಳ ಅನುಸಾರ
ಸರ್ವೇಶ್ವರನ ಸನ್ನಿಧಿಯಲ್ಲಿ ಹಾಜರಾಗಿರಿ," ಎಂದು ಅಪ್ಪಣೆ ಮಾಡಿದನು.
20 ಹೀಗೆ ಸಮುವೇಲನು ಇಸ್ರಯೇಲರ ಎಲ್ಲಾ ಕುಲಗಳನ್ನು ಸಮೀಪಕ್ಕೆ ಕರೆದಾಗ ಬೆನ್ಯಾಮೀನ್
ಕುಲಕ್ಕೆ ಚೀಟು ಬಿದ್ದಿತು. [21]ಆ ಕುಲದ ಗೋತ್ರಗಳನ್ನು ಬರಮಾಡಿದಾಗ ಮಟ್ರಿಯ ಗೋತ್ರದಲ್ಲಿ ಕೀಷನ
ಮಗನಾದ ಸೌಲನಿಗೆ ಚೀಟು ಬಿದ್ದಿತು. ಅವನನ್ನು ಹುಡುಕಲು ಅವನು ಸಿಕ್ಕಲಿಲ್ಲ. [22]ಅವರು, "ಆ ವ್ಯಕ್ತಿ
ಇಲ್ಲಿಗೆ ಬರುವನೋ?" ಎಂದು ಸರ್ವೇಶ್ವರನನ್ನು ವಿಚಾರಿಸಿದಾಗ, "ಬಂದಿದ್ದಾನೆ; ಇಗೋ,
ಸರಕುಸಾಮಾನುಗಳ ನಡುವೆ ಅಡಗಿಕೊಂಡಿದ್ದಾನೆ," ಎಂದು ಉತ್ತರ ಬಂದಿತು. [23]ಅವರು ತಟ್ಟನೆ ಹೋಗಿ
ಅವನನ್ನು ಹಿಡಿದುಕೊಂಡು ಬಂದು ಜನರ ಮಧ್ಯೆ ನಿಲ್ಲಿಸಿದರು. ಎಲ್ಲ ಜನರ ಗುಂಪಿನಲ್ಲಿ ಅವನ ಹೆಗಲೂ
ತಲೆಯೂ ಕಾಣುವಷ್ಟು ಬಹು ಎತ್ತರದ ವ್ಯಕ್ತಿ ಅವನಾಗಿದ್ದನು. [24]ಆಗ ಸಮುವೇಲನು ಜನರೆಲ್ಲರಿಗೆ, "ನೋಡಿ,
ಸರ್ವೇಶ್ವರನಿಂದ ಆಯ್ಕೆಯಾದವನು ಇವನೇ; ಸರ್ವಜನರಲ್ಲಿ ಇವನಿಗೆ ಸಮಾನರು ಇಲ್ಲವೇ ಇಲ್ಲ,"
ಎಂದನು. ಜನರೆಲ್ಲರೂ, "ಅರಸನಿಗೆ ಜಯವಾಗಲಿ!" ಎಂದು ಘೋಷಿಸಿದರು.
25 ತರುವಾಯ ಸಮುವೇಲನು ಜನರಿಗೆ ರಾಜನೀತಿಯನ್ನು ಬೋಧಿಸಿ, ಅದನ್ನು ಒಂದು
ಪುಸ್ತಕದಲ್ಲಿ ಬರೆದು, ಸರ್ವೇಶ್ವರನ ಸನ್ನಿಧಿಯಲ್ಲಿಟ್ಟನು; ಆಮೇಲೆ ಜನರನ್ನು ಅವರವರ ಮನೆಗಳಿಗೆ
ಕಳುಹಿಸಿಬಿಟ್ಟನು. [26]ಸೌಲನೂ ಗಿಬೆಯದಲ್ಲಿದ್ದ ತನ್ನ ಮನೆಗೆ ಹೋದನು. ಕೆಲವು ಮಂದಿ ಶೂರರು
ದೇವರಿಂದ ಪ್ರೇರಿತರಾಗಿ ಅವನ ಜೊತೆಯಲ್ಲೇ ಹೋದರು. [27]ಕೆಲವು ಮಂದಿ ಪುಂಡುಪೋಕರು,
"ಇವನೇನೋ ನಮ್ಮನ್ನು ರಕ್ಷಿಸುವವನು!" ಎಂದು ತಾತ್ಸಾರಮಾಡಿ ಕಾಣಿಕೆಗಳನ್ನು ತರಲಿಲ್ಲ. ಆದರೂ
ಸೌಲನು ಸುಮ್ಮನಿದ್ದನು.

### ಸೌಲನಿಂದ ಅಮ್ಮೋನಿಯರ ಸೋಲು

**11** ಒಂದು ತಿಂಗಳ ನಂತರ ಅಮ್ಮೋನಿಯನಾದ ನಾಹಾಷನು ದಂಡೆತ್ತಿ ಬಂದು ಯಾಬೇಷ್ ಗಿಲ್ಯಾದಿಗೆ
ಮುತ್ತಿಗೆ ಹಾಕಿದನು. ಯಾಬೇಷಿನವರು ಅವನನ್ನು, "ನೀನು ನಮ್ಮ ಸಂಗಡ ಸಂಧಾನ ಮಾಡಿಕೋ; ನಾವು
ನಿನಗೆ ಅಧೀನರಾಗಿರುತ್ತೇವೆ," ಎಂದು ಬೇಡಿಕೊಂಡರು. [2]ಅದಕ್ಕೆ ಅವನು, "ಇಸ್ರಯೇಲರೆಲ್ಲರನ್ನು

ಅವಮಾನಪಡಿಸುವುದಕ್ಕಾಗಿ ನಾನು ಮೊದಲು ನಿಮ್ಮಲ್ಲಿ ಪ್ರತಿಯೊಬ್ಬರ ಬಲಗಣ್ಣನ್ನು ಕಿತ್ತು ಹಾಕುತ್ತೇನೆ. ಇದಕ್ಕೆ
ನೀವು ಒಪ್ಪುವಿರಾದರೆ ನಿಮ್ಮ ಸಂಗಡ ಸಂಧಾನ ಮಾಡಿಕೊಳ್ಳುತ್ತೇನೆ," ಎಂದು ಉತ್ತರಕೊಟ್ಟನು.

3 ಆಗ ಯಾಬೇಷಿನ ಹಿರಿಯರು ಅವನಿಗೆ, "ಏಳು ದಿವಸಗಳವರೆಗೆ ಸಮಯ ಕೊಡು; ಅಷ್ಟರೊಳಗೆ
ನಾವು ಇಸ್ರಯೇಲರ ಪ್ರಾಂತ್ಯಗಳಿಗೆ ದೂತರನ್ನು ಕಳುಹಿಸುತ್ತೇವೆ. ನಮ್ಮನ್ನು ಯಾರೂ ರಕ್ಷಿಸದಿದ್ದರೆ ನಾವು
ನಿನ್ನ ಬಳಿಗೆ ಬಂದು ಶರಣಾಗುತ್ತೇವೆ," ಎಂದು ವಿನಂತಿಸಿದರು.

4 ದೂತರು ಸೌಲನು ವಾಸವಾಗಿದ್ದ ಗಿಬೆಯಕ್ಕೆ ಬಂದು ಅಲ್ಲಿನವರಿಗೆ ಈ ವರ್ತಮಾನವನ್ನು
ತಿಳಿಸಿದರು. ಎಲ್ಲರೂ ಗಟ್ಟಿಯಾಗಿ ಅಳತೊಡಗಿದರು. 5ಅಷ್ಟರಲ್ಲಿ ಸೌಲನು ಹೊಲದಿಂದ ದನಗಳನ್ನು
ಹೊಡೆದುಕೊಂಡು ಬಂದನು. ಜನರು ಗೋಳಾಡುವುದಕ್ಕೇನು ಕಾರಣವೆಂದು ಕೇಳಲು ಯಾಬೇಷಿನವರ
ವರ್ತಮಾನವನ್ನು ಅವನಿಗೆ ತಿಳಿಸಲಾಯಿತು. 6ಆಗ ಸರ್ವೇಶ್ವರನ ಆತ್ಮ ಅವನ ಮೇಲೆ ಬಂದಿತು. ಅವನು
ಅತ್ಯಂತ ಕುಪಿತನಾದನು. 7ಒಂದು ಜೋಡಿ ಎತ್ತುಗಳನ್ನು ತೆಗೆದುಕೊಂಡು ತುಂಡು ತುಂಡು ಮಾಡಿ, ಆ
ತುಂಡುಗಳನ್ನು ದೂತರ ಮುಖಾಂತರ ಇಸ್ರಯೇಲರ ಎಲ್ಲ ಪ್ರಾಂತ್ಯಗಳಿಗೆ ಕಳುಹಿಸಿದನು. "ಯಾರು ಸೌಲ
ಹಾಗು ಸಮುವೇಲರನ್ನು ಹಿಂಬಾಲಿಸುವುದಿಲ್ಲವೋ ಅವರ ಎತ್ತುಗಳನ್ನು ಹೀಗೆಯೇ ಕಡಿಯಲಾಗುವುದು,"
ಎಂದು ಹೇಳಿಸಿದನು. ಸರ್ವೇಶ್ವರನ ಭಯಭಕ್ತಿಯಿಂದ ಪ್ರೇರಿತರಾದ ಜನರೆಲ್ಲರೂ ಏಕಮನಸ್ಸಿನಿಂದ
ಕೂಡಿಬಂದರು. 8ಅವರನ್ನು ಬೆಜೆಕಿನಲ್ಲಿ ಕ್ರಮಪಡಿಸಿ ಲೆಕ್ಕಸಿದಾಗ ಇಸ್ರಯೇಲರಲ್ಲಿ ಮೂರು ಲಕ್ಷ ಸೈನಿಕರೂ
ಯೆಹೂದ್ಯರಲ್ಲಿ ಮೂವತ್ತು ಸಾವಿರ ಸೈನಿಕರೂ ಇದ್ದರು. 9ಬಂದಿದ್ದ ದೂತರಿಗೆ, "ನಾಳೆ ಮಧ್ಯಾಹ್ನದೊಳಗೆ
ನಿಮಗೆ ಸಹಾಯ ಸಿಕ್ಕುವುದೆಂದು ಯಾಬೇಷ್ ಗಿಲ್ಯಾದಿನವರಿಗೆ ತಿಳಿಸಿರಿ," ಎಂದು ಹೇಳಿ ಅವರನ್ನು
ಕಳುಹಿಸಲಾಯಿತು. 10ದೂತರು ಹೋಗಿ ಈ ವರ್ತಮಾನವನ್ನು ತಿಳಿಸಲು ಯಾಬೇಷಿನವರು
ಸಂತೋಷಭರಿತರಾದರು. ಅಮ್ಮೋನಿಯರಿಗೆ, "ನಾವು ನಾಳೆ ನಿಮ್ಮ ಬಳಿಗೆ ಬರುವೆವು; ನಿಮ್ಮ ಇಚ್ಛೆಯ
ಪ್ರಕಾರ ಮಾಡಬಹುದು," ಎಂದು ಹೇಳಿದರು. 11ಸೌಲನು ಬೆಳಗಿನ ಜಾವದಲ್ಲಿ ತನ್ನ ಜನರನ್ನು ಮೂರು
ಪಂಗಡವಾಗಿ ವಿಂಗಡಿಸಿದನು. ಅಮ್ಮೋನಿಯರ ಪಾಳೆಯದೊಳಕ್ಕೆ ನುಗ್ಗಿ ದಾಳಿಮಾಡಿ ಮಧ್ಯಾಹ್ನದವರೆಗೆ
ಅವರನ್ನು ಸದೆಬಡಿದನು. ಅಳಿದುಳಿದವರನ್ನು ಒಬ್ಬರನ್ನೊಬ್ಬರು ಕೂಡದ ಹಾಗೆ ಚದರಿಸಿ ಬಿಟ್ಟನು.

12 ತರುವಾಯ ಜನರು ಸಮುವೇಲನಿಗೆ, "ಸೌಲನು ನಮಗೆ ಅರಸನಾಗಬಾರದೆಂದು
ಹೇಳಿದವರಾರು? ಅವರನ್ನು ನಮಗೆ ಒಪ್ಪಿಸಿರಿ; ನಾವೇ ಕೊಂದುಹಾಕುತ್ತೇವೆ" ಎಂದರು. ಸೌಲನು ಅವರಿಗೆ,
13"ಸರ್ವೇಶ್ವರ ಈ ದಿನ ಇಸ್ರಯೇಲರಿಗೆ ಜಯವನ್ನುಂಟು ಮಾಡಿರುವರು. ಆದ್ದರಿಂದ ಯಾರನ್ನೂ
ಕೊಲ್ಲಬಾರದು," ಎಂದು ಹೇಳಿದನು. 14ಸಮುವೇಲನು ಜನರಿಗೆ, "ಬನ್ನಿ, ಗಿಲ್ಗಾಲಿಗೆ ಹೋಗಿ ಸೌಲನ
ಅರಸುತನವನ್ನು ಘೋಷಿಸೋಣ," ಎಂದನು. 15ಅವರೆಲ್ಲರು ಅಲ್ಲಿಗೆ ಹೋಗಿ ಸರ್ವೇಶ್ವರನ ಸನ್ನಿಧಿಯಲ್ಲಿ
ಸೌಲನ ಅರಸುತನವನ್ನು ಘೋಷಿಸಿ ಸ್ಥಿರಪಡಿಸಿದರು. ಸರ್ವೇಶ್ವರನಿಗೆ ಶಾಂತಿಸಮಾಧಾನದ ಬಲಿಗಳನ್ನು
ಸಮರ್ಪಿಸಿದರು. ಸೌಲನೊಡನೆ ಸೇರಿ ಬಹಳವಾಗಿ ಆನಂದಿಸಿದರು.

### ಸಮುವೇಲನಿಂದ ಬೀಳ್ಕೊಡುಗೆಯ ಭಾಷಣ

**12** ಸಮುವೇಲನು ಇಸ್ರಯೇಲರೆಲ್ಲರಿಗೆ, "ನೋಡಿ, ನಾನು ನಿಮ್ಮ ಬಿನ್ನಹಗಳನ್ನು ಆಲಿಸಿ ನಿಮಗೊಬ್ಬ
ಅರಸನನ್ನು ನೇಮಿಸಿದೆ. 2ಇನ್ನು ಇವನೇ ನಿಮ್ಮನ್ನು ಮುನ್ನಡೆಸುವನು. ಚಿಕ್ಕಂದಿನಿಂದ ನಿಮ್ಮ ನಾಯಕನಾಗಿದ್ದ
ನಾನು ಈಗ ತಲೆನರೆತ ಮುದುಕನಾಗಿದ್ದೇನೆ; ನನ್ನ ಮಕ್ಕಳು ನಿಮ್ಮ ಮಧ್ಯದಲ್ಲಿದ್ದಾರೆ. 3ಇಲ್ಲಿ ನಿಂತುಕೊಂಡಿರುವ
ನಾನು, ಯಾರ ಎತ್ತನ್ನಾಗಲಿ, ಕತ್ತೆಯನ್ನಾಗಲಿ ತೆಗೆದುಕೊಂಡು ಯಾರನ್ನಾದರು ವಂಚಿಸಿ ಪೀಡಿಸಿದ್ದುಂಟೋ?
ಲಂಚತೆಗೆದುಕೊಂಡು ಕುರುಡನಂತೆ ತೀರ್ಪುಕೊಟ್ಟಿದ್ದುಂಟೋ? ಹಾಗೇನಾದರು ಮಾಡಿದ್ದರೆ ಸರ್ವೇಶ್ವರನ
ಹಾಗು ಅವರ ಅಭಿಷಿಕ್ತನ ಮುಂದೆ ಹೇಳಿರಿ; ನಾನು ಅದನ್ನು ಹಿಂದಕ್ಕೆ ಕೊಡುತ್ತೇನೆ," ಎಂದನು. 4ಅವರು,
"ಇಲ್ಲ, ನೀವು ನಮ್ಮನ್ನು ವಂಚಿಸಿ ಪೀಡಿಸಿ ನಮ್ಮಿಂದ ಏನೂ ಕಸಿದುಕೊಂಡಿಲ್ಲ," ಎಂದು ಉತ್ತರಕೊಟ್ಟರು.
5ಸಮುವೇಲನು ಪುನಃ, "ನೀವು ನನ್ನಲ್ಲಿ ಇಂಥದನ್ನೇನೂ ಕಾಣಲಿಲ್ಲವೆಂಬುದಕ್ಕೆ ಸರ್ವೇಶ್ವರ ಹಾಗು ಅವರ

ಅಭಿಷಿಕ್ತನು ಸಾಕ್ಷಿಯಾಗಿದ್ದಾರೆ," ಎಂದನು. ಅವರು, "ಹೌದು, ಸರ್ವೇಶ್ವರ ಸಾಕ್ಷಿ ಆಗಿದ್ದಾರೆ," ಎಂದು
ನುಡಿದರು.
6 ಆಗ ಸಮುವೇಲನು, "ನಿಮ್ಮ ಪೂರ್ವಜರನ್ನು ಈಜಿಪ್ಟಿನಿಂದ ಕರೆದುತರುವುದಕ್ಕಾಗಿ ಮೋಶೆ
ಹಾಗು ಆರೋನರನ್ನು ನೇಮಿಸಿದ ಸರ್ವೇಶ್ವರಸ್ವಾಮಿಯೇ ಇದಕ್ಕೆ ಸಾಕ್ಷಿ: ಇಲ್ಲಿ ನಿಂತು ಕೇಳಿರಿ: 7ಸರ್ವೇಶ್ವರ
ನಿಮ್ಮ ಹಾಗು ನಿಮ್ಮ ಪೂರ್ವಜರ ಪರವಾಗಿ ನಡೆಸಿದ ನೀತಿಕಾರ್ಯಗಳನ್ನು ಕುರಿತು ಅವರೆದುರಿನಲ್ಲೇ
ನಿಮಗೆ ನೆನಪಿಗೆ ತಂದು, ನಿಮ್ಮನ್ನು ಎಚ್ಚರಿಸುತ್ತೇನೆ. 8ಈಜಿಪ್ಟಿಗೆ ಬಂದ ಯಕೋಬನ ವಂಶದವರಾದ ನಮ್ಮ
ಹಿರಿಯರು ಸರ್ವೇಶ್ವರನಿಗೆ ಮೊರೆಯಿಟ್ಟಾಗ, ಅವರು ಮೋಶೆ ಹಾಗು ಆರೋನರ ಮುಖಾಂತರ ಅವರನ್ನು
ಈಜಿಪ್ಟಿನಿಂದ ಬಿಡಿಸಿ ತಂದು ಈ ನಾಡಿನಲ್ಲಿ ನೆಲೆಗೊಳಿಸಿದರು. 9ಅವರು ತಮ್ಮ ದೇವರಾದ ಸರ್ವೇಶ್ವರನನ್ನು
ಮರೆತುಬಿಟ್ಟರು. ಆಗ ಅವರನ್ನು ಹಾಚೋರಿನ ಸೇನಾಪತಿಯಾದ ಸೀಸೆರನಿಗೂ ಫಿಲಿಷ್ಟಿಯರಿಗೂ
ಮೋವಾಬ್ ರಾಜನಿಗೂ ಮಾರಿ ಬಿಡಲಾಯಿತು. ಇವರು ದಂಡೆತ್ತಿ ಬಂದು ಅವರೊಡನೆ
ಯುದ್ಧಮಾಡಿದರು. 10ಆಗ ಅವರು, "ನಾವು ಸರ್ವೇಶ್ವರನಾದ ನಿಮ್ಮನ್ನು ಬಿಟ್ಟು ಬಾಳ್, ಅಷ್ಟೋರೆತ್ ಎಂಬ
ದೇವತೆಗಳನ್ನು ಪೂಜಿಸಿ ಪಾಪಮಾಡಿದ್ದೇವೆ. ಈಗ ಕೃಪೆಮಾಡಿ ನಮ್ಮನ್ನು ಶತ್ರುಗಳ ಕೈಯಿಂದ ಬಿಡಿಸಿರಿ;
ನಾವು ಇನ್ನು ಮುಂದೆ ನಿಮ್ಮನ್ನೇ ಪೂಜಿಸಿ, ಸೇವೆ ಮಾಡುತ್ತೇವೆ," ಎಂದು ಮೊರೆಯಿಟ್ಟರು. 11ಆಗ ಸರ್ವೇಶ್ವರ
ಯೆರುಬ್ಬಾಳ್, ಬಾರಾಕ್, ಯೆಫ್ತಾಹ, ಸಮುವೇಲ್ ಇವರನ್ನು ಕಳುಹಿಸಿ ನಿಮ್ಮನ್ನು ಎಲ್ಲಾ ಶತ್ರುಗಳ ಕೈಯಿಂದ
ತಪ್ಪಿಸಿ ಸುರಕ್ಷಿತವಾಗಿ ವಾಸಿಸುವಂತೆ ಮಾಡಿದರು. 12ಅಮ್ಮೋನಿಯರ ಅರಸನಾದ ನಾಹಾಷನು ನಿಮ್ಮ ಮೇಲೆ
ಯುದ್ದಕ್ಕೆ ಬರುತ್ತಾನೆಂದು ನಿಮಗೆ ಗೊತ್ತಾಗಲು, ನಿಮ್ಮ ದೇವರಾದ ಸರ್ವೇಶ್ವರ ನಿಮ್ಮ ಅರಸನಾಗಿದ್ದರೂ
ನೀವು, 'ನಮಗೊಬ್ಬ ಅರಸನನ್ನು ನೇಮಿಸು' ಎಂದು ನನ್ನನ್ನು ಬೇಡಿಕೊಂಡಿರಿ.
13 "ಇಗೋ, ನೀವು ಅಪೇಕ್ಷಿಸಿ ಆರಿಸಿಕೊಂಡ ಅರಸ ಇವನೇ; ಸರ್ವೇಶ್ವರ ಇವನನ್ನು ನಿಮ್ಮ ಮೇಲೆ
ಅರಸನನ್ನಾಗಿ ನೇಮಿಸಿದ್ದಾರೆ. 14ನೀವೂ ನಿಮ್ಮ ಅರಸನೂ ನಿಮ್ಮ ದೇವರಾದ ಸರ್ವೇಶ್ವರನಲ್ಲಿ
ಭಯಭಕ್ತಿಯುಳ್ಳವರಾಗಿ ಅವರಿಗೆ ವಿಧೇಯರಾಗಿ ಅವರನ್ನೇ ಪೂಜಿಸಿರಿ; ಅವರ ಮಾತನ್ನು ತಪ್ಪದೆ
ಪಾಲಿಸುತ್ತಾ ಅವರನ್ನೇ ಹೊಂದಿಕೊಂಡಿರಿ. ಹೀಗೆ ಮಾಡಿದರೆ ಎಷ್ಟೋ ಒಳ್ಳೆಯದು. 15ಆದರೆ ನೀವು
ಸರ್ವೇಶ್ವರನ ಮಾತನ್ನು ಕೇಳದೆ, ಅವರ ಆಜ್ಞೆಗಳನ್ನು ಕೈಕೊಳ್ಳದೆ ನಡೆದರೆ, ಅವರ ಹಸ್ತ ನಿಮ್ಮ ಹಿರಿಯರಿಗೆ
ವಿರೋಧವಾಗಿದ್ದಂತೆ ನಿಮಗೂ ವಿರೋಧವಾಗಿಯೇ ಇರುವುದು. 16ಈಗ ಸರ್ವೇಶ್ವರ ನಿಮ್ಮ ಕಣ್ಮುಂದೆಯೇ
ಮಾಡುವ ಮಹತ್ಕಾರ್ಯವನ್ನು ಹತ್ತಿರಬಂದು ನೋಡಿರಿ. 17ನಾನು ಸರ್ವೇಶ್ವರನಿಗೆ ಮೊರೆಯಿಡುತ್ತೇನೆ; ಈಗ
ಗೋದಿಯ ಸುಗ್ಗಿಕಾಲವಾಗಿದ್ದರೂ ಗುಡುಗನ್ನೂ ಮಳೆಯನ್ನೂ ಕಳುಹಿಸುವುದರ ಮೂಲಕ ನೀವು
ಅರಸನನ್ನು ಕೇಳಿಕೊಂಡದ್ದು ತಮ್ಮ ದೃಷ್ಟಿಯಲ್ಲಿ ಎಷ್ಟೋ ಕೆಟ್ಟದ್ದಾಗಿದೆ ಎಂಬುದನ್ನು ಅವರು
ತೋರಿಸಿಕೊಡುವರು," ಎಂದು ಅವರಿಗೆ ಹೇಳಿದನು.
18 ಅಂತೆಯೇ ಸಮುವೇಲನು ಮೊರೆ ಇಡಲು ಸರ್ವೇಶ್ವರ ಗುಡುಗುಮಳೆಗಳನ್ನು ಕಳುಹಿಸಿದರು.
ಜನರೆಲ್ಲರು ಸರ್ವೇಶ್ವರನಿಗೂ ಸಮುವೇಲನಿಗೂ ಬಹಳವಾಗಿ ಭಯಪಟ್ಟು, 19ಸಮುವೇಲನನ್ನು "ನಮಗೊಬ್ಬ
ಅರಸನು ಬೇಕೆಂದು ನಾವು ಬೇಡಿಕೊಂಡದ್ದರಿಂದ ನಮ್ಮ ಪಾಪಗಳಿಗೆ ಮತ್ತೊಂದು ಪಾಪ ಕೂಡಿತು;
ಆದುದರಿಂದ ನಿಮ್ಮ ಸೇವಕರಾದ ನಾವು ಸಾಯದಂತೆ ನಿಮ್ಮ ದೇವರಾದ ಸರ್ವೇಶ್ವರನನ್ನು ಬೇಡಿಕೊಳ್ಳಿ,"
ಎಂದು ಸಮುವೇಲನನ್ನು ವಿಜ್ಞಾಪಿಸಿದರು. 20ಆಗ ಸಮುವೇಲನು, "ಭಯಪಡಬೇಡಿ; ಇಷ್ಟು ಪಾಪಮಾಡಿದ
ನೀವು ಇನ್ನು ಮುಂದೆ ಆದರೂ ಅದನ್ನು ಬಿಟ್ಟು ಸರ್ವೇಶ್ವರನನ್ನು ಹೊಂದಿಕೊಂಡು ಪೂರ್ಣಮನಸ್ಸಿನಿಂದ
ಅವರೊಬ್ಬರನ್ನೇ ಪೂಜಿಸಿರಿ. 21ದೇವರಲ್ಲದವುಗಳನ್ನು ಹಿಂಬಾಲಿಸಬೇಡಿ; ಅವುಗಳಿಂದ ನಿಮಗೆ ಲಾಭವಿಲ್ಲ;
ರಕ್ಷಣೆಯೂ ಸಿಕ್ಕುವುದಿಲ್ಲ. ಅವು ವ್ಯರ್ಥವಾದವುಗಳೇ ಸರಿ. 22ಸರ್ವೇಶ್ವರನ ದಯೆ ನಿಮ್ಮನ್ನು ಸ್ವಕೀಯ
ಜನರನ್ನಾಗಿ ಆರಿಸಿಕೊಂಡ ಮೇಲೆ, ಅವರು ತಮ್ಮ ಮಹೋನ್ನತ ನಾಮದ ನಿಮಿತ್ತ, ನಿಮ್ಮನ್ನು ಖಂಡಿತವಾಗಿ
ಕೈಬಿಡುವುದಿಲ್ಲ. 23ನಾನಾದರೋ ನಿಮ್ಮ ಪರವಾಗಿ ಸರ್ವೇಶ್ವರನನ್ನು ಪ್ರಾರ್ಥಿಸುತ್ತೇನೆ; ಅವರ ನೀತಿಯುತ
ಉತ್ತಮ ಮಾರ್ಗವನ್ನು ನಿಮಗೆ ತೋರಿಸಿ ಕೊಡುವುದನ್ನು ಬಿಡುವುದಿಲ್ಲ; ಬಿಟ್ಟರೆ ದೇವರ ದೃಷ್ಟಿಯಲ್ಲಿ
ನಾನೂ ಪಾಪಿಯಾಗುತ್ತೇನೆ. 24ನೀವಾದರೋ ಸರ್ವೇಶ್ವರನಲ್ಲಿ ಭಯಭಕ್ತಿಯುಳ್ಳವರಾಗಿದ್ದು, ಅವರು
ನಿಮಗಾಗಿ ಮಾಡಿದ ಮಹತ್ಕಾರ್ಯಗಳನ್ನು ಸ್ಮರಿಸಿಕೊಂಡು, ಅವರಿಗೆ ಶ್ರದ್ಧೆಯಿಂದಲೂ

ಪೂರ್ಣಮನಸ್ಸಿನಿಂದಲೂ ಸೇವೆ ಸಲ್ಲಿಸುತ್ತಾ ಬರಬೇಕು. 25ನೀವು ದ್ರೋಹಿಗಳಾಗಿಯೇ ಇದ್ದರೆ ನಿಮ್ಮ ಅರಸನ
ಸಮೇತ ನಾಶವಾಗುವಿರಿ," ಎಂದು ಹೇಳಿದನು.

## ಫಿಲಿಷ್ಟಿಯರೊಡನೆ ಯುದ್ಧ

**13** ಸೌಲನು ಅರಸನಾದಾಗ ಅವನಿಗೆ ಮೂವತ್ತು ವರ್ಷ. ಅವನು ಇಸ್ರಯೇಲರನ್ನು ನಾಲ್ವತ್ತೆರಡು ವರ್ಷ
ಆಳಿದನು. 2ಅವನು ಅವರಲ್ಲಿ ಮೂರು ಸಾವಿರ ಜನರನ್ನು ಮಿಕ್ಮಾಷಿನಲ್ಲೂ ಬೇತೇಲಿನ ಗುಡ್ಡದಲ್ಲೂ
ಇಟ್ಟುಕೊಂಡನು. ಉಳಿದ ಸಾವಿರ ಜನರನ್ನು ಬೆನ್ಯಾಮೀನ್ಯರ ಗೆಬೆಯದಲ್ಲಿದ್ದ ಯೋನಾತಾನನ ವಶಕ್ಕೆ
ಕೊಟ್ಟನು. ಬೇರೆ ಇಸ್ರಯೇಲರನ್ನು ಅವರವರ ಮನೆಗಳಿಗೆ ಕಳುಹಿಸಿದನು. 3ಯೋನಾತಾನನು ಗೆಬದಲ್ಲಿದ್ದ
ಫಿಲಿಷ್ಟಿಯರ ದಂಡು ಪ್ರದೇಶವನ್ನು ನಾಶಮಾಡಿದನು. ಈ ಸಮಾಚಾರ ಫಿಲಿಷ್ಟಿಯರಿಗೆ ಮುಟ್ಟಿತು.
ಹಿಬ್ರಿಯರೆಲ್ಲರಿಗೂ ಇದು ಗೊತ್ತಾಗುವಂತೆ ಸೌಲನು ದೇಶದಲ್ಲೆಲ್ಲಾ ಕೊಂಬೂದಿಸಿದನು. 4ಸೌಲನು
ಫಿಲಿಷ್ಟಿಯರ ದಂಡುಪ್ರದೇಶವನ್ನು ನಾಶಮಾಡಿದ್ದರಿಂದ, ತಾವು ಅವರ ದ್ವೇಷಕ್ಕೆ ಗುರಿಯಾದೆವೆಂದು
ಇಸ್ರಯೇಲರು ತಿಳಿದು, ಗಿಲ್ಗಾಲಿಗೆ ಬಂದು ಸೌಲನನ್ನು ಕೂಡಿಕೊಂಡರು. 5ಆಗ ಫಿಲಿಷ್ಟಿಯರು
ಇಸ್ರಯೇಲರೊಡನೆ ಯುದ್ಧಮಾಡುವುದಕ್ಕಾಗಿ ಮೂವತ್ತು ಸಾವಿರ ರಥಬಲವನ್ನು, ಆರು ಸಾವಿರ
ಅಶ್ವಬಲವನ್ನು ಹಾಗು ಸಮುದ್ರದ ಮರಳಿನಂತೆ ಅಸಂಖ್ಯವಾದ ಕಾಲಾಳುಗಳನ್ನು ತೆಗೆದುಕೊಂಡು ಬಂದು
ಬೇತಾವೆನಿನ ಪೂರ್ವದಿಕ್ಕಿನಲ್ಲಿರುವ ಮಿಕ್ಮಾಷಿನಲ್ಲಿ ಪಾಳೆಯಮಾಡಿಕೊಂಡರು. 6ಇಸ್ರಯೇಲರಿಗೆ ಕೇಡು
ಬಂದೊದಗಿತು. ತಾವು ಇಕ್ಕಟ್ಟಿನಲ್ಲಿ ಇದ್ದೇವೆಂದು ಅವರು ತಿಳಿದು ಗವಿ, ಕಾಡು, ಬಂಡೆ, ನೆಲಮನೆ, ಗುಂಡಿ
ಇವುಗಳಲ್ಲಿ ಅಡಗಿಕೊಂಡರು. 7ಕೆಲವರು ಜೋರ್ಡನ್ ನದಿ ದಾಟಿ ಗಾದ್ಯರ ದೇಶಕ್ಕೂ ಗಿಲ್ಯಾದ್ ಪ್ರಾಂತ್ಯಕ್ಕೂ
ಹೊರಟುಹೋದರು.

ಸೌಲನು ಇನ್ನೂ ಗಿಲ್ಗಾಲಿನಲ್ಲೇ ಇದ್ದನು. ಅವನ ಸಂಗಡ ಇದ್ದವರು ಭಯದಿಂದ ನಡುಗುತ್ತಿದ್ದರು.
8ಸೌಲನು ಸಮುವೇಲನ ಆಜ್ಞೆಯಂತೆ ಗಿಲ್ಗಾಲಿನಲ್ಲೇ ಏಳು ದಿವಸ ಇದ್ದರೂ ಸಮುವೇಲನು ಅಲ್ಲಿಗೆ ಬರಲಿಲ್ಲ;
ಅಷ್ಟರಲ್ಲಿ ಜನರು ಚದರಿಹೋದರು. 9ಆಗ ಸೌಲನು ಜನರಿಂದ ದಹನಬಲಿಗೆ ಹಾಗು ಶಾಂತಿಸಮಾಧಾನ
ಬಲಿಗೆ ಬೇಕಾದದ್ದನ್ನು ತರಿಸಿ ದಹನಬಲಿಯನ್ನು ಅರ್ಪಿಸಿದನು. 10ಅದು ಮುಗಿಯುವಷ್ಟರಲ್ಲೇ ಸಮುವೇಲನು
ಬಂದನು. ಸೌಲನು ಅವನನ್ನು ವಂದಿಸುವುದಕ್ಕಾಗಿ ಮುಂದೆ ಹೋದನು. 11ಸಮುವೇಲನು, ಅವನನ್ನು
ನೋಡಿ, "ಇದೇನು ನೀನು ಮಾಡಿದ್ದು?" ಎಂದು ಕೇಳಿದನು. ಅವನು, "ಜನರು ಚದರಿಹೋಗುವುದನ್ನು,
ನೀವು ನಿಯಮಿತ ಕಾಲಕ್ಕೆ ಬಾರದಿರುವುದನ್ನು ಹಾಗು ಫಿಲಿಷ್ಟಿಯರು ಮಿಕ್ಮಾಷಿನಲ್ಲಿ ನಮಗೆ ವಿರೋಧವಾಗಿ
ಕೂಡಿಕೊಂಡಿರುವುದನ್ನು ನೋಡಿದೆ; 12ಸರ್ವೇಶ್ವರನಿಗೆ ಶಾಂತಿಸಮಾಧಾನದ ಬಲಿಯನ್ನು ಸಲ್ಲಿಸುವುದಕ್ಕಿಂತ
ಮೊದಲೇ ಫಿಲಿಷ್ಟಿಯರು ಗಿಲ್ಗಾಲಿಗೆ ಬಂದು ನನ್ನ ಮೇಲೆ ಬಿದ್ದಾರೆಂದು ಭಯಪಟ್ಟೆ. ಆದುದರಿಂದ
ದಹನಬಲಿಯನ್ನು ಸಮರ್ಪಿಸುವುದಕ್ಕೆ ನಾನೇ ಮುಂದಾದೆ," ಎಂದನು.

13 ಆಗ ಸಮುವೇಲನು, "ನೀನು ಬುದ್ಧಿಹೀನ ಕಾರ್ಯವನ್ನು ಮಾಡಿದೆ; ನಿನ್ನ ದೇವರಾದ
ಸರ್ವೇಶ್ವರನ ಆಜ್ಞೆಯನ್ನು ಕೈಗೊಳ್ಳಲಿಲ್ಲ. ಕೈಗೊಂಡಿದ್ದರೆ ನಿನ್ನ ರಾಜ್ಯವನ್ನು ಇಸ್ರಯೇಲರಲ್ಲಿ ಶಾಶ್ವತವಾಗಿ
ಸ್ಥಿರಪಡಿಸುತ್ತಿದ್ದರು. 14ಈಗಲಾದರೋ, ನಿನ್ನ ಅರಸುತನ ನಿಲ್ಲುವುದಿಲ್ಲ; ನೀನು ಸರ್ವೇಶ್ವರನ ಆಜ್ಞೆಯನ್ನು
ಕೈಗೊಳ್ಳದೆ ಹೋದುದರಿಂದ ಅವರು ತಮಗೆ ಒಪ್ಪಿಗೆಯಾದ ಬೇರೊಬ್ಬ ವ್ಯಕ್ತಿಯನ್ನು ತಮ್ಮ ಪ್ರಜೆಯ ಮೇಲೆ
ಅರಸನನ್ನಾಗಿ ನೇಮಿಸಿದ್ದಾರೆ," ಎಂದು ಹೇಳಿದನು. 15ಅನಂತರ ಸಮುವೇಲನು ಗಿಲ್ಗಾಲನ್ನು ಬಿಟ್ಟು
ಬೆನ್ಯಾಮೀನ್ಯರ ಗಿಬೆಯಕ್ಕೆ ಹೋದನು.

ಸೌಲನು ತನ್ನ ಜೊತೆಯಲ್ಲಿದ್ದ ಸೈನಿಕರನ್ನು ಎಣಿಸಿದಾಗ ಆರುನೂರು ಮಂದಿಯಿದ್ದರು.
16ಅವರೊಡನೆ ಅವನೂ ಅವನ ಮಗನಾದ ಯೋನಾತಾನನೂ ಬೆನ್ಯಾಮೀನ್ಯರ ಗೆಬದಲ್ಲಿ ಇಳಿದುಕೊಂಡರು.
ಫಿಲಿಷ್ಟಿಯರು ಮಿಕ್ಮಾಷಿನಲ್ಲಿ ಪಾಳೆಯಮಾಡಿಕೊಂಡಿದ್ದರು. 17ಸುಲಿಗೆ ಮಾಡುವುದಕ್ಕಾಗಿ ಫಿಲಿಷ್ಟಿಯರ
ಪಾಳೆಯದಿಂದ ಮೂರು ಗುಂಪುಗಳು ಹೊರಟು ಬಂದವು. ಒಂದು ಗುಂಪು ಒಫ್ರದ ಮಾರ್ಗವಾಗಿ
ಶುವಲ್‍ನಾಡಿಗೆ, 18ಇನ್ನೊಂದು ಬೇತ್‍ಹೋರೋನಿನ ಕಡೆಗೆ, ಮತ್ತೊಂದು ಜೆಬೋಯಿೀಮ್ ಕಣಿವೆಯೂ

ಅದರ ಕೆಳಗಿರುವ ಅರಣ್ಯವೂ ಕಾಣಿಸುವ ಸ್ಥಳಕ್ಕೆ ಹೋದವು. [19]ಹಿಬ್ರಿಯರು ಈಟಿಕತ್ತಿಗಳನ್ನು ಮಾಡಿಕೊಳ್ಳಕೂಡದೆಂದು ಫಿಲಿಷ್ಟಿಯರ ಆಜ್ಞೆ ಇದ್ದುದರಿಂದ ಇಸ್ರಯೇಲ್ ದೇಶದಲ್ಲಿ ಅವುಗಳನ್ನು ಮಾಡುವ ಕಮ್ಮಾರರೇ ಇರಲಿಲ್ಲ. [20](ಅವರು ತಮ್ಮ ನೇಗಿಲಿನ ಗುಳ, ಸಲಿಕೆ, ಕೊಡಲಿ, ಗುದ್ದಲಿ ಇವುಗಳನ್ನು ಹಣಿಸುವುದಕ್ಕಾಗಿ ಫಿಲಿಷ್ಟಿಯರ ಬಳಿಗೆ ಹೋಗಬೇಕಾಗಿತ್ತು. [21]ಗುದ್ದಲಿ, ಸಲಿಕೆ, ತ್ರಿಶೂಲ, ಕೊಡಲಿ, ಮುಳ್ಳುಗೋಲು ಇವುಗಳನ್ನು ಹದಮಾಡುವುದಕ್ಕಾಗಿ ಅವರಲ್ಲಿ ಅರ ಮಾತ್ರ ಇತ್ತು.) [22]ಹೀಗಿದ್ದುದರಿಂದ ಯುದ್ಧ ಪ್ರಾರಂಭಿಸಿದಾಗ ಸೌಲ ಯೋನಾತಾನರ ಹೊರತು, ಅವರ ಜೊತೆಯಲ್ಲಿದ್ದ ಜನರಲ್ಲಿ ಒಬ್ಬನ ಕೈಯಲ್ಲಾದರೂ ಕತ್ತಿಯಾಗಲಿ ಭರ್ಜಿಯಾಗಲಿ ಇರಲಿಲ್ಲ.

### ಯೋನಾತಾನನ ಶೌರ್ಯ – ಫಿಲಿಷ್ಟಿಯರಿಗೆ ಅಪಜಯ

**14** [23]ಫಿಲಿಷ್ಟಿಯರ ಕಾವಲುದಂಡು ಮಿಕ್ಮಾಷಿನ ಕಣಿವೆಯ ಕಡೆಗೆ ಹೊರಟಿತು. ಒಂದು ದಿನ ಸೌಲನ
ಮಗ ಯೋನಾತಾನನು ತನ್ನ ಆಯುಧಗಳನ್ನು ಹೊರುವ ಸೇವಕನಿಗೆ, "ಆಚೆ ಇರುವ ಫಿಲಿಷ್ಟಿಯರ ಕಾವಲು
ದಂಡಿಗೆ ವಿರೋಧವಾಗಿ ಹೋಗೋಣ ಬಾ," ಎಂದು ಹೇಳಿದನು. ಆದರೆ ಈ ಸಂಗತಿಯನ್ನು ತನ್ನ ತಂದೆಗೆ
ತಿಳಿಸಲಿಲ್ಲ. [2]ಸೌಲನಾದರೋ ಗಿಬೆಯ ಪ್ರಾಂತ್ಯದ ಅಂತ್ಯಭಾಗವಾಗಿರುವ ಮಿಗ್ರೋನಿನಲ್ಲಿನ ಒಂದು ದಾಳಿಂಬ
ವೃಕ್ಷದ ಅಡಿಯಲ್ಲಿ ಇಳಿದುಕೊಂಡಿದ್ದನು. ಅವನ ಜೊತೆಯಲ್ಲಿ ಸುಮಾರು ಆರುನೂರು ಮಂದಿ ಸೈನಿಕರು
ಇದ್ದರು. [3]'ಏಫೋದ'ನ್ನು ಧರಿಸಿಕೊಂಡಿದ್ದ ಅಹೀಯನೂ ಇದ್ದನು. ಈ ಅಹೀಯನು ಶಿಲೋವಿನಲ್ಲಿ
ಸರ್ವೇಶ್ವರನ ಯಾಜಕನಾಗಿದ್ದ ಏಲಿಯ ಮರಿಮಗನೂ ಫೀನೆಹಾಸನ ಮೊಮ್ಮಗನೂ ಈಕಾಬೋದನ
ಅಣ್ಣನಾದ ಅಹೀಟೂಬನ ಮಗನೂ ಆಗಿದ್ದನು. ಯೋನಾತಾನನು ಹೋದದ್ದು ಜನರಿಗೂ ಗೊತ್ತಿರಲಿಲ್ಲ.
4 ಫಿಲಿಷ್ಟಿಯರ ದಂಡಿನ ಸ್ಥಳಕ್ಕೆ ಹೋಗಲು ಅವನು ಮಿಕ್ಮಾಷಿನ ಕಣಿವೆಯ ಮೂಲಕ
ಹೋಗಬೇಕಾಗಿತ್ತು. ಕಣಿವೆಯ ಎರಡು ಬದಿಗಳಲ್ಲಿ ಒಂದೊಂದು ಕೋಡು ಕಲ್ಲುಗಳಿದ್ದವು. ಒಂದಕ್ಕೆ
'ಬೋಚೇಚ್' ಎಂದೂ ಇನ್ನೊಂದಕ್ಕೆ 'ಸೆನೆ' ಎಂದೂ ಹೆಸರು. [5]ಒಂದು ಮಿಕ್ಮಾಷಿಗೆ, ಮುಖ ಮಾಡಿ
ಉತ್ತರಕ್ಕಿತ್ತು. ಇನ್ನೊಂದು ಗೆಬಕ್ಕೆ ಮುಖಮಾಡಿ ದಕ್ಷಿಣಕ್ಕಿತ್ತು. [6]ಯೋನಾತಾನನು ತನ್ನ ಆಯುಧಗಳನ್ನು
ಹೊರುವವನಿಗೆ, "ಸುನ್ನತಿಯಿಲ್ಲದ ಈ ಕಾವಲುದಂಡಿನವರೆಗೆ ನೇರವಾಗಿ ಹೋಗೋಣ ಬಾ; ಬಹುಶಃ
ಸರ್ವೇಶ್ವರ ತಾವೇ ನಮ್ಮ ಪರವಾಗಿ ಕಾರ್ಯಸಾಧಿಸುವರು. ಬಹು ಜನರಿಂದಾಗಲಿ, ಸ್ವಲ್ಪ ಜನರಿಂದಾಗಲಿ,
ರಕ್ಷಿಸುವುದು ಸರ್ವೇಶ್ವರಸ್ವಾಮಿಗೆ ಅಸಾಧ್ಯವಲ್ಲ," ಎಂದು ಹೇಳಿದನು. [7]ಆಯುಧಗಳನ್ನು ಹೊರುವವನು,
"ನಿಮ್ಮ ಇಷ್ಟದಂತೆ ಮಾಡಿ; ನಿಮ್ಮ ಕೋರಿಕೆಯ ಹಾಗೆ ನಾನೂ ನಿಮ್ಮನ್ನು ಹಿಂಬಾಲಿಸುತ್ತೇನೆ," ಎಂದನು.
8 ಆಗ ಯೋನಾತಾನನು, "ಅವರು ನಮ್ಮನ್ನು ಕಾಣುವಂತೆ ಸಮೀಪಕ್ಕೆ ಹೋಗೋಣ. [9]'ನಾವು
ನಿಮ್ಮ ಬಳಿಗೆ ಬರುವ ತನಕ ಅಲ್ಲೇ ನಿಲ್ಲಿ' ಎಂದು ಅವರು ನಮಗೆ ಹೇಳಿದರೆ, ಮೇಲೆ ಹತ್ತದೆ, ಇದ್ದ
ಸ್ಥಳದಲ್ಲೇ ಇರೋಣ. [10]ಆದರೆ ಅವರು, 'ಮೇಲೆ ಹತ್ತಿ ನಮ್ಮ ಬಳಿಗೆ ಬನ್ನಿ' ಎಂದು ಕರೆದರೆ ಸರ್ವೇಶ್ವರ
ಅವರನ್ನು ನಮ್ಮ ಕೈಗೆ ಒಪ್ಪಿಸಿದ್ದಾರೆಂಬುದಕ್ಕೆ ಇದೇ ಗುರುತೆಂದು ತಿಳಿದು ಮೇಲೆ ಹೋಗೋಣ," ಎಂದನು.
11 ಇವರಿಬ್ಬರೂ ಫಿಲಿಷ್ಟಿಯರ ಕಾವಲು ದಂಡಿನವರಿಗೆ ಕಾಣಿಸಿಕೊಂಡಾಗ ಅವರು, "ಇಗೋ,
ಹಿಬ್ರಿಯರು ತಾವು ಅಡಗಿಕೊಂಡಿದ್ದ ಕಿಂಡಿಗಳಿಂದ ಹೊರಗೆ ಬರುತ್ತಲಿದ್ದಾರೆ," ಎಂದು ತಮ್ಮೊಳಗೆ
ಮಾತಾಡಿಕೊಂಡರು. [12]ಆ ಫಿಲಿಷ್ಟಿಯರು ಯೋನಾತಾನನಿಗೂ ಅವನ ಆಯುಧಗಳನ್ನು ಹೊರುವವನಿಗೂ,
"ಹತ್ತಿ ನಮ್ಮ ಬಳಿಗೆ ಬನ್ನಿ; ನಿಮಗೆ ತೋರಿಸಬೇಕಾದದ್ದೊಂದಿದೆ," ಎಂದರು.
ಯೋನಾತಾನನು ತನ್ನ ಆಯುಧಗಳನ್ನು ಹೊರುವ ಸೇವಕನಿಗೆ, "ನೀನೂ ನನ್ನ ಸಂಗಡ ಹತ್ತಿ ಬಾ;
ಸರ್ವೇಶ್ವರ ಅವರನ್ನು ಇಸ್ರಯೇಲರ ಕೈಗೆ ಒಪ್ಪಿಸಿದ್ದಾರೆ," ಎಂದು ಹೇಳಿದನು. [13]ಯೋನಾತಾನನೂ ಅವನ
ಆಯುಧಗಳನ್ನು ಹೊರುವ ಸೇವಕನೂ ತಮ್ಮ ಮೊಣಕಾಲನ್ನು ಹಾಗು ಕೈಗಳನ್ನು ಊರುತ್ತಾ ಕಣಿವೆಯಿಂದ
ಮೇಲೆ ಬಂದರು. ಯೋನಾತಾನನು ಫಿಲಿಷ್ಟಿಯರನ್ನು ನೆಲಕ್ಕೆ ಉರುಳಿಸುತ್ತಾ ಹೋದನು; ಅವನ ಸೇವಕನು
ಹಿಂದಿನಿಂದ ಅವರನ್ನು ಕೊಲ್ಲುತ್ತಾ ನಡೆದನು. [14]ಹೀಗೆ ಒಂದು ಜೋಡಿ ಎತ್ತು ಒಪ್ಪೊತ್ತಿನಲ್ಲಿ ಉಳುವಷ್ಟು
ಭೂಮಿಯಲ್ಲೇ ಸುಮಾರು ಇಪ್ಪತ್ತು ಮಂದಿಯನ್ನು ಅವರು ವಧಿಸಿದರು. [15]ಇದರಿಂದಾಗಿ

ಪಾಳೆಯದಲ್ಲಿದ್ದವರು, ಕಾವಲುಗಾರರಾಗಿ ಠಾಣದಲ್ಲಿದ್ದವರು, ಸುಲಿಗೆಗಾಗಿ ಹೊರಗೆ ಹೋಗಿದ್ದವರು, ಹಾಗು
ಉಳಿದ ಎಲ್ಲಾ ಜನರು ಭಯದಿಂದ ನಡುಗತೊಡಗಿದರು. ಇದಲ್ಲದೆ, ದೇವರು
ಭೂಕಂಪವನ್ನುಂಟುಮಾಡಿದರು. ಈ ಕಾರಣ ಜನರಲ್ಲಿ ಮಹಾಭೀತಿಯುಂಟಾಯಿತು. 16ಬೆನ್ಯಾಮೀನ್ಯರ
ಗಿಬೆಯದಲ್ಲಿ ಕಾವಲಿದ್ದ ಸೌಲನ ಸೈನಿಕರು ಫಿಲಿಷ್ಟಿಯರ ದಂಡು ಹೀಗೆ ಕಳವಳಗೊಂಡು
ಚದರಿಹೋಗುತ್ತಿರುವುದನ್ನು ಕಂಡರು. 17ಸೌಲನು ತನ್ನ ಜೊತೆಯಲ್ಲಿದ್ದವರಿಗೆ, "ನಮ್ಮನ್ನು ಬಿಟ್ಟು
ಹೋದವರು ಯಾರೆಂಬುದನ್ನು ಲೆಕ್ಕ ಮಾಡಿನೋಡಿ," ಎಂದು ಆಜ್ಞಾಪಿಸಿದನು. ಅವರು ಲೆಕ್ಕಮಾಡಿ
ನೋಡುವಾಗ ಯೋನಾತಾನನೂ ಅವನ ಆಯುಧಗಳನ್ನು ಹೊರುವ ಸೇವಕನೂ ಇಲ್ಲದಿರುವುದು
ತಿಳಿದುಬಂದಿತು. 18ಅನಂತರ ಸೌಲನು ಅಹೀಯನಿಗೆ, " 'ಏಫೋದ'ನ್ನು ತೆಗೆದುಕೊಂಡು ಬಾ," ಎಂದು
ಆಜ್ಞಾಪಿಸಿದನು. (ಆ ದಿನದಂದು ಅಹೀಯನು ಇಸ್ರಯೇಲರ ಮುಂದೆ ಏಫೋದನ್ನು ಹೊತ್ತು
ನಡೆಯುತ್ತಿದ್ದನು). 19ಸೌಲನು ಯಾಜಕನೊಡನೆ ಮಾತಾಡುತ್ತಿರುವಷ್ಟರಲ್ಲೆ ಫಿಲಿಷ್ಟಿಯರ ಸೈನ್ಯದ ಗದ್ದಲವು
ಹೆಚ್ಚು ಹೆಚ್ಚಾಯಿತು. ಆದುದರಿಂದ ಅವನು ದಾಳಹಾಕುವ ಕೈ ನಿಲ್ಲಿಸೆಂದು ಯಾಜಕನಿಗೆ ಹೇಳಿ, 20ತನ್ನ
ಜೊತೆಯಲ್ಲಿದ್ದವರನ್ನು ಕೂಡಿಕೊಂಡು ಯುದ್ಧಕ್ಕೆ ಹೋದನು; ಅಷ್ಟರಲ್ಲಿ ಫಿಲಿಷ್ಟಿಯರ ಸೈನ್ಯದಲ್ಲಿ
ಗಲಿಬಿಲಿಯುಂಟಾಗಿ ಒಬ್ಬನನ್ನೊಬ್ಬನು ಕೊಂದುಹಾಕುತ್ತಿದ್ದನು. 21ಇದಲ್ಲದೆ, ಮುಂದಿನಿಂದಲೇ
ಫಿಲಿಷ್ಟಿಯರನ್ನು ಸೇರಿಕೊಂಡು ಅವರೊಡನೆ ಪಾಳೆಯದಲ್ಲಿದ್ದ ಹಿಬ್ರಿಯರು, ಸೌಲ–ಯೋನಾತಾನರ
ಜೊತೆಯಲ್ಲಿ ಬಂದ ಇಸ್ರಯೇಲರನ್ನು ಕೂಡಿಕೊಂಡರು. 22ಎಫ್ರಯಿಮ್ ಪರ್ವತ ಪ್ರಾಂತ್ಯದಲ್ಲಿ
ಅಡಗಿಕೊಂಡಿದ್ದ ಇಸ್ರಯೇಲರಿಗೆ ಫಿಲಿಷ್ಟಿಯರು ಓಡಿ ಹೋದರೆಂಬ ಸಮಾಚಾರ ಮುಟ್ಟಿದಾಗ ಅವರೂ
ಯುದ್ಧಕ್ಕೆ ಬಂದು ಅವರನ್ನು ಬೆನ್ನಟ್ಟಿದರು. 23ಹೀಗೆ ಸರ್ವೇಶ್ವರ ಆ ದಿನದಲ್ಲಿ ಇಸ್ರಯೇಲರಿಗೆ
ಜಯವನ್ನುಂಟುಮಾಡಿದರು. ಯುದ್ಧ ಬೇತಾವೆನಿನ ಆಚೆಯ ತನಕ ನಡೆಯಿತು.
24 ಆ ದಿವಸ ಸೌಲನು ಇಸ್ರಯೇಲರಿಗೆ, "ಶತ್ರುಗಳಿಗೆ ಮುಯ್ಯಿತೀರಿಸುವುದಕ್ಕಾಗಿ ನಿಮ್ಮಲ್ಲಿ
ಒಬ್ಬನಾದರೂ ಸಾಯಂಕಾಲದವರೆಗೆ ಊಟ ಮಾಡಬಾರದು; ಮಾಡಿದವನು ಶಾಪಗ್ರಸ್ತ," ಎಂದು
ಆಣೆಯಿಟ್ಟಿದ್ದರಿಂದ ಅಂದು ಅವರೆಲ್ಲರೂ ಬಹಳವಾಗಿ ಬಳಲಿಹೋಗಿದ್ದರು. ಒಬ್ಬನಾದರೂ
ಆಹಾರಪದಾರ್ಥವನ್ನು ರುಚಿಸಿರಲಿಲ್ಲ. 25ಜನರೆಲ್ಲರೂ ನೆಲಜೇನು ಇರುವ ಕಾಡಿಗೆ ಬಂದರು. 26ಅವರು
ಅಲ್ಲಿ ಜೇನುತುಪ್ಪ ಹರಿಯುವುದನ್ನು ಕಂಡರೂ ಶಾಪಕ್ಕೆ ಭಯಪಟ್ಟು ಯಾವನೂ ಅದನ್ನು ಬಾಯಿಗೆ
ಹಾಕಲಿಲ್ಲ. 27ಯೋನಾತಾನನಿಗೆ ತನ್ನ ತಂದೆ ಜನರಿಗೆ ಆಣೆಯಿಟ್ಟು ಹೇಳಿದ್ದು ಗೊತ್ತಿರಲಿಲ್ಲದ್ದರಿಂದ ಅವನು
ತನ್ನ ಕೋಲನ್ನು ಜೇನುಹುಟ್ಟಿನಲ್ಲಿ ಚುಚ್ಚಿ ಕೈಯಿಂದ ತೆಗೆದು ತಿಂದನು. ಕೂಡಲೆ ಅವನ ಕಣ್ಣುಗಳು
ಕಳೆಗೊಂಡವು. 28ಒಡನೆ ಒಬ್ಬನು ಅವನಿಗೆ, "ಈ ದಿನ ಊಟ ಮಾಡುವಂಥವರು ಶಾಪಗ್ರಸ್ಥರಾಗುವರೆಂದು
ನಿನ್ನ ತಂದೆ ಆಣೆಯಿಟ್ಟು ಹೇಳಿದ್ದಾರೆ," ಎಂದು ತಿಳಿಸಿದನು. ಜನರು ಬಹಳವಾಗಿ ಬಳಲಿ ಹೋದುದನ್ನು
ಕಂಡು ಯೋನಾತಾನನು ಆ ವ್ಯಕ್ತಿಗೆ, 29"ನನ್ನ ತಂದೆ ನಾಡಿಗೆ ನಷ್ಟವನ್ನುಂಟು ಮಾಡಿದ್ದಾರೆ; ನಾನು ಸ್ವಲ್ಪ
ಜೇನುತುಪ್ಪವನ್ನು ತಿಂದುದರಿಂದ ನನ್ನ ಕಣ್ಣುಗಳು ಹೇಗೆ ಕಳೆಗೊಂಡಿರುತ್ತವೆ ನೋಡು; 30ಜನರು ತಾವು
ಇಂದು ಶತ್ರುಗಳಿಂದ ಸುಲಿದುಕೊಂಡ ಆಹಾರವನ್ನು ಯಥೇಚ್ಛವಾಗಿ ಊಟಮಾಡಿದ್ದರೆ ಅವರು ಇನ್ನಷ್ಟು
ಬಲಗೊಳ್ಳುತ್ತಿದ್ದರು. ಫಿಲಿಷ್ಟಿಯರಲ್ಲಿ ಹತರಾಗದವರು ಇನ್ನೂ ಹೆಚ್ಚು ಮಂದಿ ಇದ್ದಾರೆ," ಎಂದನು. 31ಆ
ದಿನ ಜನರು ಮಿಕ್ಮಾಷಿನಿಂದ ಅಯ್ಯಾಲೋನಿನವರೆಗೆ ಫಿಲಿಷ್ಟಿಯರನ್ನು ಹೊಡೆದು ಬಹಳವಾಗಿ ದಣಿದಿದ್ದರು.
32ಆದ್ದರಿಂದ ಅವರು ತಾವು ಕೊಳ್ಳೆಮಾಡಿದ ಎತ್ತು, ಕುರಿ, ಕರು ಇವುಗಳನ್ನು ಹಿಡಿದು ನೆಲದ ಮೇಲೆಯೇ
ಕೊಂದು ಮಾಂಸದೊಡನೆ ರಕ್ತವನ್ನೂ ತಿಂದರು. 33ಆಗ ಕೆಲವರು ಸೌಲನಿಗೆ, "ನೋಡಿ, ಜನರು ರಕ್ತವನ್ನು
ಭುಜಿಸಿ ಸರ್ವೇಶ್ವರನಿಗೆ ವಿರುದ್ಧ ಪಾಪಮಾಡುತ್ತಿದ್ದಾರೆ," ಎಂದು ತಿಳಿಸಿದರು. ಅವನು, "ಇದು
ಮಹಾಪಾತಕವೇ ಸರಿ; ನೀವು ಬೇಗನೆ ನನ್ನ ಬಳಿಗೆ ಒಂದು ದೊಡ್ಡ ಕಲ್ಲನ್ನು ಹೊರಳಿಸಿ ತಂದಿಡಿ; 34ಬಳಿಕ
ಜನರ ಬಳಿಗೆ ಹೋಗಿ ಅವರಿಗೆ, 'ರಕ್ತವನ್ನು ಭುಜಿಸಿ ಸರ್ವೇಶ್ವರನಿಗೆ ವಿರುದ್ಧ ಪಾಪಮಾಡಬೇಡಿ, ನಿಮ್ಮ
ನಿಮ್ಮ ಎತ್ತು ಕುರಿಗಳನ್ನು ಇಲ್ಲಿಗೆ ತಂದು ಕೊಂದು ತಿನ್ನಿ,' ಎಂದು ಹೇಳಿ," ಎಂದನು. ಹಾಗೆಯೇ ಜನರೆಲ್ಲರು
ತಮ್ಮ ತಮ್ಮ ಎತ್ತು ಕುರಿಗಳನ್ನು ಅದೇ ರಾತ್ರಿ ಅಲ್ಲಿಗೆ ತಂದು ಕೊಂದು ತಿಂದರು. 35ಸೌಲನು

ಸರ್ವೇಶ್ವರಸ್ವಾಮಿಗೆ ಒಂದು ಬಲಿಪೀಠವನ್ನು ಕಟ್ಟಿಸಿದನು; ಅವನು ಕಟ್ಟಿಸಿದ ಬಲಿಪೀಠಗಳಲ್ಲಿ ಇದೇ ಮೊದಲನೆಯದು.

## ಸೌಲನ ಮೂರ್ಖತನ

36 ಸೌಲನು ತನ್ನ ಸೈನಿಕರನ್ನು, "ಬನ್ನಿ, ನಾವು ಈ ರಾತ್ರಿಯಲ್ಲೇ ಫಿಲಿಷ್ಟಿಯರನ್ನು ಬೆನ್ನಟ್ಟಿ ಬೆಳಗಾಗುವವರೆಗೆ ಅವರನ್ನು ಸುಲಿದುಕೊಂಡು ಒಬ್ಬನನ್ನೂ ಉಳಿಸದೆ ಕೊಂದುಹಾಕೋಣ," ಎಂದು ಕರೆದನು. ಅವರು, "ನಿಮ್ಮ ಇಷ್ಟದಂತೆ ಆಗಲಿ," ಎಂದು ಹೇಳಿದರು. ಆದರೆ ಯಾಜಕನು, "ಇತ್ತ ಬನ್ನಿ; ನಾವು ದೇವರನ್ನು ವಿಚಾರಿಸೋಣ," ಎಂದನು. [37]ಸೌಲನು, "ದೇವಾ, ನಾವು ಫಿಲಿಷ್ಟಿಯರನ್ನು ಬೆನ್ನಟ್ಟಬಹುದೇ? ನೀವು ಅವರನ್ನು ಇಸ್ರಯೇಲರ ಕೈಗೆ ಒಪ್ಪಿಸಿಕೊಡುವಿರೋ?" ಎಂದು ಕೇಳಿಕೊಂಡನು. ಆದರೆ ಸರ್ವೇಶ್ವರ ಅವನಿಗೆ ಆ ದಿನ ಉತ್ತರ ಕೊಡಲೇ ಇಲ್ಲ. [38]ಆಗ ಸೌಲನು ಜನರ ಮುಖಂಡರಿಗೆ, "ನೀವೆಲ್ಲರೂ ಇಲ್ಲಿಗೆ ಬಂದು, ಈ ದಿನ ಎಲ್ಲಿ ಪಾಪಕೃತ್ಯ ನಡೆದಿದೆ ಎಂದು ವಿಚಾರಿಸಿ ಗುರುತು ಹಚ್ಚಿರಿ. [39]ಇಸ್ರಯೇಲರ ರಕ್ಷಕನಾದ ಸರ್ವೇಶ್ವರನ ಆಣೆ, ಪಾಪ ಮಾಡಿದವರು ಯಾರೇ ಆಗಿರಲಿ, ಮಗನಾದ ಯೋನಾತಾನನಾಗಿದ್ದರೂ ಸರಿಯೇ, ಅವನು ಸಾಯಲೇಬೇಕು," ಎಂದು ಹೇಳಿದನು. ಜನರು ಏನೂ ಮಾತಾಡದೆ ಮೌನವಾಗಿದ್ದರು. [40]ಆಗ ಸೌಲನು ಅವರಿಗೆ, "ನೀವೆಲ್ಲರೂ ಒಂದು ಕಡೆ ನಿಲ್ಲಿರಿ; ನಾನೂ ನನ್ನ ಮಗ ಯೋನಾತಾನನೂ ಮತ್ತೊಂದು ಕಡೆಯಲ್ಲಿರುವೆವು," ಎಂದನು. ಅವರು, "ನಿಮ್ಮ ಇಷ್ಟದಂತೆ ಆಗಲಿ," ಎಂದರು.

41 ಅನಂತರ ಸೌಲನು, "ಇಸ್ರಯೇಲ್ ದೇವರೇ, ಸತ್ಯವನ್ನು ತಿಳಿಸಿ," ಎಂದು ಸರ್ವೇಶ್ವರನನ್ನು ಪ್ರಾರ್ಥಿಸಿ ಚೀಟುಹಾಕಿದನು. ಅದು ಅವನಿಗೂ ಯೋನಾತಾನನಿಗೂ ಬಂದಿತು. ಜನರು ಪಾರಾದರು. [42]ಸೌಲನು ಮತ್ತೆ, "ನಮ್ಮಿಬ್ಬರೊಳಗೆ ಚೀಟು ಹಾಕಿ," ಎಂದು ಹೇಳಿದನು. ಹಾಗೆಯೇ ಮಾಡಿದಾಗ ಚೀಟು ಯೋನಾತಾನನಿಗೆ ಬಿದ್ದಿತು. [43]ಆಗ ಸೌಲನು ಯೋನಾತಾನನ್ನು "ನೀನು ಏನು ಮಾಡಿದೆ, ಹೇಳು," ಎಂದು ಕೇಳಿದನು. ಅವನು, "ನಾನು ಕೋಲಿನಿಂದ ಸ್ವಲ್ಪ ಜೇನುತುಪ್ಪವನ್ನು ತೆಗೆದುಕೊಂಡು ತಿಂದೆ; ಸಾಯುವುದಕ್ಕೆ ಸಿದ್ಧನಾಗಿದ್ದೇನೆ," ಎಂದು ಉತ್ತರಕೊಟ್ಟನು.

44 ಅದಕ್ಕೆ ಸೌಲನು, "ಯೋನಾತಾನನೇ, ನಾನು ನಿನ್ನನ್ನು ಕೊಲ್ಲದೆ ಬಿಟ್ಟರೆ ದೇವರು ನನಗೆ ಬೇಕಾದದ್ದನ್ನು ಮಾಡಲಿ," ಎಂದನು. [45]ಜನರು ಅವನಿಗೆ, "ದೇವರ ಸಹಾಯದಿಂದ ಈ ದಿನ ಇಸ್ರಯೇಲರಿಗೆ ಮಹಾಜಯವನ್ನುಂಟು ಮಾಡಿದ ಯೋನಾತಾನನು ಸಾಯಬೇಕೇ? ಕೂಡದು; ಸರ್ವೇಶ್ವರನಾಣೆ. ಅವನ ತಲೆಗೂದಲುಗಳಲ್ಲಿ ಒಂದನ್ನೂ ನೆಲಕ್ಕೆ ಬೀಳಿಸಬಾರದು," ಎಂದು ಹೇಳಿ ಪ್ರಾಯಶ್ಚಿತ್ತವನ್ನು ಕೊಟ್ಟು ಅವನನ್ನು ಬಿಡಿಸಿದರು. [46]ಸೌಲನು ಆಮೇಲೆ ಫಿಲಿಷ್ಟಿಯರನ್ನು ಹಿಂದಟ್ಟದೆ ತನ್ನ ಮನೆಗೆ ಹೋದನು. ಫಿಲಿಷ್ಟಿಯರೂ ತಮ್ಮ ಪ್ರಾಂತ್ಯಕ್ಕೆ ಹೋದರು.

## ಸೌಲನ ಆಳ್ವಿಕೆ ಮತ್ತು ಕುಟುಂಬ

47 ಸೌಲನು ಇಸ್ರಯೇಲರ ಅರಸನಾದ ಮೇಲೆ ಅವನು ಸುತ್ತಲಿನ ವೈರಿಗಳಾದ ಮೋವಾಬ್ಯರು, ಅಮ್ಮೋನಿಯರು, ಎದೋಮ್ಯರು, ಚೋಬದ ಅರಸರು, ಫಿಲಿಷ್ಟಿಯರು ಇವರೊಡನೆ ಯುದ್ಧಮಾಡಿದನು. ಹೋದಕಡೆಯಲ್ಲೆಲ್ಲಾ ಜಯವನ್ನೇ ಹೊಂದಿದನು. [48]ಇದಲ್ಲದೆ ಅವನು, ಸುಲಿಗೆ ಮಾಡುವವರಾದ ಅಮಾಲೇಕ್ಯರಿಗೆ ವಿರೋಧವಾಗಿ ದಂಡೆತ್ತಿ ಹೋಗಿ, ಅವರನ್ನು ಸದೆಬಡಿದು ಇಸ್ರಯೇಲರನ್ನು ಅವರ ಕೈಗೆ ಸಿಕ್ಕದಂತೆ ತಪ್ಪಿಸಿದನು.

49 ಸೌಲನ ಗಂಡುಮಕ್ಕಳ ಹೆಸರು ಇವು: ಯೋನಾತಾನ್, ಇಷ್ವಿ ಹಾಗು ಮಲ್ಕೀಷೂವ; ಅವನ ಹೆಣ್ಣುಮಕ್ಕಳ ಹೆಸರು ಮೇರಬ್ ಹಾಗು ಮಿಕಲ್. [50]ಅಹೀಮಾಚನ ಮಗಳಾದ ಅಹೀನೋವಮಳು ಅವನ ಹೆಂಡತಿ; ನೇರನ ಮಗನಾದ ಅಬ್ನೇರನು ಅವನ ಸೇನಾಪತಿ; ನೇರನು ಸೌಲನ ಚಿಕ್ಕಪ್ಪನು. [51]ಸೌಲನ ತಂದೆಯಾದ ಕೀಷನೂ ಅಬ್ನೇರನ ತಂದೆಯಾದ ನೇರನೂ ಅಬೀಯೇಲನ ಮಕ್ಕಳು.

52 ಸೌಲನ ಜೀವಮಾನದಲ್ಲೆಲ್ಲಾ ಫಿಲಿಷ್ಟಿಯರಿಗೂ ಇಸ್ರಯೇಲರಿಗೂ ಘೋರ ಯುದ್ಧ
ಇದ್ದುದರಿಂದ ಅವನು ಎಲ್ಲಿಯಾದರೂ ಒಬ್ಬ ಬಲಿಷ್ಠನೂ ಪರಾಕ್ರಮಶಾಲಿಯೂ ಆದ ಮನುಷ್ಯನನ್ನು
ಕಂಡಕೂಡಲೆ, ಅವನನ್ನು ತನ್ನ ಸೈನ್ಯಕ್ಕೆ ಸೇರಿಸಿಕೊಳ್ಳುತ್ತಿದ್ದನು.

## ಅಮಾಲೇಕ್ಯರೊಡನೆ ಯುದ್ಧ

**15** ಸಮುವೇಲನು ಸೌಲನಿಗೆ, “ಸರ್ವೇಶ್ವರಸ್ವಾಮಿ ನಿನ್ನನ್ನು ತಮ್ಮ ಪ್ರಜೆಗಳಾದ ಇಸ್ರಯೇಲರ ಮೇಲೆ
ಅರಸನನ್ನಾಗಿ ಅಭಿಷೇಕಿಸುವುದಕ್ಕಾಗಿ ನನ್ನನ್ನೇ ಕಳುಹಿಸಿದರು ಅಲ್ಲವೆ?” ಅವರು ಈಗ ಹೇಳುವುದನ್ನು
ಕೇಳು; 2“ಇಸ್ರಯೇಲರು ಈಜಿಪ್ಟಿನಿಂದ ಬರುತ್ತಿರುವಾಗ ದಾರಿಯಲ್ಲಿ ಅಮಾಲೇಕ್ಯರು ಅವರಿಗೆ ವಿರೋಧವಾಗಿ
ನಿಂತು ತೊಂದರೆಪಡಿಸಿದರು. ಆದ್ದರಿಂದ ನಾನು ಅವರಿಗೆ ಮುಯ್ಯಿತೀರಿಸುವೆನು. 3ಈಗ ನೀನು ಹೋಗಿ
ಅವರನ್ನು ಸೋಲಿಸಿ ಅವರಿಗಿರುವುದನ್ನೆಲ್ಲಾ ಸಂಪೂರ್ಣವಾಗಿ ಹಾಳುಮಾಡು. ಗಂಡಸರನ್ನು, ಹೆಂಗಸರನ್ನು,
ಮಕ್ಕಳನ್ನು, ಶಿಶುಗಳನ್ನು ಹಾಗು ಎತ್ತು, ಕುರಿ, ಕತ್ತೆ, ಒಂಟೆ ಇವುಗಳನ್ನೂ ಉಳಿಸದೆ ಕೊಂದುಹಾಕು ಎಂದು
ಹೇಳುತ್ತಾರೆ ಸೇನಾಧೀಶ್ವರರಾದ ಸರ್ವೇಶ್ವರ,” ಎಂದನು.
4 ಸೌಲನು ತೆಲಾಯಿಮಿನಲ್ಲಿ ಸೈನ್ಯವನ್ನು ಕೂಡಿಸಿ, ಲೆಕ್ಕ ತೆಗೆದನು. ಅದರಲ್ಲಿ ಎರಡು ಲಕ್ಷ ಮಂದಿ
ಕಾಲಾಳುಗಳು ಇದ್ದರು; ಯೆಹೂದ್ಯರು ಹತ್ತುಸಾವಿರ ಮಂದಿ ಇದ್ದರು. 5ಅವನು ಇವರೊಡನೆ ಅಮಾಲೇಕ್ಯರ
ರಾಜಧಾನಿಯ ಬಳಿಗೇ ಹೋಗಿ ಅಲ್ಲಿನ ಒಂದು ತಗ್ಗಿನಲ್ಲಿ ಹೊಂಚುಹಾಕುತ್ತಿದ್ದನು. 6ಆದರೆ ಕೇನ್ಯರಿಗೆ ಅವನು,
“ನೀವು ಅಮಾಲೇಕ್ಯರನ್ನು ಬಿಟ್ಟು ಹೋಗಿ; ಇಲ್ಲವಾದರೆ ನೀವೂ ಅವರೊಡನೆ ನಾಶವಾದೀರಿ; ಇಸ್ರಯೇಲರು
ಈಜಿಪ್ಟಿನಿಂದ ಬರುತ್ತಿದ್ದಾಗ ನೀವು ಅವರಿಗೆ ದಯೆತೋರಿಸಿದಿರ ಅಲ್ಲವೆ?” ಎಂದು ಹೇಳಿ ಕಳುಹಿಸಿದನು.
ಅದರಂತೆಯೇ ಅವರು ಅಮೇಲೇಕ್ಯರನ್ನು ಬಿಟ್ಟು ಹೋದರು. 7ಆಗ ಸೌಲನು ಅಮಾಲೇಕ್ಯರನ್ನು ಹವೀಲಾ
ಪ್ರಾಂತ್ಯದಿಂದ ಈಜಿಪ್ಟಿನ ಪೂರ್ವದಿಕ್ಕಿನಲ್ಲಿರುವ ಶೂರಿನವರೆಗೂ ಸದೆಬಡಿಯುತ್ತಾ ಹೋದನು. 8ಅವರ
ಅರಸನಾದ ಅಗಾಗನನ್ನು ಜೀವಂತವಾಗಿ ಹಿಡಿದು ಜನರೆಲ್ಲರನ್ನು ಕತ್ತಿಯಿಂದ ಸಂಹರಿಸಿದನು. 9ಸೌಲನು
ಹಾಗು ಇಸ್ರಯೇಲರು ಅಗಾಗನನ್ನು ಮಾತ್ರವಲ್ಲ, ಮೇಲ್ತರದ ಕುರಿದನಗಳನ್ನು, ಕುರಿಮರಿಗಳನ್ನು, ಕೊಬ್ಬಿದ
ಪಶುಗಳನ್ನು ಹಾಗು ಶ್ರೇಷ್ಠವಾದ ಎಲ್ಲ ಪದಾರ್ಥಗಳನ್ನು ನಾಶಮಾಡಲು ಮನಸ್ಸಿಲ್ಲದೆ ಉಳಿಸಿ
ಪ್ರಯೋಜನವಿಲ್ಲದಂಥ ಹೀನವಾದವುಗಳನ್ನೆಲ್ಲ ನಾಶಮಾಡಿಬಿಟ್ಟರು.

## ಅರಸನಾದ ಸೌಲ ತಿರಸ್ಕೃತ

10-11 ಸರ್ವೇಶ್ವರ ಸಮುವೇಲನಿಗೆ, “ಸೌಲನನ್ನು ಅರಸನನ್ನಾಗಿ ಮಾಡಿದ್ದಕ್ಕೆ ಈಗ ವಿಷಾದಿಸುತ್ತೇನೆ.
ಅವನು ನನಗೆ ವಿಮುಖನಾಗಿದ್ದಾನೆ. ನನ್ನ ಆಜ್ಞೆಗಳನ್ನು ನೆರವೇರಿಸುವುದಿಲ್ಲ,” ಎಂದು ಹೇಳಿದರು.
ಸಮುವೇಲನು ಸಿಟ್ಟುಗೊಂಡು ರಾತ್ರಿಯೆಲ್ಲಾ ಸರ್ವೇಶ್ವರನಿಗೆ ಮೊರೆಯಿಟ್ಟನು. 12ಬೆಳಿಗ್ಗೆ ಎದ್ದು ಸೌಲನನ್ನು
ನೋಡುವುದಕ್ಕೆ ಹೊರಟನು. ಸೌಲನು ಕರ್ಮೆಲಿಗೆ ಹೋಗಿ ಅಲ್ಲಿ ತನಗಾಗಿ ಒಂದು ಜ್ಞಾಪಕಸ್ತಂಭವನ್ನು
ನಿಲ್ಲಿಸಿ, ಅಲ್ಲಿಂದ ದಿಬ್ಬ ಇಳಿದು ಗಿಲ್ಗಾಲಿಗೆ ಹೋದನು ಎಂಬ ಸಮಾಚಾರ ಸಿಕ್ಕಿತು. 13ಸಮುವೇಲನು ಅಲ್ಲಿಗೂ
ಹೋದನು. ಸೌಲನು ಅವನನ್ನು ಕಂಡು, “ಸರ್ವೇಶ್ವರ ನಿನ್ನನ್ನು ಹರಸಲಿ! ನಾನು ಅವರ ಅಪ್ಪಣೆಯನ್ನು
ನೆರವೇರಿಸಿದ್ದೇನೆ,” ಎಂದನು. 14ಅದಕ್ಕೆ ಸಮುವೇಲನು, “ಹಾಗಾದರೆ ಇದೇನು? ಕುರಿಗಳ ಕೂಗು ನನ್ನ
ಕಿವಿಗೆ ಬೀಳುತ್ತಿದೆ, ದನಗಳ ಶಬ್ದವು ನನಗೆ ಕೇಳಿಸುತ್ತಿದೆ,” ಎಂದನು. 15ಸೌಲನು, “ಜನರು ನಿಮ್ಮ ದೇವರಾದ
ಸರ್ವೇಶ್ವರನಿಗೆ ಬಲಿಸಲ್ಲಿಸುವುದಕ್ಕಾಗಿ ಅಮಾಲೇಕ್ಯರ ಕುರಿದನಗಳಲ್ಲಿ ಮೇಲ್ತರದವುಗಳನ್ನು ಉಳಿಸಿ
ತಂದಿದ್ದಾರೆ; ಮಿಕ್ಕವುಗಳನ್ನೆಲ್ಲಾ ಸಂಪೂರ್ಣವಾಗಿ ನಾಶಮಾಡಿದೆವು,” ಎಂದು ಉತ್ತರಕೊಟ್ಟನು. 16ಆಗ
ಸಮುವೇಲನು, “ಅದಿರಲಿ; ಸರ್ವೇಶ್ವರ ಕಳೆದ ರಾತ್ರಿ ನನಗೆ ಹೇಳಿದ್ದನ್ನು ತಿಳಿಸುತ್ತೇನೆ ಕೇಳು,” ಎಂದನು.
ಅವನು, “ಹೇಳು” ಎನ್ನಲು ಸಮುವೇಲನು, 17“ನೀನು ನಿನ್ನ ದೃಷ್ಟಿಯಲ್ಲಿ ಅಲ್ಪನಾಗಿದ್ದರೂ ಸರ್ವೇಶ್ವರ ನಿನಗೆ
ಇಸ್ರಯೇಲರಲ್ಲಿ ರಾಜಾಭಿಷೇಕ ಮಾಡಿದ್ದರಿಂದ ನೀನು ಎಲ್ಲಾ ಕುಲಗಳಿಗೆ ಶಿರಸ್ಸಾದೆ. 18ಅವರು ನಿನಗೆ,
‘ಹೊರಟು ಹೋಗಿ ದುಷ್ಟರಾದ ಅಮಾಲೇಕ್ಯರೊಡನೆ ಯುದ್ಧಮಾಡಿ ಅವರೆಲ್ಲರನ್ನೂ ಸಂಪೂರ್ಣವಾಗಿ

ನಾಶಮಾಡು' ಎಂದು ಹೇಳಿದರು. [19]ಆದರೆ ನೀನು ಸರ್ವೇಶ್ವರನ ಮಾತನ್ನು ಕೇಳದೆ, ಕೊಳ್ಳೆಗಾಗಿ
ಮನಸೋತು, ಅವರಿಗೆ ದ್ರೋಹಮಾಡಿದ್ದೇಕೆ?" ಎಂದನು. [20]ಆಗ ಸೌಲನು ಸಮುವೇಲನಿಗೆ, "ಏನು?
ನಾನು ಸರ್ವೇಶ್ವರನ ಮಾತನ್ನು ಕೇಳಲಿಲ್ಲವೇ? ಅವರು ಕಳುಹಿಸಿದಲ್ಲಿಗೆ ಹೋಗಿ ಅಮಾಲೇಕ್ಯರನ್ನೆಲ್ಲ
ಸಂಹರಿಸಿ ಅವರ ಅರಸನಾದ ಅಗಾಗನನ್ನು ಹಿಡಿದುತಂದೆ. [21]ಆದರೆ ಜನರು ಸಂಪೂರ್ಣವಾಗಿ
ಸಂಹರಿಸಬೇಕಾದ ಕೊಳ್ಳೆಯಲ್ಲಿ ಉತ್ತಮವಾದ ಕುರಿದನಗಳನ್ನು ನಿಮ್ಮ ದೇವರಾದ ಸರ್ವೇಶ್ವರನಿಗೆ
ಗಿಲ್ಗಾಲಿನಲ್ಲಿ ಬಲಿಯರ್ಪಣೆ ಮಾಡುವುದಕ್ಕಾಗಿ ಉಳಿಸಿ ತಂದರು," ಎಂದು ಉತ್ತರಕೊಟ್ಟನು.

22 ಅದಕ್ಕೆ ಸಮುವೇಲನು ಇಂತೆಂದನು:
"ವಿಧೇಯತೆಯನ್ನು ಮೆಚ್ಚುವಷ್ಟು
ಬಲಿ ಹೋಮಗಳನ್ನು ಮೆಚ್ಚು
ತ್ತಾರೆಯೇ ಸರ್ವೇಶ್ವರಾ? ಇಲ್ಲ.
ಬಲಿಯರ್ಪಣೆಗಿಂತ ಆಜ್ಞಾಪಾಲನೆ
ಶ್ರೇಷ್ಠ;
ಟಗರುಗಳ ಕೊಬ್ಬಿಗಿಂತ ವಿಧೇಯತೆ
ವಿಶಿಷ್ಟ.
23 ತಂತ್ರಮಂತ್ರಗಳಷ್ಟೇ ಕೆಟ್ಟದು ಪ್ರತಿಭಟನೆ
ಕಳ್ಳಭಕ್ತಿಗೂ ವಿಗ್ರಹಾರಾಧನೆಗೂ ಸಮಾನ
ಹಟಮಾರಿತನ
ನೀ ತಳ್ಳಿಬಿಟ್ಟೆ ಸರ್ವೇಶ್ವರನ ಆದೇಶವನ್ನು;
ತಳ್ಳಿಬಿಟ್ಟರವರು ನಿನ್ನ ಅರಸುತನವನ್ನು"

ಎಂದು ನುಡಿದನು. [24]ಸೌಲನು ಸಮುವೇಲನಿಗೆ, "ನಾನು ಸರ್ವೇಶ್ವರನ ಮತ್ತು ನಿಮ್ಮ ಆಜ್ಞೆಗಳನ್ನು ಮೀರಿ
ಪಾಪಮಾಡಿದ್ದೇನೆ; ಜನರಿಗೆ ಹೆದರಿ ಅವರ ಮಾತನ್ನು ಕೇಳಿದೆ. [25]ದಯವಿಟ್ಟು ನನ್ನ ಪಾಪವನ್ನು ಕ್ಷಮಿಸಿ;
ನಾನು ಸರ್ವೇಶ್ವರನನ್ನು ಆರಾಧಿಸುವಂತೆ ಹಿಂದಿರುಗಿ ನನ್ನ ಜೊತೆಯಲ್ಲೇ ಬನ್ನಿ," ಎಂದು ಅವನನ್ನು
ಬೇಡಿಕೊಂಡನು. [26]ಅದಕ್ಕೆ ಸಮುವೇಲನು, "ನಾನು ಹಿಂದಿರುಗಿ ನಿನ್ನ ಜೊತೆಯಲ್ಲಿ ಬರುವುದಿಲ್ಲ; ನೀನು
ಸರ್ವೇಶ್ವರನ ಮಾತನ್ನು ತಳ್ಳಿಬಿಟ್ಟದ್ದರಿಂದ ಅವರು ನಿನ್ನನ್ನು ಇಸ್ರಯೇಲರ ಅರಸುತನದಿಂದ ತಳ್ಳಿಬಿಟ್ಟಿದ್ದಾರೆ,"
ಎಂದು ಹೇಳಿ ಹಿಂದಿರುಗಿ ಅಲ್ಲಿಂದ ಹೊರಟನು. [27]ಆದರೆ ಸೌಲನು ಅವನ ಮೇಲಂಗಿಯ ಅಂಚನ್ನು
ಹಿಡಿದು ಎಳೆದನು; ಅದು ಹರಿದುಹೋಯಿತು. [28]ಆಗ ಸಮುವೇಲನು ಅವನಿಗೆ, "ಸರ್ವೇಶ್ವರ ಈ ದಿನ
ಇಸ್ರಯೇಲ್ ರಾಜ್ಯವನ್ನು ನಿನ್ನಿಂದ ಕಿತ್ತು ನಿನಗಿಂತ ಉತ್ತಮವಾದ ಇನ್ನೊಬ್ಬನಿಗೆ ಕೊಟ್ಟಿದ್ದಾರೆ.
[29]ಇಸ್ರಯೇಲರ ನಿತ್ಯಾಧಾರವಾದ ಅವರು ಸುಳ್ಳಾಡುವವರಲ್ಲ; ಮಾತನ್ನು ಹಿಂತೆಗೆದುಕೊಳ್ಳುವವರಲ್ಲ;
ಏಕೆಂದರೆ ಅವರು ಮನಸ್ಸು ಬದಲಾಯಿಸುವಂಥ ಮನುಷ್ಯರಲ್ಲ," ಎಂದು ಹೇಳಿದನು. [30]ಅದಕ್ಕೆ ಸೌಲನು,
"ನಾನು ಪಾಪ ಮಾಡಿದ್ದೇನೆ; ದಯವಿಟ್ಟು ಇಸ್ರಯೇಲರ ಮುಂದೆ ಹಾಗು ಜನರ ಹಿರಿಯರ ಮುಂದೆ ನನ್ನ
ಮಾನವನ್ನು ಉಳಿಸಿ; ನಾನು ನಿಮ್ಮ ದೇವರಾದ ಸರ್ವೇಶ್ವರಸ್ವಾಮಿಯನ್ನು ಆರಾಧಿಸಲು ಶಕ್ತನಾಗುವಂತೆ
ಹಿಂದಿರುಗಿ ನನ್ನ ಜೊತೆಯಲ್ಲೇ ಬನ್ನಿ," ಎಂದು ಬೇಡಿಕೊಂಡನು. [31]ಆಗ ಸಮುವೇಲನು ಹಿಂದಿರುಗಿ ಸೌಲನ
ಜೊತೆಯಲ್ಲೇ ಹೋದನು. ಸೌಲನು ದೇವರನ್ನು ಆರಾಧಿಸಿದನು.

32 ತರುವಾಯ ಸಮುವೇಲನು ಅಮಾಲೇಕ್ಯರ ಅರಸನಾದ ಅಗಾಗನನ್ನು ತನ್ನ ಬಳಿಗೆ
ಬರಹೇಳಿದನು. ಅಗಾಗನು ಮರಣಭಯ ತಪ್ಪಿತೆಂದು ನೆನೆಸಿಕೊಂಡು ಸಂತೋಷದಿಂದ ಅವನ ಹತ್ತಿರ
ಬಂದನು. [33]ಆದರೆ ಸಮುವೇಲನು ಅವನಿಗೆ: "ನಿನ್ನ ಕತ್ತಿ ಪುತ್ರಶೋಕವನ್ನುಂಟುಮಾಡಿತು ಅನೇಕ
ಸ್ತ್ರೀಯರಿಗೆ; ನಿನ್ನ ತಾಯಿ ಸವಿಯಲಿ ಆ ಶೋಕವನು ಎಲ್ಲರಿಗೂ ಹೆಚ್ಚಿಗೆ" ಎಂದು ಹೇಳಿ ಅಗಾಗನನ್ನು
ಗಿಲ್ಗಾಲಿನಲ್ಲಿ ಸರ್ವೇಶ್ವರನ ಸನ್ನಿಧಿಯಲ್ಲೇ ಕಡಿದು ಹಾಕಿದನು. [34]ಅನಂತರ ಸಮುವೇಲನು ರಾಮಾಕ್ಕೆ
ಹೋದನು; ಇತ್ತ ಸೌಲನು ತನ್ನ ಊರಾದ ಗಿಬೆಯಲ್ಲಿದ್ದ ಮನೆಗೆ ತೆರಳಿದನು. [35]ಸಮುವೇಲನು
ಜೀವದಿಂದಿರುವವರೆಗೂ ಸೌಲನನ್ನು ನೋಡಲು ಹೋಗಲಿಲ್ಲ. ಸೌಲನನ್ನು ಇಸ್ರಯೇಲರ ಅರಸನನ್ನಾಗಿ

ಮಾಡಿದ್ದಕ್ಕಾಗಿ ಸರ್ವೇಶ್ವರ ವಿಷಾದಿಸಿದರು; ಈ ಕಾರಣ ಸಮುವೇಲನು ಅವನ ವಿಷಯದಲ್ಲಿ ದುಃಖಪಡುತ್ತಿದ್ದನು.

### ಸೌಲನು ಮತ್ತು ದಾವೀದನು ಸಮುವೇಲನಿಂದ ದಾವೀದನಿಗೆ ರಾಜಾಭಿಷೇಕ

**16** ಸರ್ವೇಶ್ವರಸ್ವಾಮಿ ಸಮುವೇಲನಿಗೆ, "ನಾನು ಸೌಲನನ್ನು ಇಸ್ರಯೇಲರ ಅರಸನಾಗಿರುವುದಕ್ಕೆ
ಅಯೋಗ್ಯನೆಂದು ತಳ್ಳಿಬಿಟ್ಟೆನಲ್ಲವೆ? ನೀನು ಅವನಿಗಾಗಿ ಎಷ್ಟರವರೆಗೆ ದುಃಖಿಸುತ್ತಿರುವೆ? ಕೊಂಬನ್ನು
ಎಣ್ಣೆಯಿಂದ ತುಂಬಿಸಿಕೊಂಡು ಬಾ; ನಾನು ನಿನ್ನನ್ನು ಬೆತ್ಲೆಹೇಮಿನವನಾದ ಜೆಸ್ಸೆಯನ ಬಳಿಗೆ ಕಳುಹಿಸುತ್ತೇನೆ.
ಅವನ ಮಕ್ಕಳಲ್ಲೊಬ್ಬನನ್ನು ಅರಸನನ್ನಾಗಿ ಆರಿಸಿಕೊಂಡಿದ್ದೇನೆ," ಎಂದು ಹೇಳಿದರು. [2]ಅದಕ್ಕೆ ಸಮುವೇಲನು,
"ನಾನು ಹೋಗುವುದು ಹೇಗೆ? ಇದು ಸೌಲನಿಗೆ ಗೊತ್ತಾದರೆ ಅವನು ನನ್ನನ್ನು ಕೊಂದುಹಾಕುವನಲ್ಲವೇ?"
ಎಂದನು. ಆಗ ಸರ್ವೇಶ್ವರ, "ನೀನು ಒಂದು ಕಡಸನ್ನು ತೆಗೆದುಕೊಂಡು ಹೋಗು. ಸರ್ವೇಶ್ವರನಿಗೆ
ಬಲಿಯರ್ಪಣೆ ಮಾಡಲು ಬಂದಿದ್ದೇನೆ ಎಂದು ಹೇಳಿ ಜೆಸ್ಸೆಯನನ್ನು ಅದಕ್ಕೆ ಆಮಂತ್ರಿಸು. [3]ಆಮೇಲೆ ನೀನು
ಮಾಡಬೇಕಾದುದನ್ನು ನಾನೇ ತಿಳಿಸುತ್ತೇನೆ; ನಾನು ಯಾರನ್ನು ತೋರಿಸುತ್ತೇನೋ ಅವನನ್ನೇ ನೀನು
ಅಭಿಷೇಕಿಸಬೇಕು," ಎಂದರು. [4]ಸರ್ವೇಶ್ವರ ಹೇಳಿದಂತೆಯೇ ಸಮುವೇಲನು ಬೆತ್ಲೆಹೇಮಿಗೆ ಹೋದನು. ಆ
ಊರಿನ ಹಿರಿಯರು ನಡುನಡುಗುತ್ತಾ ಬಂದು, ಅವನನ್ನು ಎದುರುಗೊಂಡು, "ನಿನ್ನ ಆಗಮನ ನಮಗೆ
ಶುಭಕರವಾಗಿದೆಯೇ?" ಎಂದು ಕೇಳಿದರು. ಅವನು, [5]"ಹೌದು ಶುಭಕರವಾಗಿದೆ; ಸರ್ವೇಶ್ವರನಿಗೆ
ಬಲಿಯನ್ನರ್ಪಿಸುವುದಕ್ಕೆ ಬಂದಿದ್ದೇನೆ. ನೀವು ಶುದ್ಧರಾಗಿ ನನ್ನ ಜೊತೆಯಲ್ಲಿ ಬಲಿಯರ್ಪಣೆಗೆ ಬನ್ನಿ,"
ಎಂದು ಹೇಳಿ ಜೆಸ್ಸೆಯನನ್ನೂ ಅವನ ಮಕಳನ್ನೂ ಶುದ್ಧೀಕರಿಸಿ ಅವರನ್ನೂ ಬಲಿಯರ್ಪಣೆಗೆ
ಆಮಂತ್ರಿಸಿದನು. ಅವರು ಬಂದರು. [6]ಸಮುವೇಲನು ಎಲೀಯಾಬನನ್ನು ನೋಡಿ ತನ್ನಷ್ಟಕ್ಕೆ, "ನಿಶ್ಚಯವಾಗಿ
ಸರ್ವೇಶ್ವರ ಅಭಿಷೇಕಕ್ಕೆ ಆರಿಸಿಕೊಂಡವನು ನನ್ನ ಮುಂದೆಯೇ ಇದ್ದಾನೆ," ಎಂದುಕೊಂಡನು. [7]ಆದರೆ
ಸರ್ವೇಶ್ವರಸ್ವಾಮಿ ಸಮುವೇಲನಿಗೆ, "ನೀನು ಅವನ ಚೆಲುವಿಕೆಯನ್ನಾಗಲಿ ಎತ್ತರವನ್ನಾಗಲಿ ನೋಡಬೇಡ;
ನಾನು ಅವನನ್ನು ತಳ್ಳಿಬಿಟ್ಟಿದ್ದೇನೆ. ಸರ್ವೇಶ್ವರ ಮನುಷ್ಯರಂತೆ ಬಹಿರಂಗದ ತೋರಿಕೆಯನ್ನು ನೋಡುವುದಿಲ್ಲ;
ಅಂತರಂಗವನ್ನೇ ವೀಕ್ಷಿಸುತ್ತಾನೆ," ಎಂದರು. [8]ಜೆಸ್ಸೆಯನು ಅಬೀನಾದಾಬನನ್ನು ಸಮುವೇಲನ ಬಳಿಗೆ
ಬರಮಾಡಲು ಸಮುವೇಲನು, "ಸರ್ವೇಶ್ವರ ಇವನನ್ನೂ ಆರಿಸಿಕೊಳ್ಳಲಿಲ್ಲ," ಎಂದು ಹೇಳಿದನು.
[9]ತರುವಾಯ ಜೆಸ್ಸೆಯನು ಶಮ್ಮ ಎಂಬವನನ್ನು ಬರಮಾಡಲು ಸಮುವೇಲನು, "ಸರ್ವೇಶ್ವರ ಇವನನ್ನೂ
ಆರಿಸಿಕೊಳ್ಳಲಿಲ್ಲ," ಎಂದು ಹೇಳಿದನು. [10]ಹೀಗೆ ಜೆಸ್ಸೆಯನು ತನ್ನ ಮಕ್ಕಳಲ್ಲಿ ಏಳು ಮಂದಿಯನ್ನೂ ಅವನ
ಬಳಿಗೆ ಬರಮಾಡಿದರೂ ಅವನು, "ಸರ್ವೇಶ್ವರ ಇವರನ್ನು ಆರಿಸಿಕೊಳ್ಳಲಿಲ್ಲ," ಎಂದು ನುಡಿದನು.
[11]ಅನಂತರ ಸಮುವೇಲನು ಜೆಸ್ಸೆಯನನ್ನು, "ನಿನ್ನ ಮಕ್ಕಳೆಲ್ಲಾ ಇಷ್ಟೇ ಮಂದಿಯೋ?" ಎಂದು ಕೇಳಿದನು.
ಅವನು, "ಇವರೆಲ್ಲರಿಗಿಂತಲೂ ಚಿಕ್ಕವನು ಒಬ್ಬನಿದ್ದಾನೆ; ಅವನು ಕುರಿಮೇಯಿಸುವುದಕ್ಕೆ ಹೋಗಿದ್ದಾನೆ,"
ಎಂದು ಉತ್ತರಕೊಟ್ಟನು. ಆಗ ಸಮುವೇಲನು, "ಅವನನ್ನು ಇಲ್ಲಿಗೆ ಬರಮಾಡು; ಅವನು ಬರುವವರೆಗೂ
ನಾವು ಊಟಕ್ಕೆ ಕುಳಿತುಕೊಳ್ಳಬಾರದು," ಎಂದು ಹೇಳಿದನು. ಜೆಸ್ಸೆಯನು ಅವನನ್ನು ಕರೆದುತರಿಸಿದನು.
[12]ಅವನು ಕೆಂಬಣ್ಣದವನು, ಸುಂದರನೇತ್ರನು, ಹಾಗು ನೋಟಕ್ಕೆ ರಮಣೀಯನು. ಸರ್ವೇಶ್ವರ
ಸಮುವೇಲನಿಗೆ, "ಎದ್ದು ಇವನನ್ನು ಅಭಿಷೇಕಿಸು; ನಾನು ಆರಿಸಿಕೊಂಡವನು ಇವನೇ," ಎಂದು
ಆಜ್ಞಾಪಿಸಿದರು. [13]ಸಮುವೇಲನು ಎಣ್ಣೆಯ ಕೊಂಬನ್ನು ತೆಗೆದುಕೊಂಡು ಅವನನ್ನು ಅವನ ಸಹೋದರರ
ಮಧ್ಯದಲ್ಲಿ ಅಭಿಷೇಕಿಸಿದನು. ಕೂಡಲೆ ಸರ್ವೇಶ್ವರನ ಆತ್ಮವು ದಾವೀದನ ಮೇಲೆ ಬಂದು ನೆಲೆಗೊಂಡಿತು.
ಅನಂತರ ಸಮುವೇಲನು ರಾಮಾಕ್ಕೆ ಹೊರಟು ಹೋದನು.

### ಸೌಲನ ಆಸ್ಥಾನದಲ್ಲಿ ದಾವೀದನು

14 ಸರ್ವೇಶ್ವರನ ಆತ್ಮ ಸೌಲನನ್ನು ಬಿಟ್ಟು ಹೋಯಿತು. ಅವರಿಂದ ಬಂದ ದುರಾತ್ಮವೊಂದು
ಅವನನ್ನು ಪೀಡಿಸುತ್ತಿತ್ತು. [15]ಆದ್ದರಿಂದ ಅವನ ಸೇವಕರು ಅವನಿಗೆ, "ಇಗೋ, ದೇವರಿಂದ ಬಂದ ದುರಾತ್ಮ

ನಿಮ್ಮನ್ನು ಪೀಡಿಸುತ್ತಾ ಇದೆ. [16]ಒಡೆಯಾ, ಅಪ್ಪಣೆಯಾಗಲಿ, ನಿಮ್ಮ ಸನ್ನಿಧಿಯಲ್ಲಿ ನಿಂತಿರುವ ನಿಮ್ಮ
ಸೇವಕರಾದ ನಾವು ಹೋಗಿ ಕಿನ್ನರಿ ಬಾರಿಸುವವರಲ್ಲಿ ನಿಪುಣನಾದ ಒಬ್ಬನನ್ನು ಹುಡುಕಿ ತರುತ್ತೇವೆ.
ಸರ್ವೇಶ್ವರನಿಂದ ಕಳುಹಿಸಲಾದ ದುರಾತ್ಮ ನಿಮ್ಮ ಮೇಲೆ ಬರುವಾಗ ಅವನು ಕಿನ್ನರಿ ಬಾರಿಸಿದರೆ ನಿಮಗೆ
ಉಪಶಮನ ಆಗುವುದು," ಎಂದು ಹೇಳಿದರು. [17]ಸೌಲನು ಅವರಿಗೆ, "ಚೆನ್ನಾಗಿ ಬಾರಿಸಬಲ್ಲವನಾದ
ಒಬ್ಬನನ್ನು ನನಗಾಗಿ ಹುಡುಕಿ ಕರೆದುಕೊಂಡು ಬನ್ನಿ", ಎಂದು ಆಜ್ಞಾಪಿಸಿದನು. [18]ಸೇವಕರಲ್ಲೊಬ್ಬನು
ಅವನಿಗೆ, "ಬೆತ್ಲೆಹೇಮಿನವನಾದ ಜೆಸ್ಸೆಯನ ಮಗನನ್ನು ನೋಡಿದ್ದೇನೆ; ಅವನು ಚೆನ್ನಾಗಿ ಬಾರಿಸಬಲ್ಲನು.
ಅವನು ಪರಾಕ್ರಮಶಾಲಿ, ರಣಶೂರ, ವಾಕ್ಚತುರ, ಸುಂದರ ಹಾಗು ಸರ್ವೇಶ್ವರನ ಅನುಗ್ರಹ ಹೊಂದಿದವ,"
ಎಂದು ತಿಳಿಸಿದನು. [19]ಕೂಡಲೆ ಸೌಲನು ಜೆಸ್ಸೆಯನ ಬಳಿಗೆ ದೂತರನ್ನು ಕಳುಹಿಸಿ ಅವನಿಗೆ,
"ಕುರಿಮೇಯಿಸುತ್ತಿರುವ ನಿನ್ನ ಮಗ ದಾವೀದನನ್ನು ನನ್ನ ಬಳಿಗೆ ಕಳುಹಿಸು," ಎಂದು ಹೇಳಿಸಿದನು.
[20]ಜೆಸ್ಸೆಯನು ರೊಟ್ಟಿಯನ್ನು, ಒಂದು ಬುದ್ದಲಿ ದ್ರಾಕ್ಷಾರಸವನ್ನು ಹಾಗು ಒಂದು ಹೋತಮರಿಯನ್ನು ಕತ್ತೆಯ
ಮೇಲೆ ಹೇರಿಸಿ, ತನ್ನ ಮಗ ದಾವೀದನ ಮುಖಾಂತರ ಸೌಲನಿಗೆ ಕಳುಹಿಸಿದನು. [21]ಹೀಗೆ ದಾವೀದನು
ಸೌಲನ ಬಳಿಗೆ ಬಂದು ಅವನ ಸೇವಕನಾದನು. ಸೌಲನು ಅವನನ್ನು ಬಹಳವಾಗಿ ಪ್ರೀತಿಸಿದನು, ತನ್ನ
ಆಯುಧಗಳನ್ನು ಹೊರುವುದಕ್ಕೆ ನೇಮಿಸಿಕೊಂಡನು. [22]ತರುವಾಯ ಸೌಲನು ಜೆಸ್ಸೆಯನ ಬಳಿಗೆ ದೂತರನ್ನು
ಅಟ್ಟಿ, ಅವನಿಗೆ, "ನಾನು ದಾವೀದನನ್ನು ಮೆಚ್ಚಿದ್ದೇನೆ; ಅವನು ನನ್ನ ಸನ್ನಿಧಿಯಲ್ಲೇ ಸೇವೆಮಾಡಲಿ," ಎಂದು
ತಿಳಿಸಿದನು. [23]ದೇವರಿಂದ ಕಳುಹಿಸಲಾಗಿದ್ದ ದುರಾತ್ಮ ಸೌಲನ ಮೇಲೆ ಬಂದಾಗ ದಾವೀದನು ಕಿನ್ನರಿಯನ್ನು
ಬಾರಿಸುತ್ತಿದ್ದನು. ಆಗ ಆ ದುರಾತ್ಮ ಸೌಲನನ್ನು ಬಿಟ್ಟುಹೋಗುತ್ತಿತ್ತು. ಅವನು ಉಪಶಮನಹೊಂದಿ
ಚೆನ್ನಾಗಿರುತ್ತಿದ್ದನು.

### ಗೊಲ್ಯಾತನು ಇಸ್ರಯೇಲರಿಗೆ ಹಾಕಿದ ಸವಾಲು

**17** ಯೆಹೂದ ಪ್ರಾಂತ್ಯದ ಸೋಕೋವಿನಲ್ಲಿ ಫಿಲಿಷ್ಟಿಯರು ಯುದ್ಧಕ್ಕಾಗಿ ಸೈನ್ಯವನ್ನು ಜಮಾಯಿಸಿದ್ದರು.
ಸೋಕೋವಿಗೂ ಅಜೇಕಕ್ಕೂ ಮಧ್ಯೆಯಿರುವ ಎಫೆಸ್ದಮ್ಮೀಮಿನಲ್ಲಿ ಬೀಡುಬಿಟ್ಟಿದ್ದರು. [2]ಈ ಫಿಲಿಷ್ಟಿಯರೊಡನೆ
ಯುದ್ಧಮಾಡಲು ಸೌಲನೂ ಇಸ್ರಯೇಲರೂ ತಮ್ಮ ಸೈನ್ಯವನ್ನು ಜಮಾಯಿಸಿಕೊಂಡು ಏಲಾ ಕಣಿವೆಯಲ್ಲಿ
ಪಾಳೆಯಮಾಡಿಕೊಂಡು ವ್ಯೂಹಕಟ್ಟಿದರು. [3]ಫಿಲಿಷ್ಟಿಯರು ಒಂದು ಗುಡ್ಡದ ಪಕ್ಕದಲ್ಲೂ ಇಸ್ರಯೇಲರು
ಇನ್ನೊಂದು ಗುಡ್ಡದ ಪಕ್ಕದಲ್ಲೂ ನಿಂತರು. ಉಭಯರ ಮಧ್ಯೆ ಒಂದು ಕಣಿವೆ ಇತ್ತು.

4 ಫಿಲಿಷ್ಟಿಯರ ಪಾಳೆಯದಿಂದ ಮಹಾಪರಾಕ್ರಮಿಯೊಬ್ಬನು ಹೊರಬಂದನು. ಅವನು ಗತ್
ಊರಿನವನು. ಅವನ ಹೆಸರು ಗೊಲ್ಯಾತ್. ಅವನ ಎತ್ತರ ಸುಮಾರು ಮೂರು ಮೀಟರ್. [5]ಅವನು ಧರಿಸಿದ್ದು
ಕಂಚಿನ ಶಿರಸ್ತ್ರಾಣ. ಅದೇ ಲೋಹದ ಬಿಲ್ಲೆಗಳಿಂದ ಪರೆಪರೆಯಾಗಿ ಜೋಡಿಸಲಾಗಿದ್ದ ಅವನ ಕವಚ
ಸುಮಾರು ಐವತ್ತೇಳು ಕಿಲೋಗ್ರಾಮಿನಷ್ಟು ತೂಕವಾಗಿತ್ತು. [6]ಅವನ ಪಾದರಕ್ಷೆಗಳು ಹಾಗು ಹೆಗಲ ಮೇಲಿನ
ಈಟಿ ಕಂಚಿನದಾಗಿದ್ದವು. [7]ಅವನ ಬರ್ಜಿಯ ಕೋಲು ನೆಯ್ಗೆಗಾರರ ಕುಂಟೆಯಷ್ಟು ಗಾತ್ರದಾಗಿತ್ತು. ಅದರ
ಅಲಗು ಏಳು ಕಿಲೋಗ್ರಾಮಿನಷ್ಟು ಭಾರವಾಗಿತ್ತು. ಅವನ ಗುರಾಣಿಯನ್ನು ಹೊರುವವನು ಅವನ ಮುಂದೆ
ಮುಂದೆ ಹೋಗುತ್ತಿದ್ದನು. [8]ಗೊಲ್ಯಾತನು ಅಲ್ಲೆ ನಿಂತು, ಇಸ್ರಯೇಲರ ಸೈನ್ಯದತ್ತ ಹೀಗೆಂದು ಗರ್ಜಿಸಿದನು:
"ನೀವು ಸಜ್ಜಾಗಿ ಬಂದಿರುವುದು ಯುದ್ಧ ಮಾಡಲಿಕ್ಕೋ? ನಾನು ಫಿಲಿಷ್ಟಿಯನು. ನೀವು ಆ ಸೌಲನ
ಗುಲಾಮರು. ನಿಮ್ಮಲ್ಲಿ ಒಬ್ಬನನ್ನು ಆರಿಸಿಕೊಂಡು ನನ್ನ ಬಳಿಗೆ ಕಳುಹಿಸಿ. [9]ಅವನು ನನ್ನೊಡನೆ ಯುದ್ಧಮಾಡಿ
ನನ್ನನ್ನು ಕೊಲ್ಲಲಿ; ಆಗ ನಮ್ಮವರು ನಿಮ್ಮ ಗುಲಾಮರಾಗುವರು. ನಾನು ಅವನನ್ನು ಸೋಲಿಸಿ ಕೊಂದರೆ
ನೀವು ನಮಗೆ ಗುಲಾಮರಾಗಿ ನಮಗೆ ಸೇವೆಮಾಡಬೇಕು." [10]ಅದೂ ಅಲ್ಲದೆ ಆ ಫಿಲಿಷ್ಟಿಯನು,
"ಇಸ್ರಯೇಲ್ ಸೈನಿಕರಿಗೆ ನಾನು ಇದೀಗಲೇ ಹಾಕುವ ಸವಾಲು: ಇಂದು ನನ್ನೊಡನೆ ಕಾಳಗಕ್ಕೆ ನಿಮ್ಮಿಂದ
ಒಬ್ಬನನ್ನು ಆಯ್ದುಕಳುಹಿಸಿ, ನೋಡೋಣ," ಎಂದು ಕೊಚ್ಚಿಕೊಂಡನು. [11]ಸೌಲನು ಹಾಗು ಇಸ್ರಯೇಲರೆಲ್ಲರು
ಅವನ ಸವಾಲನ್ನು ಕೇಳಿ ಭಯಭೀತರಾದರು. ಅವರ ಎದೆ ಅದುರಿತು.

## ಸೌಲನ ದಂಡಿನಲ್ಲಿ ದಾವೀದನು

12 ದಾವೀದನು ಜೆಸ್ಸೆಯ ಎಂಬವನ ಮಗ. ಜೆಸ್ಸೆಯ ಯೆಹೂದದ ಬೆತ್ಲೆಹೇಮ್ ಊರಿನ
ಎಫ್ರಾತ್ಯನು. ಸೌಲನ ಕಾಲದಲ್ಲಿ ಹಣ್ಣುಹಣ್ಣು ಮುದುಕ. ಇವನ ಎಂಟುಮಂದಿ ಮಕ್ಕಳಲ್ಲಿ ದಾವೀದನು ಒಬ್ಬ.
[13]ಇವನ ಮೂರು ಮಂದಿ ಹಿರಿಯ ಮಕ್ಕಳು ಸೌಲನ ಜೊತೆ ಯುದ್ಧಕ್ಕೆ ಹೋಗಿದ್ದರು. ಅವರಲ್ಲಿ ಚೊಚ್ಚಲ
ಮಗನ ಹೆಸರು ಎಲೀಯಾಬ್; ಎರಡನೆಯವನ ಹೆಸರು ಅಬೀನಾದಾಬ್; ಮೂರನೆಯವನು ಶಮ್ಮ.
[14]ದಾವೀದನೆ ಎಲ್ಲರಿಗಿಂತ ಕಿರಿಯವನು. ಮೂರು ಮಂದಿ ಹಿರಿಯ ಮಕ್ಕಳು ಸೌಲನೊಂದಿಗೆ ಯುದ್ಧಕ್ಕೆ
ಹೋಗಿದ್ದುದರಿಂದ [15]ದಾವೀದನು ಸೌಲನನ್ನು ಬಿಟ್ಟು ತನ್ನ ತಂದೆಯ ಕುರಿಗಳನ್ನು ಮೇಯಿಸುವುದಕ್ಕೆ
ಬೆತ್ಲೆಹೇಮಿಗೆ ಹೋದನು.

16 ಆ ಫಿಲಿಷ್ಟಿಯನು ನಾಲ್ವತ್ತು ದಿನ, ಬೆಳಿಗ್ಗೆ ಸಂಜೆ, ಒಂದೇ ಸಮನೆ ಸವಾಲು ಹಾಕುತ್ತಾ ಇದ್ದನು.

17 ಒಂದು ದಿನ ಜೆಸ್ಸೆಯನು ತನ್ನ ಮಗ ದಾವೀದನಿಗೆ, "ನೋಡು, ಇಲ್ಲಿ ಹತ್ತು ಕಿಲೋಗ್ರಾಂ
ಹುರಿಗಾಳು, ಹತ್ತು ರೊಟ್ಟಿ ಇವೆ. ಇವುಗಳನ್ನು ತೆಗೆದುಕೊಂಡು ಬೇಗನೆ ಪಾಳೆಯಕ್ಕೆ ಹೋಗಿ ನಿನ್ನ
ಅಣ್ಣಂದಿರಿಗೆ ಕೊಟ್ಟು ಬಾ. [18]ಇಲ್ಲಿ ಹತ್ತು ಗಿಣ್ಣಿನ ಉಂಡೆಗಳೂ ಇವೆ. ಇವುಗಳನ್ನು ಅವರ ಸಹಸ್ರಾಧಿಪತಿಗೆ
ಕೊಡು. ಬರುವಾಗ ನಿನ್ನ ಅಣ್ಣಂದಿರ ಕ್ಷೇಮಸಮಾಚಾರವನ್ನು ವಿಚಾರಿಸಿಕೊಂಡು, ಅವರಿಂದ ಒಂದು
ಗುರುತನ್ನು ತೆಗೆದುಕೊಂಡು ಬಾ. [19]ಸೌಲನೂ ಇಸ್ರಯೇಲರೂ ಏಲಾ ಕಣಿವೆಯಲ್ಲಿ ಫಿಲಿಷ್ಟಿಯರೊಡನೆ
ಯುದ್ಧ ಮಾಡುತ್ತಿದ್ದಾರಲ್ಲವೆ?" ಎಂದು ಹೇಳಿದನು.

20 ದಾವೀದನು ಮರುದಿನ ಬೆಳಿಗ್ಗೆ ಎದ್ದು ಕುರಿಗಾಹಿಗೆ ಕುರಿಗಳನ್ನು ಒಪ್ಪಿಸಿ, ತನ್ನ ತಂದೆ ಜೆಸ್ಸೆಯನು
ಹೇಳಿದವುಗಳನ್ನು ತೆಗೆದುಕೊಂಡು ಪಾಳೆಯದ ಬಂಡಿಗಳು ನಿಂತಿದ್ದ ಸ್ಥಳಕ್ಕೆ ಬಂದನು. ಸೈನ್ಯಗಳು
ಯುದ್ಧಘೋಷಣೆಗಳನ್ನು ಹಾಕುವ ಸಮಯ ಅದು. [21]ಇಸ್ರಯೇಲರೂ ಫಿಲಿಷ್ಟಿಯರೂ ಎದುರುಬದುರಾಗಿ
ವ್ಯೂಹಕಟ್ಟುತ್ತಿದ್ದರು. [22]ಅಷ್ಟರಲ್ಲಿ ದಾವೀದನು ತಾನು ತಂದವುಗಳನ್ನೂ ಆಹಾರಪದಾರ್ಥಗಳನ್ನೂ
ಕಾಯುವವನ ಬಳಿಯಲ್ಲಿಟ್ಟು ರಣರಂಗಕ್ಕೆ ಓಡಿದನು. ತನ್ನ ಸಹೋದರರ ಯೋಗಕ್ಷೇಮ ವಿಚಾರಿಸಿದನು.
[23]ಅವರೊಡನೆ ಮಾತಾಡುತ್ತಿರುವಾಗಲೇ ಗತ್ ಊರಿನ ರಣವೀರನಾದ ಗೊಲ್ಯಾತನೆಂಬ ಆ ಫಿಲಿಷ್ಟಿಯನು
ತನ್ನ ಸೈನ್ಯದಿಂದ ಹೊರಗೆ ಬಂದನು. ಎಂದಿನಂತೆ ಯುದ್ಧ ಸವಾಲನ್ನು ಘೋಷಿಸಿದನು. ದಾವೀದನು ಅವನ
ಮಾತುಗಳನ್ನು ಕೇಳಿದನು. [24]ಇಸ್ರಯೇಲರು ಅವನನ್ನು ನೋಡಿ ಭಯ ಭೀತಿಯಿಂದ ಓಡತೊಡಗಿದರು.
[25]"ನೋಡಿದಿರೋ, ಇಸ್ರಯೇಲರಾದ ನಮ್ಮನ್ನು ತೃಣೀಕರಿಸಲು ಬಂದಿರುವ ಈ ವ್ಯಕ್ತಿಯನ್ನು? ಇವನನ್ನು
ಕೊಲ್ಲುವವನಿಗೆ ಅರಸ ಅಪಾರ ದ್ರವ್ಯ ಕೊಡುವರು; ತಮ್ಮ ಮಗಳನ್ನೇ ಕೊಟ್ಟು ಮದುವೆಮಾಡುವರು; ಅಲ್ಲದೆ
ಅಂಥವನ ಕುಟುಂಬಕ್ಕೆ ಎಲ್ಲಾ ತೆರಿಗೆ ಕಂದಾಯದಿಂದ ವಿನಾಯಿತಿ ದೊರಕುವುದು," ಎಂದು
ಮಾತಾಡಿಕೊಳ್ಳುತ್ತಿದ್ದರು.

26 ಆಗ ದಾವೀದನು ತನ್ನ ಬಳಿಯಲ್ಲೆ ನಿಂತಿದ್ದವರನ್ನು ನೋಡಿ, "ಜೀವಸ್ವರೂಪರಾದ ದೇವರ
ಸೈನ್ಯವನ್ನು ಹೀಗೆ ಹಿಯ್ಯಾಳಿಸುವ, ಸುನ್ನತಿಯಿಲ್ಲದ ಈ ಫಿಲಿಷ್ಟಿಯನು ಎಷ್ಟರವನು? ಇವನನ್ನು ಕೊಂದು
ಇಸ್ರಯೇಲರಿಗೆ ಬಂದಿರುವ ನಿಂದೆ ಅವಮಾನವನ್ನು ನೀಗಿಸುವವನಿಗೆ ಏನು ಸಿಕ್ಕುವುದೆಂದು ಹೇಳಿದಿರಿ?"
ಎಂದು ಕೇಳಿದನು. [27]ಅವರು ಮುಂದಿನಂತೆಯೇ ಇಂಥಿಂಥದ್ದು ದೊರಕುವುದೆಂದು ಉತ್ತರಕೊಟ್ಟರು.

28 ದಾವೀದನು ಜನರ ಸಂಗಡ ಹೀಗೆ ಮಾತಾಡುವುದನ್ನು ಅವನ ಹಿರಿಯ ಅಣ್ಣ ಎಲೀಯಾಬನು
ಕೇಳಿದನು. ದಾವೀದನ ಮೇಲೆ ಅವನು ಸಿಟ್ಟುಗೊಂಡು, "ನೀನು ಇಲ್ಲಿಗೆ ಬಂದುದೇಕೆ? ಅಡವಿಯಲ್ಲಿರುವ
ನಾಲ್ಕಾರು ಕುರಿಗಳನ್ನು ಯಾರಿಗೊಪ್ಪಿಸಿ ಬಂದೆ? ನಿನ್ನ ಸೊಕ್ಕು, ತುಂಟುತನ ನನಗೆ ಗೊತ್ತಿದೆ. ನೀನು ಕದನ–
ಕುಚೇಷ್ಟೆ ನೋಡಬಂದಿರುವೆಯಷ್ಟೇ," ಎಂದು ಗದರಿಸಿದನು. [29]ದಾವೀದನು, "ನಾನೇನು ತಪ್ಪು ಮಾಡಿದೆ?
ಪ್ರಶ್ನೆಯೊಂದನ್ನು ಕೇಳಬಾರದಿತ್ತೆ?" ಎಂದು ಹೇಳಿ ಅವನನ್ನು ಬಿಟ್ಟು ಬೇರೆ ಕಡೆಗೆ ಹೋದನು. [30]ಅಲ್ಲೂ
ಹಾಗೆಯೇ ವಿಚಾರಿಸಿದನು. ಜನರು ಮುಂದಿನಂತೆಯೇ ಉತ್ತರಕೊಟ್ಟರು. [31]ದಾವೀದನು ಈ ಪ್ರಕಾರ
ವಿಚಾರಿಸುತ್ತಿದ್ದಾನೆಂಬ ಸಮಾಚಾರವನ್ನು ಸೌಲನಿಗೆ ಮುಟ್ಟಿಸಿದರು. ಸೌಲನು ದಾವೀದನನ್ನು ಕರೆಯಿಸಿದನು.

32ದಾವೀದನು ಸೌಲನಿಗೆ, "ಆ ಫಿಲಿಷ್ಟಿಯನ ನಿಮಿತ್ತ ಯಾರೂ ಎದೆಗೆಡಬೇಕಾಗಿಲ್ಲ. ತಮ್ಮ
ಸೇವಕನಾದ ನಾನೇ ಹೋಗಿ ಅವನೊಡನೆ ಯುದ್ಧ ಮಾಡುತ್ತೇನೆ," ಎಂದು ಹೇಳಿದನು. [33]ಅದಕ್ಕೆ ಸೌಲನು,

“ಅವನೊಡನೆ ಕಾದಾಡಲು ನಿನ್ನಿಂದ ಆಗದು; ನೀನು ಇನ್ನೂ ಹುಡುಗ. ಅವನಾದರೋ ಚಿಕ್ಕಂದಿನಿಂದಲೆ
ಯುದ್ಧವೀರ,” ಎಂದು ಹೇಳಿದನು. 34ಆಗ ದಾವೀದನು, “ತಮ್ಮ ಸೇವಕನಾದ ನಾನು ನನ್ನ ತಂದೆಯ
ಕುರಿಗಳನ್ನು ಕಾಯುತ್ತಿದ್ದಾಗ ಸಿಂಹವಾಗಲಿ ಅಥವಾ ಕರಡಿಯಾಗಲಿ ಬಂದು ಹಿಂಡಿನಲ್ಲಿನ ಕುರಿಮರಿಯನ್ನು
ಹಿಡಿದುಕೊಂಡು ಹೋಗುವಾಗ 35ನಾನು ಒಡನೆ ಬೆನ್ನಟ್ಟಿ ಹೋಗುತ್ತಿದ್ದೆ; ಆ ಕಾಡುಮೃಗವನ್ನು ಹೊಡೆದು
ಕುರಿಮರಿಯನ್ನು ಕಿತ್ತುಕೊಳ್ಳುತ್ತಿದ್ದೆ. ಅದು ಹಿಂದಿರುಗಿ ನನ್ನ ಮೇಲೆ ಬಿದ್ದಾಗ ಅದನ್ನು ಗಡ್ಡ ಹಿಡಿದು, ಬಡಿದು,
ಕೊಂದುಹಾಕುತ್ತಿದ್ದೆ. 36ನಿಮ್ಮ ಸೇವಕನಾದ ನನ್ನಿಂದ ಆ ಸಿಂಹಕ್ಕೂ ಕರಡಿಗೂ ಆದ ಗತಿಯೇ ಈ
ಸುನ್ನತಿಯಿಲ್ಲದ ಫಿಲಿಷ್ಟಿಯನಿಗೂ ಆಗಬೇಕು: ಏಕೆಂದರೆ ಜೀವಸ್ವರೂಪರಾದ ದೇವರ ಸೈನ್ಯವನ್ನು
ನಿಂದಿಸುತ್ತಿದ್ದಾನೆ. 37ನನ್ನನ್ನು ಅಂಥ ಕರಡಿ-ಸಿಂಹಗಳ ಉಗುರುಗಳಿಂದ ತಪ್ಪಿಸಿದ ಸರ್ವೇಶ್ವರ ಈ
ಫಿಲಿಷ್ಟಿಯನ ಕೈಯಿಂದಲೂ ತಪ್ಪಿಸುವರು,” ಎಂದು ಹೇಳಿದನು. ಅದಕ್ಕೆ ಸೌಲನು, “ಹೋಗು, ಸರ್ವೇಶ್ವರ
ನಿನ್ನೊಂದಿಗೆ ಇರಲಿ!” ಎಂದನು.

38 ಅದು ಮಾತ್ರವಲ್ಲ, ತನ್ನ ಯುದ್ಧವಸ್ತ್ರಗಳನ್ನೂ ಕವಚವನ್ನೂ ಅವನಿಗೆ ತೊಡಿಸಿದನು. ಅವನ
ತಲೆಯ ಮೇಲೆ ಕಂಚಿನ ಶಿರಸ್ತ್ರಾಣವನ್ನೂ ಇಟ್ಟನು. 39ದಾವೀದನು ಯುದ್ಧವಸ್ತ್ರವನ್ನು ಧರಿಸಿಕೊಂಡು, ಅದರ
ಮೇಲೆ ಕತ್ತಿಯನ್ನು ಬಿಗಿದುಕೊಂಡು, ನಡೆದುನೋಡಲಾರಂಭಿಸಿದನು. ರೂಢಿಯಿಲ್ಲದ ಕಾರಣ ಅವನು
ಸೌಲನಿಗೆ, “ನನಗೆ ಅಭ್ಯಾಸವಿಲ್ಲ. ಇವುಗಳನ್ನು ಧರಿಸಿಕೊಂಡು ನಡೆಯಲಾರೆ,” ಎಂದು ಹೇಳಿ ಅವುಗಳನ್ನು
ತೆಗೆದಿಟ್ಟನು. 40ಕುರಿಕಾಯುವ ತನ್ನ ಕೋಲನ್ನೇ ತೆಗೆದುಕೊಂಡು ಹೊರಟನು. ಒಂದು ಹಳ್ಳಕ್ಕೆ ಹೋಗಿ ಐದು
ನುಣುಪು ಕಲ್ಲುಗಳನ್ನು ಆರಿಸಿಕೊಂಡನು. ಕುರುಬರ ಪದ್ಧತಿಯಂತೆ ಅವುಗಳನ್ನು ತನ್ನ ಸೊಂಟಚೀಲದಲ್ಲಿ
ಹಾಕಿಕೊಂಡನು. ಕೈಯಲ್ಲಿ ಕವಣೆಯನ್ನು ಹಿಡಿದು, ಆ ಫಿಲಿಷ್ಟಿಯನನ್ನು ಎದುರಿಸಲು ಹೋದನು.

## ದಾವೀದ-ಗೊಲ್ಯಾತರ ದ್ವಂದ್ವ ಯುದ್ಧ

41 ಇತ್ತ ಫಿಲಿಷ್ಟಿಯನು ದಾವೀದನ ಕಡೆ ಧಾವಿಸಿ ಬಂದನು. ಗುರಾಣಿ ಹೊರುವವನು ಅವನ
ಮುಂದೆ ಇದ್ದನು. 42ಫಿಲಿಷ್ಟಿಯನು ದಾವೀದನನ್ನು ಸಮೀಪಿಸಿ ನೋಡಿದನು. ಕೆಂಬಣ್ಣದವನೂ ಸುಂದರನೂ
ಆದ ಆ ಯುವಕನನ್ನು ದಿಟ್ಟಿಸಿ ತಾತ್ಸಾರದಿಂದ, 43“ನೀನು ಕೋಲುಹಿಡಿದು ನನ್ನ ಬಳಿಗೆ ಬರಲು ನಾನು
ನಾಯಿಯೆಂದು ತಿಳಿದುಕೊಂಡೆಯಾ?” ಎಂದು ಹೇಳಿ ಅವನನ್ನು ತನ್ನ ದೇವರ ಹೆಸರಿನಲ್ಲಿ ಶಪಿಸಿದನು.
44“ಇಲ್ಲಿ ಬಾ; ನಿನ್ನ ಮಾಂಸವನ್ನು ಆಕಾಶದ ಪಕ್ಷಿಗಳಿಗೆ, ಕಾಡಿನ ಮೃಗಗಳಿಗೆ ಹಂಚಿಕೊಡುತ್ತೇನೆ,” ಎಂದನು.

45 ಅದಕ್ಕೆ ದಾವೀದನು, “ನೀನು ಈಟಿ, ಕತ್ತಿ, ಭರ್ಜಿಗಳೊಡನೆ ನನ್ನ ಬಳಿಗೆ ಬರುತ್ತಿರುವೆ; ನೀನು
ಹೀಯಾಳಿಸಿದ ಸೇನಾಧೀಶ್ವರರು ಹಾಗು ಇಸ್ರಯೇಲ್ ಯೋಧರ ದೇವರು ಆದಂಥ ಸರ್ವೇಶ್ವರನ
ನಾಮದೊಡನೆ ನಾನು ನಿನ್ನ ಬಳಿಗೆ ಬರುತ್ತಿದ್ದೇನೆ. 46ಅವರು ಈ ದಿನ ನಿನ್ನನ್ನು ನನ್ನ ಕೈಗೆ
ಒಪ್ಪಿಸಿಕೊಡುವರು. ನಾನು ನಿನ್ನನ್ನು ಕೊಂದು, ನಿನ್ನ ತಲೆಯನ್ನು ಕಡಿದು, ಫಿಲಿಷ್ಟಿಯ ಸೈನ್ಯದ ಶವಗಳನ್ನು
ಆಕಾಶದ ಪಕ್ಷಿಗಳಿಗೂ ವನ್ಯ ಮೃಗಗಳಿಗೂ ಹಂಚಿಕೊಡುವೆನು. ಇದರಿಂದ ಇಸ್ರಯೇಲರ ಸಂಗಡ
ದೇವರಿದ್ದಾರೆಂಬುದು ಜಗತ್ತಿಗೆಲ್ಲಾ ತಿಳಿದುಬರುವುದು. 47ಈಟಿ, ಕತ್ತಿಗಳಿಲ್ಲದೆ ಸರ್ವೇಶ್ವರ ರಕ್ಷಿಸಬಲ್ಲನೆಂಬುದು
ಇಲ್ಲಿ ಕೂಡಿರುವವರೆಲ್ಲರಿಗೆ ಗೊತ್ತಾಗುವುದು. ಏಕೆಂದರೆ ಸಮರದ ಪರಿಣಾಮ ಇರುವುದು ಸರ್ವೇಶ್ವರನ
ಕೈಯಲ್ಲಿ; ಅವರು ತಪ್ಪದೆ ನಿಮ್ಮನ್ನು ನಮ್ಮ ಕೈಗೆ ಒಪ್ಪಿಸಿಕೊಡುವರು,” ಎಂದನು.

48 ಕೂಡಲೆ ಆ ಫಿಲಿಷ್ಟಿಯನು ದಾವೀದನ ಮೇಲೆ ಎರಗಲು ಮತ್ತೆ ಧಾವಿಸಿದನು. ದಾವೀದನೂ
ಫಿಲಿಷ್ಟಿಯರ ಸೈನ್ಯದ ಕಡೆಗೆ ನುಗ್ಗಿ ಆ ಫಿಲಿಷ್ಟಿಯನನ್ನು ಎದುರುಗೊಳ್ಳಲು ಓಡಿದನು. 49ಕೈಯನ್ನು ಚೀಲದಲ್ಲಿ
ಹಾಕಿ, ಒಂದು ಕಲ್ಲನ್ನು ತೆಗೆದು, ಅವನ ಕಣ್ಣಿಗೆ ಗುರಿಯಿಟ್ಟು, ಕವಣೆಯನ್ನು ಬೀಸಿ ಹೊಡೆದನು. ಆ ಕಲ್ಲು
ಅವನ ಹಣೆಯನ್ನು ಹೊಕ್ಕಿತು. ಅವನು ಮುಖಕೆಳಗಾಗಿ ನೆಲಕ್ಕೆ ಉರುಳಿದನು. 50ಕೂಡಲೆ ದಾವೀದನು
ಹೋಗಿ ಆ ಫಿಲಿಷ್ಟಿಯನ ಮೇಲೆ ನಿಂತು, ಅವನ ಕತ್ತಿಯನ್ನೇ ಹಿರಿದು, ಅವನ ತಲೆಯನ್ನು ಕಡಿದು
ಸಾಯಿಸಿದನು. 51ಹೀಗೆ ದಾವೀದನು ಕತ್ತಿಯಿಂದಲ್ಲ, ಬರೀ ಒಂದು ಕವಣೆಕಲ್ಲಿನಿಂದ ಆ ಫಿಲಿಷ್ಟಿಯನನ್ನು
ಸೋಲಿಸಿ ಕೊಂದುಹಾಕಿದನು. ತಮ್ಮ ರಣವೀರನು ಸತ್ತು ಹೋದದ್ದನ್ನು ಕಂಡು ಫಿಲಿಷ್ಟಿಯರು ಓಡಿ
ಹೋದರು. 52ಇಸ್ರಯೇಲರೂ ಯೆಹೂದ್ಯರೂ ಎದ್ದು ಆರ್ಭಟಿಸಿ ಫಿಲಿಷ್ಟಿಯರನ್ನು ಕಣಿವೆಯ

ದಾರಿಯವರೆಗೂ ಎಕ್ರೋನಿನ ಬಾಗಿಲುಗಳವರೆಗೂ ಹಿಂದಟ್ಟಿದರು. ಫಿಲಿಷ್ಟಿಯರ ಹೆಣಗಳು ಶಾರಯಿಮಿನಿಂದ ಗತ್, ಎಕ್ರೋನ್ ಪಟ್ಟಣಗಳವರೆಗೂ ಬಿದ್ದಿದ್ದವು. [53]ಅನಂತರ ಇಸ್ರಯೇಲರು ಹಿಂದಿರುಗಿ ಬಂದು, ಫಿಲಿಷ್ಟಿಯರ ಪಾಳೆಯವನ್ನು ಸೂರೆ ಮಾಡಿದರು. [54]ದಾವೀದನು ಆ ಫಿಲಿಷ್ಟಿಯನ ತಲೆಯನ್ನು ಜೆರುಸಲೇಮಿಗೆ ಒಯ್ದನು. ಅವನ ಆಯುಧಗಳನ್ನು ತನ್ನ ಗುಡಾರದಲ್ಲೇ ಇಟ್ಟುಕೊಂಡನು.

### ಸೌಲನಿಗೆ ದಾವೀದನ ನೇರಪರಿಚಯ

55 ದಾವೀದನು ಆ ಫಿಲಿಷ್ಟಿಯನೊಡನೆ ಯುದ್ಧಮಾಡಲು ಹೊರಟಿದ್ದನ್ನು ಸೌಲನು ನೋಡಿದನು. ತನ್ನ ಸೇನಾಪತಿಯಾದ ಅಬ್ನೇರನನ್ನು ಉದ್ದೇಶಿಸಿ, “ಅಬ್ನೇರನೇ, ಈ ತರುಣ ಯಾರ ಮಗ?” ಎಂದು ವಿಚಾರಿಸಿದನು. ಅದಕ್ಕೆ ಅಬ್ನೇರನು, “ಅರಸರೇ, ತಮ್ಮ ಜೀವದಾಣೆ, ನನಗೆ ಗೊತ್ತಿಲ್ಲ,” ಎಂದು ಉತ್ತರಕೊಟ್ಟನು. [56]ಆಗ ಅರಸನು ಅವನಿಗೆ, “ಈ ಯುವಕ ಯಾರ ಮಗನೆಂದು ವಿಚಾರಿಸು,” ಎಂದು ಆಜ್ಞಾಪಿಸಿದನು. [57]ದಾವೀದನು ಫಿಲಿಷ್ಟಿಯನನ್ನು ಕೊಂದು ಅವನ ತಲೆಯನ್ನು ಹಿಡಿದುಕೊಂಡು ಹಿಂದಿರುಗಿ ಬರುವಾಗ, ಅಬ್ನೇರನು ಅವನನ್ನು ಕರೆದು, ಸೌಲನ ಮುಂದೆ ನಿಲ್ಲಿಸಿದನು. [58]ಸೌಲನು ಅವನನ್ನು, “ತರುಣನೇ, ನೀನು ಯಾರ ಮಗ?” ಎಂದು ಕೇಳಿದನು. ಅದಕ್ಕೆ ಅವನು, “ನಾನು ಬೆತ್ಲೆಹೇಮಿನವನೂ ನಿಮ್ಮ ಸೇವಕನೂ ಆದ ಜೆಸ್ಸೆಯನ ಮಗ,” ಎಂದು ಉತ್ತರಿಸಿದನು.

### ದಾವೀದ ಮತ್ತು ಯೋನಾತಾನರ ಗೆಳೆತನ

**18** ದಾವೀದನ ಮತ್ತು ಸೌಲನ ಸಂಭಾಷಣೆ ಮುಗಿಯಿತು. ಇದಾದ ಕೂಡಲೆ ಯೋನಾತಾನನು ಹಾಗು ದಾವೀದನು ಪ್ರಾಣ ಗೆಳೆಯರಾದರು. ಯೋನಾತಾನನು ದಾವೀದನನ್ನು ತನ್ನ ಪ್ರಾಣದಂತೆಯೇ ಪ್ರೀತಿಸತೊಡಗಿದನು. [2]ಅಂದಿನಿಂದ ಸೌಲನು ದಾವೀದನನ್ನು ಅವನ ತಂದೆಯ ಮನೆಗೂ ಹೋಗಗೊಡದೆ ತನ್ನ ಬಳಿಯಲ್ಲೇ ಇಟ್ಟುಕೊಂಡನು. [3]ಯೋನಾತಾನನು ದಾವೀದನನ್ನು ತನ್ನ ಪ್ರಾಣಸ್ನೇಹಿತನನ್ನಾಗಿ ಪ್ರೀತಿಸುತ್ತಿದ್ದುದರಿಂದ ಅವನೊಂದಿಗೆ ಒಂದು ಒಪ್ಪಂದಮಾಡಿಕೊಂಡನು. [4]ಇದಲ್ಲದೆ ತನ್ನ ಮೈಮೇಲಿದ್ದ ನಿಲುವಂಗಿಯನ್ನು, ಯುದ್ಧವಸ್ತ್ರಗಳನ್ನು ಹಾಗು ಕತ್ತಿ, ಬಿಲ್ಲು, ನಡುಕಟ್ಟುಗಳನ್ನು ತೆಗೆದು ದಾವೀದನಿಗೆ ಕೊಟ್ಟನು. [5]ದಾವೀದನಾದರೋ ಸೌಲನು ಎಲ್ಲಿಗೆ ಕಳುಹಿಸಿದರೂ ಅಲ್ಲಿಗೆ ಹೋಗಿ ಎಲ್ಲವನ್ನು ವಿವೇಕದಿಂದ ಮಾಡಿ ಯಶಸ್ಸು ಪಡೆಯುತ್ತಿದ್ದನು. ಆದ್ದರಿಂದ ಸೌಲನು ಅವನನ್ನು ಸೇನಾಪತಿಯನ್ನಾಗಿ ನೇಮಿಸಿದನು. ಇದರಿಂದ ಎಲ್ಲ ಅಧಿಕಾರಿಗಳಿಗೂ ಜನ ಸಾಮಾನ್ಯರಿಗೂ ಸಂತೋಷವಾಯಿತು.

### ಸೌಲನ ಅಸೂಯೆ

6 ದಾವೀದನು ಫಿಲಿಷ್ಟಿಯರನ್ನು ಸಂಹರಿಸಿ ಸರ್ವಸೈನಿಕರೊಡನೆ ಹಿಂದಿರುಗಿ ಬರುವಾಗ ಇಸ್ರಯೇಲರ ಎಲ್ಲ ಪಟ್ಟಣಗಳಿಂದ ಮಹಿಳೆಯರು ಹೊರಗೆ ಬಂದು, ತಾಳ ತಮ್ಮಟೆಗಳನ್ನು ಹಿಡಿದು, ಸಂತೋಷದಿಂದ ಹಾಡುತ್ತಾ ಕುಣಿಯುತ್ತಾ, ಅರಸ ಸೌಲನನ್ನು ಎದುರುಗೊಂಡರು. [7]ಅವರು:

“ಸೌಲ ಕೊಂದನು ಸಾವಿರಗಟ್ಟಳೆ
ದಾವೀದನೋ ಕೊಂದನು
ಹತ್ತು ಸಾವಿರಗಟ್ಟಳೆ,”

ಎಂದು ಪರಸ್ಪರ ಹಾಡಿದರು. [8]ಈ ಮಾತುಗಳು ಸೌಲನಿಗೆ ಹಿಡಿಸಲಿಲ್ಲ. ಅವನು ಕೋಪದಿಂದ, “ದಾವೀದನು ಹತ್ತು ಸಾವಿರಗಟ್ಟಳೆ ಕೊಂದನೆಂದೂ ನಾನು ಸಾವಿರಗಟ್ಟಳೆ ಮಾತ್ರ ಕೊಂದೆನೆಂದು ಹಾಡುತ್ತಾರಲ್ಲಾ! ಹಾಗಾದರೆ ಅವನನ್ನು ರಾಜನನ್ನಾಗಿ ಮಾಡುವುದೊಂದೇ ಕಡಿಮೆ!” ಎಂದುಕೊಂಡನು. [9]ಅಂದಿನಿಂದ ಸೌಲನು ದಾವೀದನ ಮೇಲೆ ಕಣ್ಣಿಟ್ಟನು. [10]ಮಾರನೆಯ ದಿನ ದೇವರಿಂದ ಬಂದ ದುರಾತ್ಮವೊಂದು ಸೌಲನನ್ನು ಆವರಿಸಿತು. ಅವನು ಬುದ್ಧಿಗೆಟ್ಟು ಮನೆಯೊಳಗೇ ಕೂಗಾಡತೊಡಗಿದನು. ಅವನ ಕೈಯಲ್ಲಿ ಒಂದು ಈಟಿ ಇತ್ತು. ವಾಡಿಕೆಯ ಪ್ರಕಾರ ದಾವೀದನು ಕಿನ್ನರಿ ಬಾರಿಸುತ್ತಾ ಇದ್ದನು. [11]ಆಗ ಸೌಲನು,

"ಗೋಡೆಗೆ ಕಚ್ಚಿಕೊಳ್ಳುವಂತೆ ಈ ದಾವೀದನನ್ನು ತಿವಿಯುವೆನು," ಎಂದುಕೊಂಡು ಅವನತ್ತ ಈಟಿಯನ್ನು ಎರಡುಸಾರಿ ಎಸೆದನು. ಎರಡುಸಾರಿಯೂ ದಾವೀದನು ತಪ್ಪಿಸಿಕೊಂಡನು.

12 ಸರ್ವೇಶ್ವರ ಸೌಲನನ್ನು ತ್ಯಜಿಸಿ ದಾವೀದನೊಂದಿಗೆ ಇದ್ದರು. ಈ ಕಾರಣಕ್ಕಾಗಿ ಸೌಲನು
ದಾವೀದನಿಗೆ ಭಯಪಟ್ಟನು. 13ಅವನನ್ನು ತನ್ನ ಸಾನ್ನಿಧ್ಯ ಸೇವೆಯಿಂದ ತೆಗೆದು ಸೈನ್ಯದ ಒಬ್ಬ
ಸಹಸ್ರಾಧಿಪತಿಯನ್ನಾಗಿ ನೇಮಿಸಿದನು. ದಾವೀದನು ದಳಪತಿಯಾಗಿ ಯುದ್ಧಕ್ಕೆ ಹೋಗುತ್ತಾ ಬರುತ್ತಾ
ಇದ್ದನು. 14ಸರ್ವೇಶ್ವರ ಅವನೊಂದಿಗೆ ಇದ್ದುದರಿಂದ ಅವನು ಎಲ್ಲ ಕಾರ್ಯಗಳಲ್ಲಿ ವಿವೇಕದಿಂದ ವರ್ತಿಸಿ
ಜಯಶಾಲಿಯಾಗುತ್ತಿದ್ದನು. 15ಇದರಿಂದಾಗಿ ಸೌಲನಿಗೆ ಮತ್ತಷ್ಟು ಹೆದರಿಕೆಯುಂಟಾಯಿತು. 16ಆದರೆ
ಇಸ್ರಯೇಲರಿಗೆ ಹಾಗು ಯೆಹೂದ್ಯರಿಗೆ ದಾವೀದನ ಮೇಲೆ ಮಿಗಿಲಾದ ಪ್ರೀತಿ. ಏಕೆಂದರೆ ಅವನು ತಮ್ಮ
ಸಂಗಡವೇ ಬಂದು ಮುಂದಾಳತ್ವ ವಹಿಸುತ್ತಿದ್ದನು.

### ಸೌಲನ ಮಗಳೊಂದಿಗೆ ದಾವೀದನ ಮದುವೆ

17 ಒಂದು ದಿನ ಸೌಲನು, "ಇವನು ನನ್ನ ಕೈಯಿಂದ ಸಾಯಬಾರದು; ಫಿಲಿಷ್ಟಿಯರ ಕೈಯಿಂದಲೇ
ಸಾಯಲಿ," ಎಂದು ಒಂದು ಉಪಾಯ ಹೂಡಿದನು. ದಾವೀದನಿಗೆ, "ನೀನು ನನ್ನ ವೀರನಾಗಿ ಹೋಗಿ
ಸರ್ವೇಶ್ವರನ ಯುದ್ಧಗಳನ್ನು ನಡೆಸು; ನಾನು ನನ್ನ ಹಿರಿಯ ಮಗಳಾದ ಮೇರಬಳನ್ನು ನಿನಗೆ
ಮದುವೆಮಾಡಿಕೊಡುತ್ತೇನೆ," ಎಂದನು. 18ಅದಕ್ಕೆ ದಾವೀದನು, "ಅರಸರ ಅಳಿಯನಾಗಲು ನಾನು
ಎಷ್ಟರವನು? ಇಸ್ರಯೇಲರಲ್ಲಿ ನನ್ನ ಕುಲವಾಗಲಿ, ಕುಟುಂಬವಾಗಲಿ ಎಷ್ಟರದು?" ಎಂದನು.
19ಮದುವೆಮಾಡಿಕೊಡುವ ಸಮಯ ಬಂದಾಗ ಸೌಲನು ತನ್ನ ಮಗಳು ಮೇರಬಳನ್ನು ದಾವೀದನಿಗೆ
ಬದಲಾಗಿ, ಮೆಹೋಲದ ಅದ್ರಿಯೇಲ್ ಎಂಬವನಿಗೆ ಕೊಟ್ಟು ಮದುವೆ ಮಾಡಿದನು.

20 ಇತ್ತ ಸೌಲನ ಮಗಳಾದ ಮೀಕಲಳು ದಾವೀದನನ್ನು ಪ್ರೀತಿಸತೊಡಗಿದಳು. ಈ ವಿಷಯ
ಸೌಲನಿಗೆ ತಿಳಿದು ಬಂದಾಗ ಅವನಿಗೆ ಸಂತೋಷ ಆಯಿತು. 21"ಇವಳನ್ನು ಅವನಿಗೆ ಕೊಡುತ್ತೇನೆ. ಈಕೆ
ಅವನಿಗೆ ಉರುಲಾಗಿರಬಲ್ಲಳು; ಫಿಲಿಷ್ಟಿಯರ ಕೈಗೆ ಇವನು ಸಿಕ್ಕಿಬೀಳುವಂತೆ ಮಾಡಬಲ್ಲಳು,"
ಎಂದುಕೊಂಡನು. ದಾವೀದನಿಗೆ, "ನೀನು ನನ್ನ ಅಳಿಯನಾಗಲು ಎರಡನೇ ಸಂದರ್ಭ ಬಂದೊದಗಿದೆ,"
ಎಂದು ಹೇಳಿದನು. 22ಅಲ್ಲದೆ ತನ್ನ ಸೈನಿಕರಿಗೆ, "ನೀವು ದಾವೀದನಿಗೆ, 'ಅರಸರು ನಿಮ್ಮನ್ನು
ಮೆಚ್ಚಿಕೊಂಡಿದ್ದಾರೆ; ಅವರ ಎಲ್ಲ ಸೇವಕರಿಗೂ ನಿಮ್ಮ ಮೇಲೆ ಪ್ರೀತಿಯಿದೆ; ನೀವು ಅರಸರ
ಅಳಿಯರಾಗಲೇಬೇಕು,' ಎಂದು ಪುಸಲಾಯಿಸಿರಿ," ಎಂದು ಗುಟ್ಟಾಗಿ ತಿಳಿಸಿದನು.

23 ಅಂತೆಯೇ ಆ ಸೇವಕರು ದಾವೀದನಿಗೆ ತಿಳಿಯಪಡಿಸಿದರು. ಅದಕ್ಕೆ ದಾವೀದನು, "ಅರಸರ
ಅಳಿಯನಾಗುವುದು ಅಷ್ಟು ಸಾಧಾರಣ ಸಂಗತಿ ಎಂದು ನೆನೆಸುತ್ತೀರೋ? ನಾನೊಬ್ಬ ಬಡವ, ದೀನದಲಿತ,"
ಎಂದುಬಿಟ್ಟನು. 24ದಾವೀದನ ಪ್ರತಿಕ್ರಿಯೆಯನ್ನು ಸೇವಕರು ಸೌಲನಿಗೆ ತಿಳಿಸಿದರು. 25ಆಗ ಅವನು, "ನೀವು
ಹೋಗಿ ದಾವೀದನಿಗೆ 'ಅರಸರು ಯಾವ ದಕ್ಷಿಣೆಯನ್ನೂ ಬಯಸುವುದಿಲ್ಲ; ಆದರೆ ಅವರ ಶತ್ರುಗಳಿಗೆ
ಮುಯ್ಯಿತೀರಿಸಿ ಅವರಲ್ಲಿನ ನೂರುಮಂದಿಯ ಮುಂದೊಗಲನ್ನು ತಂದುಕೊಟ್ಟರೆ ಸಾಕೆನ್ನುತ್ತಾರೆ' ಎಂದು
ತಿಳಿಸಿರಿ", ಎಂದು ಆಜ್ಞಾಪಿಸಿದನು. (ದಾವೀದನನ್ನು ಫಿಲಿಷ್ಟಿಯರ ಕೈಯಿಂದಲೇ ಕೊಲ್ಲಿಸಬೇಕೆಂಬುದು ಅವನ
ಉದ್ದೇಶವಾಗಿತ್ತು.)

26 ಸೇವಕರು ದಾವೀದನಿಗೆ ಹಾಗೆಯೇ ತಿಳಿಸಿದಾಗ ಅರಸನ ಅಳಿಯನಾಗಲು ಅವನು
ಸಮ್ಮತಿಸಿದನು. 27ನೇಮಕವಾದ ದಿನಗಳು ಮುಗಿಯುವ ಮೊದಲೇ ತನ್ನ ಸೈನಿಕರೊಡನೆ ಹೊರಟು
ಫಿಲಿಷ್ಟಿಯರ ದೇಶಕ್ಕೆ ಹೋಗಿ, ಅಲ್ಲಿನ ಇನ್ನೂರು ಮಂದಿಯನ್ನು ಕೊಂದು, ಮುಂದೊಗಲುಗಳನ್ನು ತಂದು
ಅರಸನ ಅಳಿಯನಾಗಲು ಬೇಕಾಗಿದ್ದ ಲೆಕ್ಕಾಚಾರವನ್ನು ಪೂರ್ತಿ ಆಗಿ ಒಪ್ಪಿಸಿದನು. ಆಗ ಸೌಲನು ತನ್ನ
ಮಗಳು ಮೀಕಲಳನ್ನು ದಾವೀದನಿಗೆ ಮದುವೆಮಾಡಿ ಕೊಟ್ಟನು.

28 ಸರ್ವೇಶ್ವರ ದಾವೀದನೊಂದಿಗಿದ್ದಾರೆಂದು ಸೌಲನಿಗೆ ಮನದಟ್ಟಾಯಿತು. ತನ್ನ ಮಗಳು
ಅವನನ್ನು ಬಹಳವಾಗಿ ಪ್ರೀತಿಸುತ್ತಾಳೆಂದು ಸಹ ಗೊತ್ತಾಯಿತು. 29ಈ ಕಾರಣ ಅವನ ಭಯ ಮತ್ತಷ್ಟೂ
ಅಧಿಕವಾಯಿತು; ದಾವೀದನನ್ನು ತನ್ನ ಜೀವಮಾನ ಪರಿಯಂತ ವೈರಿಯೆಂದು ಭಾವಿಸ ತೊಡಗಿದನು.

30 ಫಿಲಿಷ್ಟಿಯ ರಾಜರು ಯುದ್ಧಕ್ಕೆ ಬಂದಾಗಲೆಲ್ಲ ಸೌಲನ ಸೇನಾಪತಿಗಳಲ್ಲಿ ದಾವೀದನೇ ಅತ್ಯಧಿಕ ಜಯಶೀಲನಾಗಿ ಹಿಂದಿರುಗುತ್ತಿದ್ದನು. ಈ ಕಾರಣ ಅವನ ಹೆಸರು ಸುಪ್ರಸಿದ್ಧವಾಯಿತು.

## ಯೋನಾತಾನನ ಮಧ್ಯಸ್ತಿಕೆ

**19** ದಾವೀದನನ್ನು ಕೊಲ್ಲಬೇಕೆಂದು ಸೌಲನು ತನ್ನ ಮಗ ಯೋನಾತಾನನಿಗೂ ಎಲ್ಲಾ ಪರಿವಾರದವರಿಗೂ
ಆಜ್ಞಾಪಿಸಿದನು. ಆದರೆ ಯೋನಾತಾನನು ದಾವೀದನನ್ನು ಬಹಳವಾಗಿ ಪ್ರೀತಿಸುತ್ತಿದ್ದನು. 2ಆದುದರಿಂದ
ಅವನು ದಾವೀದನಿಗೆ, "ನನ್ನ ತಂದೆ ಸೌಲನು ನಿನ್ನನ್ನು ಕೊಲ್ಲಬೇಕೆಂದಿರುತ್ತಾರೆ. ನೀನು
ಜಾಗರೂಕತೆಯಿಂದಿರು; ನಾಳೆ ಬೆಳಿಗ್ಗೆ ಒಂದು ಗುಟ್ಟಾದ ಸ್ಥಳದಲ್ಲಿ ಅಡಗಿಕೊಂಡಿರು. 3ನನ್ನ ತಂದೆಯ
ಬಳಿಯಲ್ಲಿದ್ದು ನಿನ್ನ ಬಗ್ಗೆ ಅವರೊಡನೆ ಮಾತಾಡಿ ಗೊತ್ತಾದ ವಿಷಯವನ್ನು ನೀನು ಅವಿತುಕೊಂಡಿರುವ
ಸ್ಥಳಕ್ಕೆ ಬಂದು ತಿಳಿಸುವೆನು," ಎಂದು ಹೇಳಿದನು. 4ತರುವಾಯ ಅವನು ತನ್ನ ತಂದೆಯ ಮುಂದೆ
ದಾವೀದನನ್ನು ಹೊಗಳಿದನು. "ಒಡೆಯರಾದ ತಾವು ತಮ್ಮ ಸೇವಕ ದಾವೀದನಿಗೆ ಅನ್ಯಾಯ
ಮಾಡಬಾರದು; ಅವನು ನಿಮಗೆ ದ್ರೋಹ ಮಾಡಲಿಲ್ಲ; ಅವನು ಮಾಡಿದ್ದೆಲ್ಲವು ನಿಮ್ಮ ಹಿತಕ್ಕಾಗಿಯೇ. 5ತನ್ನ
ಜೀವವನ್ನು ಕೈಯಲ್ಲಿ ಹಿಡಿದುಕೊಂಡು ಹೋಗಿ ಆ ಫಿಲಿಷ್ಟಿಯನನ್ನು ಕೊಂದನು; ಸರ್ವೇಶ್ವರ ಇಸ್ರಯೇಲರಿಗೆ
ಮಹಾ ಜಯವನ್ನುಂಟುಮಾಡಿದರು. ನೀವೂ ಅದನ್ನು ನೋಡಿ ಸಂತೋಷಪಟ್ಟಿರಿ; ದಾವೀದನನ್ನು
ನಿಷ್ಕಾರಣವಾಗಿ ಕೊಂದು ನಿರ್ದೋಷಿಯ ರಕ್ತವನ್ನು ಸುರಿಸಿದ ಅಪರಾಧಕ್ಕೆ ನೀವೇಕೆ ಗುರಿ ಆಗುತ್ತೀರಿ?"
ಎಂದನು. 6ಸೌಲನು ಯೋನಾತಾನನ ಮಾತುಗಳನ್ನು ಆಲಿಸಿದನು. "ಸರ್ವೇಶ್ವರನಾಣೆ, ಅವನನ್ನು
ಕೊಲ್ಲುವುದಿಲ್ಲ," ಎಂದು ಪ್ರಮಾಣಮಾಡಿದನು. 7ಆಗ ಯೋನಾತಾನನು ದಾವೀದನನ್ನು ಕರೆದು ಅವನಿಗೆ
ಈ ಮಾತುಗಳನ್ನು ತಿಳಿಸಿ ಸೌಲನ ಬಳಿಗೆ ಕರೆದುತಂದನು. ದಾವೀದನು ಮುಂಚಿನಂತೆ ಸೌಲನ
ಸನ್ನಿಧಿಯಲ್ಲೇ ಇರುವಂತೆ ಏರ್ಪಾಡಾಯಿತು. 8ಫಿಲಿಷ್ಟಿಯರು ಮತ್ತೆ ಯುದ್ಧಕ್ಕೆ ಬಂದಾಗ ದಾವೀದನು
ಹೋಗಿ ಅವರೊಡನೆ ಯುದ್ಧಮಾಡಿ ಅವರನ್ನು ಪೂರ್ತಿಯಾಗಿ ಸೋಲಿಸಿ ಓಡಿಸಿಬಿಟ್ಟನು.
9 ಒಂದು ದಿನ ಸೌಲನು ಕೈಯಲ್ಲಿ ಈಟಿಯನ್ನು ಹಿಡಿದು ತನ್ನ ಮನೆಯಲ್ಲಿ ಕುಳಿತುಕೊಂಡಿದ್ದನು.
ಆಗ ಸರ್ವೇಶ್ವರನಿಂದ ಬಂದ ದುರಾತ್ಮವೊಂದು ಅವನನ್ನು ಆವರಿಸಿತು. 10ಒಡನೆ ಕಿನ್ನರಿಯನ್ನು ಬಾರಿಸುತ್ತಿದ್ದ
ದಾವೀದನನ್ನು ಗೋಡೆಗೆ ಕಚ್ಚಿಕೊಳ್ಳುವಂತೆ ತಿವಿಯಬೇಕೆಂದು ಅವನು ತನ್ನ ಈಟಿಯನ್ನು ಎಸೆದನು. ಆದರೆ
ದಾವೀದನು ಥಕ್ಕನೆ ಸೌಲನೆದುರಿನಿಂದ ಸರಿದುಕೊಂಡ ಕಾರಣ ಅದು ಗೋಡೆಯೊಳಗೆ ನಾಟಿತು.
ದಾವೀದನು ಆ ರಾತ್ರಿಯಲ್ಲೇ ತಪ್ಪಿಸಿಕೊಂಡು ಓಡಿಹೋದನು. 11ಸೌಲನು ಕೂಡಲೆ ದೂತರನ್ನು ಕರೆಯಿಸಿ,
"ದಾವೀದನ ಮನೆಯ ಸುತ್ತಲೂ ಹೊಂಚು ಹಾಕಿ ಅವನನ್ನು ಬೆಳಗಾಗುವಷ್ಟರಲ್ಲಿ ಕೊಂದುಹಾಕಬೇಕು,"
ಎಂದು ಆಜ್ಞಾಪಿಸಿ ಕಳುಹಿಸಿದನು. ಮಿಾಕಲಳು ತನ್ನ ಗಂಡನಾದ ದಾವೀದನಿಗೆ, "ನೀವು ಈ ರಾತ್ರಿಯೇ
ತಪ್ಪಿಸಿಕೊಳ್ಳದೆ ಇದ್ದರೆ ನಾಳೆ ಬೆಳಿಗ್ಗೆ ಹತರಾಗುವಿರಿ," ಎಂದು ಹೇಳಿ 12ಅವನನ್ನು ಕಿಟಕಿಯಿಂದ
ಕೆಳಕ್ಕಿಳಿಸಿದಳು. ಅವನು ಓಡಿಹೋಗಿ ತಪ್ಪಿಸಿಕೊಂಡನು. 13ಅನಂತರ ಆಕೆ ಗೊಂಬೆಯೊಂದನ್ನು ತಂದು,
ಹಾಸಿಗೆಯ ಮೇಲೆ ಮಲಗಿಸಿ, ಅದರ ಮುಖದ ಮೇಲೆ ಮೇಕೆಕೂದಲಿನಿಂದ ಮಾಡಿದ ತಲೆದಿಂಬನ್ನು ಇಟ್ಟು
ಕಂಬಳಿಯನ್ನು ಹೊದಿಸಿದಳು. 14ಸೌಲನ ದೂತರು ದಾವೀದನನ್ನು ಹಿಡಿಯುವುದಕ್ಕೆ ಬಂದಾಗ ಅವಳು,
"ಅವರಿಗೆ ಮೈ ಚೆನ್ನಾಗಿಲ್ಲ," ಎಂದು ಹೇಳಿ ಕಳುಹಿಸಿದಳು. 15ಸೌಲನು ಪುನಃ ತನ್ನ ಆಳುಗಳಿಗೆ, "ನೀವು
ಹೋಗಿ ನೋಡಿ ದಾವೀದನನ್ನು ಹಾಸಿಗೆಯೊಡನೆ ನನ್ನ ಬಳಿಗೆ ತೆಗೆದುಕೊಂಡು ಬನ್ನಿ, ಅವನನ್ನು
ಕೊಂದುಹಾಕುತ್ತೇನೆ," ಎಂದು ಆಜ್ಞಾಪಿಸಿದನು. 16ಅವರು ಹೋಗಿ ನೋಡಲು, ಮುಖದ ಕಡೆ
ಮೇಕೆಕೂದಲಿನಿಂದ ಮಾಡಿದ ದಿಂಬಾಗಿತ್ತು. ಹಾಸಿಗೆಯ ಮೇಲಿದ್ದುದು ಒಂದು ಗೊಂಬೆಯೆಂದು ತಿಳಿದು
ಬಂದಿತು. 17ಸೌಲನು ಮಿಾಕಳಿಗೆ, "ನೀನು ನನ್ನನ್ನು ವಂಚಿಸಿದ್ದೇಕೆ? ನನ್ನ ಶತ್ರುವನ್ನು ಕಳುಹಿಸಿ ಅವನು
ತಪ್ಪಿಸಿಕೊಳ್ಳುವಂತೆ ಮಾಡಿದಿಯಲ್ಲವೆ?" ಎನ್ನಲು, ಆಕೆ ಅವನಿಗೆ, " 'ನನ್ನನ್ನು ಕಳುಹಿಸದಿದ್ದರೆ ನಿನ್ನನ್ನು
ಕೊಂದು ಬಿಡುತ್ತೇನೆ' ಎಂದು ಹೇಳಿದ" ಎಂದಳು.

18 ಹೀಗೆ ದಾವೀದನು ತಪ್ಪಿಸಿಕೊಂಡು ರಾಮಾದಲ್ಲಿದ್ದ ಸಮುವೇಲನ ಬಳಿಗೆ ಬಂದನು. ಸೌಲನು
ತನಗೆ ಮಾಡಿದ್ದೆಲ್ಲವನ್ನೂ ತಿಳಿಸಿದನು. ಅವರಿಬ್ಬರೂ ಹೋಗಿ ಅಲ್ಲಿನ ಒಂದು ಮಠದಲ್ಲಿ ವಾಸವಾಗಿ ಇದ್ದರು.
[19]ದಾವೀದನು ರಾಮಾದ ಮಠದಲ್ಲಿ ಇರುವುದು ಸೌಲನಿಗೆ ಗೊತ್ತಾಯಿತು. [20]ಕೂಡಲೆ ಅವನನ್ನು ಹಿಡಿದು
ತರುವುದುಕ್ಕಾಗಿ ಆಳುಗಳನ್ನು ಕಳುಹಿಸಿದನು. ಅವರು ಹೋಗಿ ಅಲ್ಲಿನ ಪ್ರವಾದಿ ಸಮೂಹವು ಪರವಶವಾಗಿ
ಮಾತಾಡುವುದನ್ನೂ ಸಮುವೇಲನು ಅವರ ನಾಯಕನಾಗಿ ನಿಂತಿರುವುದನ್ನೂ ಕಂಡರು. ಆಗ ದೇವರ ಆತ್ಮ
ಅವರ ಮೇಲೆಯೂ ಬಂದಿತು; ಅವರೂ ಪರವಶರಾಗಿ ಮಾತಾಡತೊಡಗಿದರು. [21]ಸೌಲನಿಗೆ ಈ
ವರ್ತಮಾನ ಮುಟ್ಟಿದಾಗ ಅವನು ಬೇರೆ ಆಳುಗಳನ್ನು ಕಳುಹಿಸಿದನು. ಇವರೂ ಪರವಶರಾದರು.
ಮೂರನೆಯ ಸಾರಿ ಇನ್ನೂ ಕೆಲವು ಮಂದಿ ಆಳುಗಳನ್ನು ಕಳುಹಿಸಿದನು. ಇವರೂ ಪರವಶರಾದರು. [22]ಆಗ
ಸೌಲನು ತಾನೇ ರಾಮಾಕ್ಕೆ ಹೋಗಬೇಕೆಂದು ಹೊರಟು ಸೇಕೂವಿನಲ್ಲಿರುವ ದೊಡ್ಡ ಬಾವಿಯ ಬಳಿಗೆ
ಬಂದು, "ಸಮುವೇಲ ಹಾಗು ದಾವೀದನು ಎಲ್ಲಿರುತ್ತಾರೆ?" ಎಂದು ವಿಚಾರಿಸಿದನು. ಜನರು, "ರಾಮಾದ
ಮಠದಲ್ಲಿ ಇದ್ದಾರೆ" ಎಂದು ಉತ್ತರಕೊಟ್ಟರು. [23]ಅವನು ಅಲ್ಲಿಂದ ರಾಮಾದ ಮಠಕ್ಕೆ ಹೋಗುವಾಗ ದೇವರ
ಆತ್ಮ ಅವನ ಮೇಲೆಯೂ ಬಂದಿತು. ಅವನು ಆ ಊರನ್ನು ಮುಟ್ಟುವವರೆಗೆ ಪರವಶನಾಗಿ ಮಾತಾಡುತ್ತಾ
ಹೋದನು. [24]ಅಲ್ಲಿಗೆ ಸೇರಿದ ಮೇಲೆ, ಅವನೂ ತನ್ನ ಬಟ್ಟೆಗಳನ್ನು ತೆಗೆದುಹಾಕಿ, ಸಮುವೇಲನ ಮುಂದೆ
ಪರವಶನಾಗಿ ಮಾತಾಡುತ್ತಾ ಆ ದಿನ ಹಗಲಿರುಳು ಬೆತ್ತಲೆಯಾಗಿ ಬಿದ್ದುಕೊಂಡಿದ್ದನು. ಆದುದರಿಂದ "ಏನು,
ಸೌಲನೂ ಪ್ರವಾದಿಯಾಗಿ ಬಿಟ್ಟನೋ?" ಎಂಬ ಗಾದೆಯುಂಟಾಯಿತು.

### ದಾವೀದ ಮತ್ತು ಯೋನಾತಾನರ ನಡುವೆ ಸಹಕಾರ

**20** ದಾವೀದನು ರಾಮಾದ ಮಠದಿಂದ ತಪ್ಪಿಸಿಕೊಂಡು ಯೋನಾತಾನನ ಬಳಿಗೆ ಬಂದನು. "ನಿನ್ನ ತಂದೆ
ನನ್ನ ಪ್ರಾಣವನ್ನು ತೆಗೆಯಬೇಕೆಂದಿರುತ್ತಾನೆ; ನಾನೇನು ಮಾಡಿದೆ? ನನ್ನ ಅಪರಾಧವೇನು? ನಾನು ಅವನಿಗೆ
ಮಾಡಿದ ದ್ರೋಹ ಯಾವುದು?" ಎಂದನು. [2]ಯೋನಾತಾನನು ಅವನಿಗೆ, "ಇದು ಎಂದಿಗೂ
ಆಗಲೇಬಾರದು; ನಿನಗೆ ಮರಣವಾಗಕೂಡದು. ನನ್ನ ತಂದೆ ಚಿಕ್ಕಕಾರ್ಯವನ್ನಾಗಲಿ
ದೊಡ್ಡಕಾರ್ಯವನ್ನಾಗಲಿ ನನಗೆ ತಿಳಿಸದೆ ಮಾಡುವುದಿಲ್ಲ; ಇಂಥ ಕಾರ್ಯವನ್ನು ನನಗೆ ಹೇಗೆ
ಮರೆಮಾಡಿಯಾರು? ಇಲ್ಲ, ಇದು ನಿಜವಲ್ಲ," ಎಂದು ಹೇಳಿದನು. [3]ಅದಕ್ಕೆ ದಾವೀದನು, "ನಿನಗೆ ನಾನು
ಪ್ರೀತಿಪಾತ್ರನೆಂದು ನಿನ್ನ ತಂದೆಗೆ ಗೊತ್ತಿದೆ. ಆದುದರಿಂದ ಇದನ್ನು ಯೋನಾತಾನನಿಗೆ ತಿಳಿಸಿದರೆ ಅವನಿಗೆ
ದುಃಖವಾಗುವುದೆಂದು ಮರೆಮಾಡುತ್ತಾರೆ. ನಿನ್ನ ಜೀವದಾಣೆ, ಸರ್ವೇಶ್ವರನ ಆಣೆ, ನನಗೂ ಮರಣಕ್ಕೂ
ಒಂದು ಗೇಣು ಮಾತ್ರ ಅಂತರ," ಎಂದು ಖಂಡಿತವಾಗಿ ಹೇಳಿದನು. [4]ಆಗ ಯೋನಾತಾನನು ದಾವೀದನಿಗೆ,
"ನಾನು ನಿನಗಾಗಿ ಏನು ಮಾಡಬೇಕು ಹೇಳು, ಮಾಡುತ್ತೇನೆ," ಎಂದನು.

5 ಅದಕ್ಕೆ ದಾವೀದನು, "ನಾಳೆ ಶುದ್ಧ ಪಾಡ್ಯಮಿ; ನಾನು ಅರಸರ ಪಂಕ್ತಿಯಲ್ಲಿ ಕುಳಿತು
ಊಟಮಾಡಬೇಕಾಗಿರುವುದು; ನೀನು ಅಪ್ಪಣೆ ಕೊಟ್ಟರೆ ನಾನು ಈಗಲೆ ಹೋಗಿ ಮೂರನೆಯ ದಿನ
ಸಾಯಂಕಾಲದವರೆಗೆ ಹೊಲದಲ್ಲಿ ಅಡಗಿಕೊಂಡಿರುವೆನು. [6]ನಿನ್ನ ತಂದೆ ನನ್ನನ್ನು ಕುರಿತು ವಿಚಾರ
ಮಾಡಿದರೆ, ನೀನು, 'ದಾವಿದನು ತನ್ನ ಊರಾದ ಬೆತ್ಲೆಹೇಮಿಗೆ ಹೋಗಿ ಬರುವುದಕ್ಕೆ ಅಪ್ಪಣೆಯಾಗಬೇಕೆಂದು
ನನ್ನನ್ನು ಬಹಳವಾಗಿ ಬೇಡಿಕೊಂಡನು; ಅವನ ಗೋತ್ರದವರು ಅಲ್ಲಿ ವಾರ್ಷಿಕ ಬಲಿದಾನ ಮಾಡುತ್ತಾರಂತೆ,'
ಎಂದು ಹೇಳು. [7]ಅವರು 'ಹಾಗೆಯೇ ಆಗಲಿ' ಎಂದರೆ ನಿನ್ನ ಸೇವಕನಾದ ನಾನು ಸುರಕ್ಷಿತನಾಗಿರುವೆನು;
ಸಿಟ್ಟು ಮಾಡಿದರೆ ಅವರಿಂದ ನನಗೆ ಕೇಡು ಸಿದ್ಧವಾಗಿದೆ ಎಂದು ತಿಳಿದುಕೋ. [8]ಸೇವಕನ ಮೇಲೆ
ದಯವಿರಲಿ. ನೀನು ಸರ್ವೇಶ್ವರನ ಸನ್ನಿಧಿಯಲ್ಲಿ ನನ್ನೊಡನೆ ಒಡಂಬಡಿಕೆ ಮಾಡಿಕೊಂಡಿರುವೆಯಲ್ಲವೆ?
ನಾನು ಅಪರಾಧಿಯಾಗಿದ್ದರೆ, ನನ್ನನ್ನು ನಿನ್ನ ತಂದೆಗೆ ಒಪ್ಪಿಸಬೇಕಾಗಿಲ್ಲ, ನೀನೆ ಕೊಂದು ಹಾಕು," ಎಂದು
ಹೇಳಿದನು.

9 ಯೋನಾತಾನನು ಅವನಿಗೆ, "ಇದು ಆಗಲೇಬಾರದು; ನಿನಗೆ ನನ್ನ ತಂದೆಯಿಂದ ಕೇಡು
ಸಿದ್ಧವಾಗಿದ್ದರೆ ಅದನ್ನು ನಿನಗೆ ನಾನು ತಿಳಿಸದಿರುವೆನೇ?" ಎಂದನು. [10]ದಾವೀದನು, "ನಿನ್ನ ತಂದೆ

ಬಿರುನುಡಿಯಿಂದ ಉತ್ತರಕೊಟ್ಟರೆ ಅದನ್ನು ಯಾರ ಮುಖಾಂತರವಾಗಿ ನನಗೆ ತಿಳಿಸುವೆ?" ಎಂದು
ಅವನನ್ನು ಕೇಳಿದನು. 11ಯೋನಾತಾನನು ಅವನಿಗೆ, "ನಾವು ಅಡವಿಗೆ ಹೋಗೋಣ ಬಾ," ಎಂದು
ಹೇಳಿದನು.

12 ಅವರಿಬ್ಬರೂ ಅಡವಿಗೆ ಹೋದರು. ಅಲ್ಲಿ ಯೋನಾತಾನನು ದಾವೀದನಿಗೆ, "ಇಸ್ರಯೇಲ್
ದೇವರಾದ ಸರ್ವೇಶ್ವರನೇ ಸಾಕ್ಷಿ! ನಾನು ನಾಳೆ ಇಲ್ಲವೆ ನಾಡಿದ್ದು ನಿನ್ನ ವಿಷಯದಲ್ಲಿ ನನ್ನ ತಂದೆಯೊಡನೆ
ಮಾತಾಡಿ, ನಿನ್ನ ಮೇಲೆ ಅವರಿಗೆ ದಯೆಯುಂಟೆಂದು ಗೊತ್ತಾದರೆ ಕೂಡಲೆ ನಿನಗೆ ತಿಳಿಯಪಡಿಸುವೆನು.
13ನನ್ನ ತಂದೆ ನಿನಗೆ ಕೇಡು ಮಾಡಲು ಮನಸ್ಸು ಮಾಡಿದ್ದಾರೆಂದು ಗೊತ್ತಾದರೆ, ಅದನ್ನೂ ನಿನಗೆ ತಿಳಿಸಿ
ನೀನು ತಪ್ಪಿಸಿಕೊಂಡು ಸುರಕ್ಷಿತನಾಗುವ ಹಾಗೆ ನಿನ್ನನ್ನು ಕಳುಹಿಸಿ ಬಿಡುವೆನು. ಹಾಗೆ ಮಾಡದಿದ್ದರೆ,
ಸರ್ವೇಶ್ವರ ನನಗೆ ಏನು ಬೇಕಾದರೂ ಮಾಡಲಿ. ಅವರು ನನ್ನ ತಂದೆಯೊಂದಿಗೆ ಇದ್ದಹಾಗೆ ನಿನ್ನೊಂದಿಗೂ
ಇರಲಿ. 14ನೀನು ಸರ್ವೇಶ್ವರಸ್ವಾಮಿಯನ್ನು ಸ್ಮರಿಸಿ ಜೀವಮಾನದುದ್ದಕ್ಕೂ ನನಗೆ ಕೃಪೆ ತೋರಿಸು; 15ನಾನು
ಸತ್ತನಂತರ ನನ್ನ ಮನೆಯ ಮೇಲೂ ಶಾಶ್ವತವಾಗಿ ನಿನ್ನ ದಯೆಯಿರಲಿ. ಸರ್ವೇಶ್ವರ ನಿನ್ನ ಶತ್ರುಗಳನ್ನೆಲ್ಲ
ಭೂಮಿಯಿಂದ ತೆಗೆದುಹಾಕಿದ ಮೇಲೂ ಅದು ನನ್ನ ಮನೆಯಿಂದ ಅಗಲದಿರಲಿ. 16ಅಗಲಿದರೆ,
ಸರ್ವೇಶ್ವರನೇ ಶತ್ರುಗಳ ಕೈಯಿಂದ ದಾವೀದನಿಗೆ ಮುಯ್ಯಿ ತೀರಿಸಲಿ!" ಎಂದು ಹೇಳಿ ಅವನ
ಮನೆಯವರೊಡನೆ ಒಪ್ಪಂದ ಮಾಡಿಕೊಂಡನು. 17ತಾನು ದಾವೀದನನ್ನು ಸ್ವಂತ ಪ್ರಾಣದಂತೆ ಪ್ರೀತಿಸುತ್ತಾ
ಇದ್ದುದರಿಂದ, ಆ ಪ್ರೀತಿ ಸಾಕ್ಷಿಯಾಗಿ ಅವನಿಂದ ಪ್ರಮಾಣಮಾಡಿಸಿದನು.

18 ಯೋನಾತಾನನು ದಾವೀದನಿಗೆ, "ನಾಳೆ ಶುದ್ಧ ಪಾಡ್ಯಮಿ; ನಿನ್ನ ಸ್ಥಳ ಬರಿದಾಗಿರುವುದನ್ನು
ಅರಸನು ಕಂಡು ನಿನ್ನ ವಿಷಯವಾಗಿ ವಿಚಾರಿಸುವನು. 19ನೀನು ಮೂರನೆಯ ದಿನದಲ್ಲಿ ಮೊದಲು
ಅಡಗಿಕೊಂಡಿದ್ದ ಸ್ಥಳಕ್ಕೆ ಬೇಗ ಬಂದು ಅಲ್ಲಿನ ಕಲ್ಲುಕುಪ್ಪೆಯ ಬಳಿಯಲ್ಲಿ ಕುಳಿತುಕೊಂಡಿರು. 20ನಾನು
ಗುರಿಯಿಟ್ಟವನೋ ಎಂಬಂತೆ ಅದರ ಕಡೆಗೆ ಮೂರು ಬಾಣಗಳನ್ನು ಎಸೆದು ಕೂಡಲೆ ಅವುಗಳನ್ನು
ತರುವುದಕ್ಕಾಗಿ ನನ್ನ ಆಳನ್ನು ಕಳುಹಿಸುವೆನು. 21ನಾನು ಅವನಿಗೆ, 'ಬಾಣಗಳು ಈಚೆ ಬಿದ್ದಿರುತ್ತವೆ;"
ಅವುಗಳನ್ನು ತೆಗೆದುಕೊಂಡು ಬಾ' ಎಂದು ಹೇಳಿದರೆ ನೀನು ಬಾ; ಸರ್ವೇಶ್ವರನಾಣೆ, ಯಾವ ಕೇಡೂ
ಸಂಭವಿಸದೆ ಸುರಕ್ಷಿತನಾಗಿರುವೆ. 22ಆದರೆ, 'ಬಾಣಗಳು ಆಚೆ ಬಿದ್ದಿರುತ್ತವೆ,' ಎಂದು ಹೇಳಿದರೆ ಹೊರಟು
ಹೋಗು. ನೀನು ಹೋಗುವುದೇ ಸರ್ವೇಶ್ವರನ ಚಿತ್ತ. 23ನಮ್ಮಿಬ್ಬರ ಒಪ್ಪಂದಕ್ಕೆ ಸರ್ವೇಶ್ವರ ಸ್ವಾಮಿಯೇ
ನಿತ್ಯಸಾಕ್ಷಿಯಾಗಿರುವರು," ಎಂದನು.

24 ದಾವೀದನು ಅಡವಿಯಲ್ಲಿ ಅಡಗಿಕೊಂಡನು. 25ಅರಸನು ಶುದ್ಧ ಪಾಡ್ಯಮಿಯ ದಿವಸ
ಪದ್ಧತಿಯ ಪ್ರಕಾರ ಗೋಡೆಯ ಬಳಿಯಲ್ಲಿ ಇರುವ ತನ್ನ ಆಸನದ ಮೇಲೆ ಭೋಜನಕ್ಕೆ ಕುಳಿತುಕೊಂಡನು.
ಅವನ ಪಾರ್ಶ್ವದಲ್ಲಿ ಅಬ್ನೇರನೂ ಕುಳಿತುಕೊಂಡನು. ಸೌಲನು ದಾವೀದನ ಸ್ಥಳ ಬರಿದಾಗಿರುವುದನ್ನು
ಕಂಡರೂ 26ಆ ದಿವಸ ಅವನ ವಿಷಯವಾಗಿ ಏನೂ ಹೇಳಲಿಲ್ಲ. "ಅವನಿಗೆ ಏನಾದರೂ ಸಂಭವಿಸಿರಬೇಕು;
ಅವನು ಹೊಲೆಯಾಗಿರಬಹುದು, ತನ್ನನ್ನು ಇನ್ನೂ ಶುದ್ಧಪಡಿಸಿಕೊಳ್ಳದೆ ಇರಬಹುದು," ಎಂದುಕೊಂಡನು.
27ಮರುದಿವಸದಲ್ಲಿಯೂ, ಅಂದರೆ ತಿಂಗಳಿನ ಎರಡನೆಯ ದಿವಸದಲ್ಲಿಯೂ, ದಾವೀದನ ಸ್ಥಾನ
ಬರಿದಾಗಿದ್ದುದರಿಂದ ಸೌಲನು, "ಜೆಸ್ಸೆಯನ ಮಗ ನಿನ್ನೆಯೂ ಈ ಹೊತ್ತೂ ಭೋಜನಕ್ಕೆ ಏಕೆ ಬರಲಿಲ್ಲ?"
ಎಂದು ತನ್ನ ಮಗ ಯೋನಾತಾನನನ್ನು ಕೇಳಿದನು.

28 ಅದಕ್ಕೆ ಯೋನಾತಾನನು, "ದಾವೀದನು, ಬೆತ್ಲೆಹೇಮಿನಲ್ಲಿ ತಮ್ಮ ಗೋತ್ರದವರು ಬಲಿದಾನ
ಮಾಡುತ್ತಾರೆ; 29ತನ್ನ ಅಣ್ಣ ಅದಕ್ಕಾಗಿ ನನ್ನನ್ನು ಕರೆದಿದ್ದಾನೆ; ತಾನು ಹೋಗಿ ನನ್ನ ಅಣ್ಣಂದಿರನ್ನು ನೋಡಿ
ಬರಲು ಅಪ್ಪಣೆಯಾಗಬೇಕು, ಎಂದು ನನ್ನನ್ನು ಬಹಳವಾಗಿ ಬೇಡಿಕೊಂಡನು. ಆದುದರಿಂದ ಅವನು
ಅರಸರ ಪಂಕ್ತಿಗೆ ಬರಲಿಲ್ಲ," ಎಂದು ಉತ್ತರಕೊಟ್ಟನು.

30 ಆಗ ಸೌಲನು ಸಿಡಿದೆದ್ದು ಯೋನಾತಾನನಿಗೆ, "ಎಲೋ, ದುಷ್ಟದಾಸಿಯ ಮಗನೇ, ನೀನು
ಜೆಸ್ಸೆಯನ ಮಗನೊಡನೆ ಸ್ನೇಹದಿಂದ ಇರುವುದು ನನಗೆ ಗೊತ್ತಿಲ್ಲವೇ? ಈ ಸ್ನೇಹದಿಂದ ನಿನಗೂ
ಹೆತ್ತವಳಿಗೂ ಮಾನಭಂಗ ತರುತ್ತಾ ಇರುವೆ. 31ಆ ಜೆಸ್ಸೆಯನ ಮಗ ಭೂಲೋಕದಲ್ಲಿ ಇರುವವರೆಗೆ
ನಿನಗಾಗಲಿ, ರಾಜನಾಗುವ ಹಕ್ಕು ಬಾಧ್ಯತೆಗಳಿಗಾಗಲಿ ಉಳಿವಿಲ್ಲ. ಆದುದರಿಂದ ಹೋಗು, ಅವನನ್ನು

ಕರೆಯಿಸಿ ನನ್ನ ಬಳಿಗೆ ತೆಗೆದುಕೊಂಡು ಬಾ; ಅವನು ಸಾಯಬೇಕು", ಎಂದನು. [32]ಅದಕ್ಕೆ ಯೋನಾತಾನನು, "ಅವನು ಏಕೆ ಸಾಯಬೇಕು? ಅವನು ಏನು ಮಾಡಿದ್ದಾನೆ?" ಎಂದು ತಂದೆಯನ್ನು ಕೇಳಿದನು. [33]ಕೂಡಲೆ ಸೌಲನು ಅವನನ್ನು ತಿವಿಯುವವನಂತೆ ಈಟಿಯನ್ನೆಸೆದನು. ತನ್ನ ತಂದೆ ನಿಜವಾಗಿಯೂ ದಾವೀದನನ್ನು ಕೊಲ್ಲುವುದಕ್ಕೆ ನಿಶ್ಚಯಿಸಿದ್ದಾನೆಂಬುದು ಯೋನಾತಾನನಿಗೆ ಅರಿವಾಯಿತು. [34]ಅವನು ಬಲು ಸಿಟ್ಟುಗೊಂಡು ಪಂಕ್ತಿಯಿಂದೆದ್ದು ಹೋದನು. ತನ್ನ ತಂದೆ, ದಾವೀದನನ್ನು ಅಪಮಾನಪಡಿಸಿದ್ದರಿಂದ ಯೋನಾತಾನನಿಗೆ ಬಹಳ ದುಃಖವುಂಟಾಗಿ ಅವನು ಆ ದಿವಸ ಊಟಮಾಡಲೇ ಇಲ್ಲ.

35 ಅವನು ಮರುದಿವಸ ಮುಂಜಾನೆ ಒಬ್ಬ ಹುಡುಗನನ್ನು ಕರೆದುಕೊಂಡು ದಾವೀದನನ್ನು ನೋಡುವುದಕ್ಕಾಗಿ ಅಡವಿಗೆ ಹೋದನು. [36]ಹುಡುಗನಿಗೆ, "ಬೇಗ ಹೋಗಿ ನಾನು ಎಸೆದ ಬಾಣಗಳನ್ನು ಕೂಡಿಸಿಕೊಂಡು ಬಾ," ಎಂದು ಹೇಳಿದನು. ಆ ಹುಡುಗ ಹೋಗುತ್ತಿರುವಾಗ ಯೋನಾತಾನನು ಬಾಣವನ್ನು ಅವನ ಆಚೆಗೆ ಎಸೆದನು. [37]ಹುಡುಗನು ಬಾಣಬಿದ್ದ ಸ್ಥಳಕ್ಕೆ ಬಂದಾಗ ಯೋನಾತಾನನು ಗಟ್ಟಿಯಾಗಿ ಅವನಿಗೆ, "ಬಾಣ ಇನ್ನೂ ಆಚೆ ಬಿದ್ದಿದೆ. [38]ಬೇಗ ಓಡು, ನಿಲ್ಲಬೇಡ," ಎಂದು ಕೂಗಿದನು. ಹುಡುಗನು ಬಾಣಗಳನ್ನು ಕೂಡಿಸಿಕೊಂಡು ಯಜಮಾನನ ಬಳಿಗೆ ಬಂದನು. [39]ಇದರ ರಹಸ್ಯ ಯೋನಾತಾನನಿಗೆ ಹಾಗು ದಾವೀದನಿಗೆ ಗೊತ್ತಾಯಿತೇ ಹೊರತು ಆ ಹುಡುಗನಿಗೆ ಗೊತ್ತಾಗಲಿಲ್ಲ.

40 ಯೋನಾತಾನನು ತನ್ನ ಆಯುಧಗಳನ್ನು ಹುಡುಗನ ಕೈಯಲ್ಲಿ ಕೊಟ್ಟು, "ಇವುಗಳನ್ನು ಊರಿಗೆ ತೆಗೆದುಕೊಂಡು ಹೋಗು," ಎಂದು ಹೇಳಿದನು. [41]ಹುಡುಗನು ಹೋಗುತ್ತಲೇ ದಾವೀದನು ಕಲ್ಲು ಕುಪ್ಪೆಯ ಬಳಿಯಿಂದೆದ್ದು ಬಂದು ಮೂರು ಸಾರಿ ಸಾಷ್ಟಾಂಗವಾಗಿ ಯೋನಾತಾನನನ್ನು ವಂದಿಸಿದನು. ಅವರು ಒಬ್ಬರನ್ನೊಬ್ಬರು ಅಪ್ಪಿಕೊಂಡು ಅತ್ತರು. ದಾವೀದನು ಬಹಳವಾಗಿ ಅತ್ತನು. [42]ಅನಂತರ ಯೋನಾತಾನನು ದಾವೀದನಿಗೆ, "ಸಮಾಧಾನದಿಂದ ಹೋಗು; ನಾವು ಸರ್ವೇಶ್ವರನ ಹೆಸರಿನಲ್ಲಿ ಆಣೆಯಿಟ್ಟು ಒಪ್ಪಂದ ಮಾಡಿಕೊಂಡಿದ್ದೇವಲ್ಲವೆ? ಅವರೇ ನನಗೂ ನಿನಗೂ ನನ್ನ ಸಂತಾನಕ್ಕೂ ನಿನ್ನ ಸಂತಾನಕ್ಕೂ ಸದಾ ಸಂಬಂಧ ಸಾಕ್ಷಿಯಾಗಿರಲಿ," ಎಂದು ಹೇಳಿದನು. ಬಳಿಕ ದಾವೀದನು ಹೊರಟು ಹೋದನು. ಇತ್ತ ಯೋನಾತಾನನು ಊರಿಗೆ ಹಿಂದಿರುಗಿದನು.

**ದಾವೀದನ ಪಲಾಯನ**

**21** ದಾವೀದನು ನೋಬ್ ಊರಲ್ಲಿದ್ದ ಯಾಜಕ ಅಹೀಮೆಲೆಕನ ಬಳಿಗೆ ಬಂದನು. ಅಹೀಮೆಲೆಕನು ದಾವೀದನನ್ನು ಭಯಭಕ್ತಿಯಿಂದ ಎದುರುಗೊಂಡನು. "ನಿಮ್ಮ ಜೊತೆಯಲ್ಲಿ ಒಬ್ಬನಾದರೂ ಇಲ್ಲವಲ್ಲಾ; ನೀವು ಒಬ್ಬರೇ ಬಂದದ್ದೇಕೆ?" ಎಂದು ಅವನನ್ನು ಕೇಳಿದನು.

2 ಅವನು, "ಅರಸರು ಒಂದು ಕೆಲಸವನ್ನು ಆಜ್ಞಾಪಿಸಿ ಇದನ್ನು ಯಾರಿಗೂ ತಿಳಿಸಬಾರದೆಂದು ಕಟ್ಟಪ್ಪಣೆಮಾಡಿ ನನ್ನನ್ನು ಕಳುಹಿಸಿದ್ದಾರೆ. ನನ್ನ ಆಳುಗಳು ಇಂಥಿಂಥ ಸ್ಥಳದಲ್ಲಿ ನನ್ನನ್ನು ಸಂಧಿಸಬೇಕೆಂದು ಗೊತ್ತುಮಾಡಿದ್ದೇನೆ. [3]ಈಗ ನಿನ್ನಲ್ಲಿ ಏನಾದರೂ ಉಂಟೋ? ನಾಲ್ಕೈದು ರೊಟ್ಟಿಗಳಾದರೂ ಬೇರೆ ಯಾವ ಆಹಾರ ಪದಾರ್ಥವಾದರೂ ಇದ್ದರೆ ನನಗೆ ಕೊಡು," ಎಂದನು.

4 ಆ ಯಾಜಕನು ದಾವೀದನಿಗೆ, "ನನ್ನ ಬಳಿಯಲ್ಲಿ ಪವಿತ್ರವಾದ ಮೀಸಲು ರೊಟ್ಟಿಗಳ ಹೊರತು ಬೇರೆ ರೊಟ್ಟಿಗಳಿಲ್ಲ; ನಿಮ್ಮ ಆಳುಗಳು ಸದ್ಯಕ್ಕೆ ಸಂಗಬಿಟ್ಟರಾಗಿದ್ದರೆ ಅವುಗಳನ್ನು ಕೊಡಬಹುದು," ಎಂದನು. [5]ದಾವೀದನು, "ನಮ್ಮ ಎಲ್ಲಾ ಯುದ್ಧಪ್ರಯಾಣಗಳಲ್ಲಿ ಸ್ತ್ರೀಸಂಗ ನಿಷೇಧ ಮಾಡುವಂತೆ ಈಗಲೂ ಮಾಡಿದ್ದೇವೆ. ನಾವು ಸಾಧಾರಣಕಾರ್ಯಕ್ಕೆ ಹೊರಟಾಗಲೂ ಆಳುಗಳ ಸಾಮಾಗ್ರಿಗಳು ಪರಿಶುದ್ಧವಾಗಿರುತ್ತಿದ್ದವು. ಈ ದಿನವಂತು ಅವು ಮತ್ತಷ್ಟು ಪರಿಶುದ್ಧವಾಗಿ ಇರುತ್ತವಲ್ಲವೇ?" ಎಂದು ಉತ್ತರಕೊಟ್ಟನು.

6 ಬಿಸಿರೊಟ್ಟಿಗಳನ್ನು ಅರ್ಪಿಸಿದ ಆ ದಿನದಲ್ಲಿ ಸರ್ವೇಶ್ವರನ ಸನ್ನಿಧಿಯಿಂದ ತೆಗೆಯಲಾದ ನೈವೇದ್ಯದ ಮೊದಲ ರೊಟ್ಟಿಗಳ ಹೊರತು ಅಲ್ಲಿ ಬೇರೆ ರೊಟ್ಟಿಗಳಿರಲಿಲ್ಲ. ಆದುದರಿಂದ ಯಾಜಕನು ಆ ಪರಿಶುದ್ಧವಾದ ರೊಟ್ಟಿಗಳನ್ನೇ ಕೊಟ್ಟು ಬಿಟ್ಟನು. [7]ಅದೇ ದಿನ ಸೌಲನ ಪಶುಪಾಲರಲ್ಲಿ ಮುಖ್ಯಸ್ಥನಾದ ದೋಯೇಗನೆಂಬ

ಎದೋಮ್ಯನು ಸರ್ವೇಶ್ವರನ ಆಲಯದಲ್ಲಿ ತಂಗಬೇಕಾಗಿತ್ತು. 8ದಾವೀದನು ಅಹೀಮೆಲೆಕನನ್ನು, "ಅರಸನ
ಕಾರ್ಯ ತುರ್ತಾದದ್ದು. ಆದ್ದರಿಂದ ಕತ್ತಿಯನ್ನಾಗಲಿ ಬೇರೆ ಆಯುಧವನ್ನಾಗಲಿ ತೆಗೆದುಕೊಂಡು ಬರಲು
ಆಗಲಿಲ್ಲ. ನಿನ್ನ ಬಳಿಯಲ್ಲಿ ಭರ್ಜಿಯಾಗಲಿ, ಕತ್ತಿಯಾಗಲಿ ಇಲ್ಲವೇ?" ಎಂದು ಕೇಳಿದನು. 9ಅವನು, "ನೀವು
ಏಲಾ ತಗ್ಗಿನಲ್ಲಿ ಕೊಂದುಹಾಕಿದ ಫಿಲಿಷ್ಟಿಯನಾದ ಗೊಲ್ಯಾತನ ಕತ್ತಿಯನ್ನು ಬಟ್ಟೆಯಲ್ಲಿ ಸುತ್ತಿ ಏಫೋದಿನ
ಹಿಂದೆ ಇಡಲಾಗಿದೆ; ಬೇಕಾದರೆ ಅದನ್ನು ತೆಗೆದುಕೊಳ್ಳಿ. ಅದರ ಹೊರತು ನನ್ನ ಬಳಿ ಬೇರೊಂದಿಲ್ಲ,"
ಎಂದು ಉತ್ತರಕೊಟ್ಟನು. ದಾವೀದನು, "ಅದಕ್ಕೆ ಸಮಾನವಾದದ್ದು ಮತ್ತೊಂದಿಲ್ಲ, ಅದನ್ನೇ ಕೊಡು," ಎಂದು
ಹೇಳಿ ತೆಗೆದುಕೊಂಡನು.

10 ದಾವೀದನು ಸೌಲನ ಭಯದಿಂದ ಅದೇ ದಿವಸ ಗತ್ ಊರಿನ ರಾಜನಾದ ಆಕೀಷನ ಬಳಿಗೆ
ಓಡಿಹೋದನು. 11ಆಕೀಷನ ಸೇವಕರು, " 'ಸೌಲನು ಕೊಂದನು ಸಾವಿರಗಟ್ಟಳೆ. ದಾವೀದನು ಕೊಂದನು
ಹತ್ತು ಸಾವಿರಗಟ್ಟಳೆ' ಎಂಬುದಾಗಿ ಮಹಿಳೆಯರು ಕುಣಿಯುತ್ತಾ ಹಾಡಿದ್ದು ಇವನನ್ನು ಕುರಿತಲ್ಲವೇ?" ಎಂದು
ಮಾತಾಡಿಕೊಂಡರು. 12ದಾವೀದನು ಈ ಮಾತುಗಳನ್ನು ಕೇಳುತ್ತಲೆ, ಗತ್ ಊರಿನ ರಾಜನಾದ ಆಕೀಷನಿಗೆ
ಬಹಳವಾಗಿ ಹೆದರಿದನು. 13ಅವನ ಸೇವಕರ ಮುಂದೆ ತನ್ನ ಬುದ್ಧಿಯನ್ನು ಮಾರ್ಪಡಿಸಿಕೊಂಡು, ಗಡ್ಡದ
ಮೇಲೆಲ್ಲಾ ಜೊಲ್ಲು ಸುರಿಸುತ್ತಾ, ಕದಗಳ ಮೇಲೆ ಗೀಜುತ್ತಾ ತನ್ನನ್ನು ಹುಚ್ಚನಂತೆ ತೋರಿಸಿಕೊಂಡನು. 14ಆಗ
ಆಕೀಷನು ತನ್ನ ಸೇವಕರಿಗೆ, "ಈ ಮನುಷ್ಯ ಹುಚ್ಚನೆಂದು ನಿಮಗೆ ಕಾಣುವುದಿಲ್ಲವೇ? ಇವನನ್ನು ನನ್ನ
ಹತ್ತಿರ ಏಕೆ ತಂದಿರಿ? 15ನನ್ನ ಬಳಿ ಹುಚ್ಚರು ಕಡಿಮೆಯೆಂದು ನೆನೆಸಿ ನನ್ನನ್ನು ಮರುಳುಮಾಡಿ
ಬೇಸರಗೊಳಿಸುವುದಕ್ಕಾಗಿ ಇವನನ್ನು ತಂದಿರೋ? ಇಂಥವನು ನನ್ನ ಮನೆಗೆ ಬರಬೇಕಿತ್ತೋ?" ಎಂದನು.

### ಯಾಜಕರ ಕಗ್ಗೊಲೆ

**22** ದಾವೀದನು ಅಲ್ಲಿಂದ ತಪ್ಪಿಸಿಕೊಂಡು ಅದುಲ್ಲಾಮ್ ಎಂಬ ಗವಿಗೆ ಹೋದನು. ಈ ಸಮಾಚಾರ,
ಅವನ ಅಣ್ಣಂದಿರಿಗೂ ಬೇರೆ ಎಲ್ಲಾ ಸಂಬಂಧಿಕರಿಗೂ ಮುಟ್ಟಿತು. ಅವರೂ ಬಂದು ಅವನನ್ನು
ಸೇರಿಕೊಂಡರು. 2ಇದಲ್ಲದೆ ಶೋಷಿತರು, ಸಾಲಗಾರರು ಹಾಗು ಮನನೊಂದವರು ಆಗಿದ್ದ ಜನಸಾಮಾನ್ಯರು
ಬಂದು ಅವನನ್ನು ಆಶ್ರಯಿಸಿಕೊಂಡರು. ಹೀಗೆ ಅವನು ಸುಮಾರು ನಾನೂರು ಜನರಿಗೆ ನಾಯಕನಾದನು.
3ಅನಂತರ ದಾವೀದನು ತನ್ನ ತಂದೆತಾಯಿಗಳನ್ನು ಮೋವಾಬ್ ದೇಶದ ಮಿಚ್ಪೆ ಎಂಬಲ್ಲಿಗೆ ಕರೆದುಕೊಂಡು
ಹೋದನು. ಅಲ್ಲಿನ ರಾಜನನ್ನು, "ದೇವರು ನನಗೆ ಮಾರ್ಗ ತೋರಿಸುವವರೆಗೂ ನನ್ನ ತಂದೆತಾಯಿಗಳು
ನಿಮ್ಮ ಬಳಿಯಲ್ಲಿರುವುದಕ್ಕೆ ಅಪ್ಪಣೆಯಾಗಬೇಕು," ಎಂದು ಬೇಡಿಕೊಂಡನು. 4ಅವರನ್ನು ಆ ರಾಜನ
ಬಳಿಯಲ್ಲಿ ಬಿಟ್ಟನು. ದಾವೀದನು ದುರ್ಗದಲ್ಲಿದ್ದ ಕಾಲವೆಲ್ಲಾ ಅವನ ತಂದೆತಾಯಿಗಳು ಆ ರಾಜನ
ಬಳಿಯಲ್ಲೇ ವಾಸವಾಗಿದ್ದರು.

5 ಗಾದ್ ಪ್ರವಾದಿಯು ದಾವೀದನಿಗೆ, "ನೀನು ಈ ದುರ್ಗದಲ್ಲಿರಬಾರದು; ಇದನ್ನು ಬಿಟ್ಟು
ಯೆಹೂದ ನಾಡಿಗೆ ಹೋಗು," ಎಂದು ಹೇಳಿದ್ದರಿಂದ ಅವನು ಹೆರೆತ್ ಮರುಭೂಮಿಗೆ ಹೋದನು.

6 ಒಂದು ದಿನ ಸೌಲನು ತನ್ನ ಎಲ್ಲಾ ಪರಿವಾರದವರ ನಡುವೆ ಕೈಯಲ್ಲಿ ಭರ್ಜಿಯನ್ನು
ಹಿಡಿದುಕೊಂಡು ಗಿಬೆಯ ಗುಡ್ಡದ ಪಿಚುಲವೃಕ್ಷದ ಕೆಳಗೆ ಕುಳಿತುಕೊಂಡನು. "ದಾವೀದನೂ ಅವನ ಜನರೂ
ಅಡಗಿಕೊಂಡಿರುವ ಸ್ಥಳ ಗೊತ್ತಾಗಿದೆ," ಎಂಬ ಸುದ್ದಿ ಅವನಿಗೆ ಮುಟ್ಟಿತು.

7 ಆಗ ಅವನು ತನ್ನ ಸುತ್ತಲೂ ನಿಂತಿದ್ದ ಪರಿವಾರದವರಿಗೆ, "ಬೆನ್ಯಾಮೀನನ ಕುಲಪುತ್ರರೇ ಕೇಳಿ;
ನೀವೆಲ್ಲರೂ ನನಗೆ ವಿರೋಧವಾಗಿ ಒಳಸಂಚು ಮಾಡುವುದೇಕೆ? ಜೆಸ್ಸೆಯನ ಮಗನು ನಿಮ್ಮೆಲ್ಲರಿಗೂ
ಹೊಲಗಳನ್ನೂ ದ್ರಾಕ್ಷಿ ತೋಟಗಳನ್ನೂ ಕೊಡುತ್ತಾನೆಯೇ? ಎಲ್ಲರನ್ನು ಸಹಸ್ರಾಧಿಪತಿಗಳನ್ನಾಗಲಿ,
ಶತಾಧಿಪತಿಗಳನ್ನಾಗಲಿ ಮಾಡುತ್ತಾನೆಯೆ? 8ನನ್ನ ಮಗನು ಜೆಸ್ಸೆಯನ ಮಗನೊಡನೆ
ಒಪ್ಪಂದಮಾಡಿಕೊಂಡದ್ದನ್ನು ನಿಮ್ಮಲ್ಲಿ ಒಬ್ಬನಾದರೂ ನನಗೆ ತಿಳಿಸಲಿಲ್ಲ. ನನ್ನ ಸೇವಕನೊಬ್ಬ ನನಗೆ
ವಿರೋಧವಾಗಿ ಒಳಸಂಚುಮಾಡುವ ಹಾಗೆ ನನ್ನ ಮಗನೇ ಅವನನ್ನು ಎತ್ತಿಕೊಟ್ಟಿದ್ದಾನೆಂದು ಒಬ್ಬನಾದರೂ
ನನಗೆ ಏಕೆ ತಿಳಿಸಲಿಲ್ಲ? ನನ್ನ ಹಿತಚಿಂತೆ ನಿಮಗೆ ಕಿಂಚಿತ್ತೂ ಇಲ್ಲ," ಎಂದನು.

9 ಆಗ ಸೌಲನ ಸೇವಕರ ಬಳಿಯಲ್ಲಿ ನಿಂತಿದ್ದ ಎದೋಮ್ಯನಾದ ದೋಯೇಗನು, “ಆ ಜೆಸ್ಸೆಯನ
ಮಗ ನೋಬದಲ್ಲಿರುವ ಅಹೀಟೂಬನ ಮಗನಾದ ಅಹೀಮೆಲೆಕನ ಬಳಿಗೆ ಬಂದದ್ದನ್ನು ನಾನು ನೋಡಿದೆ.
10ಆ ಯಾಜಕ ಇವನಿಗೆ ಸರ್ವೇಶ್ವರನ ಚಿತ್ತವನ್ನು ತಿಳಿಸಿ, ಆಹಾರವನ್ನೂ ಫಿಲಿಷ್ಟಿಯನಾದ ಗೊಲ್ಯಾತನ
ಕತ್ತಿಯನ್ನೂ ಕೊಟ್ಟನು,” ಎಂದು ಹೇಳಿದನು.
11ಕೂಡಲೆ ಸೌಲನು ಅಹೀಟೂಬನ ಮಗನೂ ಯಾಜಕನೂ ಆಗಿದ್ದ ಅಹೀಮೆಲೆಕನನ್ನು ಹಾಗು
ಅವನ ಕುಟುಂಬಕ್ಕೆ ಸೇರಿದ್ದ ನೋಬದ ಬೇರೆ ಎಲ್ಲಾ ಯಾಜಕರನ್ನೂ ಬರಮಾಡಿದನು. ಅವರೆಲ್ಲರೂ ಅರಸನ
ಸನ್ನಿಧಿಗೆ ಬಂದರು. 12ಅರಸನು, “ಅಹೀಟೂಬನ ಮಗನೇ, ನಾನು ಕೇಳುವ ಪ್ರಶ್ನೆಗೆ ಉತ್ತರಕೊಡು,”
ಎಂದನು. ಅದಕ್ಕೆ ಅವನು, “ಒಡೆಯಾ, ಅಪ್ಪಣೆಯಾಗಲಿ,” ಎಂದನು. 13ಆಗ ಸೌಲನು, “ನೀನು ನನಗೆ
ವಿರೋಧವಾಗಿ ಜೆಸ್ಸೆಯನ ಮಗನೊಡನೆ ಒಳಸಂಚುಮಾಡಿದ್ದೇಕೆ? ಅವನು ನನಗೆ ವಿರೋಧವಾಗಿ ಎದ್ದು
ನನ್ನ ಜೀವಕ್ಕಾಗಿ ಹೊಂಚುಹಾಕುವಂತೆ ನೀನು ಅವನಿಗೆ ರೊಟ್ಟಿ ಹಾಗು ಕತ್ತಿಯನ್ನು ಕೊಟ್ಟು ದೈವೋತ್ತರವನ್ನು
ತಿಳಿಸಿದ್ದೇಕೆ?” ಎಂದು ಕೇಳಿದನು.
14 ಅಹೀಮೆಲೆಕನು, “ನಿಮ್ಮ ಎಲ್ಲಾ ಸೇವಕರಲ್ಲಿ, ಅರಸನ ಅಳಿಯನಾಗಿರುವ ದಾವೀದನಂತೆ
ನಂಬಿಗಸ್ತನಾದವನು ಯಾರಿದ್ದಾನೆ? ದಾವೀದನು ನಿಮ್ಮ ಆಲೋಚಕರಲ್ಲೊಬ್ಬನೂ ತಮ್ಮ ಮನೆಯವರಲ್ಲಿ
ಗೌರವಾನ್ವಿತನೂ ಆಗಿದ್ದಾನಲ್ಲವೇ? 15ನಾನು ಅವನ ಪರವಾಗಿ ದೇವರ ಸನ್ನಿಧಿಯಲ್ಲಿ ವಿಚಾರಮಾಡಿದ್ದು
ಇದೇ ಮೊದಲನೆಯ ಸಾರಿಯೇ? ಇಲ್ಲವೇ ಇಲ್ಲ, ಅರಸರು ತಮ್ಮ ಸೇವಕನಾದ ನನ್ನ ಮೇಲೆ ಹಾಗು ನನ್ನ
ಮನೆಯವರ ಮೇಲೆ ಇಂಥ ಅಪವಾದವನ್ನು ಹೊರಿಸಬಾರದು. ಈ ವಿಷಯದಲ್ಲಿ ತಮ್ಮ ಸೇವಕನಾದ ನನಗೆ
ಸ್ವಲ್ಪವೂ ಗೊತ್ತಿರಲಿಲ್ಲ,” ಎಂದು ಉತ್ತರ ಕೊಟ್ಟನು.
16 ಆಗ ಅರಸನು ಅವನಿಗೆ, “ಅಹೀಮೆಲೆಕನೇ, ನೀನೂ ನಿನ್ನ ಮನೆಯವರೂ ಸಾಯಲೇಬೇಕು,”
ಎಂದು ಹೇಳಿದನು. 17ತನ್ನ ಬಳಿಯಲ್ಲಿದ್ದ ಸಿಪಾಯಿಗಳಿಗೆ, “ನೀವು ಹಿಂದಿರುಗಿ ಸರ್ವೇಶ್ವರನ ಈ
ಯಾಜಕರನ್ನು ಕೊಲ್ಲಿರಿ; ದಾವೀದನು ಪಲಾಯನ ಆದದ್ದು ಗೊತ್ತಿದ್ದರೂ ನನಗೆ ತಿಳಿಸದೆ ಅವನಿಗೆ
ಸಹಾಯಮಾಡಿದ್ದಾರೆ,” ಎಂದು ಆಜ್ಞಾಪಿಸಿದನು. ಆದರೆ ಅರಸನ ಸಿಪಾಯಿಗಳು ಸರ್ವೇಶ್ವರನ ಯಾಜಕರ
ಮೇಲೆ ಕೈಹಾಕುವುದಕ್ಕೆ ಮನಸ್ಸು ಮಾಡಲಿಲ್ಲ. 18ಆದುದರಿಂದ ಸೌಲನು ಎದೋಮ್ಯನಾದ ದೋಯೇಗನಿಗೆ,
“ನೀನು ಹೋಗಿ ಅವರನ್ನು ಕೊಲ್ಲು,” ಎಂದು ಆಜ್ಞಾಪಿಸಿದನು. ಅವನು ನಾರುಮಡಿಯ ಏಫೋದನ್ನು
ಧರಿಸಿಕೊಂಡಿದ್ದ ಎಂಬತ್ತೈದು ಮಂದಿ ಯಾಜಕರನ್ನು ಆ ದಿವಸ ಕೊಂದುಹಾಕಿದನು. 19ಅನಂತರ ಅವನು
ಯಾಜಕರ ಪಟ್ಟಣವಾದ ನೋಬಕ್ಕೆ ಹೋಗಿ ಅಲ್ಲಿನ ಸ್ತ್ರೀಪುರುಷರನ್ನೂ ಶಿಶುಬಾಲಕರನ್ನೂ
ದನಕುರಿಕತ್ತೆಗಳನ್ನೂ ಕತ್ತಿಯಿಂದ ಸಂಹರಿಸಿದನು.
20 ಅಹೀಟೂಬನ ಮಗನಾದ ಅಹೀಮೆಲೆಕನ ಮಕ್ಕಳಲ್ಲೊಬ್ಬನಾದ ಎಬ್ಯಾತಾರನೆಂಬವನು
ತಪ್ಪಿಸಿಕೊಂಡು ದಾವೀದನ ಬಳಿಗೆ ಓಡಿಬಂದನು. 21ಸೌಲನು ಸರ್ವೇಶ್ವರನ ಯಾಜಕರನ್ನು ಕೊಲ್ಲಿಸಿದ
ಸಂಗತಿಯನ್ನು ಅವನಿಗೆ ತಿಳಿಸಿದನು. 22ದಾವೀದನು, “ಎದೋಮ್ಯನಾದ ದೋಯೇಗನನ್ನು ನಾನು ಅಲ್ಲಿ
ಕಂಡಾಗಲೇ ಇವನು ಸೌಲನಿಗೆ ಹೇಗೂ ಈ ಸಂಗತಿಯನ್ನು ತಿಳಿಸುವನೆಂದು ನೆನೆಸಿಕೊಂಡೆ; ನಿನ್ನ
ಸಂಬಂಧಿಕರ ವಧೆಗೆ ನಾನೇ ಕಾರಣನಾದೆನಲ್ಲಾ! 23ನೀನಾದರೂ ಹೆದರದೆ ನನ್ನ ಸಂಗಡ ಇರು; ನನ್ನ
ಪ್ರಾಣವನ್ನು ತೆಗೆಯಬೇಕೆಂದಿರುವವನು ನಿನ್ನ ಪ್ರಾಣವನ್ನೂ ತೆಗೆಯಬೇಕೆಂದಿರುತ್ತಾನೆ. ನೀನು ನನ್ನ
ಜೊತೆಯಲ್ಲಿ ಇರುವುದಾದರೆ ಸುರಕ್ಷಿತನಾಗಿರುವೆ,” ಎಂದನು.

### ಕೆಯೀಲಾ ಊರಿನಲ್ಲಿ ದಾವೀದನು

**23** ಫಿಲಿಷ್ಟಿಯರು ಕೆಯೀಲಾಕ್ಕೆ ಮುತ್ತಿಗೆ ಹಾಕಿ ಅಲ್ಲಿನ ಕಣಗಳನ್ನು ಸೂರೆ ಮಾಡುತ್ತಿದ್ದಾರೆಂದು
ದಾವೀದನಿಗೆ ತಿಳಿಸಲಾಯಿತು. 2ಅವನು, “ನಾನು ಹೋಗಿ ಆ ಫಿಲಿಷ್ಟಿಯರ ಮೇಲೆ ದಾಳಿಮಾಡಲೆ?”
ಎಂದು ಸರ್ವೇಶ್ವರನನ್ನು ಕೇಳಿದನು. ಸರ್ವೇಶ್ವರ ಅವನಿಗೆ, “ಹೋಗಿ ಫಿಲಿಷ್ಟಿಯರ ಮೇಲೆ ದಾಳಿಮಾಡಿ
ಕೆಯೀಲಾ ಊರನ್ನು ರಕ್ಷಿಸು,” ಎಂದು ಉತ್ತರ ಕೊಟ್ಟರು. 3ಆದರೆ ದಾವೀದನ ಸೈನಿಕರು ಅವನಿಗೆ, “ನಮಗೆ

ಯೆಹೂದ ನಾಡಿನಲ್ಲಿಯೇ ಇಷ್ಟು ಆಪತ್ತುಗಳು ಇರುವಲ್ಲಿ ಫಿಲಿಷ್ಟಿಯ ಸೈನ್ಯದೊಡನೆ ಯುದ್ಧಮಾಡುವುದಕ್ಕಾಗಿ
ಕೆಯೀಲಾಕ್ಕೆ ಹೋದರೆ ಅಲ್ಲಿ ಎಷ್ಟೋ ಅಧಿಕವಾದ ಗಂಡಾಂತರಗಳು ಕಾದಿರಬಹುದಲ್ಲವೆ?" ಎಂದರು.
4ಆದುದರಿಂದ ಅವನು ಮತ್ತೆ ಸರ್ವೇಶ್ವರನನ್ನು ಕೇಳಿದನು. ಅವರು, "ನೀನೆದ್ದು ಕೆಯೀಲಾಕ್ಕೆ ಹೋಗು;
ನಾನು ಫಿಲಿಷ್ಟಿಯರನ್ನು ನಿನ್ನ ಕೈಗೆ ಒಪ್ಪಿಸಿ ಕೊಡುವೆನು," ಎಂದು ಉತ್ತರಕೊಟ್ಟರು. 5ಆಗ ದಾವೀದನು ತನ್ನ
ಜನರೊಡನೆ ಕೆಯೀಲಾಕ್ಕೆ ಹೋಗಿ ಫಿಲಿಷ್ಟಿಯರೊಡನೆ ಯುದ್ಧಮಾಡಿದನು. ಅವರನ್ನು ಪೂರ್ಣವಾಗಿ
ಸೋಲಿಸಿ, ಅವರ ಪಶುಗಳನ್ನು ತೆಗೆದುಕೊಂಡು ಕೆಯೀಲಾದವರನ್ನು ಕಾಪಾಡಿದನು. 6ದಾವೀದನ ಬಳಿಗೆ
ಓಡಿಬಂದಿದ್ದ ಅಹೀಮೆಲೆಕನ ಮಗನಾದ ಎಬ್ಯಾತಾರನು ಕೆಯೀಲಕ್ಕೆ ಬರುವಾಗ 'ಏಫೋದ'ನ್ನು ತಂದಿದ್ದನು.
7ದಾವೀದನು ಕೆಯೀಲಾದಲ್ಲಿದ್ದಾನೆಂಬ ಸಮಾಚಾರ ಸೌಲನಿಗೆ ಮುಟ್ಟಿತು. ಆಗ ಅವನು, "ದೇವರು
ದಾವೀದನನ್ನು ನನ್ನ ಕೈಗೆ ಒಪ್ಪಿಸಿದ್ದಾರೆ. ಅವನು ಅಗುಳಿಕದಗಳಿಂದ ಭದ್ರವಾಗಿರುವ ಕೋಟೆಯನ್ನು
ಪ್ರವೇಶಿಸಿದ್ದಾನಲ್ಲವೆ? ಅವನು ಅಲ್ಲಿಂದ ತಪ್ಪಿಸಿಕೊಳ್ಳಲಾರನು," ಎಂದುಕೊಂಡನು. 8ಕೆಯೀಲಾದಲ್ಲಿದ್ದ
ದಾವೀದನನ್ನೂ ಅವನ ಜನರನ್ನೂ ಹಿಡಿಯುವುದಕ್ಕಾಗಿ ಸೈನ್ಯವನ್ನು ಕೂಡಿಸಿದನು. 9ಸೌಲನು ತನಗೆ ಕೇಡು
ಮಾಡಬೇಕೆಂದಿದ್ದಾನೆಂದು ದಾವೀದನು ತಿಳಿದು ಯಾಜಕನಾದ ಎಬ್ಯಾತಾರನಿಗೆ, "ಏಫೋದನ್ನು ಇಲ್ಲಿಗೆ
ತೆಗೆದುಕೊಂಡು ಬಾ," ಎಂದು ಹೇಳಿ ತರಿಸಿ, 10 "ಇಸ್ರಯೇಲ್ ದೇವರಾದ ಸರ್ವೇಶ್ವರಾ, ಸೌಲನು
ಕೆಯೀಲಾಕ್ಕೆ ಬಂದು ನನ್ನ ನಿಮಿತ್ತ ಪಟ್ಟಣವನ್ನು ಹಾಳುಮಾಡಬೇಕೆಂದಿದ್ದಾನೆ ಎಂದು ನಿಮ್ಮ ದಾಸನಾದ
ನನಗೆ ಸುದ್ದಿ ಬಂದಿದೆ. 11ನಾನು ಕೇಳಿದ ಸುದ್ದಿಯಂತೆ ಅವನು ನಿಜವಾಗಿ ಬರುವನೇ? ಕೆಯೀಲಾ
ಪುರಜನರು ನನ್ನನ್ನು ಅವನ ಕೈಗೆ ಒಪ್ಪಿಸುವರೇ? ಇಸ್ರಯೇಲ ದೇವರಾದ ಸರ್ವೇಶ್ವರಾ, ಈ ವಿಷಯದಲ್ಲಿ
ಉತ್ತರ ದಯಪಾಲಿಸಿ," ಎಂದು ಪ್ರಾರ್ಥಿಸಿದನು. ಸೌಲನು ಬರುವನೆಂಬುದಾಗಿ ಸರ್ವೇಶ್ವರನಿಂದ ಉತ್ತರ
ಸಿಕ್ಕಿತು. 12ದಾವೀದನು ಪುನಃ ಸರ್ವೇಶ್ವರನನ್ನು, "ಕೆಯೀಲಾದವರು ನನ್ನನ್ನೂ ನನ್ನ ಜನರನ್ನೂ ಸೌಲನ
ಕೈಗೆ ಒಪ್ಪಿಸುವರೇ?" ಎಂದು ಕೇಳಿದಾಗ ಅವರು, "ಒಪ್ಪಿಸಿಕೊಡುವರು," ಎಂದು ಉತ್ತರ ಕೊಟ್ಟರು. 13ಆಗ
ದಾವೀದನು ತನ್ನ ಸಂಗಡ ಇದ್ದ ಆರುನೂರು ಜನರ ಸಹಿತವಾಗಿ ಕೆಯೀಲಾ ಊರನ್ನು ಬಿಟ್ಟು ಎಲ್ಲೆಲ್ಲಿಯೋ
ಅಲೆದಾಡಿದನು. ದಾವೀದನು ಕೆಯೀಲಾದಿಂದ ತಪ್ಪಿಸಿಕೊಂಡನು ಎಂದು ಸೌಲನಿಗೆ ಗೊತ್ತಾಗಲು ಅವನು
ಪ್ರಯಾಣವನ್ನು ನಿಲ್ಲಿಸಿಬಿಟ್ಟನು.

## ಗುಡ್ಡಪ್ರದೇಶಗಳಲ್ಲಿ ದಾವೀದ

14 ಅನಂತರ ದಾವೀದನು ಮರುಭೂಮಿಯಲ್ಲಿರುವ ಆಯಾ ಆಶ್ರಯಗಿರಿಗಳಲ್ಲಿ ಇರುತ್ತಿದ್ದನು.
ಕಡೆಗೆ ಜೀಫ್ ಮರುಭೂಮಿಯ ಪರ್ವತ ಪ್ರಾಂತ್ಯಕ್ಕೆ ಬಂದು ಅಲ್ಲಿ ವಾಸಮಾಡಿದನು. ದಿನಂಪ್ರತಿ
ಹುಡುಕುತ್ತಿದ್ದರೂ ದೇವರು ಆತನನ್ನು ಸೌಲನ ಕೈಗೆ ಒಪ್ಪಿಸಲಿಲ್ಲ. 15ಸೌಲನು ತನ್ನನ್ನು ಕೊಲ್ಲಲು
ಹೊರಟಿದ್ದಾನೆಂದು ದಾವೀದನು ತಿಳಿದು ಜೀಫ್ ಮರುಭೂಮಿಯ ಹೋರೆಷದಲ್ಲಿ ಅಡಗಿಕೊಂಡಿದ್ದನು.
16ಆಗ ಸೌಲನ ಮಗ ಯೋನಾತಾನನು ಅಲ್ಲಿಗೆ ಹೋಗಿ, 17ದಾವೀದನಿಗೆ, "ಭಯ ಪಡಬೇಡ; ನೀನು ನನ್ನ
ತಂದೆಯಾದ ಸೌಲನ ಕೈಗೆ ಸಿಕ್ಕಿಬೀಳುವುದಿಲ್ಲ; ನೀನು ಇಸ್ರಯೇಲರ ಅರಸನಾಗುವೆ; ನಾನು ನಿನಗೆ
ಎರಡನೆಯವನಾಗಿರುವೆನು. ಹೀಗಾಗುವುದೆಂದು ನನ್ನ ತಂದೆ ಸೌಲ ತಿಳಿದುಕೊಂಡಿದ್ದಾರೆ," ಎಂದು ಹೇಳಿ
ದೇವರ ಹೆಸರಿನಲ್ಲಿ ಧೈರ್ಯತುಂಬಿದನು. 18ಅವರಿಬ್ಬರೂ ಸರ್ವೇಶ್ವರನ ಸನ್ನಿಧಿಯಲ್ಲಿ
ಒಪ್ಪಂದಮಾಡಿಕೊಂಡರು. ತರುವಾಯ ಯೋನಾತಾನನು ತನ್ನ ಮನೆಗೆ ಹೋದನು. ದಾವೀದನು
ಹೋರೆಷದಲ್ಲಿಯೇ ಇದ್ದನು.

19 ಜೀಫ್ಯರು ಗಿಬೆಯದಲ್ಲಿದ್ದ ಸೌಲನ ಬಳಿಗೆ ಬಂದು, "ಒಡೆಯಾ, ಆಲಿಸಬೇಕು; ದಾವೀದನು
ನಮ್ಮ ಪ್ರಾಂತ್ಯಕ್ಕೆ ಸೇರಿದ ಹೋರೆಷದ ಗಿರಿಗಳಲ್ಲಿ, ಅಂದರೆ ಮರುಭೂಮಿಯ ದಕ್ಷಿಣದಲ್ಲಿ ಇರುವ ಹಕೀಲಾ
ಬೆಟ್ಟದಲ್ಲಿ ಅಡಗಿಕೊಂಡಿದ್ದಾನೆ. 20ಅರಸರು ಕುತೂಹಲದಂತೆ ನಮ್ಮ ಜೊತೆಯಲ್ಲಿ ಬರೋಣವಾಗಲಿ;
ಅವನನ್ನು ತಮ್ಮ ಕೈಗೆ ಒಪ್ಪಿಸುವ ಕೆಲಸ ನಮ್ಮದು," ಎಂದು ಹೇಳಿದರು. 21ಆಗ ಸೌಲನು ಅವರಿಗೆ, "ನೀವು
ನನ್ನ ಮೇಲೆ ಕನಿಕರ ಪಟ್ಟದ್ದರಿಂದ ಸರ್ವೇಶ್ವರನ ಆಶೀರ್ವಾದ ನಿಮ್ಮ ಮೇಲಿರಲಿ! 22ನೀವು ದಯವಿಟ್ಟು
ಹೋಗಿ ಅವನು ತಿರುಗಾಡುವ ಸ್ಥಳವನ್ನೂ ಅಲ್ಲಿ ಅವನ ಗುರುತು ಕಂಡಿರುವವರನ್ನೂ ಸೂಕ್ಷ್ಮವಾಗಿ

ವಿಚಾರಿಸಿ ಗೊತ್ತುಮಾಡಿಕೊಳ್ಳಿ. ಅವನು ಬಹಳ ಯುಕ್ತಿವಂತನೆಂದು ಕೇಳಿದ್ದೇನೆ. [23]ಆದ್ದರಿಂದ ಅವನು ಅಡಗಿಕೊಳ್ಳತಕ್ಕ ಎಲ್ಲಾ ಗುಟ್ಟಾದ ಸ್ಥಳಗಳನ್ನು ಗೊತ್ತುಮಾಡಿಕೊಂಡು ಖಚಿತವಾದ ವರ್ತಮಾನವನ್ನು ನನಗೆ ಮುಟ್ಟಿಸಿರಿ. ನಾನು ನಿಮ್ಮ ಸಂಗಡ ಬರುವೆನು. ಅವನು ನಾಡಿನಲ್ಲಿ ಇರುವುದಾದರೆ ಯೆಹೂದ ಪ್ರಜೆಗಳ ಮಧ್ಯದಲ್ಲೆಲ್ಲಾ ಹುಡುಕಿ ಅವನನ್ನು ಹಿಡಿಯುವೆನು," ಎಂದನು.

24 ಅವರು ಹೊರಟು ಸೌಲನ ಮುಂದಾಗಿ ಜೀಫಿಗೆ ಬಂದರು. ದಾವೀದನೂ ಅವನ ಜನರೂ ಮಾವೋನ್ ಮರುಭೂಮಿಯ ದಕ್ಷಿಣದಿಕ್ಕಿನಲ್ಲಿ ಇರುವ ಅರಾಬಾ ಎಂಬ ತಗ್ಗಾದ ಪ್ರದೇಶದಲ್ಲಿ ಇದ್ದರು.
[25]ಸೌಲನು ತನ್ನ ಜನರೊಡನೆ ದಾವೀದನನ್ನು ಹಿಡಿಯುವುದಕ್ಕೆ ಬಂದನು. ಈ ಸಮಾಚಾರ ದಾವೀದನಿಗೆ ಸಿಕ್ಕಿತು. ಅವನು ಮಾವೋನಿನಲ್ಲಿ ಇರುವ ಒಂದು ಕಡಿದಾದ ಬೆಟ್ಟಕ್ಕೆ ಹೋಗಿ ಅಡಗಿಕೊಂಡನು. ಸೌಲನು ಇದನ್ನು ಕೇಳಿ ಮಾವೋನ್ ಮರುಭೂಮಿಗೆ ಬಂದು ಆ ಬೆಟ್ಟದ ಒಂದು ಕಡೆಯಲ್ಲಿ ಹೋಗುತ್ತಿದ್ದನು.
[26]ಅದರ ಇನ್ನೊಂದು ಕಡೆಯಲ್ಲಿ ದಾವೀದನೂ ಅವನ ಜನರೂ ಇದ್ದರು. ದಾವೀದನೂ ಅವನ ಜನರೂ ತಪ್ಪಿಸಿಕೊಳ್ಳುವುದಕ್ಕೆ ತ್ವರೆಪಡುತ್ತಿದ್ದರು. ಅಷ್ಟರಲ್ಲಿ ಸೌಲನೂ ಅವನ ಜನರೂ ಬಂದು ಅವರನ್ನು ಸುತ್ತಿ ಹಿಡಿಯುವುದಕ್ಕಿದ್ದರು. [27]ಅದೇ ವೇಳೆಗೆ ದೂತನೊಬ್ಬನು ಸೌಲನ ಬಳಿಗೆ ಬಂದು, "ಬೇಗ ಬನ್ನಿ, ಫಿಲಿಷ್ಟಿಯರು ನಾಡಿನೊಳಕ್ಕೆ ನುಗ್ಗಿದ್ದಾರೆ," ಎಂದು ತಿಳಿಸಿದನು. [28]ಆದ್ದರಿಂದ ಅವನು ದಾವೀದನನ್ನು ಹಿಡಿಯುವ ಕೆಲಸವನ್ನು ಬಿಟ್ಟು ಫಿಲಿಷ್ಟಿಯರಿಗೆ ವಿರುದ್ಧ ಯುದ್ಧಕ್ಕೆ ಹೊರಟನು. ಈ ಕಾರಣ ಆ ಬೆಟ್ಟಕ್ಕೆ 'ಅಡ್ಡಬೆಟ್ಟ' ಎಂದು ಹೆಸರಾಯಿತು. [29]ದಾವೀದನು ಅಲ್ಲಿಂದ ಗುಡ್ಡ ಹತ್ತಿಹೋಗಿ ಏಂಗೆದಿಯ ಗಿರಿಗಳಲ್ಲಿ ವಾಸಿಸಿದನು.

### ದಾವೀದನಿಂದ ಸೌಲನಿಗೆ ಪ್ರಾಣದಾನ

**24** ಸೌಲನು ಫಿಲಿಷ್ಟಿಯರನ್ನು ಓಡಿಸಿ ಹಿಂದಿರುಗಿದಾಗ ದಾವೀದನು ಏಂಗೆದಿಯ ಮರುಭೂಮಿಯಲ್ಲಿದ್ದಾನೆಂದು ಅವನಿಗೆ ತಿಳಿದುಬಂದಿತು. [2]ಆಗ ಅವನು ಇಸ್ರಯೇಲರಲ್ಲಿ ಶ್ರೇಷ್ಠರಾದ ಮೂರು ಸಾವಿರ ಮಂದಿ ಸೈನಿಕರನ್ನು ಆರಿಸಿಕೊಂಡು ಕಾಡುಗುರಿಬಂಡೆಗಳಲ್ಲಿದ್ದ ದಾವೀದನನ್ನೂ ಅವನ ಜನರನ್ನೂ ಹುಡುಕುವುದಕ್ಕಾಗಿ ಹೊರಟನು. [3]ಮಾರ್ಗದಲ್ಲಿ ಕುರಿಹಟ್ಟಿಗಳ ಬಳಿಯಲ್ಲಿ ಒಂದು ಗವಿಯನ್ನು ಕಂಡು ಶೌಚಕ್ಕಾಗಿ ಅದರೊಳಗೆ ಪ್ರವೇಶಿಸಿದನು. ದಾವೀದನೂ ಅವನ ಜನರೂ ಅದೇ ಗವಿಯ ಹಿಂಗಡೆಯಲ್ಲಿ ಅಡಗಿಕೊಂಡಿದ್ದರು. [4]ಜನರು ದಾವೀದನಿಗೆ, " 'ನಿನ್ನ ಶತ್ರುವನ್ನು ನಿನ್ನ ಕೈಗೆ ಒಪ್ಪಿಸಿಕೊಡುವೆನು; ಆಗ ನೀನು ಅವನನ್ನು ನಿನ್ನ ಇಷ್ಟಾನುಸಾರ ನಡೆಸಬಹುದು,' ಎಂದು ಸರ್ವೇಶ್ವರ ನಿನಗೆ ಹೇಳಿದ ಮಾತು ನೆರವೇರುವ ಸುದಿನವಿದು," ಎಂದರು. ಅವನೆದ್ದು ಮೆಲ್ಲಗೆ ಹೋಗಿ ಸೌಲನ ನಿಲುವಂಗಿಯ ಮೂಲೆಯನ್ನು ಕತ್ತರಿಸಿಕೊಂಡನು. [5]ಅನಂತರದಲ್ಲೇ ಸೌಲನ ನಿಲುವಂಗಿಯ ಮೂಲೆಯನ್ನು ಕತ್ತರಿಸಿದ್ದಕ್ಕಾಗಿ ಅವನ ಮನಸ್ಸಾಕ್ಷಿ ಅವನನ್ನು ಹಂಗಿಸತೊಡಗಿತು. [6]ಅವನು ತನ್ನ ಜನರಿಗೆ, "ಆತ ಸರ್ವೇಶ್ವರನಿಂದ ಅಭಿಷಿಕ್ತನು ಹಾಗು ಆತನು ನನ್ನ ಒಡೆಯನು ಆಗಿದ್ದಾರೆ; ನಾನು ನಿಮ್ಮ ಮಾತು ಕೇಳಿ ಸರ್ವೇಶ್ವರನ ಅಭಿಷಿಕ್ತನ ವಿರೋಧವಾಗಿ ಕೈಯೆತ್ತದಂತೆ ಆ ಸರ್ವೇಶ್ವರನೇ ನನಗೆ ಅಡ್ಡಿಮಾಡಲಿ," ಎಂದನು. [7]ಹೀಗೆ ಸೌಲನಿಗೆ ವಿರುದ್ಧ ತನ್ನ ಜನರು ದಂಗೆಯೇಳದಂತೆ ತಡೆದನು.

8 ಸೌಲನು ಗವಿಯಿಂದ ಹೊರಗೆ ಬಂದು ಸ್ವಲ್ಪ ಮುಂದೆ ಹೋದಮೇಲೆ ದಾವೀದನೂ ಹೊರಗೆ ಬಂದು, "ಅರಸರೇ, ನನ್ನ ಒಡೆಯರೇ," ಎಂದು ಅವನನ್ನು ಕೂಗಿದನು. ಸೌಲನು ಹಿಂದಿರುಗಿ ನೋಡಿದನು. ಆಗ ಅವನಿಗೆ ಸಾಷ್ಟಾಂಗ ನಮಸ್ಕಾರಮಾಡಿ, [9]"ನಿಮಗೆ ನಾನು ಕೇಡುಮಾಡಬೇಕೆಂದಿದ್ದೇನೆಂದು ಹೇಳುವವರ ಮಾತಿಗೆ ನೀವು ಕಿವಿಗೊಡಬೇಡಿ. [10]ಇಂದು ಈ ಗವಿಯಲ್ಲಿ ಸರ್ವೇಶ್ವರ ನಿಮ್ಮನ್ನು ನನ್ನ ಕೈಗೆ ಒಪ್ಪಿಸಿಕೊಟ್ಟಿದ್ದರೆಂಬುದು ಈಗ ನಿಮಗೆ ಗೊತ್ತಾಗಿರಬೇಕು. ನಿಮ್ಮನ್ನು ಕೊಂದುಬಿಡಬೇಕೆಂದು ಕೆಲವರು ನನಗೆ ಹೇಳಿದರು. ಆದರೆ ನಾನು ಅವರಿಗೆ, 'ಸರ್ವೇಶ್ವರನಿಂದ ಅಭಿಷಿಕ್ತರಾದ ನನ್ನ ಒಡೆಯರ ಮೇಲೆ ಕೈಯೆತ್ತುವುದಿಲ್ಲ,' ಎಂದು ಹೇಳಿ ನಿಮ್ಮನ್ನು ಉಳಿಸಿದೆ. [11]ನೀವು ನನ್ನ ತಂದೆ; ಇಗೋ ನೋಡಿ! ನನ್ನ ಕೈಯಲ್ಲಿ ನಿಮ್ಮ ನಿಲುವಂಗಿಯ ತುಂಡು ಇದೆ; ನಾನು ನಿಮ್ಮನ್ನು ಕೊಲ್ಲದೆ ನಿಮ್ಮ ನಿಲುವಂಗಿಯ ಮೂಲೆಯನ್ನು

ಕತ್ತರಿಸಿಕೊಂಡೆನಷ್ಟೆ. ಇದರಿಂದ ನನ್ನಲ್ಲಿ ಯಾವ ದೋಷವೂ ಅಪರಾಧವೂ ಇರುವುದಿಲ್ಲ; ನಾನು ನಿಮಗೆ
ವಿರೋಧವಾಗಿ ದ್ರೋಹ ಮಾಡಲಿಲ್ಲ ಎಂದು ತಿಳಿದುಕೊಳ್ಳಿ; ಆದರೂ ನೀವು ನನ್ನ ಪ್ರಾಣಕ್ಕೆ ಹೊಂಚು
ಹಾಕುತ್ತಿರುವಿರಲ್ಲವೆ? 12ಸರ್ವೇಶ್ವರನೇ ನಮ್ಮ ಉಭಯರ ವ್ಯಾಜ್ಯವನ್ನು ತೀರಿಸಲಿ; ಅವರೇ ನನಗಾಗಿ ನಿಮಗೆ
ಮುಯ್ಯಿಸಲ್ಲಿಸಲಿ; ನಾನಂತೂ ನಿಮಗೆ ವಿರೋಧವಾಗಿ ಕೈಯೆತ್ತುವುದಿಲ್ಲ. 13ಇಸ್ರಯೇಲರಲ್ಲಿ ‘ಕೆಟ್ಟವರಿಂದಲೇ
ಕೇಡು’ ಎಂಬುದಾಗಿ ಹಿರಿಯರಿಂದ ಬಂದ ಗಾದೆಯುಂಟು. ನಾನು ನಿಮಗೆ ವಿರೋಧವಾಗಿ
ಕೈಯೆತ್ತುವುದಿಲ್ಲ. 14ಇಸ್ರಯೇಲರ ಅರಸರೇ, ಯಾರನ್ನು ಹಿಂದಟ್ಟಿ ಹೊರಟಿದ್ದೀರಿ? ಯಾರನ್ನು
ಹಿಡಿಯಬೇಕೆಂದಿರುತ್ತೀರಿ? ಸತ್ತ ನಾಯಿಯನ್ನೇ? ಒಂದು ಬಡ ಸೊಳ್ಳೆಯನ್ನೇ? 15ಸರ್ವೇಶ್ವರ
ನ್ಯಾಯಾಧಿಪತಿಯಾಗಿ ನಮ್ಮಿಬ್ಬರ ವ್ಯಾಜ್ಯವನ್ನು ತೀರಿಸಲಿ; ಅವರೇ ನೋಡಿ ನನ್ನ ಪರವಾಗಿ ವಾದಿಸಿ ನನ್ನನ್ನು
ನಿಮ್ಮ ಕೈಯಿಂದ ತಪ್ಪಿಸಲಿ,” ಎಂದು ಹೇಳಿದನು.

16 ದಾವೀದನ ಮಾತುಗಳು ಮುಗಿದನಂತರ ಸೌಲನು, “ದಾವೀದನೇ, ನನ್ನ ಮಗನೇ, ಇದು
ನಿಜವಾಗಿಯೂ ನಿನ್ನ ಸ್ವರವೇ?” ಎಂದು ಗಟ್ಟಿಯಾಗಿ ಅತ್ತನು. 17ಇದಲ್ಲದೆ ಅವನು ದಾವೀದನಿಗೆ, “ನೀನು
ನನಗಿಂತ ನೀತಿವಂತ; ನಾನು ನಿನಗೆ ಕೇಡುಮಾಡಿದರೂ ನೀನು ನನಗೆ ಒಳ್ಳೆಯದನ್ನೇ ಮಾಡಿದೆ.
18ಸರ್ವೇಶ್ವರ ನನ್ನನ್ನು ನಿನ್ನ ಕೈಗೆ ಒಪ್ಪಿಸಿ ಕೊಟ್ಟರೂ ನೀನು ನನ್ನನ್ನು ಕೊಲ್ಲಲಿಲ್ಲ. ಇದರಿಂದ ನೀನು ನನಗೆ
ಹಿತವನ್ನೇ ಮಾಡುವಂಥವನೆಂಬುದು ಈ ದಿನ ಖಚಿತವಾಯಿತು. 19ಯಾವನಾದರೂ ತನ್ನ ಕೈಗೆ ಸಿಕ್ಕಿದ
ವೈರಿಯನ್ನು ಸುಕ್ಷೇಮದಿಂದ ಕಳುಹಿಸಿಬಿಡುತ್ತಾನೆಯೇ? ನೀನು ಈ ದಿನ ನನಗೆ ಮಾಡಿದ ಉಪಕಾರಕ್ಕಾಗಿ
ಸರ್ವೇಶ್ವರ ನಿನಗೆ ಪ್ರತ್ಯುಪಕಾರಮಾಡಲಿ. 20ಕೇಳು; ನೀನು ಹೇಗೂ ಅರಸನಾಗುವೆಯೆಂದೂ ಇಸ್ರಯೇಲ್
ರಾಜ್ಯ ನಿನ್ನ ಆಳ್ವಿಕೆಯಲ್ಲಿ ಸ್ಥಿರವಾಗುವುದೆಂದೂ ಬಲ್ಲೆ. 21ಹೀಗಿರುವುದರಿಂದ ನೀನು ನನ್ನ ಸಂತಾನವನ್ನು
ನಿರ್ಮೂಲಮಾಡುವುದು ಇಲ್ಲವೆಂದೂ ನಮ್ಮ ಕುಲದಿಂದ ನನ್ನ ಹೆಸರನ್ನು ತೆಗೆದುಹಾಕುವುದಿಲ್ಲವೆಂದೂ
ಸರ್ವೇಶ್ವರನ ಹೆಸರಿನಲ್ಲಿ ಪ್ರಮಾಣ ಮಾಡು,” ಎಂದು ಬೇಡಿಕೊಂಡನು. ಹಾಗೆಯೇ ದಾವೀದನು ಪ್ರಮಾಣ
ಮಾಡಿದನು. 22ಅನಂತರ ಸೌಲನು ತನ್ನ ಮನೆಗೆ ಹೊರಟನು; ದಾವೀದನು ತನ್ನ ಜನರೊಡನೆ ಆಶ್ರಯಗಿರಿಗೆ
ಮರಳಿದನು.

## ಸಮುವೇಲನ ಮರಣ

**25** ಸಮುವೇಲನು ಮರಣ ಹೊಂದಿದನು. ಇಸ್ರಯೇಲರೆಲ್ಲರೂ ಕೂಡಿಬಂದು ಅವನಿಗಾಗಿ ಸಂತಾಪ
ಸೂಚಿಸುತ್ತಾ ಅವನ ಶವವನ್ನು ರಾಮಾದಲ್ಲಿದ್ದ ಅವನ ಮನೆಯ ಅಂಗಳದಲ್ಲೇ ಸಮಾಧಿಮಾಡಿದರು.

## ದಾವೀದನು ಮತ್ತು ಅಬೀಗೈಲಳು

ದಾವೀದನು ಹೊರಟು ಪಾರಾನ್ ಮರುಭೂಮಿಗೆ ಹೋದನು. 2ಕರ್ಮೆಲಿನಲ್ಲಿ ಸ್ವಂತ ಸೊತ್ತು
ಪಡೆದಿದ್ದ ಒಬ್ಬ ಮನುಷ್ಯ ಮಾವೋನಿನಲ್ಲಿ ವಾಸಿಸುತ್ತಿದ್ದನು. ಅವನ ಹೆಸರು ನಾಬಾಲ. 3ಅವನ ಹೆಂಡತಿಯ
ಹೆಸರು ಅಬೀಗೈಲ್. ಆಕೆ ಬಹು ಬುದ್ಧಿವಂತೆ ಹಾಗು ಸುಂದರಿ. ಕಾಲೇಬನ ವಂಶದವನಾದ ಆ
ಮನುಷ್ಯನಾದರೊ ನಿಷ್ಠುರನು ಹಾಗು ದುಷ್ಕರ್ಮಿ. ಅವನು ಬಹು ಧನವಂತನೂ ಆಗಿದ್ದ. ಅವನಿಗೆ ಮೂರು
ಸಾವಿರ ಕುರಿಗಳೂ ಸಾವಿರ ಆಡುಗಳೂ ಇದ್ದವು. ಅವನು ಒಮ್ಮೆ ಕರ್ಮೆಲಿನಲ್ಲಿ ಕುರಿಗಳ ಉಣ್ಣೆಯನ್ನು
ಕತ್ತರಿಸುತ್ತಿದ್ದನು. 4ನಾಬಾಲನು ಉಣ್ಣೆ ಕತ್ತರಿಸುತ್ತಿದ್ದಾನೆ ಎಂಬ ಸಮಾಚಾರ ಅಲ್ಲಿನ ಮರುಭೂಮಿಯಲ್ಲಿದ್ದ
ದಾವೀದನಿಗೆ ಮುಟ್ಟಿತು. 5ಅವನು ಹತ್ತು ಮಂದಿ ಸೇವಕರನ್ನು ಕರೆದು ಅವರಿಗೆ, “ನೀವು ಕರ್ಮೆಲಿನಲ್ಲಿರುವ
ನಮ್ಮ ಸಂಬಂಧಿಕನಾದ ನಾಬಾಲನ ಬಳಿಗೆ ಹೋಗಿ ಅವನ ಕ್ಷೇಮಸಮಾಚಾರವನ್ನು ವಿಚಾರಿಸಿರಿ. 6ಅವನಿಗೆ
ನನ್ನ ಹೆಸರಿನಲ್ಲಿ, ‘ನಿನಗೂ ನಿನ್ನ ಕುಟುಂಬಕ್ಕೂ ನಿನ್ನ ಸರ್ವಸಂಪತ್ತಿಗೂ ಶುಭವಾಗಲಿ! 7ನಿನ್ನ ಕುರಿಗಳ
ಉಣ್ಣೆಯನ್ನು ಕತ್ತರಿಸುವ ಕೆಲಸ ನಡೆಯುತ್ತಿದೆಯೆಂಬ ಸುದ್ದಿಯನ್ನು ಕೇಳಿದ್ದೇನೆ. ನಿನ್ನ ಕುರುಬರು ನಮ್ಮೊಡನೆ
ಕರ್ಮೆಲಿನಲ್ಲಿದ್ದ ಕಾಲವೆಲ್ಲಾ ನಾವು ಅವರನ್ನು ತೊಂದರೆಪಡಿಸಲಿಲ್ಲ; ಅವರಿಗೇನೂ ನಷ್ಟ ಮಾಡಲಿಲ್ಲ. 8ನಿನ್ನ
ಆಳುಗಳನ್ನೇ ಕೇಳು, ಅವರೇ ಹೇಳುವರು. ಹೀಗಿರುವುದರಿಂದ ಶುಭಕಾಲದಲ್ಲಿ ನಿನ್ನ ಬಳಿಗೆ ಬಂದಿರುವ

ನನ್ನ ಸೇವಕರಿಗೆ ನಿನ್ನ ದೃಷ್ಟಿಯಲ್ಲಿ ದಯೆದೊರಕಲಿ. ಕೃಪೆಮಾಡಿ ನಿನ್ನ ಸೇವಕರಿಗೂ ಮಗನಾದ
ದಾವೀದನಿಗೂ ನಿನಗಿರುವುದರಲ್ಲಿ ಸಾಧ್ಯವಾದುದ್ದನ್ನು ಕೊಡು,’ ಎಂದು ಅವನಿಗೆ ಹೇಳಿರಿ,” ಎಂದು
ಅವರನ್ನು ಕಳುಹಿಸಿದನು. 9ದಾವೀದನ ಸೇವಕರು ಹೋಗಿ ಅವನ ಹೆಸರಿನಲ್ಲಿ ಈ ಮಾತುಗಳನ್ನೆಲ್ಲಾ
ನಾಬಾಲನಿಗೆ ತಿಳಿಸಿದರು. ಅಲ್ಲೇ ಉತ್ತರಕ್ಕಾಗಿ ಕಾಯುತ್ತಿದ್ದರು. 10ನಾಬಾಲನು ಅವರಿಗೆ, “ದಾವೀದನಾರು?
ಜೆಸ್ಸೆಯನ ಮಗನಾರು? ಯಜಮಾನರನ್ನು ಬಿಟ್ಟು ಓಡಿಹೋದ ಗುಲಾಮರು ಈಗಿನ ಕಾಲದಲ್ಲಿ ಎಷ್ಟು
ಮಂದಿಯಿಲ್ಲ. 11ಉಣ್ಣೆ ಕತ್ತರಿಸುವವರಿಗಾಗಿ ನಾನು ಸಿದ್ಧಮಾಡಿಸಿದ ಮಾಂಸವನ್ನೂ ಆಹಾರಪಾನಗಳನ್ನೂ
ಎತ್ತಿ ಎಲ್ಲಿಂದಲೋ ಬಂದವರಿಗೆ ಕೊಡಲಾಗದು” ಎಂದು ಉತ್ತರಕೊಟ್ಟನು. 12ಆ ಸೇವಕರು ಹಿಂದಿರುಗಿ
ತಮ್ಮ ದಾರಿಹಿಡಿದು ದಾವೀದನ ಬಳಿಗೆ ಬಂದು ಅವನಿಗೆ ಎಲ್ಲವನ್ನು ತಿಳಿಸಿದರು. 13ಆಗ ದಾವೀದನು ತನ್ನ
ಜನರಿಗೆ, “ಕತ್ತಿಯನ್ನು ಸೊಂಟಕ್ಕೆ ಕಟ್ಟಿಕೊಳ್ಳಿ,” ಎಂದು ಆಜ್ಞಾಪಿಸಿದನು; ಅವರೆಲ್ಲರೂ ಕಟ್ಟಿಕೊಂಡರು.
ದಾವೀದನೂ ಕಟ್ಟಿಕೊಂಡನು. ಹೆಚ್ಚುಕಡಿಮೆ ನಾನೂರು ಮಂದಿ ದಾವೀದನ ಜೊತೆಯಲ್ಲಿ ಹೋದರು;
ಇನ್ನೂರು ಮಂದಿ ಸಾಮಾಗ್ರಿಗಳನ್ನು ಕಾಯುತ್ತಾ ಅಲ್ಲೇ ಇದ್ದರು.

14 ನಾಬಾಲನ ಸೇವಕರಲ್ಲೊಬ್ಬನು ಅವನ ಹೆಂಡತಿಯಾದ ಅಬೀಗೈಲಳಿಗೆ, “ಮರುಭೂಮಿ
ಯಲ್ಲಿರುವ ದಾವೀದನು ನಮ್ಮ ದಣಿಯ ಕ್ಷೇಮ ವಿಚಾರಕ್ಕಾಗಿ ದೂತರನ್ನು ಕಳುಹಿಸಿದ್ದನು. ದಣಿಯವರು
ಬಂದವರನ್ನು ಚೆನ್ನಾಗಿ ಬೈದುಕಳಿಸಿದರು. 15ಆ ಜನರು ನಮಗೆ ಬಹಳ ಉಪಕಾರ ಮಾಡಿದವರು; ನಾವು
ಅವರೊಡನೆ ಅಡವಿಯಲ್ಲಿದ್ದ ಕಾಲವೆಲ್ಲಾ ಏನೂ ತೊಂದರೆಪಡಲಿಲ್ಲ, ನಷ್ಟ ಹೊಂದಲಿಲ್ಲ. 16ನಾವು
ಕುರಿಗಳನ್ನು ಮೇಯಿಸುವವರಾಗಿ ಅವರೊಡನಿದ್ದಾಗ ಅವರು ಹಗಲೂ ಇರುಳೂ ನಮಗೆ
ಕಾವಲುಗೋಡೆಯಂತಿದ್ದರು. 17ಈಗ ಮಾಡಬೇಕಾದುದ್ದನ್ನು ನೀವೇ ಆಲೋಚಿಸಿ ತೀರ್ಮಾನಿಸಿ. ನಮ್ಮ
ಯಜಮಾನರಿಗೂ ಅವರ ಕುಟುಂಬದವರೆಲ್ಲರಿಗೂ ಕೇಡು ಹತ್ತಿರವಾಗಿದೆ; ಮಂದಮತಿಯಾದ ಅವರೊಡನೆ
ಮಾತಾಡುವುದು ಅಸಾಧ್ಯ,” ಎಂದು ಹೇಳಿದನು.

18 ಆಗ ಅಬೀಗೈಲಳು ಶೀಘ್ರವಾಗಿ ಇನ್ನೂರು ರೊಟ್ಟಿ, ಎರಡು ಬುದ್ದಲಿ ದ್ರಾಕ್ಷಾರಸ, ಸಿದ್ಧಮಾಡಿದ
ಐದು ಕುರಿಗಳ ಮಾಂಸ, ಐವತ್ತು ಸೇರು ಹುರಿಗಾಳು, ಒಣಗಿದ ನೂರು ದ್ರಾಕ್ಷೀ ಗೊಂಚಲುಗಳು, ಅಂಜೂರ
ಹಣ್ಣುಗಳ ಇನ್ನೂರು ಉಂಡೆಗಳು, ಇವುಗಳನ್ನೆಲ್ಲ ಕತ್ತೆಗಳ ಮೇಲೆ ಹೇರಿಸಿದಳು. 19ಅನಂತರ ತನ್ನ ಸೇವಕರಿಗೆ,
“ನೀವು ಮುಂದೆ ನಡೆಯಿರಿ, ನಾನು ಹಿಂದೆ ಬರುತ್ತೇನೆ,” ಎಂದು ಹೇಳಿ ಅವರನ್ನು ಕಳುಹಿಸಿದಳು.
ಗಂಡನಾದ ನಾಬಾಲನಿಗೆ ಏನೂ ತಿಳಿಸಲಿಲ್ಲ. 20ಆಕೆ ಕತ್ತೆಯ ಮೇಲೆ ಕೂತು ಗುಡ್ಡದ ಮರೆಯಲ್ಲಿ
ಹೋಗುತ್ತಿರುವಾಗ ದಾವೀದನೂ ಅವನ ಜನರೂ ಆ ಕಡೆಯಿಂದ ಗುಡ್ಡ ಇಳಿದು ಬಂದರು. ಆಕೆ ಅವರನ್ನು
ಎದುರುಗೊಂಡಳು. 21ಅಷ್ಟರಲ್ಲಿ ದಾವೀದನು, “ನಾನು ಅಡವಿಯಲ್ಲಿ ಈ ಮನುಷ್ಯನ ಆಸ್ತಿಯಲ್ಲಿ ಏನೂ
ನಷ್ಟವಾಗದಂತೆ ಕಾಪಾಡಿದ್ದು ವ್ಯರ್ಥ ಆಯಿತು. ಅವನು ಉಪಕಾರಕ್ಕೆ ಅಪಕಾರ ಮಾಡಿದ್ದಾನೆ.
22ಬೆಳಗಾಗುವಷ್ಟರಲ್ಲಿ ಅವನ ಜನರೊಳಗೆ ಒಬ್ಬ ಗಂಡಸಾದರೂ ಉಳಿದರೆ ದೇವರು ದಾವೀದನಿಗೆ
ಬೇಕಾದದ್ದನ್ನು ಮಾಡಲಿ!” ಎಂದು ಪ್ರತಿಜ್ಞೆ ಮಾಡಿದ್ದನು.

23 ಅಬೀಗೈಲಳು ದಾವೀದನನ್ನು ಕಂಡ ಕೂಡಲೆ ಕತ್ತೆಯಿಂದಿಳಿದು ಅವನಿಗೆ ಸಾಷ್ಟಾಂಗ
ನಮಸ್ಕರಿಸಿದಳು. 24ಆಮೇಲೆ ಅವನ ಪಾದಗಳ ಮೇಲೆ ಬಿದ್ದು, “ಒಡೆಯಾ, ಅಪರಾಧವು ನನ್ನ ಮೇಲಿರಲಿ;
ನಿಮ್ಮ ದಾಸಿಯಾದ ನಾನು ಮಾತಾಡುವುದಕ್ಕೆ ಅಪ್ಪಣೆಯಾಗಲಿ. ನನ್ನ ಮಾತನ್ನು ಆಲಿಸಬೇಕು; 25ಒಡೆಯಾ,
ಮಂದಮತಿಯಾದ ಆ ನಾಬಾಲನನ್ನು ತಾವು ಲಕ್ಷಿಸಬೇಡಿ. ಅವನ ಹೆಸರು ನಾಬಾಲ್; ಅದಕ್ಕೆ ತಕ್ಕಂತೆ
ಮೂರ್ಖನೇ ಆಗಿರುತ್ತಾನೆ. ನಿಮ್ಮ ದಾಸಿಯಾದ ನಾನು, ತಾವು ಕಳುಹಿಸಿದ ಸೇವಕರನ್ನು ನೋಡಲಿಲ್ಲ.
26ಒಡೆಯಾ, ತಾವು ಸ್ವಹಸ್ತದಿಂದ ಮುಯ್ಯಿತೀರಿಸಿ ರಕ್ತಾಪರಾಧಕ್ಕೆ ಗುರಿಯಾಗದಂತೆ ಸರ್ವೇಶ್ವರ ತಮ್ಮನ್ನು
ಕಾಪಾಡಿದ್ದಾರೆ. ಸರ್ವೇಶ್ವರನಾಣೆ, ನಿಮ್ಮ ಜೀವದಾಣೆ, ನಿಮ್ಮ ವಿರೋಧಿಗಳೂ ನಿಮಗೆ ಕೇಡು
ಬಗೆಯುವವರೂ ನಾಬಾಲನ ಗತಿಯನ್ನು ಹೊಂದಲಿ! 27ನಿಮ್ಮ ದಾಸಿ ತಂದ ಈ ಕಾಣಿಕೆಯನ್ನು
ಅಂಗೀಕರಿಸಿರಿ. ಅದು ತಮ್ಮ ಸೇವಕರಿಗೆ ಸಲ್ಲಲಿ. 28ನಿಮ್ಮ ದಾಸಿಯ ಅಪರಾಧಕ್ಕೆ ಕ್ಷಮಾಪಣೆಯಾಗಲಿ;
ಒಡೆಯಾ, ತಾವು ಸರ್ವೇಶ್ವರನ ಶತ್ರುಗಳೊಡನೆ ಯುದ್ಧಮಾಡುವುದರಿಂದ ಅವರು ನಿಮ್ಮ ಮನೆಯನ್ನು
ಶಾಶ್ವತವಾಗಿ ಸ್ಥಿರಪಡಿಸುವರು. ಆದುದರಿಂದ ನಿಮ್ಮ ಜೀವಮಾನದಲ್ಲೆಲ್ಲಾ ನಮ್ಮಲ್ಲಿ ಕೆಟ್ಟತನ ಕಾಣದಿರಲಿ;

29ಯಾವನಾದರೂ ನನ್ನ ಒಡೆಯರಾದ ನಿಮ್ಮನ್ನು ಹಿಂಸಿಸಿ ಜೀವತೆಗೆಯಬೇಕೆಂದು ಇರುವಾಗ, ಆ ನಿಮ್ಮ
ಜೀವ, ತಮ್ಮ ದೇವರಾದ ಸರ್ವೇಶ್ವರನ ರಕ್ಷಣೆಯಲ್ಲಿರುವ ಜೀವನಿಕ್ಷೇಪದಲ್ಲಿ ಸುಭದ್ರವಾಗಿರಲಿ; ಆದರೆ ನಿಮ್ಮ
ಶತ್ರುಗಳ ಜೀವವನ್ನು ಕವಣೆಯ ಕಲ್ಲನ್ನೋ ಎಂಬಂತೆ ಎಸೆದುಬಿಡಲಿ. 30ಸರ್ವೇಶ್ವರ ನನ್ನ ಒಡೆಯರಾದ
ನಿಮಗೆ ವಾಗ್ದಾನಮಾಡಿದ ಎಲ್ಲಾ ಸೌಭಾಗ್ಯವನ್ನು ದಯಪಾಲಿಸಿ, ನಿಮ್ಮನ್ನು ಇಸ್ರಯೇಲಿನ ಅರಸರನ್ನಾಗಿ
ಮಾಡಲಿ. 31ಆಗ ನಿರಪರಾಧಿಯ ರಕ್ತವನ್ನು ಸುರಿಸಿ ಸೇಡುತೀರಿಸಿಕೊಂಡದ್ದಕ್ಕಾಗಿ ವಿಷಾದ, ಪಶ್ಚಾತ್ತಾಪಗಳಿಗೆ
ಕಾರಣವಿರುವುದಿಲ್ಲ. ಸರ್ವೇಶ್ವರ ನಿಮ್ಮನ್ನು ಮಹಾಪದವಿಗೆ ಏರಿಸುವಾಗ ನಿಮ್ಮ ದಾಸಿಯಾದ ನನ್ನನ್ನು
ಮರೆತು ಬಿಡಬೇಡಿ," ಎಂದಳು. 32ಆಗ ದಾವೀದನು ಅಬೀಗೈಲಳಿಗೆ, "ಈ ದಿನ ನನ್ನನ್ನು
ಎದುರುಗೊಳ್ಳುವುದಕ್ಕಾಗಿ ನಿನ್ನನ್ನು ಕಳುಹಿಸಿದ ಇಸ್ರಯೇಲ್ ದೇವರಾದ ಸರ್ವೇಶ್ವರನಿಗೆ ಸ್ತೋತ್ರವಾಗಲಿ!
33ಸ್ವಹಸ್ತದಿಂದ ಸೇಡುತೀರಿಸಿ ರಕ್ತಾಪರಾಧಕ್ಕೆ ಗುರಿಯಾಗದಂತೆ ನನ್ನನ್ನು ತಡೆದ ನೀನೂ ನಿನ್ನ ಜಾಣ್ಮೆಯೂ
ಸ್ತುತ್ಯರ್ಹವೇ ಸರಿ. 34ನಿನಗೆ ಕೇಡು ಮಾಡದಂತೆ ನನ್ನನ್ನು ತಡೆದ ಇಸ್ರಯೇಲ್ ದೇವರಾದ ಸರ್ವೇಶ್ವರನ
ಆಣೆ, ನೀನು ಬೇಗನೆ ಬಂದು ನನ್ನನ್ನು ಎದುರುಗೊಳ್ಳದಿದ್ದರೆ ಖಂಡಿತವಾಗಿ ನಾಳೆ ಬೆಳಗಾಗುವಷ್ಟರಲ್ಲಿ
ನಾಬಾಲನವರಲ್ಲಿ ಒಬ್ಬ ಗಂಡಸಾದರೂ ಖಂಡಿತವಾಗಿ ಉಳಿಯುತ್ತಿರಲಿಲ್ಲ!" ಎಂದು ಹೇಳಿದನು. 35ಆಕೆ
ತಂದ ಪದಾರ್ಥಗಳನ್ನು ತೆಗೆದುಕೊಂಡು ಆಕೆಗೆ, "ಸಮಾಧಾನದಿಂದ ಮನೆಗೆ ಹೋಗು; ನಿನ್ನನ್ನು ಕಟಾಕ್ಷಿಸಿ,
ನಿನ್ನ ವಿಜ್ಞಾಪನೆಯನ್ನು ಆಲಿಸಿದ್ದೇನೆ," ಎಂದನು.

36 ಅಬೀಗೈಲಳು ನಾಬಾಲನ ಬಳಿಗೆ ಬಂದಳು. ಅವನು ತನ್ನ ಮನೆಯಲ್ಲಿ ರಾಜರಂತೆ ಒಂದು
ದೊಡ್ಡ ಔತಣವನ್ನು ಮಾಡಿಸಿ, ಬಹಳವಾಗಿ ಕುಡಿದು, ಬಹು ಸಂಭ್ರಮದಿಂದಿದ್ದ ಕಾರಣ ಈಕೆ
ಮರುದಿವಸದವರೆಗೆ ಇದರ ವಿಷಯವಾಗಿ ಏನೂ ಹೇಳಲಿಲ್ಲ. 37ಮರುದಿನ ಅಮಲಿಳಿದನಂತರ ಈಕೆ ಈ
ಸಮಾಚಾರವನ್ನು ಅವನಿಗೆ ತಿಳಿಸಿದಳು. ಆಗ ಅವನ ಗುಂಡಿಗೆ ಒಡೆಯಿತು. ಅವನು ಕಲ್ಲಿನಂತಾದನು.
38ಸರ್ವೇಶ್ವರ ವಿಧಿಸಿದ ದಂಡನೆಯ ನಿಮಿತ್ತ ಸುಮಾರು ಹತ್ತು ದಿನಗಳಾದ ನಂತರ ನಾಬಾಲನು
ಸತ್ತುಹೋದನು.

39 ನಾಬಾಲನು ಸತ್ತನೆಂಬ ವರ್ತಮಾನವನ್ನು ದಾವೀದನು ಕೇಳಿದನು. "ನನಗೆ ಅಪಮಾನ
ಮಾಡಿದ ನಾಬಾಲನಿಗೆ ಮುಯ್ಯಿ ತೀರಿಸಿದಂಥ ಸರ್ವೇಶ್ವರನಿಗೆ ಸ್ತೋತ್ರವಾಗಲಿ! ಅವರು ನನ್ನನ್ನು
ಕೆಟ್ಟತನದಿಂದ ದೂರಮಾಡಿ ನಾಬಾಲನ ಕೆಟ್ಟತನವನ್ನು ಅವನ ತಲೆಯ ಮೇಲೆಯೇ ಹೊರಿಸಿದ್ದಾರೆ,"
ಎಂದನು. ಅನಂತರ ಅವನು, ಅಬೀಗೈಲಳು ತನಗೆ ಹೆಂಡತಿಯಾಗಬೇಕೆಂದು ದೂತರನ್ನು ಕಳುಹಿಸಿದನು.
40ಅವರು ಕರ್ಮೆಲಿನಲ್ಲಿದ್ದ ಅಬೀಗೈಲಳ ಬಳಿಗೆ ಹೋಗಿ ಆಕೆಗೆ, "ದಾವೀದ ಅವರು ನಿನ್ನನ್ನು ತಮಗೆ
ಹೆಂಡತಿಯಾಗುವುದಕ್ಕೆ ಕರೆದುಕೊಂಡು ಬರಬೇಕೆಂದು ನಮ್ಮನ್ನು ಕಳುಹಿಸಿದ್ದಾರೆ," ಎಂದರು. 41ಆಕೆ ಎದ್ದು
ನಮಸ್ಕಾರಮಾಡಿ, ಮಾತಾಡಿಸಿದವನಿಗೆ, "ನಿನ್ನ ದಾಸಿಯಾದ ನಾನು ನನ್ನ ಒಡೆಯರ ಕೈಕೆಳಗಿರುವ ಸೇವಕರ
ಪಾದ ತೊಳೆಯುವುದಕ್ಕೂ ಸಿದ್ಧಳಾಗಿದ್ದೇನೆ," ಎಂದು ಉತ್ತರಕೊಟ್ಟಳು. 42ಅಲ್ಲದೆ ಬೇಗನೆ ಒಂದು ಕತ್ತೆಯನ್ನು
ಹತ್ತಿ ತನ್ನ ಐದು ಮಂದಿ ದಾಸಿಯರ ಸಹಿತವಾಗಿ ದಾವೀದನ ಸೇವಕರ ಜೊತೆಯಲ್ಲೆ ಹೊರಟುಹೋಗಿ
ಅವನ ಹೆಂಡತಿಯಾದಳು.

43 ದಾವೀದನು ಜೆಸ್ರೀಲಿನವಳಾದ ಅಹೀನೋವಮಳನ್ನು ಮದುವೆಮಾಡಿಕೊಂಡಿದ್ದನು. ಈಗ
ಅಬೀಗೈಲಳೂ ಅವನ ಹೆಂಡತಿಯಾದಳು. 44ಈ ಮಧ್ಯೆ ಸೌಲನು, ದಾವೀದನ ಹೆಂಡತಿಯಾಗಿದ್ದ
ಮೀಕಲಳೆಂಬ ತನ್ನ ಮಗಳನ್ನು ಗಲ್ಲೀಮ್ ಊರಿನ ಲಯಿಷನ ಮಗನಾದ ಪಲ್ಟೀ ಎಂಬವನಿಗೆ ಮದುವೆ
ಮಾಡಿಕೊಟ್ಟಿದ್ದನು.

### ದಾವೀದನಿಂದ ಸೌಲನಿಗೆ ಪುನಃ ಪ್ರಾಣದಾನ

**26** ಜೀಫ್ಯರಲ್ಲಿ ಕೆಲವರು ಗಿಬೆಯಲ್ಲಿದ್ದ ಸೌಲನ ಬಳಿಗೆ ಬಂದು, "ದಾವೀದನು ಮರುಭೂಮಿಯ
ಮೂಡಣ ದಿಕ್ಕಿನಲ್ಲಿರುವ ಹಕೀಲಾ ಬೆಟ್ಟದಲ್ಲಿ ಅಡಗಿಕೊಂಡಿದ್ದಾನೆ; ಇದು ನಿಮಗೆ ಗೊತ್ತೇ?" ಎಂದರು.
2ಆಗ ಸೌಲನು ಇಸ್ರಯೇಲರಲ್ಲಿ ಶ್ರೇಷ್ಠರಾದ ಮೂರು ಸಾವಿರ ಮಂದಿ ಸೈನಿಕರನ್ನು ಆರಿಸಿಕೊಂಡು

ದಾವೀದನನ್ನು ಹುಡುಕುವುದಕ್ಕಾಗಿ ಜೀಫ್ ಮರುಭೂಮಿಗೆ ಹೋದನು. 3ಅದರ ಪೂರ್ವದಿಕ್ಕಿನಲ್ಲಿ ದಾರಿಯ
ಬಳಿಯಲ್ಲಿರುವ ಹಕೀಲಾ ಬೆಟ್ಟದಲ್ಲಿ ಪಾಳೆಯ ಮಾಡಿಕೊಂಡನು. ಸೌಲನು ತನ್ನನ್ನು ಹಿಡಿಯುವುದಕ್ಕಾಗಿ
ಮರುಭೂಮಿಗೆ ಬಂದಿದ್ದಾನೆಂಬ ಸುದ್ದಿ ಅಲ್ಲಿಯೇ ಇದ್ದ ದಾವೀದನಿಗೆ ಮುಟ್ಟಿತು. 4ಅವನು ಕೂಡಲೆ
ಗೂಢಚಾರರನ್ನು ಕಳುಹಿಸಿ ಸೌಲನು ಇಳಿದುಕೊಂಡಿದ್ದ ಸ್ಥಳವನ್ನು ಖಚಿತಪಡಿಸಿಕೊಂಡನು. 5ಅನಂತರ
ತಾನಾಗಿಯೇ ಸೌಲನ ಪಾಳೆಯದ ಹತ್ತಿರಕ್ಕೆ ಹೋಗಿ, ಸೌಲನು ಹಾಗು ನೇರನ ಮಗನಾದ ಅವನ ಸೇನಾಪತಿ
ಅಬ್ನೇರನು ಮಲಗಿದ್ದ ಸ್ಥಳಗಳನ್ನು ಕಂಡುಹಿಡಿದನು. ಸೌಲನು ಬಂಡಿಗಳನ್ನು ಬಿಡುವ ಸ್ಥಳಮಧ್ಯದಲ್ಲಿ
ಮಲಗಿದ್ದನು. ಅವನ ಸುತ್ತಲೂ ಸೈನಿಕರು ಇದ್ದರು.

6 ಆಗ ದಾವೀದನು ಹಿತ್ತಿಯನಾದ ಅಹೀಮೆಲೆಕನನ್ನು ಹಾಗು ಚೆರೂಯಳ ಮಗನೂ ಯೋವಾಬನ
ತಮ್ಮನೂ ಆದ ಅಬೀಷೈಯನ್ನು ಉದ್ದೇಶಿಸಿ, "ನಿಮ್ಮಲ್ಲಿ ನನ್ನ ಸಂಗಡ ಸೌಲನ ಪಾಳೆಯಕ್ಕೆ ಯಾರು
ಬರುವಿರಿ?" ಎಂದು ಕೇಳಿದನು. ಅದಕ್ಕೆ ಅಬೀಷೈಯು, "ನಾನು ಬರುತ್ತೇನೆ," ಎಂದು ಉತ್ತರಕೊಟ್ಟನು.
7ದಾವೀದನು ಮತ್ತು ಅಬೀಷೈಯು, ರಾತ್ರಿಯಲ್ಲಿ ಆ ಪಾಳೆಯಕ್ಕೆ ಹೋದಾಗ ಸೌಲನು ಬಂಡಿಗಳ ಗುಂಪಿನ
ಮಧ್ಯೆ ಮಲಗಿಕೊಂಡು ನಿದ್ರೆಮಾಡುತ್ತಿದ್ದನು. ಅವನ ಭರ್ಜಿಯನ್ನು ಅವನ ತಲೆಯ ಹತ್ತಿರ ನೆಲಕ್ಕೆ ತಿವಿದು
ನಿಲ್ಲಿಸಲಾಗಿತ್ತು. ಅಬ್ನೇರನೂ ಸೈನಿಕರೂ ಅವನ ಸುತ್ತಲೂ ಮಲಗಿದ್ದರು. 8ಅಬೀಷೈಯು ದಾವೀದನಿಗೆ,
"ದೇವರು ಈ ದಿನ ನಿನ್ನ ವೈರಿಯನ್ನು ನಿನ್ನ ಕೈಗೆ ಒಪ್ಪಿಸಿಕೊಟ್ಟಿದ್ದಾರೆ; ಅಪ್ಪಣೆಯಾಗಲಿ, ನಾನು ಭರ್ಜಿಯಿಂದ
ಒಂದೇ ಪೆಟ್ಟಿನಲ್ಲಿ ಅವನನ್ನು ನೆಲಕ್ಕೆ ಕಚ್ಚಿಕೊಳ್ಳುವಂತೆ ತಿವಿಯುತ್ತೇನೆ. ಎರಡನೆಯ ಸಾರಿ ಹೊಡೆಯುವ
ಅವಶ್ಯಕತೆ ಇರುವುದಿಲ್ಲ," ಎಂದು ಹೇಳಿದನು.

9 ಆದರೆ ದಾವೀದನು, "ಅವನನ್ನು ಕೊಲ್ಲಬೇಡ; ಸರ್ವೇಶ್ವರನ ಅಭಿಷಿಕ್ತನಿಗೆ ವಿರೋಧವಾಗಿ
ಕೈಯೆತ್ತುವ ಯಾವನೂ ನಿರಪರಾಧಿ ಎಂದು ಎಣಿಸಲ್ಪಡನು," ಎಂದನು. 10ಇದಲ್ಲದೆ ದಾವೀದನು,
"ಸರ್ವೇಶ್ವರನಾಣೆ, ಅವನು ಸರ್ವೇಶ್ವರನಿಂದಲೇ ಸಾಯುವನು; ಇಲ್ಲವೆ ಕಾಲತುಂಬಿ ಮರಣಹೊಂದುವನು;
ಅಥವಾ ಯುದ್ಧದಲ್ಲಿ ಮಡಿಯುವನು. 11ತಮ್ಮ ಅಭಿಷಿಕ್ತನಿಗೆ ವಿರೋಧವಾಗಿ ಕೈಯೆತ್ತದಂತೆ ಸರ್ವೇಶ್ವರನೇ
ನನ್ನನ್ನು ತಡೆಯಲಿ. ಈಗ ಬಾ, ಅವನ ತಲೆಯ ಬಳಿಯಲ್ಲಿರುವ ಭರ್ಜಿಯನ್ನೂ ತಂಬಿಗೆಯನ್ನೂ
ತೆಗೆದುಕೊಂಡು ಹೋಗೋಣ," ಎಂದು ಹೇಳಿದನು. 12ಸೌಲನ ತಲೆದಿಂಬಿನ ಬಳಿಯಲ್ಲಿದ್ದ ಭರ್ಜಿ ಹಾಗು
ತಂಬಿಗೆಗಳನ್ನು ತೆಗೆದುಕೊಂಡು ಹೋದರು. ಯಾರೂ ಕಾಣಲಿಲ್ಲ; ಯಾರಿಗೂ ಗೊತ್ತಾಗಲಿಲ್ಲ, ಯಾರಿಗೂ
ಎಚ್ಚರವಾಗಲಿಲ್ಲ. ಏಕೆಂದರೆ ಸರ್ವೇಶ್ವರ ಅವರಿಗೆ ಗಾಢನಿದ್ರೆಯನ್ನು ಬರಮಾಡಿದ್ದರು; ಒಬ್ಬರಿಗೂ
ಎಚ್ಚರವಿಲ್ಲದೆ ಎಲ್ಲರು ಮೈಮರೆತು ನಿದ್ರೆಯಲ್ಲಿ ಮಗ್ನರಾಗಿದ್ದರು.

13 ದಾವೀದನು ತನಗೂ ಪಾಳೆಯಕ್ಕೂ ತಕ್ಕಷ್ಟು ಅಂತರವಿರುವ ಹಾಗೆ ಸುರಕ್ಷಿತವಾದ ದೂರ ಸ್ಥಳಕ್ಕೆ
ಹೋಗಿ ಗುಡ್ಡವನ್ನೇರಿ ತುದಿಯಲ್ಲಿ ನಿಂತನು. 14ಅಲ್ಲಿಂದ, "ಅಬ್ನೇರನೇ, ನನ್ನ ಮಾತು ಕೇಳಿಸುತ್ತಿದ್ದೆಯೋ?"
ಎಂದು ನೇರನ ಮಗನಾದ ಅಬ್ನೇರನಿಗೂ ಸೈನಿಕರಿಗೂ ಕೇಳಿಸುವಂತೆ ಕೂಗಿದನು. ಅಬ್ನೇರನು, "ಅರಸನನ್ನು
ಕೂಗುವ ನೀನಾರು?" ಎಂದು ಕೇಳಿದನು. 15ದಾವೀದನು ಅಬ್ನೇರನಿಗೆ, "ನೀನು ಶೂರನಲ್ಲವೇ?
ಇಸ್ರಯೇಲರಲ್ಲಿ ನಿನಗೆ ಸಮನಾರು? ನೀನು ನಿನ್ನ ಒಡೆಯನಾದ ಅರಸನನ್ನು ಏಕೆ ಕಾಯಲಿಲ್ಲ? ಜನರಲ್ಲಿ
ಒಬ್ಬನು ಒಳಗೆ ಹೊಕ್ಕು ನಿನ್ನ ಒಡೆಯನಾದ ಅರಸನನ್ನು ಕೊಲ್ಲಬೇಕೆಂದಿದ್ದನು. 16ನೀನು ಹೀಗೆ ಮಾಡುವುದು
ಸರಿಯಲ್ಲ. ಸರ್ವೇಶ್ವರನಾಣೆ, ಅವರ ಅಭಿಷಿಕ್ತನಾಗಿರುವ ನಿಮ್ಮ ಒಡೆಯನನ್ನು ಕಾಯದಿರುವ ನೀವು
ಮರಣಕ್ಕೆ ಪಾತ್ರರೆಂಬುದೇನೋ ನಿಜ. ಅರಸನ ತಲೆಯ ಬಳಿಯಲ್ಲಿದ್ದ ಭರ್ಜಿ, ತಂಬಿಗೆ ಏನಾದವೋ,
ನೋಡು," ಎಂದು ಕೂಗಿ ಹೇಳಿದನು.

17 ಸೌಲನು ದಾವೀದನ ಸ್ವರದ ಗುರುತು ಹಿಡಿದನು. "ದಾವೀದನೇ, ನನ್ನ ಪುತ್ರನೇ, ಇದು ನಿನ್ನ
ಸ್ವರವೇ?" ಎಂದು ಕೇಳಿದನು. ಅವನು, "ಅರಸರೇ, ನನ್ನ ಒಡೆಯರೇ, ಹೌದು, ನನ್ನ ಸ್ವರವೇ; 18ನನ್ನ
ಒಡೆಯ, ತಮ್ಮ ಸೇವಕನನ್ನು ಈ ಪ್ರಕಾರ ಹಿಂಸಿಸುವುದೇಕೆ? ನಾನೇನು ಮಾಡಿದೆ? ಯಾವ ಪಾಪಕ್ಕೆ
ಕೈಹಾಕಿದೆ? 19ನನ್ನ ಅರಸರಾದ ಒಡೆಯರು ದಯವಿಟ್ಟು ತಮ್ಮ ಸೇವಕನ ಮಾತುಗಳನ್ನು ಆಲಿಸಬೇಕು.
ನಿಮ್ಮನ್ನು ನನಗೆ ವಿರೋಧವಾಗಿ ಎತ್ತಿ ಕಟ್ಟಿದವರು ಸರ್ವೇಶ್ವರನೇ ಆಗಿರುವ ಪಕ್ಷದಲ್ಲಿ ಅವರಿಗೆ
ಗಮಗಮಿಸುವ ನೈವೇದ್ಯವನ್ನು ಸಮರ್ಪಿಸಬೇಕು. ಮನುಷ್ಯರಾಗಿದ್ದರೆ, ಈಗ ಅವರು ನನಗೆ ಸರ್ವೇಶ್ವರನ

ಸೌಭಾಗ್ಯದಲ್ಲಿ ಪಾಲುಸಿಕ್ಕದಂತೆ, 'ಹೋಗಿ ಅನ್ಯದೇವತೆಗಳನ್ನು ಪೂಜಿಸು' ಎಂದು ನನ್ನನ್ನು ತಳ್ಳಿಬಿಟ್ಟಿದ್ದಾರೆ.
ಆದುದರಿಂದ ಸರ್ವೇಶ್ವರನ ದೃಷ್ಟಿಯಲ್ಲಿ ಅವರು ಶಾಪಗ್ರಸ್ತರಾಗಿರಲಿ! [20]ಸರ್ವೇಶ್ವರನ ಸಾನ್ನಿಧ್ಯವಿಲ್ಲದಿರುವ
ಈ ದೇಶದಲ್ಲಿ ನಾನು ರಕ್ತಚೆಲ್ಲಿ ಸಾಯುವಂತಾಗದಿರಲಿ. ಅಕಟಾ, ಗುಡ್ಡಗಳಲ್ಲಿ ಕೌಜುಗವನ್ನು ಹಿಡಿಯಹೊರಟ
ಬೇಟೆಗಾರನೋ ಎಂಬಂತೆ ಇಸ್ರಯೇಲರ ಅರಸ ಹೊರಟು ಬಂದು ನನ್ನ ಪ್ರಾಣವನ್ನು
ತೆಗೆಯಬೇಕೆಂದಿರುತ್ತಾರಲ್ಲಾ!" ಎಂದನು.

21 ಆಗ ಸೌಲನು, "ನಾನು ಪಾಪಮಾಡಿದೆ, ದಾವೀದನೇ, ನನ್ನ ಪುತ್ರನೇ, ಹಿಂದಿರುಗಿ ಬಾ; ಈ
ದಿನ ನನ್ನ ಜೀವ ನಿನ್ನ ದೃಷ್ಟಿಯಲ್ಲಿ ಬಲು ಬೆಳೆಯುಳ್ಳದ್ದೆಂದು ಮಾನ್ಯವಾಯಿತು. ಆದುದರಿಂದ ನಾನು ಇನ್ನು
ಮುಂದೆ ನಿನಗೆ ಕೇಡುಮಾಡುವುದಿಲ್ಲ. ಈವರೆಗೆ ನಾನು ಮಾಡಿದ್ದು ಹುಚ್ಚುತನ ಹಾಗೂ ದೊಡ್ಡತಪ್ಪು,"
ಎಂದು ಹೇಳಿದನು. [22]ದಾವೀದನು, "ಅರಸರೇ, ಇಗೋ, ನಿಮ್ಮ ಭರ್ಜಿ ಇಲ್ಲಿದೆ; ಸೇವಕರಲ್ಲೊಬ್ಬನು ಬಂದು
ತೆಗೆದುಕೊಂಡು ಹೋಗಲಿ. [23]ಸರ್ವೇಶ್ವರ ಪ್ರತಿಯೊಬ್ಬನಿಗೂ ಅವನವನ ನೀತಿ ಸತ್ಯತೆಗಳಿಗೆ ಅನುಸಾರ
ಫಲವನ್ನು ಕೊಡುವರು. ಅವರು ಈ ದಿನ ನಿಮ್ಮನ್ನು ನನ್ನ ಕೈಗೆ ಒಪ್ಪಿಸಿಕೊಟ್ಟಿದ್ದರೂ ನೀವು ಸರ್ವೇಶ್ವರನ
ಅಭಿಷಿಕ್ತರೆಂದು ನಾನು ನಿಮ್ಮ ಮೇಲೆ ಕೈಹಾಕಲಿಲ್ಲ. [24]ನಾನು ಈ ದಿನ ನಿಮ್ಮ ಜೀವವನ್ನು
ಮಾನ್ಯವಾದದ್ದೆಂದೆಣಿಸಿದಂತೆ ಸರ್ವೇಶ್ವರ ನನ್ನ ಜೀವವನ್ನೂ ಮಾನ್ಯವಾದದ್ದೆಂದೆಣಿಸಿ ನನ್ನನ್ನು ಎಲ್ಲ
ಇಕ್ಕಟ್ಟಿನಿಂದ ಬಿಡಿಸಲಿ," ಎಂದನು.

25 ಆಗ ಸೌಲನು ದಾವೀದನಿಗೆ, "ಪುತ್ರನೇ, ದಾವೀದನೇ, ದೇವರು ನಿನ್ನನ್ನು ಹರಸಲಿ! ನೀನು
ಮಹಾಕಾರ್ಯಗಳನ್ನು ಸಾಧಿಸಿ, ಯಶಸ್ವಿಯಾಗು," ಎಂದು ಹೇಳಿ ತನ್ನ ಊರಿಗೆ ಹೊರಟನು; ದಾವೀದನು
ತನ್ನ ದಾರಿ ಹಿಡಿದನು.

### ಫಿಲಿಷ್ಟಿಯರ ನಡುವೆ ದಾವೀದನು

**27** ದಾವೀದನು ತನ್ನ ಮನಸ್ಸಿನಲ್ಲೇ, "ನಾನು ಇಲ್ಲಿದ್ದರೆ ಹೇಗೂ ಒಂದು ದಿನ ಸೌಲನ ಕೈಯಿಂದ
ಮಡಿಯಲೇಬೇಕು. ಆದುದರಿಂದ ಫಿಲಿಷ್ಟಿಯರ ದೇಶಕ್ಕೆ ಹೋಗಿ ತಪ್ಪಿಸಿಕೊಳ್ಳುವುದೇ ಉತ್ತಮ. ಆಮೇಲೆ
ಸೌಲನು ಇಸ್ರಯೇಲ್ ಪ್ರಾಂತ್ಯಗಳಲ್ಲಿ ನನ್ನನ್ನು ಹುಡುಕುವುದನ್ನು ಬಿಟ್ಟುಬಿಡುವನು. ನಾನು ಅವನ ಕೈಯಿಂದ
ತಪ್ಪಿಸಿಕೊಂಡು ಸುರಕ್ಷಿತನಾಗಿರುವೆನು," ಎಂದುಕೊಂಡನು. [2]ಅಂತೆಯೇ ಅವನು ತನ್ನ ಆರುನೂರು ಮಂದಿ
ಸೈನಿಕರೊಡನೆ ಗತ್ ಊರಿನ ಅರಸನೂ ಮಾವೋಕನ ಮಗನೂ ಆದ ಆಕೀಷನ ಬಳಿಗೆ ಹೋದನು.
[3]ಅವನೂ ಅವನ ಜನರೂ ತಮ್ಮ ತಮ್ಮ ಕುಟುಂಬಸಹಿತವಾಗಿ ಆಕೀಷನ ಊರಾದ ಗತ್ ಊರಿನಲ್ಲಿ
ನೆಲಸಿದರು. ದಾವೀದನ ಹೆಂಡತಿಯರಾಗಿದ್ದ ಜೆಸ್ರೀಲಿನವಳಾದ ಅಹೀನೋವಮಳು ಹಾಗು ಕರ್ಮೆಲ್ಯನಾದ
ನಾಬಾಲನ ಹೆಂಡತಿ ಆಗಿದ್ದ ಅಬೀಗೈಲಳು ಅವನ ಸಂಗಡ ಇದ್ದರು. [4]ದಾವೀದನು ತಪ್ಪಿಸಿಕೊಂಡು ಗತ್
ಊರಿಗೆ ಹೋದನೆಂಬ ವರ್ತಮಾನವನ್ನು ಸೌಲನು ಕೇಳಿದಮೇಲೆ ಅವನನ್ನು ಬೆನ್ನಟ್ಟಿ ಹೋಗುವುದನ್ನು
ಬಿಟ್ಟುಬಿಟ್ಟನು.

5 ಒಂದು ದಿನ ದಾವೀದನು ಆಕೀಷನಿಗೆ, "ನಿಮ್ಮ ಸೇವಕನಾದ ನಾನು ನಿಮ್ಮ ಸಂಗಡ
ರಾಜಧಾನಿಯಲ್ಲೇಕೆ ವಾಸಿಸಬೇಕು? ನಿಮ್ಮ ದೃಷ್ಟಿಯಲ್ಲಿ ನನಗೆ ದಯೆ ದೊರಕಿರುವುದಾದರೆ
ಯಾವುದಾದರೊಂದು ಹಳ್ಳಿಯಲ್ಲಿ ನನಗೆ ಸ್ಥಳ ಕೊಡಿಸಿ; ನಾನು ಅಲ್ಲೆ ವಾಸಿಸುವೆನು," ಎಂದನು. [6]ಆಕೀಷನು
ಕೂಡಲೆ ಅವನಿಗೆ ಚಿಕ್ಲಗ್ ಊರನ್ನು ಕೊಟ್ಟನು. ಆದುದರಿಂದ "ಚಿಕ್ಲಗ್" ಎಂಬುದು ಇಂದಿನವರೆಗೂ
ಯೆಹೂದ ಅರಸರಿಗೆ ಸೇರಿದೆ.

7 ದಾವೀದನು ಫಿಲಿಷ್ಟಿಯರ ದೇಶದಲ್ಲಿ ಒಂದು ವರ್ಷ ಮತ್ತು ನಾಲ್ಕು ತಿಂಗಳು ವಾಸವಾಗಿದ್ದನು.
[8]ಈ ಅವಧಿಯಲ್ಲಿ ಅವನು ಮತ್ತು ಅವನ ಜನರು ಗೆಷೂರ್ಯರ ಮೇಲೆ, ಗಿಜ್ರೀಯರ ಮೇಲೆ ಹಾಗು
ಅಮಾಲೇಕ್ಯರ ಮೇಲೆ ದಾಳಿಮಾಡುತ್ತಿದ್ದರು. ಇವರುಗಳ ಪ್ರಾಂತ್ಯಗಳು ತೇಲಾಮಿನಿಂದ ಶೂರಿನವರೆಗೂ
ಹಾಗು ಈಜಿಪ್ಟಿನವರೆಗೂ ವಿಸ್ತರಿಸಿತ್ತು. [9]ಸ್ತ್ರೀಪುರುಷರಲ್ಲಿ ಒಬ್ಬರನ್ನೂ ಉಳಿಸದೆ ದೇಶದ ನಿವಾಸಿಗಳನ್ನೆಲ್ಲ
ಕೊಂದು, ದನ, ಕುರಿ, ಕತ್ತೆ, ಒಂಟೆ, ಉಡುಗೊರೆ ಇವುಗಳನ್ನು ತೆಗೆದುಕೊಂಡು ದಾವೀದನು ಆಕೀಷನ

ಬಳಿಗೆ ಹೋಗುತ್ತಿದ್ದನು. [10]ಆಕೀಷನು, "ಈ ಹೊತ್ತು ಯಾವ ಪ್ರಾಂತ್ಯದವರನ್ನು ಸೂರೆಮಾಡಿಕೊಂಡು
ಬಂದಿರಿ?" ಎಂದು ಕೇಳುತ್ತಿದ್ದನು. ದಾವೀದನು ಅವನಿಗೆ, ದಕ್ಷಿಣ ಪ್ರಾಂತ್ಯದಲ್ಲಿರುವ ಯೆಹೂದ್ಯರು,
ಎರಹ್ಮೇಲ್ಯರು, ಕೇನ್ಯರು ಇವರಲ್ಲಿ ಯಾರ ಹೆಸರನ್ನಾದರೂ ಹೇಳುತ್ತಿದ್ದನು. [11]ದಾವೀದನು ತನ್ನ ಕೃತ್ಯವನ್ನು
ಜನರು ಹರಡಬಹುದೆಂದು ನೆನೆಸಿ ಅವನು ಯಾರನ್ನೂ ಗತ್ ಊರಿಗೆ ತಾರದೆ ಸ್ತ್ರೀಪುರುಷರನ್ನೆಲ್ಲ ಅಲ್ಲೇ
ಕೊಂದುಹಾಕುತ್ತಿದ್ದನು. ಅವನು ಫಿಲಿಷ್ಟಿಯರ ದೇಶದಲ್ಲಿ ವಾಸವಾಗಿದ್ದ ಅವಧಿಯಲ್ಲಿ ಇದೇ ರೀತಿ
ಮಾಡುತ್ತಿದ್ದನು. [12]"ದಾವೀದನ ಹೆಸರು ಸ್ವಜನರಾದ ಇಸ್ರಯೇಲರಲ್ಲೇ ತಿರಸ್ಕೃತವಾಗಿದೆ. ಆದುದರಿಂದ
ಇವನು ಎಂದೆಂದಿಗೂ ತನ್ನ ಅಧೀನನಾಗಿಯೇ ಇರುವನು," ಎಂದು ಆಕೀಷನು ನಂಬಿದ್ದನು.

### ಫಿಲಿಷ್ಟಿಯರಿಗೂ ಇಸ್ರಯೇಲರಿಗೂ ಯುದ್ಧ

**28** ಆ ಕಾಲದಲ್ಲಿ ಫಿಲಿಷ್ಟಿಯರು ಇಸ್ರಯೇಲರೊಡನೆ ಯುದ್ಧಮಾಡುವುದಕ್ಕಾಗಿ ಸೈನ್ಯವನ್ನು
ಕೂಡಿಸತೊಡಗಿದರು. ಆಗ ಆಕೀಷನು ದಾವೀದನಿಗೆ, "ನೀನೂ ನಿನ್ನ ಜನರೂ ಯುದ್ಧಕ್ಕೆ ನನ್ನ ಜೊತೆಯಲ್ಲೇ
ಬರಬೇಕೆಂಬುದು ನಿನಗೆ ಗೊತ್ತಿದೆಯಲ್ಲವೇ?" ಎಂದನು. [2]ದಾವೀದನು, "ಹೌದು, ತಮ್ಮ ಸೇವಕನ ಸಾಹಸ
ತಮಗೇ ಗೊತ್ತಾಗುವುದು," ಎಂದನು. ಆಕೀಷನು, "ಹಾಗಾದರೆ ಯುದ್ಧಕಾಲದಲ್ಲೆಲ್ಲಾ ನಿನ್ನನ್ನೇ ನನ್ನ
ಮೈಗಾವಲಿಗೆ ನೇಮಿಸಿಕೊಳ್ಳುತ್ತೇನೆ," ಎಂದನು.

### ಜಯಾಪಜಯಗಳ ಬಗ್ಗೆ ಮಾಂತ್ರಿಕರ ಹೇಳಿಕೆ

3 ಸಮುವೇಲನು ಮರಣಹೊಂದಿದ್ದನು. ಇಸ್ರಯೇಲರು ಅವನಿಗಾಗಿ ಸಂತಾಪ ಸೂಚಿಸುತ್ತಾ ಅವನ
ಶವವನ್ನು ಅವನ ಸ್ವಂತ ಊರಾದ ರಾಮಾದಲ್ಲಿ ಸಮಾಧಿಮಾಡಿದ್ದರು. ಸೌಲನು ಭೂತಪ್ರೇತಗಳನ್ನು
ವಿಚಾರಿಸುವವರನ್ನೂ ಬೇತಾಳಿಕರನ್ನೂ ನಾಡಿನಿಂದ ಹೊರಡಿಸಿಬಿಟ್ಟಿದ್ದನು. [4]ಫಿಲಿಷ್ಟಿಯರು
ಸೈನ್ಯಕೂಡಿಸಿಕೊಂಡು ಬಂದು ಶೂನೇಮಿನಲ್ಲಿ ಪಾಳೆಯಮಾಡಿಕೊಂಡಿದ್ದರು. ಸೌಲನು ಸಮಸ್ತ
ಇಸ್ರಯೇಲರೊಡನೆ ಬಂದು ಗಿಲ್ಬೋವದಲ್ಲಿ ಇಳಿದುಕೊಂಡನು. [5]ಫಿಲಿಷ್ಟಿಯರ ಪಾಳೆಯವನ್ನು ಕಂಡಾಗ
ಭಯಭೀತಿಯಿಂದ ಅವನ ಎದೆಯೊಡೆಯಿತು. [6]ಸರ್ವೇಶ್ವರನ ಸನ್ನಿಧಿಯಲ್ಲಿ ವಿಚಾರಿಸುವುದರಿಂದಾಗಲಿ,
ಕನಸುಗಳಿಂದಾಗಲಿ, ಊರಿಮಿನಿಂದಾಗಲಿ ಪ್ರವಾದಿಗಳಿಂದಾಗಲಿ ಅವನಿಗೆ ಉತ್ತರ ಸಿಗಲಿಲ್ಲ. [7]ಆದುದರಿಂದ
ಅವನು ತನ್ನ ಸೇವಕರಿಗೆ, "ಭೂತಪ್ರೇತಗಳಲ್ಲಿ ವಿಚಾರಿಸಬಲ್ಲ ಒಬ್ಬ ಸ್ತ್ರೀಯನ್ನು ಹುಡುಕಿರಿ; ನಾನು ಆಕೆಯ
ಬಳಿಗೇ ಹೋಗಿ ವಿಚಾರಿಸುವೆನು," ಎಂದು ಹೇಳಿದನು. ಅವರು, "ಅಂಥವಳೊಬ್ಬಳು
ಏಂದೋರಿನಲ್ಲಿದ್ದಾಳೆ," ಎಂದರು. [8]ಆಗ ಸೌಲನು ಉಡಿಗೆತೊಡಿಗೆಗಳಿಂದ ತನ್ನನ್ನು ಮಾರ್ಪಡಿಸಿಕೊಂಡು
ಇಬ್ಬರು ಸೇವಕರೊಡನೆ ಹೊರಟು ರಾತ್ರಿಯಲ್ಲಿ ಆಕೆಯ ಮನೆಗೆ ಬಂದನು. "ದಯವಿಟ್ಟು ನನಗಾಗಿ
ಭೂತಪ್ರೇತಗಳಲ್ಲಿ ವಿಚಾರಿಸಿ ಶಾಸ್ತ್ರ ಹೇಳು; ನಾನು ಯಾವನ ಹೆಸರು ಹೇಳುತ್ತೇನೋ ಅವನನ್ನು ಇಲ್ಲಿಗೆ
ಬರಮಾಡು," ಎಂದು ಆಕೆಯನ್ನು ಬೇಡಿಕೊಂಡನು.

9 ಆಗ ಆಕೆ ಅವನಿಗೆ, "ಸೌಲನು ಮಾಡಿದ್ದು ನಿನಗೆ ಗೊತ್ತುಂಟು; ಅವನು ಭೂತಪ್ರೇತಗಳನ್ನು
ವಿಚಾರಿಸುವವರನ್ನು ಹಾಗು ಬೇತಾಳಿಕರನ್ನು ನಾಡಿನಿಂದ ಹೊರಡಿಸಿಬಿಟ್ಟನಲ್ಲವೇ? ಹೀಗಿದ್ದರೂ ನಾನು
ಸಾಯುವಂತೆ ನೀನು ನನ್ನ ಪ್ರಾಣಕ್ಕೆ ಉರಲೊಡ್ಡುವುದೇಕೆ?" ಎಂದಳು. [10]ಅದಕ್ಕೆ ಸೌಲನು,
"ಸರ್ವೇಶ್ವರನಾಣೆ, ಈ ವಿಷಯದಲ್ಲಿ ನೀನು ದಂಡನೆಗೆ ಗುರಿಯಾಗುವುದಿಲ್ಲ," ಎಂದು ಆಕೆಗೆ ಸರ್ವೇಶ್ವರನ
ಹೆಸರಿನಲ್ಲಿ ಪ್ರಮಾಣ ಮಾಡಿದನು. [11]ಆಗ ಆ ಸ್ತ್ರೀ, "ನಿನಗೆ ಯಾರನ್ನು ಬರಮಾಡಬೇಕು?" ಎಂದಳು.
"ಸಮುವೇಲನನ್ನು," ಎಂದು ಉತ್ತರಕೊಟ್ಟನು. [12]ಆ ಸ್ತ್ರೀ ಸಮುವೇಲನನ್ನು ಕಂಡಕೂಡಲೆ ಗಟ್ಟಿಯಾಗಿ ಕೂಗಿ
ಸೌಲನಿಗೆ, "ನೀನು ನನ್ನನ್ನು ವಂಚಿಸಿದ್ದೇಕೆ? ನೀನು ಸೌಲನಲ್ಲವೇ?," ಎಂದಳು. [13]ಆಗ ಅರಸನು,
"ಹೆದರಬೇಡ, ನಿನಗೇನು ಕಾಣಿಸುತ್ತದೆ?" ಎಂದು ಆಕೆಯನ್ನು ಕೇಳಿದನು. "ಭೂಮಿಯೊಳಗಿನಿಂದ
ಪ್ರೇತಾತ್ಮವೊಂದು ಬರುತ್ತಿರುವುದನ್ನು ನೋಡುತ್ತಿದ್ದೇನೆ," ಎಂದು ಉತ್ತರ ಕೊಟ್ಟಳು. [14]ಅವನು ಮತ್ತೆ, "ಅವನ
ರೂಪ ಹೇಗಿದೆ?" ಎಂದು ಕೇಳಿದನು. ಆಕೆ, "ನಿಲುವಂಗಿಯನ್ನು ತೊಟ್ಟುಕೊಂಡ ಒಬ್ಬ ಮುದುಕ

ಬರುತ್ತಿದ್ದಾನೆ," ಎಂದು ಹೇಳಿದಳು. ಅವನು ಸಮುವೇಲನೇ ಎಂದು ಸೌಲನು ತಿಳಿದು ನೆಲದ ಮಟ್ಟಿಗೂ
ಬಾಗಿ ನಮಸ್ಕರಿಸಿದನು.
15 ಆಗ ಸಮುವೇಲನು ಸೌಲನನ್ನು, "ನೀನು ನನ್ನ ವಿಶ್ರಾಂತಿಯನ್ನು ಕೆಡಿಸಿದ್ದೇಕೆ? ನನ್ನನ್ನು ಇಲ್ಲಿಗೆ
ಏಕೆ ಬರಮಾಡಿದೆ?" ಎಂದು ಕೇಳಿದನು. ಅದಕ್ಕೆ ಸೌಲನು, "ನಾನು ಬಲು ಇಕ್ಕಟ್ಟಿನಲ್ಲಿ ಇದ್ದೇನೆ;
ಫಿಲಿಷ್ಟಿಯರು ನನಗೆ ವಿರೋಧವಾಗಿ ಯುದ್ಧಕ್ಕೆ ಬಂದಿದ್ದಾರೆ; ದೇವರು ನನ್ನನ್ನು ಕೈ ಬಿಟ್ಟು
ದೂರಹೋಗಿದ್ದಾರೆ; ಅವರು ನನಗೆ ಪ್ರವಾದಿಗಳಿಂದಾಗಲಿ, ಕನಸುಗಳಿಂದಾಗಲಿ ಉತ್ತರ ಕೊಡಲೊಲ್ಲರು.
ಆದುದರಿಂದ ನಾನು ಮಾಡಬೇಕಾದುದನ್ನು ನೀನು ತಿಳಿಸುವೆಯೆಂದು ನಿನ್ನನ್ನು ಇಲ್ಲಿಗೆ ಬರಮಾಡಿದೆನು,"
ಎಂದನು. 16ಆಗ ಸಮುವೇಲನು, "ಸರ್ವೇಶ್ವರ ನಿನ್ನನ್ನು ಕೈಬಿಟ್ಟು ನಿನಗೆ ವಿರೋಧಿಯಾದ ಮೇಲೆ ನೀನು
ನನ್ನನ್ನು ವಿಚಾರಿಸುವುದೇಕೆ? 17ಅವರು ನನ್ನ ಮುಖಾಂತರ ನಿನಗೆ ಹೇಳಿದ್ದನ್ನು ನೆರವೇರಿಸಿದ್ದಾರೆ;
ರಾಜ್ಯವನ್ನು ನಿನ್ನಿಂದ ಕಿತ್ತುಕೊಂಡು ನಿನ್ನ ನೆರೆಯವನಾದ ದಾವೀದನಿಗೆ ಕೊಟ್ಟಿದ್ದಾರೆ. 18ನೀನು ಸರ್ವೇಶ್ವರನ
ಮಾತನ್ನು ಕೇಳಲಿಲ್ಲ; ಅವರು ಅಮಾಲೇಕ್ಯರ ಮೇಲೆ ಉಗ್ರಕೋಪಗೊಂಡು ಮಾಡಿದ ಕೋಪಾಜ್ಞೆಯನ್ನು
ನೀನು ನೆರವೇರಿಸಲಿಲ್ಲ. ಆದುದರಿಂದಲೇ ಸರ್ವೇಶ್ವರ ಈಗ ನಿನಗೆ ಹೀಗೆ ಮಾಡುತ್ತಾರೆ. 19ನಿನ್ನ ಸಮೇತ
ಇಸ್ರಯೇಲರನ್ನು ಫಿಲಿಷ್ಟಿಯರ ಕೈಗೆ ಒಪ್ಪಿಸುವರು. ನಾಳೆ ನೀನೂ ನಿನ್ನ ಮಕ್ಕಳೂ ನಾನಿರುವಲ್ಲಿಗೆ ಬರುವಿರಿ.
ಸರ್ವೇಶ್ವರ ಇಸ್ರಯೇಲ್ ಸೈನ್ಯವನ್ನು ಫಿಲಿಷ್ಟಿಯರ ಕೈಗೆ ಒಪ್ಪಿಸುವರು," ಎಂದು ಹೇಳಿದನು.
20 ಸೌಲನು ಸಮುವೇಲನ ಮಾತುಗಳನ್ನು ಕೇಳಿದ ಕೂಡಲೆ ದಿಗ್ಭ್ರಾಂತನಾಗಿ ನೆಲದ ಮೇಲೆ ಕೈಕಾಲು
ಚಾಚಿಬಿದ್ದನು. ಅವನು ಇಡೀ ದಿವಸ ಊಟ ಮಾಡಿರಲಿಲ್ಲ. ಆದುದರಿಂದ ಅವನಲ್ಲಿ ಬಲವೇ ಇರಲಿಲ್ಲ.
21ಆ ಸ್ತ್ರೀ ಸೌಲನ ಹತ್ತಿರಕ್ಕೆ ಬಂದು ಅವನು ಬಹುಭೀತನಾಗಿದ್ದಾನೆಂದು ಕಂಡು, "ನಿಮ್ಮ ದಾಸಿಯಾದ ನಾನು
ನಿಮ್ಮ ಮಾತು ಕೇಳಿದೆನು; ಕೈಯಲ್ಲಿ ಜೀವ ಹಿಡಿದವಳಾಗಿ ನಿಮ್ಮ ಅಪ್ಪಣೆಯನ್ನು ನೆರವೇರಿಸಿದೆನು.
22ಆದುದರಿಂದ ಈಗ ನೀವು ದಯವಿಟ್ಟು ನಿಮ್ಮ ದಾಸಿಯ ಮಾತನ್ನು ಕೇಳಬೇಕು. ಸ್ವಲ್ಪ ಆಹಾರ ತರುತ್ತೇನೆ,
ಪ್ರಯಾಣಕ್ಕೆ ಬಲಬರುವ ಹಾಗೆ ಅದನ್ನು ಊಟ ಮಾಡಿ," ಎಂದು ಹೇಳಿದಳು.
23 ಅವನು, "ಒಲ್ಲೆ; ಊಟ ಮಾಡುವುದಿಲ್ಲ," ಎಂದನು. ಆದರೆ, ಅವನ ಸೇವಕರೂ ಆ ಸ್ತ್ರೀಯೂ
ಬಹಳವಾಗಿ ಬೇಡಿಕೊಂಡಿದ್ದರಿಂದ ಅವನು ಕಡೆಗೆ ಅವರ ಮಾತಿಗೆ ಒಪ್ಪಿ ನೆಲದಿಂದೆದ್ದು ಮಂಚದ ಮೇಲೆ
ಕುಳಿತುಕೊಂಡನು. 24ಆ ಸ್ತ್ರೀಗೆ ಮನೆಯಲ್ಲಿ ಒಂದು ಕೊಬ್ಬಿದ ಕರುವಿತ್ತು. ಆಕೆ ಶೀಘ್ರವಾಗಿ ಅದನ್ನು ಕೊಯ್ದು,
ಪಕ್ವಮಾಡಿ, ಹಿಟ್ಟನ್ನು ತೆಗೆದುಕೊಂಡು ನಾದಿ, ಹುಳಿಯಿಲ್ಲದ ರೊಟ್ಟಿಗಳನ್ನು ಸುಟ್ಟು, 25ಸೌಲನಿಗೂ ಅವನ
ಸೇವಕರಿಗೂ ಬಡಿಸಿದಳು. ಅವರು ಊಟಮಾಡಿ ಅದೇ ರಾತ್ರಿ ಹೊರಟುಹೋದರು.

### ದಾವೀದನು ಫಿಲಿಷ್ಟಿಯರಿಂದ ತಿರಸ್ಕೃತ

**29** ಫಿಲಿಷ್ಟಿಯರು ತಮ್ಮ ಸೈನ್ಯವನ್ನು ಕೂಡಿಸಿಕೊಂಡು ಬಂದು ಅಫೇಕಿನಲ್ಲಿ ಪಾಳೆಯ ಮಾಡಿಕೊಂಡರು.
ಇಸ್ರಯೇಲರು ಜೆಸ್ರೀಲ್ ಬೈಲಿನಲ್ಲಿರುವ ಬುಗ್ಗೆಯ ಬಳಿಯಲ್ಲಿ ಇಳಿದುಕೊಂಡರು. 2ಫಿಲಿಷ್ಟಿಯ ರಾಜರುಗಳ
ಸೈನಿಕರು ನೂರು ನೂರು ಮಂದಿಯಾಗಿ ಹಾಗು ಸಾವಿರ ಸಾವಿರ ಮಂದಿಯಾಗಿ ಬರುತ್ತಿರುವಾಗ
ದಾವೀದನು ತನ್ನ ಜನರ ಸಹಿತವಾಗಿ ಆಕೀಷನ ಸಂಗಡ ಹಿಂಭಾಗದಲ್ಲಿದ್ದನು. 3ಆಗ ಫಿಲಿಷ್ಟಿಯ ರಾಜರು,
"ಈ ಹಿಬ್ರಿಯರು ಏಕೆ?" ಎಂದು ಆಕೀಷನನ್ನು ಕೇಳಿದರು.

"ಈತ, ಇಸ್ರಯೇಲರ ಅರಸನಾದ ಸೌಲನ ಸೇವಕನಾದ ದಾವೀದನಲ್ಲವೇ? ಇವನು ಇಷ್ಟು ವರ್ಷ,
ಇಷ್ಟು ದಿವಸಗಳಿಂದ ನನ್ನ ಬಳಿಯಲ್ಲೇ ಇದ್ದಾನೆ; ಸೌಲನನ್ನು ಬಿಟ್ಟು ನನ್ನ ಹತ್ತಿರ ಬಂದ ದಿವಸ
ಮೊದಲುಗೊಂಡು ಇಂದಿನವರೆಗೂ ನಾನು ಇವನಲ್ಲಿ ಯಾವ ಅಪರಾಧವನ್ನೂ ಕಾಣಲಿಲ್ಲ," ಎಂದು
ಆಕೀಷನು ಉತ್ತರಕೊಟ್ಟನು.
4 ಆದರೆ ಆ ಫಿಲಿಷ್ಟಿಯ ರಾಜರುಗಳು ಅವನ ಮೇಲೆ ಕೋಪಗೊಂಡು, "ಈ ಮನುಷ್ಯನನ್ನು
ಕಳುಹಿಸಿಬಿಡು; ಇವನು ಹಿಂದಿರುಗಿ ಹೋಗಿ ನೀನು ನೇಮಿಸಿದ್ದ ಸ್ಥಳದಲ್ಲೇ ವಾಸಿಸಲಿ; ನಮ್ಮ ಜೊತೆಯಲ್ಲಿ

ಯುದ್ಧಕ್ಕೆ ಬರಬಾರದು. ಬಂದರೆ ನಮಗೇ ಶತ್ರುವಾಗಿ ನಿಂತಾನು. ಫಿಲಿಷ್ಟಿಯರ ತಲೆಗಳನ್ನು ಕಡಿಯುವುದರಿಂದಲೇ ಇವನು ತನ್ನ ಯಜಮಾನನ ಮೆಚ್ಚಿಕೆಯನ್ನು ಪಡೆಯಬಹುದಲ್ಲವೇ?

5 'ಸೌಲನು ಕೊಂದನು ಸಾವಿರಗಟ್ಟಳೆ;
ದಾವೀದನೋ ಕೊಂದನು
ಹತ್ತು ಸಾವಿರಗಟ್ಟಳೆ,'

ಎಂದು ಮಹಿಳೆಯರು ಕುಣಿಯುತ್ತಾ ಪರಸ್ಪರವಾಗಿ ಹಾಡಿದ್ದು ಈ ದಾವೀದನನ್ನೇ ಕುರಿತು ಅಲ್ಲವೇ?" ಎಂದರು.

6 ಆಗ ಆಕೀಷನು ದಾವೀದನನ್ನು ಕರೆದು, "ಸರ್ವೇಶ್ವರನಾಣೆ, ನೀನು ಯಥಾರ್ಥನು; ನೀನು ನನ್ನ ಸಂಗಡ ಪಾಳೆಯದಲ್ಲಿದ್ದುಕೊಂಡು ಯುದ್ಧಕ್ಕೆ ಹೋಗುತ್ತಾ ಬರುತ್ತಾ ಇರುವುದು ಯುಕ್ತವೆಂದು ನನಗೆ ತೋರಿತು. ನೀನು ಬಂದಂದಿನಿಂದ ಇಂದಿನವರೆಗೂ ನಿನ್ನಲ್ಲಿ ಯಾವ ದೋಷವನ್ನೂ ಕಾಣಲಿಲ್ಲ. [7]ಆದರೆ ರಾಜರುಗಳು ನಿನ್ನನ್ನು ಮೆಚ್ಚುವುದಿಲ್ಲ; ಆದುದರಿಂದ ನೀನು ಸಮಾಧಾನದಿಂದ ಹಿಂದಿರುಗಿ ಹೋಗು; ಅವರನ್ನು ಸಿಟ್ಟುಗೊಳಿಸಬಾರದು," ಎಂದು ಹೇಳಿದನು.

8 ದಾವೀದನು ಆಕೀಷನಿಗೆ, "ನಾನೇನು ಮಾಡಿದೆ? ನಿಮ್ಮ ಸೇವಕನಾದ ನಾನು ನಿಮ್ಮ ಬಳಿಗೆ ಬಂದಂದಿನಿಂದ ಇಂದಿನವರೆಗೂ ನನ್ನಲ್ಲಿ ಯಾವ ಅಪರಾಧವನ್ನು ಕಂಡಿರಿ? ರಾಜರಾದ ನನ್ನ ಒಡೆಯರ ಜೊತೆಯಲ್ಲಿ ಹೋಗಿ ಅವರ ಶತ್ರುಗಳೊಡನೆ ನಾನೇಕೆ ಯುದ್ಧಮಾಡಬಾರದು?" ಎಂದನು.

9 ಆಗ ಆಕೀಷನು ದಾವೀದನಿಗೆ, "ನೀನು ಒಳ್ಳೆಯವನೆಂದು ನನಗೆ ಗೊತ್ತಿದೆ; ನನ್ನ ದೃಷ್ಟಿಯಲ್ಲಿ ನೀನು ದೇವದೂತನಂತಿರುವೆ; ಆದರೆ ಫಿಲಿಷ್ಟಿಯದ ರಾಜರುಗಳು, 'ಇವನು ನಮ್ಮ ಜೊತೆಯಲ್ಲಿ ಯುದ್ಧಕ್ಕೆ ಹೊರಡಬಾರದು' ಎಂದು ಹೇಳುತ್ತಾರೆ; [10]ಆದ್ದರಿಂದ ನೀನೂ ನಿನ್ನ ಸಂಗಡ ಬಂದ ನಿನ್ನ ಒಡೆಯನ ಸೇವಕರೂ ನಾಳೆ ಬೆಳಿಗ್ಗೆ ಎದ್ದು ಹೊತ್ತು ಮೂಡಿದ ಕೂಡಲೆ ಹಿಂದಿರುಗಿ ಹೋಗಿ," ಎಂದು ಹೇಳಿದನು.
[11]ದಾವೀದನು ತನ್ನ ಜನರೊಡನೆ ಬೆಳಿಗ್ಗೆ ಎದ್ದು ಹಿಂದಿರುಗಿ ಫಿಲಿಷ್ಟಿಯರ ದೇಶಕ್ಕೆ ಹೊರಟನು. ಫಿಲಿಷ್ಟಿಯರು ಜೆಸ್ರೀಲಿಗೆ ಹೋದರು.

## ಅಮಾಲೇಕ್ಯರೊಡನೆ ಕದನ

**30** ದಾವೀದನೂ ಅವನ ಜನರೂ ಮಾರನೆಯ ದಿನ ಚಿಕ್ಲಗ್ ಊರನ್ನು ಸೇರಿದರು. ಅಷ್ಟರೊಳಗೆ ಅಮಾಲೇಕ್ಯರು ದಂಡೆತ್ತಿ ದಕ್ಷಿಣಪ್ರಾಂತ್ಯಕ್ಕೂ ಚಿಕ್ಲಗ್ ಊರಿಗೂ ಬಂದು ಚಿಕ್ಲಗ್ ಊರನ್ನು ಸುಟ್ಟು ಹಾಳುಮಾಡಿದ್ದರು. [2]ಅದರಲ್ಲಿದ್ದ ಎಲ್ಲಾ ಹೆಂಗಸರನ್ನೂ ಚಿಕ್ಕವರನ್ನೂ ದೊಡ್ಡವರನ್ನೂ ಸೆರೆಹಿಡಿದುಕೊಂಡು ಹೋಗಿ ಇದ್ದರು; ಆದರೆ ಯಾರನ್ನೂ ಕೊಂದಿರಲಿಲ್ಲ. [3]ದಾವೀದನೂ ಅವನ ಜನರೂ ತಮ್ಮ ಊರಿಗೆ ಬಂದಾಗ ಅದು ಸುಟ್ಟುಹೋಗಿರುವುದನ್ನೂ ತಮ್ಮ ಹೆಂಡತಿಯರೂ ಗಂಡು-ಹೆಣ್ಣು ಮಕ್ಕಳೂ ಸೆರೆಯಾಗಿ ಹೋಗಿರುವುದನ್ನೂ ಕಂಡರು. [4]ದುಃಖ ತಾಳಲಾಗದೆ ದೀರ್ಘಕಾಲ ಅತ್ತು ಗೋಳಾಡಿದರು. [5]ದಾವೀದನ ಇಬ್ಬರು ಹೆಂಡತಿಯರಾದ ಜೆಸ್ರೀಲಿನವಳಾದ ಅಹೀನೋವಮಳು ಮತ್ತು ಕರ್ಮೆಲ್ಯನಾದ ನಾಬಾಲನ ಹೆಂಡತಿಯಾಗಿದ್ದ ಅಬೀಗೈಲಳು ಕೂಡ ಸೆರೆಯಾಗಿ ಹೋಗಿದ್ದರು.

6 ಇದಲ್ಲದೆ ಜನರು ತಮ್ಮ ಗಂಡುಹೆಣ್ಣು ಮಕ್ಕಳಿಗಾಗಿ ಮನಸ್ಸಿನಲ್ಲಿ ಬಹಳವಾಗಿ ನೊಂದು ಕೊಂಡರು. ಮಾತ್ರವಲ್ಲ, ದಾವೀದನನ್ನು ಕಲ್ಲೆಸೆದು ಕೊಲ್ಲಬೇಕೆಂದಿದ್ದರು. ಆದುದರಿಂದ ಅವನು ಬಲು ಇಕ್ಕಟ್ಟಿಗೆ ಸಿಕ್ಕಿಕೊಂಡಿದ್ದನು. [7]ಆದರೂ ಅವನು ತನ್ನ ದೇವರಾದ ಸರ್ವೇಶ್ವರನಲ್ಲಿ ಧೈರ್ಯ ತಂದುಕೊಂಡನು. ಅಹೀಮೆಲೆಕನ ಮಗನಾದ ಎಬ್ಯಾತಾರನಿಗೆ, "ದಯವಿಟ್ಟು 'ಏಫೋದ'ನ್ನು ಇಲ್ಲಿಗೆ ತೆಗೆದುಕೊಂಡು ಬಾ," ಎಂದು ಹೇಳಿದನು. ಅವನು ತಂದನು. [8]ಆಗ ದಾವೀದನು ಸರ್ವೇಶ್ವರನನ್ನು, "ನಾನು ಆ ದಾಳಿಕಾರರನ್ನು ಬೆನ್ನಟ್ಟಬಹುದೇ? ಅವರು ನನಗೆ ವಶವಾಗುವರೇ?" ಎಂದು ಕೇಳಿದನು. "ಬೆನ್ನಟ್ಟು, ಅವರು ನಿನ್ನ ವಶವಾಗುವರು, ನೀನು ನಿನ್ನವರೆಲ್ಲರನ್ನೂ ಬಿಡಿಸಿಕೊಂಡು ಬರುವೆ," ಎಂದು ಉತ್ತರ ಕೊಟ್ಟರು ಸರ್ವೇಶ್ವರ.

9 ದಾವೀದನೂ ಅವನ ಸಂಗಡ ಇದ್ದ ಆರುನೂರು ಮಂದಿ ಸೈನಿಕರೂ ಹೊರಟು ಬೆಸೋರ್
ಹಳ್ಳಕ್ಕೆ ಬಂದರು. [10]ಆಮೇಲೆ ಆ ಹಳ್ಳದಿಂದ ಮೇಲೆ ಹತ್ತಲಾರದಷ್ಟು ಆಯಾಸಗೊಂಡ ಇನ್ನೂರು ಜನರು
ಅಲ್ಲೇ ನಿಂತುಬಿಟ್ಟರು. ಆದ್ದರಿಂದ ದಾವೀದನು ಉಳಿದ ನಾನೂರು ಜನರನ್ನೇ ಕರೆದುಕೊಂಡು ಮುಂದೆ
ನಡೆದನು. [11]ಅವನ ಜನರು ಅಡವಿಯಲ್ಲಿ ಒಬ್ಬ ಈಜಿಪ್ಟಿನವನು ಬಿದ್ದಿರುವುದನ್ನು ಕಂಡು ಅವನನ್ನು
ದಾವೀದನ ಬಳಿಗೆ ತಂದು ಅವನಿಗೆ ರೊಟ್ಟಿ ತಿನ್ನಿಸಿ, ನೀರು ಕುಡಿಸಿದರು. [12]ಅಂಜೂರ ಹಣ್ಣಿನ
ಉಂಡೆಯನ್ನೂ ಎರಡು ದ್ರಾಕ್ಷಿಗೊಂಚಲುಗಳನ್ನೂ ಕೊಟ್ಟರು. ಮೂರು ದಿವಸ ಹಗಲಿರುಳು
ಅನ್ನಪಾನವಿಲ್ಲದ್ದರಿಂದ ಬಹಳವಾಗಿ ಬಳಲಿ ಹೋಗಿದ್ದ ಇವನು ಅವುಗಳನ್ನು ತಿಂದು ಚೇತರಿಸಿಕೊಂಡನು.
[13]ಆಗ ದಾವೀದನು ಅವನನ್ನು, "ನೀನು ಯಾರಕಡೆಯವನು? ಎಲ್ಲಿಯವನು?" ಎಂದು ಕೇಳಿದನು. ಆಗ
ಅವನು, "ನಾನು ಈಜಿಪ್ಟಿನವನು; ಒಬ್ಬ ಅಮಾಲೇಕ್ಯನ ಗುಲಾಮನು. ನಾನು ಮೂರು ದಿನಗಳ ಹಿಂದೆ
ಅಸ್ವಸ್ಥನಾಗಿ ಮಲಗಿಕೊಂಡದ್ದರಿಂದ ನನ್ನ ಯಜಮಾನ ನನ್ನನ್ನು ಬಿಟ್ಟುಹೋದನು. [14]ಕೆರೇತ್ಯರೂ
ಯೆಹೂದ್ಯರೂ ಕಾಲೇಬ್ಯರೂ ಇರುವ ದಕ್ಷಿಣ ಪ್ರಾಂತ್ಯವನ್ನು ನಾವು ಸೂರೆಮಾಡಿ ಚಿಕ್ಲಗ್ ಊರನ್ನು
ಸುಟ್ಟುಬಿಟ್ಟು ಬಂದೆವು," ಎಂದು ಉತ್ತರಕೊಟ್ಟನು.

15 ಅನಂತರ ದಾವೀದನು, "ನೀನು ನನ್ನನ್ನು ಆ ಗುಂಪು ಇರುವ ಸ್ಥಳಕ್ಕೆ ಕರೆದುಕೊಂಡು
ಹೋಗುವಿಯಾ?" ಎಂದು ಕೇಳಿದ್ದಕ್ಕೆ ಅವನು, "ನೀನು ನನ್ನನ್ನು ಕೊಲ್ಲುವುದಿಲ್ಲವೆಂದೂ ನನ್ನ ಯಜಮಾನನ
ಕೈಗೆ ಒಪ್ಪಿಸುವುದಿಲ್ಲವೆಂದೂ ದೇವರ ಹೆಸರಿನಲ್ಲಿ ಪ್ರಮಾಣಮಾಡಿದರೆ ನಿನ್ನನ್ನು, ಆ ಗುಂಪಿನವರ ಬಳಿಗೆ
ಕರೆದುಕೊಂಡು ಹೋಗುವೆನು," ಎಂದನು. [16]ಅವರು ಅಲ್ಲಿಗೆ ಹೋದಾಗ ಆ ದಾಳಿಕಾರರು ತಮಗೆ
ಫಿಲಿಷ್ಟಿಯ ಹಾಗು ಯೆಹೂದ ಪ್ರಾಂತ್ಯಗಳಲ್ಲಿ ದೊರಕಿದ್ದ ದೊಡ್ಡಕೊಳ್ಳೆಯ ನಿಮಿತ್ತ ಸಂತೋಷಿಸಿ, ತಿಂದು,
ಕುಡಿದು, ಕುಣಿದಾಡುತ್ತಾ ಅಲ್ಲಿನ ಬಯಲಿನಲ್ಲಿ ವ್ಯಾಪಿಸಿಕೊಂಡಿದ್ದರು. [17]ದಾವೀದನು ಮರುದಿನ ನಸುಕಿನಲ್ಲೇ
ಅವರ ಮೇಲೆ ದಾಳಿಮಾಡಿ ಸೂರ್ಯಾಅಸ್ತವಾಗುವವರೆಗೂ ಅವರನ್ನು ಸದೆಬಡಿದನು. ಒಂಟೆಗಳನ್ನು ಹತ್ತಿ
ಓಡಿಹೋದ ನಾನೂರು ಮಂದಿ ಯುವಕರ ಹೊರತು ಬೇರೆ ಯಾರೂ ತಪ್ಪಿಸಿಕೊಳ್ಳಲಿಲ್ಲ. [18]ದಾವೀದನು
ತನ್ನ ಇಬ್ಬರು ಹೆಂಡತಿಯರನ್ನು ಹಾಗು ಅಮಾಲೇಕ್ಯರು ಒಯ್ದಿದ್ದ ಎಲ್ಲಾ ಕೊಳ್ಳೆಯನ್ನು ಬಿಡಿಸಿಕೊಂಡನು.
[19]ಅಮಾಲೇಕ್ಯರು ಒಯ್ದಿದ್ದ ಚಿಕ್ಕ ದೊಡ್ಡ ಒಡವೆಗಳಾಗಲಿ, ಗಂಡು-ಹೆಣ್ಣು ಮಕ್ಕಳಾಗಲಿ ಒಂದನ್ನೂ ಬಿಡದೆ,
ಎಲ್ಲವನ್ನೂ ತೆಗೆದುಕೊಂಡು ಬಂದನು. [20]ಇದಲ್ಲದೆ, ದಾವೀದನು ಶತ್ರುಗಳ ದನಕುರಿಗಳನ್ನೂ
ತೆಗೆದುಕೊಂಡನು. ಅವನ ಜನರು, "ಇವು ದಾವೀದನ ಕೊಳ್ಳೆ," ಎಂದು ಹೇಳಿ ಅವುಗಳನ್ನು ತಮ್ಮ ದನಗಳ
ಸಮೇತ ಹೊಡೆದುಕೊಂಡು ಬಂದರು.

21 ಅನಂತರ ದಾವೀದನು ಮೊದಲು ಆಯಾಸದಿಂದ ತನ್ನ ಹಿಂದೆ ಬರಲಾರದೆ ಬೆಸೋರ್ ಹಳ್ಳದ
ಹತ್ತಿರ ಉಳಿದಿದ್ದ ಇನ್ನೂರು ಜನರ ಬಳಿಗೆ ಹೋದನು. ಅವನನ್ನೂ ಅವನೊಂದಿಗಿದ್ದ ಜನರನ್ನೂ
ಎದುರುಗೊಳ್ಳಲು ಆ ಜನರು ಬಂದರು. ದಾವೀದನು ಅವರನ್ನು ಸಂಧಿಸಿ ಕ್ಷೇಮಸಮಾಚಾರವನ್ನು
ವಿಚಾರಿಸಿದನು. [22]ಆಗ ದಾವೀದನ ಜೊತೆಯಲ್ಲಿ ಹೋಗಿದ್ದ ಜನರಲ್ಲಿ ದುಷ್ಟರೂ ಮೂರ್ಖರೂ ಆದ ಕೆಲವು
ಮಂದಿ, "ಇವರು ನಮ್ಮ ಸಂಗಡ ಬಾರದ್ದರಿಂದ ನಾವು ಬಿಡಿಸಿಕೊಂಡು ಬಂದ ಕೊಳ್ಳೆಯಲ್ಲಿ ಇವರಿಗೆ ಏನೂ
ಸಿಕ್ಕುವುದಿಲ್ಲ. ತಮ್ಮ ತಮ್ಮ ಮಡದಿ ಮಕ್ಕಳನ್ನು ಕರೆದುಕೊಂಡು ಹೋಗಿಬಿಡಲಿ," ಎಂದರು.

23 ಆಗ ದಾವೀದನು ಅವರಿಗೆ, "ಸಹೋದರರೇ, ಸರ್ವೇಶ್ವರ ನಮ್ಮನ್ನು ಕಾಪಾಡಿ, ನಮಗೆ ವಿರುದ್ಧ
ಬಂದಿದ್ದ ಶತ್ರುಗಳ ಗುಂಪನ್ನು ನಮ್ಮ ಕೈಗೆ ಒಪ್ಪಿಸಿ, ನಮಗೆ ಇಷ್ಟನ್ನೆಲ್ಲಾ ಅನುಗ್ರಹಿಸಿದ ಮೇಲೆ ನೀವು ಹೀಗೆ
ಮಾಡಬಾರದು. [24]ಈ ವಿಷಯದಲ್ಲಿ ನಿಮ್ಮ ಮಾತನ್ನು ಯಾರೂ ಕೇಳಬಾರದು. ಯುದ್ಧಮಾಡಿದವನಿಗೆ
ಸಿಕ್ಕುವಷ್ಟು ಪಾಲು ಸಾಧನಸಾಮಗ್ರಿಗಳನ್ನು ಕಾಯ್ದವನಿಗೂ ಸಿಕ್ಕಬೇಕು. ಉಭಯತ್ರರಿಗೂ
ಸಮಪಾಲಾಗಬೇಕು," ಎಂದು ಉತ್ತರಕೊಟ್ಟನು. [25]ದಾವೀದನು ಇಸ್ರಯೇಲರಲ್ಲಿ ಇದನ್ನು ಒಂದು
ಕಟ್ಟಳೆಯನ್ನಾಗಿ ಅಂದು ವಿಧಿಸಿದ್ದರಿಂದ ಇಂದಿನವರೆಗೂ ಹಾಗೆಯೇ ನಡೆಯುತ್ತಾ ಬಂದಿದೆ.

26 ದಾವೀದನು ಚಿಕ್ಲಗಿಗೆ ಬಂದನಂತರ ತನ್ನ ಸ್ನೇಹಿತರಾದ ಯೆಹೂದ ಹಿರಿಯರಿಗೆ ಕೊಳ್ಳೆಯ
ಒಂದು ಭಾಗವನ್ನು ಕಳುಹಿಸಿದನು. "ಇಗೋ, ಸರ್ವೇಶ್ವರ ಶತ್ರುಗಳನ್ನು ಸೂರೆಮಾಡಿ ತಂದವುಗಳಲ್ಲಿ ಇದು
ನಿಮಗೆ ಬಹುಮಾನವಾಗಿರಲಿ," ಎಂದು ಹೇಳಿದನು. [27]ಹೀಗೆ ಬಹುಮಾನ ಪಡೆದವರು ಇವರು:

ಬೇತೇಲಿನವರು, ದಕ್ಷಿಣ ಪ್ರಾಂತ್ಯದ ರಾಮೋತಿನವರು, ಯತ್ತೀರಿನವರು, [28]ಅರೋಯೇರಿನವರು, ಸಿಫ್ಮೋತಿನವರು, ಎಷ್ಟೆಮೋವದವರು, [29]ರಾಕಾಲಿನವರು, ಎರಹ್ಮೇಲ್ಯರು, ಕೇನ್ಯರು, [30]ಹೊರ್ಮಾದವರು, ಬೋರಾಷಾನಿನವರು, ಅತಾಕಿನವರು, ಹೆಬ್ರೋನಿನವರು [31]ಮತ್ತು ದಾವೀದನೂ ಅವನ ಜನರೂ ಸಂಚರಿಸುತ್ತಿದ್ದ ಇತರ ಎಲ್ಲಾ ಸ್ಥಳಗಳವರು.

### ಸೌಲನ ಮತ್ತು ಅವನ ಮಕ್ಕಳ ಸಾವು
(ಪೂರ್ವ. 10.1–12)

**31** ಫಿಲಿಷ್ಟಿಯರು ಇಸ್ರಯೇಲರೊಡನೆ ಯುದ್ಧಮಾಡಿದರು. ಇಸ್ರಯೇಲರು ಅವರಿಂದ ಅಪಜಯಹೊಂದಿ ಗಿಲ್ಬೋವ ಬೆಟ್ಟದಲ್ಲಿ ಹತರಾದರು. [2]ಫಿಲಿಷ್ಟಿಯರು ಸೌಲನನ್ನೂ ಅವನ ಮಕ್ಕಳನ್ನೂ ಬಿಡದೆ ಹಿಂದಟ್ಟಿ ಅವನ ಮಕ್ಕಳಾದ ಯೋನಾತಾನನನ್ನೂ ಅಬೀನಾದಾಬನನ್ನೂ ಮಲ್ಕೀಷೂವನನ್ನೂ ಕೊಂದರು. [3]ಸೌಲನಿದ್ದ ಕಡೆಯಲ್ಲಿ ಯುದ್ಧವು ಬಹುಘೋರವಾಗಿತ್ತು. ಬಿಲ್ಲುಗಾರರು ಅವನಿಗೆ ಗುರಿಯಿಟ್ಟರು. [4]ಆದುದರಿಂದ ಸೌಲನು ಭಯಭೀತನಾಗಿ ತನ್ನ ಆಯುಧ ವಾಹಕನಿಗೆ, "ನಿನ್ನ ಕತ್ತಿಯನ್ನು ಹಿರಿದು ನನ್ನನ್ನು ತಿವಿದು ಕೊಲ್ಲು; ಇಲ್ಲವಾದರೆ ಸುನ್ನತಿಯಿಲ್ಲದ ಈ ಜನರು ಬಂದು ನನ್ನನ್ನು ತಿವಿದು ಅಪಕೀರ್ತಿಯನ್ನುಂಟುಮಾಡಬಹುದು," ಎಂದು ಹೇಳಿದನು. ವಾಹಕನು ಹೆದರಿ, "ಒಲ್ಲೆ" ಎಂದನು. ಆದುದರಿಂದ ಸೌಲನು ತಾನೇ ಕತ್ತಿಯನ್ನು ಹಿರಿದು ಅದರ ಮೇಲೆ ಬಿದ್ದನು. [5]ಸೌಲನು ಸತ್ತದ್ದನ್ನು ಅವನ ಆಯುಧವಾಹಕನು ಕಂಡು ತಾನೂ ತನ್ನ ಕತ್ತಿಯ ಮೆಲೆ ಬಿದ್ದು ಅಲ್ಲಿಯೇ ಸತ್ತನು. [6]ಹೀಗೆ ಸೌಲನೂ ಅವನ ಮೂರು ಮಂದಿ ಮಕ್ಕಳೂ ಅವನ ಆಯುಧ ವಾಹಕನೂ ಎಲ್ಲ ಆಳುಗಳೂ ಅದೇ ದಿವಸ ಸತ್ತರು. [7]ಇಸ್ರಯೇಲ್ ಯೋಧರು ಸೋತರು; ಸೌಲನೂ ಅವನ ಮಕ್ಕಳೂ ಸತ್ತರು ಎಂಬ ಸಮಾಚಾರವನ್ನು ಕಣಿವೆಯ ಆಚೆಯಲ್ಲೂ ಜೋರ್ಡನಿನ ಆಚೆಯಲ್ಲೂ ವಾಸವಾಗಿದ್ದ ಇಸ್ರಯೇಲರು ಕೇಳಿ ತಮ್ಮತಮ್ಮ ಪಟ್ಟಣಗಳನ್ನು ಬಿಟ್ಟು ಓಡಿಹೋದರು. ಫಿಲಿಷ್ಟಿಯರು ಬಂದು ಅವುಗಳಲ್ಲಿ ವಾಸಿಸಿದರು.

8 ಮರುದಿನ ಬೆಳಿಗ್ಗೆ ಫಿಲಿಷ್ಟಿಯರು ಸತ್ತವರ ಒಡವೆಗಳನ್ನು ಸುಲಿದುಕೊಳ್ಳುವುದಕ್ಕೆ ಬಂದಾಗ ಸೌಲನೂ ಅವನ ಮೂರು ಮಂದಿ ಮಕ್ಕಳೂ ಗಿಲ್ಬೋವಬೆಟ್ಟದಲ್ಲಿ ಸತ್ತು ಬಿದ್ದಿರುವುದನ್ನು ಕಂಡರು. [9]ಸೌಲನ ತಲೆಯನ್ನು ಕಡಿದು, ಅವನ ಆಯುಧಗಳನ್ನು ತೆಗೆದುಕೊಂಡು, ಅವುಗಳನ್ನು ತನ್ನ ದೇಶದ ಎಲ್ಲಾ ಕಡೆಗೂ ಕಳುಹಿಸಿದರು. ತಮ್ಮ ಎಲ್ಲಾ ಜನರಿಗೂ ದೇವಸ್ಥಾನಗಳಿಗೂ ವಿಜಯವಾರ್ತೆಯನ್ನು ಮುಟ್ಟಿಸಿದರು. [10]ಅವನ ಆಯುಧಗಳನ್ನು ಅಷ್ಟೋರೆತ್ ದೇವತೆಯ ಗುಡಿಯಲ್ಲಿಟ್ಟರು. ಅವನ ಶವವನ್ನು ಬೇತ್‍ಷೆಯಾನಿನ ಕೋಟೆ ಗೋಡೆಗೆ ನೇತುಹಾಕಿದರು. [11]ಫಿಲಿಷ್ಟಿಯರು ಸೌಲನಿಗೆ ಏನೇನು ಮಾಡಿದರೆಂಬ ವರದಿ ಯಾಬೇಷ್ ಗಿಲ್ಯಾದಿನವರಿಗೆ ಮುಟ್ಟಿತು. [12]ಆಗ ಅವರಲ್ಲಿದ್ದ ಶೂರರೆಲ್ಲರೂ ಹೊರಟು, ರಾತ್ರಿಯೆಲ್ಲಾ ನಡೆದುಹೋಗಿ, ಸೌಲನ ಮತ್ತು ಅವನ ಮಕ್ಕಳ ಶವಗಳನ್ನು ಬೇತ್‍ಷೆಯಾನಿನ ಗೋಡೆಯಿಂದ ಇಳಿಸಿ, ಯಾಬೇಷಿಗೆ ತೆಗೆದುಕೊಂಡು ಬಂದು, ಅಲ್ಲಿ ಅವುಗಳನ್ನು ದಹಿಸಿದರು. [13]ಅವರ ಎಲುಬುಗಳನ್ನು ಯಾಬೇಷಿನಲ್ಲಿದ್ದ ಪಿಚುಲ ವೃಕ್ಷದ ಕೆಳಗೆ ಸಮಾಧಿಮಾಡಿ, ಏಳು ದಿವಸ ಉಪವಾಸವನ್ನು ಆಚರಿಸಿದರು.